ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 5 ಮಂಗಳವಾರ 2024

₹4

ಸಂಪುಟ: 45 | ಸಂಚಿಕೆ: 198 | ಪುಟಗಳು: 12

45

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23

ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com, website: www.mysurumithra.com

ನ.7ರಿಂದ ರಂಗವಲ್ಲಿ ನಾಟಕೋತ್ಸವ

ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮರಿಂದ ಚಾಲನೆ

ಮೈಸೂರು,ನ.4(ಜಿಎ)–ರಂಗವಲ್ಲಿ ರಂಗ ತಂಡದ ವತಿಯಿಂದ ನ.7ರಿಂದ 10ರವರೆಗೆ ಕಲಾಮಂದಿರದ ಆವರಣದಲ್ಲಿರುವ ಕಿರು ರಂಗ ಮಂದಿರಲ್ಲಿ ರಂಗವಲ್ಲಿ ನಾಟಕೋತ್ಸವ ಆಂಯೋಜಿಸಲಾಗಿದೆ ಎಂದು ಸಂಚಾಲಕ ರವಿಪ್ರಸಾದ್ ತಿಳಿಸಿದರು.


ರಾಮೇಶ್ವರಿ ವರ್ಮ

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.7ರಂದು ಸಂಜೆ 6 ಗಂಟೆಗೆ ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ಚಾಲನೆ ನೀಡುವರು. ಅನ್ನ ಚಿತ್ರದ ನಿರ್ದೇಶಕ ಎನ್.ಎಸ್.ಇಸ್ಲಾಹುದ್ದೀನ್ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ರಂಗಾಯಣದ ನಿರ್ದೇಶಕ ಸತೀಶ್ ತಿಪಟೂರು ಅಧ್ಯಕ್ಷತೆ ವಹಿಸಲಿದ್ದಾರೆ. ಉದ್ಘಾಟನೆ ನಂತರ 6.30ಕ್ಕೆ ರಾಜ್ಯ ಪ್ರಶಸ್ತಿ ಪುರಸ್ಕೃತ ವೈ.ಎಂ. ಪುಟ್ಟಣ್ಣಯ್ಯ ಮತ್ತು ವೃಂದದವರು ವೃತ್ತಿ ರಂಗಗೀತೆ ಪ್ರಸ್ತುತ ಪಡಿಸುವರು ಎಂದರು.

ನ.8ರಂದು ಸಂಜೆ 5.30ಕ್ಕೆ ಕೆಎಸ್ಆರ್‌ಪಿ ಮೌಂಟೆಡ್ ಕಂಪನಿಯಿಂದ ವಿಶ್ವವಿಖ್ಯಾತ ಮೈಸೂರು ಪೊಲೀಸ್ ಬ್ಯಾಂಡ್ ಕಾರ್ಯಕ್ರಮವಿದೆ. ನಂತರ ರಾತ್ರಿ 7 ಗಂಟೆಗೆ ಮೋಲಿಯೆರ್ ಹಾಗೂ ಕೃಷ್ಣ ಹೆಬ್ಬಾಲೆ, ಹೇಮಂತ್‌ಕುಮಾರ್ ಕನ್ನಡಕ್ಕೆ ಅನುವಾದಿಸಿರುವ 'ನಾಟ್ಯ ದೇವ ಚರಿತೆ' ನಾಟಕ ಪ್ರದರ್ಶನವಿದೆ. ನ.9ರಂದು ಸಂಜೆ 5 ಗಂಟೆಗೆ ನಿತಿನ್ ರಾಜಾರಾಂ ಶಾಸ್ತ್ರಿ ಮತ್ತು ವೃಂದದಿಂದ ಸುಗಮ ಸಂಗೀತ, ರಾತ್ರಿ 7 ಗಂಟೆಗೆ ಶ್ರವಣ್ ಹೆಗ್ಗೋಡು ನಿರ್ದೇಶನದಲ್ಲಿ ಮಂಗಳೂರಿನ ಕಲಾಭಿ ಸಂಸ್ಥೆ 'ಎ ಫ್ರೆಂಡ್ ಬಿಯಾಂಡ್ ದಿ ಫೆನ್ಸ್' ನಾಟಕ ಪ್ರಸ್ತುತಿ ಪಡಿಸಲಿದೆ.

ನ.10 ರಂದು ಸಂಜೆ 4.30ಕ್ಕೆ ನಗರದ ಗಾಂಧಿನಗರದ ಭಾರತ್ ಬ್ರಾಸ್ ಬ್ಯಾಂಡ್‌ನಿಂದ ಬ್ರಾಸ್ ಬ್ಯಾಂಡ್ ವಾದ್ಯಗೋಷ್ಠಿ, ರಾತ್ರಿ 7 ಗಂಟೆಗೆ ಬೆಂಗಳೂರಿನ ಕ್ರಾನಿಕಲ್ಸ್ ಆಫ್ ಇಂಡಿಯಾ ತಂಡದ ವತಿಯಿಂದ ಗಣೇಶ್ ಮಂದಾರ್ತಿ ನಿರ್ದೇಶನದ 'ಶಿವೋಹಂ' ನಾಟಕ ಪ್ರದರ್ಶನಗೊಳ್ಳಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್ ನಾಟಕೋತ್ಸವದ ಭಿತ್ತಿಪತ್ರ ಬಿಡುಗಡೆಗೊಳಿಸಿದರು. ರಂಗ ತಂಡದ ಸದಸ್ಯೆ ಮಾನಸ ಕೃಷ್ಣಸ್ವಾಮಿ ಉಪಸ್ಥಿತರಿದ್ದರು.

ವಕ್ಫ್ ಆಸ್ತಿ ತೆರವಿಗೆ ಬಿಜೆಪಿ ಅಧಿಕಾರದ ಅವಧಿಯಲ್ಲೂ ನೋಟಿಸ್ ಕೊಡಲಾಗಿತ್ತು

● ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ● ವಕ್ಫ್ ಆಸ್ತಿ ಕಾಪಾಡುತ್ತೇನೆ ಎಂದಿದ್ದ ಬೊಮ್ಮಾಯಿ ಯು–ಟರ್ನ್ ತೆಗೆದುಕೊಂಡಿದ್ದೇಕೆ? ● ರೈತರ ಒಕ್ಕಲೆಬ್ಬಿಸಬಾರದು ಎಂದು ಸ್ಪಷ್ಟ ನಿರ್ದೇಶನ

ಬೆಂಗಳೂರು, ನ.4(ಕೆಎಂಶಿ)–ವಕ್ಫ್ ಆಸ್ತಿ ತೆರವುಗೊಳಿಸಲು 216 ಪ್ರಕರಣಗಳಲ್ಲಿ ಬಿಜೆಪಿಯೇ ನೋಟೀಸ್ ಕೊಟ್ಟಿತ್ತಲ್ಲಾ, ವಕ್ಫ್ ಆಸ್ತಿ ಕಾಪಾಡುತ್ತೇನೆಂದಿದ್ದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಈಗ ಉಲ್ಟಾ ಹೊಡೆದು 'ಯು–ಟರ್ನ್' ತೆಗೆದುಕೊಂಡಿದ್ದೇಕೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ರಾಜಕೀಯಕ್ಕಾಗಿ ಡಬ್ಬಲ್ ಗೇಮ್ ಆಡಬಹುದಾ, ಉಲ್ಟಾ ಹೊಡೆಯಬಹುದಾ, ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದಾಗ ಒತ್ತುವರಿಯಾಗಿರುವ ಇಂಚಿಂಚು ವಕ್ಫ್ ಆಸ್ತಿ ಕಾಪಾಡುವುದಾಗಿ ಹೇಳಿದ್ದರು, ಈಗ ರಾಜಕೀಯಕ್ಕಾಗಿ ವಿರುದ್ಧವಾಗಿ ಮಾತನಾಡುತ್ತಾರೆ, ಅವರೇ ಹೇಳಿದ್ದ ಮಾತುಗಳಿಂದ ಉಲ್ಟಾ ಹೊಡೆದಿದ್ದಾರೆ, ಬಿಜೆಪಿಯ ಡಬ್ಬಲ್ ಗೇಮ್ ವಿಚಾರವನ್ನು ಜನರಿಗೆ ತಲುಪಿಸುತ್ತಿದ್ದೇವೆ ಎಂದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಈ ವಿಚಾರ ಇಟ್ಟುಕೊಂಡು ರಾಜಕಾರಣ ಮಾಡಲು ಹೋರಾಡುತ್ತಿದೆ, ವಕ್ಫ್ ಆಸ್ತಿ ವಿಚಾರ ನಿನ್ನೆ ಮೊನ್ನೆಯದಲ್ಲ, ಬಿಜೆಪಿ ಸರ್ಕಾರದ ಕಾಲದಲ್ಲೂ ನೋಟಿಸ್ ಕೊಟ್ಟಿದ್ದಾರೆ, ಎಲ್ಲಾ ಕಾಲದಲ್ಲಿಯೂ ನೋಟಿಸ್ ನೀಡಲಾಗಿದೆ ಎಂಬುದು ಜನರಿಗೆ ಅರ್ಥವಾಗಿದೆ ಎಂದರು.

ಸಚಿವರಾದ ಹೆಚ್.ಕೆ.ಪಾಟೀಲ್, ಕೃಷ್ಣಬೈರೇಗೌಡ ಅವರೊಂದಿಗೆ ಸಭೆ ನಡೆಸಿ, ವಕ್ಫ್ ನೋಟಿಸ್ ನೀಡಿದ್ದಲ್ಲಿ ವಾಪಸ್ ಪಡೆಯಬೇಕು, ವಿಚಾರಣೆ ಇಲ್ಲದೆ, ಯಾವುದೇ ಪಹಣಿಯಲ್ಲಿ ಬದಲಾವಣೆ ಮಾಡಿದ್ದರೆ ರದ್ದು ಮಾಡಬೇಕು ಹಾಗೂ ಯಾವುದೇ ಕಾರಣಕ್ಕೂ ರೈತರನ್ನು ಒಕ್ಕಲೆಬ್ಬಿಸಬಾರದು ಎಂದು ಸ್ಪಷ್ಟ ನಿರ್ದೇಶನ ನೀಡಲಾಗಿದೆ.



ಮುಸ್ಲಿಂ, ಹಿಂದೂ, ಕ್ರಿಶ್ಚಿಯನ್ ಯಾರೇ ಇರಲಿ, ಒಕ್ಕಲೆಬ್ಬಿಸಬಾರದು, ವಕ್ಫ್ ಆಸ್ತಿ ವಿಚಾರ ಗೊತ್ತಾದ ತಕ್ಷಣ ನೋಟಿಸ್ ಹಿಂಪಡೆಯಲಾಗಿದೆ, ಬಿಜೆಪಿ ಅವಧಿಯಲ್ಲಿ 216 ಪ್ರಕರಣಗಳಲ್ಲಿ ನೋಟಿಸ್ ಕೊಟ್ಟಿದ್ದರು, ಯಡಿಯೂರಪ್ಪ, ಸದಾನಂದ ಗೌಡ, ಜಗದೀಶ್‌ಶೆಟ್ಟರ್, ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದಾಗ ನೋಟಿಸ್ ಕೊಟ್ಟಿದ್ದಾರೆ. ತೆರಿಗೆ ವಿಚಾರದಲ್ಲಿ ಕೇಂದ್ರದಿಂದ ಅನ್ಯಾಯವಾಗುತ್ತಿದ್ದು, 16ನೇ ಹಣಕಾಸು ಆಯೋಗ ಬೆಂಗಳೂರಿಗೆ ಭೇಟಿ ನೀಡಿದ್ದಾಗ 15ನೇ ಹಣಕಾಸು ಆಯೋಗದಿಂದ ಕರ್ನಾಟಕಕ್ಕೆ ಅನ್ಯಾಯವಾಗಿರುವ ಬಗ್ಗೆ ಗಮನ ಸೆಳೆದಿದ್ದೇವೆ, ವರ್ಷಕ್ಕೆ ಸುಮಾರು 4.50 ಲಕ್ಷ ಕೋಟಿ ರೂ. ಗಳಿಗೂ ಹೆಚ್ಚು ತೆರಿಗೆ ನೀಡುತ್ತಿದ್ದೇವೆ, ವಾಪಸ್ ನೀಡುತ್ತಿರುವ ತೆರಿಗೆ ಪಾಲು 55ರಿಂದ 60 ಸಾವಿರ ಕೋಟಿ ರೂ. ಮಾತ್ರ. ಇದು ನ್ಯಾಯವೇ ಎಂದರು.

ನ್ಯಾಯಕ್ಕಾಗಿ ಹೋರಾಡುತ್ತಿದ್ದೇವೆ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದರಾದ ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್ ಈ ಬಗ್ಗೆ ಮಾತನಾಡಿದ್ದಾರೆಯೇ, ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದರೆ ಅದು ರಾಜಕೀಯ, ಇದಕ್ಕೆ ಏನು ಹೇಳಬೇಕು.

ನ್ಯಾಯಾಲಯಕ್ಕೆ ಹೋದರೆ ನ್ಯಾಯ ಸಿಗುತ್ತದೆ ಎಂದು ಭಾವಿಸಿಲ್ಲ, ಏಕೆಂದರೆ, ಸಂವಿಧಾನದ ಪ್ರಕಾರ, 5 ವರ್ಷಕ್ಕೊಮ್ಮೆ ಹಣಕಾಸಿನ ಆಯೋಗ ರಚನೆಯಾಗುತ್ತದೆ, ಅವರ ಶಿಫಾರಸ್ಸಿನ ಮೇಲೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಸಲ್ಲಬೇಕಾದ ತೆರಿಗೆ ನಿರ್ಧಾರವಾಗುತ್ತದೆ. 15ನೇ ಹಣಕಾಸು ಆಯೋಗ ಕೆಲವು ಶಿಫಾರಸ್ಸು ಮಾಡಿದೆ, 5,495 ಕೋಟಿ ರೂ. ವಿಶೇಷ ಅನುದಾನ ನೀಡಬೇಕೆಂದು ಹೇಳಿದೆ, ಪೆರಿಫೆರಲ್ ರಿಂಗ್‌ರೋಡ್ ಹಾಗೂ ಕೆರೆಗಳ ಅಭಿವೃದ್ಧಿಗೆ ತಲಾ 3,000 ಕೋಟಿ ರೂ. ನೀಡಲು ಶಿಫಾರಸು ಮಾಡಿದ್ದು ಒಟ್ಟು 11,495 ಕೋಟಿ ರೂ. ಹಣಕಾಸು ಆಯೋಗದ ಶಿಫಾರಸು ಪ್ರಕಾರ ವಿಶೇಷ ಅನುದಾನ ನೀಡಿದ್ದರೆ ರಾಜಕೀಯ ಬಿಟ್ಟುಬಿಡುವೆ, 11,495 ಕೋಟಿ ರೂ. ಕೊಟ್ಟಿದ್ದಾರೆಯೇ, ಕೊಟ್ಟಿದ್ದರೆ ನಾನು ರಾಜಕೀಯ ಬಿಟ್ಟುಬಿಡುವೆ, ಒಂದು ವೇಳೆ ಸುಳ್ಳಾದರೆ ಪ್ರಹ್ಲಾದ ಜೋಶಿ ರಾಜಕೀಯ ಬಿಡುತ್ತಾರೆಯೇ, ಸುಳ್ಳು ಹೇಳಿದ್ದನ್ನು ಕೇಳಿ ಮಾಧ್ಯಮಗಳು ಬರೆಯುತ್ತವೆ. ಬಡವರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ಬರಬಾರದೆಂಬ ತತ್ವದಲ್ಲಿ ಬಿಜೆಪಿಗೆ ನಂಬಿಕೆ ಇದೆ, ಬಿಜೆಪಿ ಗ್ಯಾರಂಟಿಗಳಿಗೆ ವಿರುದ್ಧವಾಗಿದೆ, ಗ್ಯಾರಂಟಿ ಯೋಜನೆಗಳ ಮೂಲಕ ಎಲ್ಲಾ ಜಾತಿ, ಧರ್ಮದವರಿಗೆ ಆರ್ಥಿಕ ಹಾಗೂ ಸಾಮಾಜಿಕ ಶಕ್ತಿ ತುಂಬುತ್ತಿದ್ದೇವೆ, ಅವರೂ ಮುಖ್ಯವಾಹಿನಿಗೆ ಬರ ಬೇಕೆಂದು ಈ ಕಾರ್ಯ ಮಾಡುತ್ತಿದ್ದೇವೆ.

ಬಿಜೆಪಿಯವರಿಗೆ ಸಮಾನತೆ ಬರಬಾರದು, ಬಡವರು ಇರಬೇಕು, ಅದಕ್ಕೆ ಅವರನ್ನು ಬಡತನ ವಿರೋಧಿಗಳೆಂದು ಕರೆಯುವುದು, ಶಕ್ತಿ ಇಲ್ಲದಿದ್ದರೆ ತಾನೇ ದುರುಪಯೋಗ ಮಾಡಿಕೊಳ್ಳಲು ಸಾಧ್ಯವಾಗುವುದು, 2018ರಲ್ಲಿ ಬಿಜೆಪಿ 600 ಭರವಸೆಗಳನ್ನು ನೀಡಿತ್ತು, ಅವುಗಳಲ್ಲಿ ಎಷ್ಟು ಈಡೇರಿಸಿದ್ದಾರೆ, ನಾವು 165 ಭರವಸೆ ಕೊಟ್ಟು 158 ಈಡೇರಿಸಿದ್ದಕ್ಕೆ ಲೆಕ್ಕ ಕೊಡುತ್ತೇವೆ, ಅವರು ಎಷ್ಟು ಭರವಸೆ ನೀಡಿ ಎಷ್ಟನ್ನು ಈಡೇರಿಸಿದ್ದಾರೆ ಎಂಬ ಲೆಕ್ಕ ಕೊಡುತ್ತಾರೆಯೇ ಎಂದರು.

ಬಜೆಟ್‌ನ 3 ಲಕ್ಷದ 71 ಸಾವಿರ ಕೋಟಿ ರೂ.ಗಳಲ್ಲಿ 52 ಸಾವಿರ ಕೋಟಿ ರೂ. ಗ್ಯಾರಂಟಿಗಳಿಗೆ ವೆಚ್ಚ ಮಾಡುತ್ತಿದ್ದೇವೆ, ಅಂದರೆ, ಸುಮಾರು 60 ಸಾವಿರ ಕೋಟಿ ರೂ. ಅಭಿವೃದ್ಧಿಗೆ ವೆಚ್ಚ ಮಾಡುತ್ತಿದ್ದೇವೆ, ನೀರಾವರಿ, ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ರಸ್ತೆ, ಸೇತುವೆ, ನಿರ್ಮಾಣಕ್ಕಾಗಿ ವೆಚ್ಚವಾಗುತ್ತಿದೆ, ಇವೆಲ್ಲ ಅಭಿವೃದ್ಧಿಯಲ್ಲವೇ ಎಂದರು.

ಮಾಜಿ ಸಂಸದ ಪ್ರತಾಪ್ ಸಿಂಹ ಮಹಾನ್ ಕೋಮುವಾದಿ, ಇಂತಹವರಿಂದ ಇನ್ನೇನು ನಿರೀಕ್ಷೆ ಮಾಡಲಾಗುತ್ತದೆ, ಅವರಿಗೆ ಸಂವಿಧಾನ, ಪ್ರಜಾಪ್ರಭುತ್ವದ ಬಗ್ಗೆ ಗೌರವವಿಲ್ಲ, ಕೋಮುವಾದ ಮಾಡುವುದೇ ಅವರ ಕಸುಬು, ಸಮಾಜವನ್ನು ಜಾತಿ, ಧರ್ಮದ ಹೆಸರಿನಲ್ಲಿ ಒಡೆಯುವುದೇ ಅವರ ರಾಜಕಾರಣ, ಕೋಮುವಾದದಲ್ಲಿ ತೊಡಗಿ ರಾಜಕೀಯದಲ್ಲಿ ಬದುಕಲು ಹಾಗೂ ಮತ ಪಡೆಯಲು ಪ್ರಯತ್ನ ಮಾಡುತ್ತಾರೆ ಎಂದರು. ಶಿಗ್ಗಾಂವಿ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ನೂರಕ್ಕೆ ನೂರರಷ್ಟು ಗೆಲ್ಲಲಿದೆ, ಕಳೆದ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಲೀಡ್ ಬಂದಿತ್ತು, ಈ ಬಾರಿಯೂ ನಾವು ಗೆಲ್ಲುತ್ತೇವೆ ಎಂದರು.

ನ.10ರಿಂದ ಮಲೈ ಮಹದೇಶ್ವರ, ಆದಿಶಕ್ತಿ ಚಾಮುಂಡೇಶ್ವರಿ ಅಮ್ಮನವರ ವಾರ್ಷಿಕೋತ್ಸವ

ಮೈಸೂರು, ನ.4(ಜಿಎ)–ಮೈಸೂರಿನ ಕೆ.ಎನ್.ಪುರ ಬಡಾವಣೆ ಮಲೈ ಮಹದೇಶ್ವರ ಮತ್ತು ಆದಿಶಕ್ತಿ ಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನದ 9ನೇ ವಾರ್ಷಿಕೋತ್ಸವ ಸಮಾರಂಭ ಇದೇ ನ.10 ಮತ್ತು 11ರಂದು ನಡೆಯಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಖಜಾಂಚಿ ಬಿ. ಪದ್ಮನಾಭ ಈ ವಿಷಯ ತಿಳಿಸಿ, ನ.10ರ ಬೆಳಗ್ಗೆ 8 ಗಂಟೆಗೆ ಧಾರ್ಮಿಕ ಕಾರ್ಯಕ್ರಮ ಆರಂಭವಾಗಲಿವೆ. ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ನಡೆಯಲಿದ್ದು, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಬಹುಮಾನ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು.

ನ.11 ಬೆಳಗ್ಗೆ 8ಕ್ಕೆ ಮಹದೇಶ್ವರ ಸ್ವಾಮಿಗೆ ರುದ್ರಾಭಿಷೇಕ, ಮಹಾಮಂಗಳಾರತಿ ನಡೆಯಲಿದೆ. ಮಧ್ಯಾಹ್ನ 3 ಗಂಟೆಗೆ ಹುಲಿ ವಾಹನೋತ್ಸವ ದೇವಸ್ಥಾನದಿಂದ ಹೊರಟು ಕೆ.ಎನ್.ಪುರ ಬಡಾವಣೆಯ ಪ್ರಮುಖ ರಸ್ತೆಗಳಲ್ಲಿ ಸಾಗಲಿದೆ. ವಾರ್ಷಿಕೋತ್ಸವದ ಪ್ರಮುಖ ಕಾರ್ಯಕ್ರಮಗಳಿಗೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ತನ್ವೀರ್‌ಸೇಠ್, ಟಿ.ಎಸ್. ಶ್ರೀವತ್ಸ ಹಾಗೂ ಇನ್ನಿತರ ಗಣ್ಯರು ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಕಾಂಕ್ರೀಟ್ ರಾಜು, ಅಂಬರೀಶ್, ಎಂ.ಕೆ. ಮಹದೇವ್, ಚಂದ್ರು ಉಪಸ್ಥಿತರಿದ್ದರು.

ಅಪೋಲೊ ಬಿಜಿಎಸ್ ಆಸ್ಪತ್ರೆಯಿಂದ ವಿಶ್ವ ಸ್ಟ್ರೋಕ್ ದಿನ ಆಚರಣೆ


ಮೈಸೂರು ಅಪೋಲೊ ಬಿಜಿಎಸ್ ಆಸ್ಪತ್ರೆ ವತಿಯಿಂದ ವಿಶ್ವ ಸ್ಟ್ರೋಕ್ ದಿನದ ಅಂಗವಾಗಿ ಮೈಸೂರು ಅರಮನೆಯ ಉತ್ತರ ದ್ವಾರದ ಬಳಿಯ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗ ಯೋಗ ಅಧಿವೇಶನ ನಡೆಸಲಾಯಿತು.

ಮೈಸೂರು,ನ.4–ಅಪೋಲೊ ಬಿಜಿಎಸ್ ಆಸ್ಪತ್ರೆ, ಮೈಸೂರು, ವಿಶ್ವ ಸ್ಟ್ರೋಕ್ ದಿನದ ಅಂಗವಾಗಿ ಮೈಸೂರು ಅರಮನೆಯ ಉತ್ತರ ದ್ವಾರದ ಬಳಿಯ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂದೆ ಯೋಗ ಅಧಿವೇಶನದೊಂದಿಗೆ ಆಯೋಜಿಸಲಾಗಿತ್ತು ಕಾರ್ಯಕ್ರಮವು ಸ್ಟ್ರೋಕ್ ತಡೆಗಟ್ಟುವಿಕೆ, ಗುರುತಿಸುವಿಕೆ ಮತ್ತು ತಕ್ಷಣದ ಪ್ರತಿಕ್ರಿಯೆಯ ಮಹತ್ವವನ್ನು ಜಾಗೃತಗೊಳಿಸುವ ಉದ್ದೇಶ ಹೊಂದಿತ್ತು.

ಭಾರತ ಹಾಕಿ ತಂಡದ ಮಾಜಿ ನಾಯಕ ವಿ.ಆರ್.ರಘುನಾಥ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಕ್ರಿಯ ಜೀವನ ಶೈಲಿಯ ಮಹತ್ವವನ್ನು ವಿವರಿಸುತ್ತಾ, ಅವರು ದೈಹಿಕ ಚಟುವಟಿಕೆಗಳಿಗೆ ಪ್ರೇರಣೆಯನ್ನು ನೀಡಿದರು.

ಅಪೋಲೊ ಬಿಜಿಎಸ್ ಆಸ್ಪತ್ರೆಯ ತಜ್ಞರು ಸ್ಟ್ರೋಕ್ ಲಕ್ಷಣಗಳನ್ನು ಗುರುತಿಸುವುದರ ಬಗ್ಗೆ ಮಾಹಿತಿ ಹಂಚಿಕೊಂಡು, ತಕ್ಷಣ ಕ್ರಮ ಕೈಗೊಳ್ಳುವ ಅಗತ್ಯತೆಯನ್ನು ಒತ್ತಿಹೇಳಿದರು. ಎಚ್ಚರಿಕೆ ಸೂಚನೆಗಳನ್ನು ಗುರುತಿಸಲು ಅವರ ಮಾರ್ಗದರ್ಶನ ಮತ್ತು ಶೀಘ್ರವಾಗಿ ಕ್ರಮ ಕೈಗೊಳ್ಳಲು ಪ್ರೇರಣೆ ನೀಡುವುದರ ಮೂಲಕ ಪ್ರಾಣ ಉಳಿಸುವ ಸಾಧ್ಯತೆಗಳನ್ನು ಹೆಚ್ಚಿಸುತ್ತದೆ ಮತ್ತು ಉತ್ತಮವಾಗಿ ಗುಣಮುಖರಾಗುವಂತೆ ಮಾಡುತ್ತದೆ ಎಂಬುದನ್ನು ಹೇಳಿದರು.


ಕಾರ್ಯಕ್ರಮದಲ್ಲಿ ಎನ್.ಜಿ.ಭರತೀಶ ರೆಡ್ಡಿ, ಉಪಾಧ್ಯಕ್ಷರು, ಘಟಕ ಮುಖ್ಯಸ್ಥರು, ಡಾ.ಸೋಮನಾಥ್ ವಾಸುದೇವ್, ಡಾ.ಆಮಿರ್ ಮೊಯಿನ್, ಡಾ.ಶಂಕರ್, ಡಾ.ಕೆ.ಎಸ್.ಬೋಪಯ್ಯ, ಡಾ.ಲೋಕೇಶ್ ಬಿ ಎಲ್, ಡಾ.ವಿನಯ್ ಹೆಗ್ಡೆ. ಎಸ್, ಡಾ.ಜ್ಯೋತ್ಸ್ನಾ, ಡಾ.ಅಮನ್ ನಾಯಕ್ (ವೈದ್ಯಕೀಯ ಅಧೀಕ್ಷಕರು) ಮತ್ತು ಅಪೋಲೊ ಆಸ್ಪತ್ರೆ ಮೈಸೂರಿನ ಸಂಪೂರ್ಣ ನ್ಯೂರೋ ವಿಭಾಗದವರು ಹಾಜರಿದ್ದರು.

ಯೋಗ ಅಧಿವೇಶನದಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದವರು, ಶಾರೀರಿಕ ಚಟುವಟಿಕೆಗಳು ಸ್ಟ್ರೋಕ್ ತಡೆಗಟ್ಟಲು ಮತ್ತು ಯೋಗಕ್ಷೇಮಕ್ಕೆ ಹೇಗೆ ಸಹಾಯ ಮಾಡಬಹುದು ಎಂಬುದನ್ನು ತಿಳಿದುಕೊಂಡರು.

ಮೈಸೂರಲ್ಲಿ ಸೆಮಿ ಕಂಡಕ್ಟರ್ ಚಿಪ್ ತಯಾರಿಕ ಘಟಕ ಆರಂಭ

ಮೈಸೂರು,ನ.4(ಜಿಎ)–ಮೈಸೂರಿನ ಕಡಕೊಳದಲ್ಲಿ ಸೆಮಿಕಂಡಕ್ಟರ್ ಚಿಪ್ ತಯಾರಿಕಾ ಘಟಕ ಸದ್ಯದಲ್ಲಿಯೇ ಆರಂಭವಾಗಲಿದೆ ಎಂದು ಹಾಸನ ಮೆಗಾ ಫುಡ್ ಪಾರ್ಕ್ ಸಿಇಒ ಅಶೋಕ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿಗೆ ಮೀಸಲಿದ್ದ ಸೆಮಿಕಂಡಕ್ಟರ್ ಯೋಜನೆಯೊಂದು ಕೈ ತಪ್ಪಿದ್ದು, ಇದನ್ನು ಜಪಾನ್ ಮೂಲದ ಕಂಪನಿ ಬಳಿ ಚರ್ಚಿಸಿದ ನಂತರ ಇದಕ್ಕಾಗಿ ತಾವು ಜಪಾನಿನ ಸಂಸ್ಥೆ ಜೊತೆ ಒಡಂಬಡಿಕೆ ಮಾಡಿಕೊಂಡಿರುವುದಾಗಿ ತಿಳಿಸಿ, ಬರುವ ಫೆಬ್ರವರಿ 12, 13ರಂದು ಬೆಂಗಳೂರಲ್ಲಿ ನಡೆಯುವ ವಿಶ್ವ ಹೂಡಿಕೆ ಸಮ್ಮೇಳನದಲ್ಲಿ ಇದಕ್ಕಾಗಿ ಒಡಂಬಡಿಕೆ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.

ಶಾಸಕ ಟಿ.ಎಸ್. ಶ್ರೀವತ್ಸ ಹುಟ್ಟುಹಬ್ಬ


ಶಾಸಕ ಟಿ.ಎಸ್. ಶ್ರೀವತ್ಸ ಅವರ ಹುಟ್ಟುಹಬ್ಬದ ಅಂಗವಾಗಿ ಅಗ್ರಹಾರದ ನೂರೊಂದು ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಅನ್ನ ಸಂತರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಕೆ.ಆರ್.ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್ ರಾಜೇ ಅರಸ್, ಮಾಜಿ ಮೇಯರ್ ಶಿವಕುಮಾರ್, ರೂಪ, ಸೌಮ್ಯಾ, ಉಮೇಶ್, ಎನ್. ಪ್ರದೀಪ್ ಕುಮಾರ್, ಪ್ರಸಾದ್, ಜೋಗಿಮಂಜು, ಬಿಲ್ಲಯ್ಯ, ಗೋಕುಲ್, ರಾಜೇಶ, ಹರೀಶ್, ಮನೋಜ್, ವಿನಯ್, ಕಿಶೋರ್, ಕೀರ್ತಿ, ಸಂದೀಪ, ಬಾಲಕೃಷ್ಣ ಚಂದ್ರು, ಜಗದೀಶ್, ಮಧು, ಮಹಿಳಾ ಕಾರ್ಯಕರ್ತರಾದ ಹೇಮಾಗಂಗಪ್ಪ, ಕಾವೇರಿ, ನಂದಾ ಸಿಂಗ್, ರೇಖಾ, ಅನ್ನಪೂರ್ಣ, ಲತಾ, ನಾಗಶ್ರೀ ಮತ್ತಿತರರು ಉಪಸ್ಥಿತರಿದ್ದರು.

ವಿಶೇಷಚೇತನರ ಸಬಲೀಕರಣಕ್ಕಾಗಿ ಸಕ್ಷಮ ಸಂಸ್ಥೆ ನಾಳೆ ಉದ್ಘಾಟನೆ

ಮೈಸೂರು,ನ.4(ಜಿಎ)–ವಿಶೇಷಚೇತನರ ಸಬಲೀಕರಣಕ್ಕಾಗಿ ದುಡಿಯುತ್ತಿರುವ ಸಕ್ಷಮ ಸಂಸ್ಥೆಯ ಜಿಲ್ಲಾ ಘಟಕದ ಉದ್ಘಾಟನಾ ಸಮಾರಂಭ ನ.6ರಂದು ಬೆಳಗ್ಗೆ 11ಗಂಟೆಗೆ ನಾರಾಯಣಶಾಸ್ತ್ರಿ ರಸ್ತೆಯ ಸುಣ್ಣದಕೇರಿಯಲ್ಲಿರುವ ಸಂಸ್ಕೃತಿ ಕಟ್ಟಡ ಸಭಾಂಗಣದಲ್ಲಿ ನಡೆಯಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಬಿ.ಎನ್.ಜಯರಾಮು ಈ ವಿಷಯ ತಿಳಿಸಿ, ಸಂಸ್ಥೆಯು ವಿಶೇಷಚೇತನರ ಸಬಲೀಕರಣಕ್ಕಾಗಿ ಮೀಸಲಾದ ರಾಷ್ಟ್ರೀಯ ದಿವ್ಯಾಂಗ ಸೇವಾ ಕೇಂದ್ರವಾಗಿದ್ದು, ನಗರದಲ್ಲಿ ಇದರ ಜಿಲ್ಲಾ ಘಟಕ ಆರಂಭಿಸಲಾಗುತ್ತಿದೆ ಎಂದರು. ಮುಖರ್ಜಿ ಫೌಂಡೇಷನ್‌ನ ಸಂಸ್ಥಾಪಕರಾದ ಸೋಫಿಯಾ ಮತ್ತು ಸಿದ್ ಮುಖರ್ಜಿ ಉದ್ಘಾಟಿಸುವರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್. ಶ್ರೀವತ್ಸ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶಂಕರ್‌ಗೌಡ ಪಾಟೀಲ್, ವಿಶೇಷಚೇತನರ ಸಬಲೀಕರಣ ಇಲಾಖೆ ಮಾಜಿ ಆಯುಕ್ತ ಕೆ.ವಿ.ರಾಜಣ್ಣ, ಅಮೃತ್ ರಾವ್, ಕೇಶವಕುಮಾರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು. ಗೋಷ್ಠಿಯಲ್ಲಿ ರಮೇಶ್‌ಪ್ರಭು ಉಪಸ್ಥಿತರಿದ್ದರು.

ಇಂದು ಕನ್ನಡ ರಾಜ್ಯೋತ್ಸವ, ವೀರ ಹುತಾತ್ಮ ಯೋಧರ ಸ್ಮರಣೆ

ಮೈಸೂರು, ನ.4(ಜಿಎ)–ಮೈಸೂರಿನ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಸಮಿತಿ ವತಿಯಿಂದ ನ.5ರಂದು ಬೆಳಗ್ಗೆ 11.30ಕ್ಕೆ ನಗರದ ಪುರಭವನದಲ್ಲಿ ರಾಜ್ಯೋತ್ಸವ ಹಾಗೂ ವೀರ ಹುತಾತ್ಮ ಯೋಧರ ನೆನಪಿನಾರ್ಥವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ರಾಜ್ಯಾಧ್ಯಕ್ಷೆ ವಿ.ಪಿ. ಸುಶೀಲ ಈ ವಿಷಯ ತಿಳಿಸಿ, ಕಾರ್ಯಕ್ರಮದಲ್ಲಿ 18 ವೀರ ಹುತಾತ್ಮರ ತಾಯಂದಿರು ಹಾಗೂ ಮಡದಿಯರನ್ನು ಗೌರವಿಸಲಾಗುವುದು ಎಂದರು.

ಎಂಎಲ್‌ಸಿ ಡಾ.ಯತೀಂದ್ರ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕರಾದ ತನ್ವೀರ್‌ಸೇಠ್, ಕೆ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯ್‌ಕುಮಾರ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಎಂ.ಪುಟ್ಟರಾಜು, ಅಮೀನಬೇಗಂ, ಮಹಮ್ಮದ್ ಅಶ್ರಫ್, ಎನ್.ನಿತ್ಯ ಉಪಸ್ಥಿತರಿದ್ದರು.

ನಿಧನ

ನಿವೃತ್ತ ಸಿಎಫ್‌ಟಿಆರ್‌ಐ ವಿಜ್ಞಾನಿ ಸೋಮಾ ಕುರಿಯನ್



ಮೈಸೂರು, ನ. 4– ಸಿಎಫ್‌ಟಿಆರ್‌ಐ ನಿವೃತ್ತ ವಿಜ್ಞಾನಿ ಹಾಗೂ ಮೈಸೂರಿನ ಗಂಗೋತ್ರಿ ಬಡಾವಣೆ, 1ನೇ ಹಂತ, ಸರಸ್ವತಿಪುರಂ 1ನೇ ಮೇನ್, ಮನೆ ನಂ.12ರ ನಿವಾಸಿ ಸೋಮಾ ಕುರಿಯನ್ (89) ನ.2ರಂದು ನಿಧನರಾದರು. ಮೃತರು ಪತಿ ವರ್ಗೀಶ್ ಕುರಿಯನ್, ಪುತ್ರಿ ಸುಸಾನ್ ಕುರಿಯನ್ ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ನಂಜನಗೂಡು ರಸ್ತೆಯಲ್ಲಿರುವ ಬೆನ್‌ಸನ್ ಸಿಮೆಟ್ರಿಯಲ್ಲಿ ಭಾನುವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಚನ್ನಪ್ಪ



ಕೆ.ಆರ್.ಪೇಟೆ, ನ.4– ತಾಲೂಕಿನ ಕಸಬಾ ಹೋಬಳಿಯ ವಡ್ಡರಹಳ್ಳಿ ಗ್ರಾಮದ ವೀರಶೈವ ಲಿಂಗಾಯಿತ ಸಮುದಾಯದ ಹಿರಿಯ ಮುಖಂಡ ಚನ್ನಪ್ಪ ಅಲಿಯಾಸ್ ಜನಾರ್ಧನ್(55) ಇಂದು ನಿಧನರಾದರು. ಮೃತರು ಪತ್ನಿ, ಅಂಗನವಾಡಿ ಶಿಕ್ಷಕಿ ಮಹದೇವಮ್ಮ, ಪುತ್ರ ಪ್ರಮೋದ್, ಪುತ್ರಿ ಪ್ರಿಯಾಂಕ ಹಾಗೂ ಅಪಾರ ಬಂಧುವರ್ಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ನಾಳೆ (ನ. 5) ಬೆಳಗ್ಗೆ 11 ಗಂಟೆಗೆ ವಡ್ಡರಹಳ್ಳಿ ಗ್ರಾಮದಲ್ಲಿ ನೆರವೇರದಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಇವರ ನಿಧನಕ್ಕೆ ತಾಲೂಕಿನ ಅನೇಕ ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.


ಪ್ರೊ.ಬಿ.ಎಸ್. ವಿಜಯಲಕ್ಷ್ಮಿ



ಮೈಸೂರಿನ ಯುವರಾಜ ಕಾಲೇಜಿನ ಪ್ರಾಣಿಶಾಸ್ತ್ರ ವಿಭಾಗದ ನಿವೃತ್ತ ಮುಖ್ಯಸ್ಥರಾದ ಪ್ರೊ.ಬಿ.ಎಸ್.ವಿಜಯಲಕ್ಷ್ಮಿ (78) ಅವರು ನಗರದ ಖಾಸಗಿ ಆಸ್ಪತ್ರೆಯಲ್ಲಿ ಇತ್ತೀಚೆಗೆ ನಿಧನರಾದರು. ಮೈಸೂರಿನ ಜಯನಗರ ನಿವಾಸಿಯಾದ ದಿವಂಗತರು ಹಿರಿಯ ವಕೀಲರಾದ ಪತಿ ಹೆಚ್.ವಿ.ಶ್ರೀನಾಥ್, ವಕೀಲರಾದ ಪುತ್ರ ಎಸ್.ಹರ್ಷ, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗದವರನ್ನು ಅಗಲಿದ್ದಾರೆ.

ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರಘಾಟ್‌ನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

5.11.2024 ಮಂಗಳವಾರ, ಮಳೆ ನಕ್ಷತ್ರ: ಸ್ವಾತಿ, 24.10.2024 ರಿಂದ 05.11.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ, ತಿಥಿ: ಚೌತಿ, ನಕ್ಷತ್ರ: ಜ್ಯೇಷ್ಠ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

■ **ನವಕರ್ನಾಟಕ ಪಬ್ಲಿಕೇಷನ್ಸ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಮಾರಾಟ, ಸ್ಥಳ: ನವಕರ್ನಾಟಕ ಪಬ್ಲಿಕೇಷನ್ಸ್ ಪ್ರೈವೇಟ್ ಲಿಮಿಟೆಡ್, ರಾಮಸ್ವಾಮಿ ವೃತ್ತ, ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.

■ **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ) :** ಆಗಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮಗಳು, ಸ್ಥಳ: ಶ್ರೀ ಸುತ್ತೂರು ಶ್ರೀ ಕ್ಷೇತ್ರ, ಮೈಸೂರು ಜಿಲ್ಲೆ, ಬೆಳಗ್ಗೆಯಿಂದ.

■ **ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** 47ನೇ ವರ್ಷದ ಕಾರ್ತಿಕ ಮಾಸದ ಶ್ರೀ ಮಲೆ ಮಹದೇಶ್ವರಸ್ವಾಮಿ ಪೂಜಾ ಮಹೋತ್ಸವ, 26ನೇ ವರ್ಷದ ಮಹಾಕುಂಭಾಭಿಷೇಕ, 10ನೇ ವರ್ಷದ ಹಾಲರವಿ ಸೇವೆ, ವಿದ್ಯಾರಣ್ಯಪುರಂನ ಶ್ರೀ ವೇದಾದ್ರಿ ಭಜನಾ ಮಂಡಳಿಯಿಂದ ಭಜನೆ, ಶಿವರಾಂ ಪೇಟೆಯ ಶ್ರೀ ಸಪ್ತಗಿರಿ ಭಜನಾ ಮಂಡಳಿಯಿಂದ ಭಜನೆ, ಸ್ಥಳ: ದೇವಸ್ಥಾನದ ಪ್ರಾಂಗಣ, ಗರಡಿಕೇರಿ, ಲಷ್ಕರ್ ಮೊಹಲ್ಲಾ.

■ **ಸಮರ್ಥನಂ ಅಂಗವಿಕಲರ ಸಂಸ್ಥೆ, ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ಫಾರ್ ದಿ ಬ್ಲೈಂಡ್:** 2024–25ನೇ ಸಾಲಿನ ಕರ್ನಾಟಕ ರಾಜ್ಯ ಮಟ್ಟದ ಅಂಧರ ಟಿ–10 ಕ್ರಿಕೆಟ್ ಪಂದ್ಯಾವಳಿ, ಸ್ಥಳ: ಜೆಎಸ್‌ಎಸ್–ಕೆಎಸ್‌ಸಿಎ ಕ್ರಿಕೆಟ್ ಮೈದಾನ ಮತ್ತು ರೈಲ್ವೆ ಸ್ಪೋರ್ಟ್ಸ್ ಮೈದಾನ, ಬೆಳಗ್ಗೆ 10 ರಿಂದ.

■ **ಜೀವಧಾರ ರಕ್ತನಿಧಿ ಕೇಂದ್ರ :** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹುಟ್ಟುಹಬ್ಬದ ಅಂಗವಾಗಿ ಸ್ವಯಂಪ್ರೇರಿತ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ ಎಲ್. ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷ ಆರ್. ರಘು ಕೌಟಿಲ್ಯ, ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾರಾಜ್, ಸ್ಥಳ: ಜೀವಧಾರ ರಕ್ತನಿಧಿ ಕೇಂದ್ರ, ನ್ಯೂ ಸಯ್ಯಾಜಿರಾವ್ ರಸ್ತೆ, ಬೆಳಗ್ಗೆ 11ಕ್ಕೆ

■ **ಶಾರದಾ ವಿಲಾಸ ಕಾಲೇಜು:** 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಸಾಹಿತಿ ಡಾ.ಸಿ.ನಾಗಣ್ಣ, ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಬಿ.ಎಂ.ಸುಬ್ರಾಯ, ಕಾರ್ಯದರ್ಶಿ ಎನ್. ಚಂದ್ರಶೇಖರ್, ಅಧ್ಯಕ್ಷತೆ : ಶಾರದಾ ವಿಲಾಸ ಕಾಲೇಜು ಪ್ರಾಂಶುಪಾಲರಾದ ಡಾ. ಎಂ. ದೇವಿಕಾ, ಸ್ಥಳ: ಎಂ. ವೆಂಕಟಕೃಷ್ಣಯ್ಯ ಸಭಾಂಗಣ, ಶಾರದಾ ವಿಲಾಸ ಕಾಲೇಜು, ಬೆಳಗ್ಗೆ 11.45ಕ್ಕೆ.

■ **ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ :** ನೃತ್ಯ ತರಬೇತಿ ಶಿಬಿರ, ಉದ್ಘಾಟನೆ : ಚಿಂತಕ ನಾ.ದಿವಾಕರ್, ಅಧ್ಯಕ್ಷತೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು: ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆ.ಎ.ಗೋವಿಂದೇಗೌಡ, ಶಿಬಿರದ ನಿರ್ದೇಶಕ ಕೃಷ್ಣ ಜನಮನ, ಸ್ಥಳ: ಚಿಂತನಾ ಚಾವಡಿ, ಕಲಾಮಂದಿರದ ಮುಂಭಾಗ, ಸಂಜೆ 4.30ಕ್ಕೆ.

■ **ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ:** ಧಮನಿ–24, ಅಧ್ಯಕ್ಷತೆ: ಡೀನ್ ಮತ್ತು ನಿರ್ದೇಶಕರಾದ ಡಾ.ಕೆ.ಆರ್.ದಾಕ್ಷಾಯಿಣಿ, ಮುಖ್ಯ ಅತಿಥಿಗಳು: ಡಾ.ಚಿದಾನಂದ ಎಸ್.ನಾಯ್ಕ್, ಲೇಖಕರಾದ ಡಾ.ಸುಜಾತ ಅಕ್ಕಿ, ಹೃದಯ ರಂಗ ತಂಡದಿಂದ ಚಾಮಚೆಲುವೆ ನಾಟಕ ಪ್ರದರ್ಶನ, ಸ್ಥಳ: ಅಮೃತ ಮಹೋತ್ಸವ ಭವನ, ಎಂಎಂಸಿ ಕ್ರೀಡಾ ಮೈದಾನ, ಸಂಜೆ 4.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ: ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಅ.ನ.ಕೃ. ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದಿನ ಕುರಿತು ಶ್ರೋತೃಗಳ ಅಭಿಪ್ರಾಯ ಆಧರಿಸಿದ ಕಾರ್ಯಕ್ರಮದ ಎರಡನೇ ಭಾಗ, 8.30 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ: ಸದಾನಂದ. ಆರ್., 8.40 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ನಮಗಿರಿಪೆಟ್ಟೈ ಕೆ.ಕೃಷ್ಣಂ–ನಾದಸ್ವರ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್ ಹಾಗೂ ಚೈತ್ರಿಕಾ

ಮಧ್ಯಾಹ್ನ: 12.05 ವನಿತಾ ವಿಹಾರ, 12.30 ದೇವರನಾಮ–ವೀಣಾ ಎನ್.ಮೂರ್ತಿ, 12.45 ಜಾತ್ರಾ ವಿಶೇಷ–ಬಾನುಲಿ ಮಾಲಿಕೆ, ಚಾಮರಾಜನಗರ ಜಿಲ್ಲೆ, ಬಿಳಿಗಿರಿರಂಗನ ಬೆಟ್ಟದ ಜಾತ್ರೆಯನ್ನು ಪರಿಚಯಿಸುತ್ತಾರೆ ಡಾ.ಕೃಷ್ಣಮೂರ್ತಿ ಹನೂರು ಮತ್ತು ಡಾ.ಮೈಸೂರು ಗುರುರಾಜ್, 1.00 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ: ಸದಾನಂದ. ಆರ್., 1.20 ಭಾವಗೀತೆಗಳು–ಸಿ. ವಿಶ್ವನಾಥ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಎಸ್.ಸುಬ್ಬುಲಕ್ಷ್ಮಿ–ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ–ಬಲಿವಾಮನ, ಪ್ರಸ್ತುತಿ: ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ: ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ–ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಮಣ್ಣಿನಲ್ಲಿ ಕೀಟನಾಶಕದ ಶೇಷಾಂಶದಿಂದ ರೇಷ್ಮೆಗೂಡು ಕಟ್ಟುವಿಕೆ ಮೇಲೆ ಆಗುವ ಪರಿಣಾಮಗಳು. ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ.ಎಲ್. ಸತೀಶ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ: ಜಾಂಪಣ್ಣ ಆಶೀಹಾಳ್, 8.00 ನಾಟಕ: ಮನ್ಮಥ ವಿಜಯ, ಪ್ರಸ್ತುತಿ: ರಂಗ ಗೀತಾಂಜಲಿ ತಂಡ, ಮೈಸೂರು, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಎ.ದುರ್ಗಾಪ್ರಸಾದ್–ಗೊಟ್ಟುವಾದ್ಯ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ. ಪ್ರಸ್ತುತಿ: ಡಾ.ಎ.ಎಸ್.ಶಂಕರನಾರಾಯಣ, 10.30–ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 5 ಮಂಗಳವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 198 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ವಕ್ಫ್ ನೋಟಿಸ್ ಕಿಡಿ
ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ
ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹ



ರೈತರ ಆಸ್ತಿಗಳಿಗೆ ವಕ್ಫ್ ಮಂಡಳಿ ನೀಡಿರುವ ನೋಟಿಸ್ ವಿರುದ್ಧ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸಿತು.

ಬೆಂಗಳೂರು, ನ.4(ಕೆಎಂಶಿ)–ಸಚಿವ ಜಮೀರ್ ಅಹಮದ್ ಮೂಲಕ ರೈತರ ಕೃಷಿ ಭೂಮಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕಸಿಯಲು ಹೊರಟಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.

ರೈತರ ಆಸ್ತಿಗಳಿಗೆ ವಕ್ಫ್ ಮಂಡಳಿ ನೀಡಿರುವ ನೋಟಿಸ್ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಂಡಿದ್ದ ಬಿಜೆಪಿ, ವಕ್ಫ್ ಕಾಯ್ದೆಗೆ ತಿದ್ದುಪಡಿ ತಂದು ರೈತರ ಭೂಮಿ ಉಳಿಸಬೇಕೆಂದು ಆಗ್ರಹಿಸಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯಲ್ಲಿನ ಪ್ರತಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಸಚಿವರಾದ ಡಾ.ಅಶ್ವತ್ಥನಾರಾಯಣ, ಬೈರತಿ ಬಸವ ರಾಜ್, ಕೆ.ಗೋಪಾಲಯ್ಯ ಸೇರಿದಂತೆ ಪಕ್ಷದ ಸಂಸದರು, ಶಾಸಕರು, ಮುಖಂಡರು, ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಿ ರೈತರ ಪಹಣಿಗಳನ್ನು ತಿದ್ದುಪಡಿ ಮಾಡಬೇಕೆಂದು ಒತ್ತಾಯಿಸಿದರು. ವಕ್ಫ್ ಮಂಡಳಿ ಭೂಮಿ ಕಬಳಿಸುತ್ತಿರುವುದು ರೈತರ ಪಾಲಿಗೆ ಮರಣ ಶಾಸನವಾಗಿದೆ, ಆದರೆ, ಭೂಕಬಳಿಕೆಯ ಈ ಆಟ ನಡೆಯದು, ಹಿಂದೂಗಳು ಬಿಡುವುದಿಲ್ಲ, ಕೂಡಲೇ ವಕ್ಫ್ ಕಾಯಿದೆಯಲ್ಲಿ ಬದಲಾವಣೆ ತನ್ನಿ ಎಂದು ನಾಯಕರು ಒತ್ತಾಯಿಸಿದರು. ಜಮೀನು ಕಬಳಿಸುವ ಮೂಲಕ ಅನ್ನದಾತರ ಕಣ್ಣಲ್ಲಿ ನೀರು ತರಿಸಿದ ಸಿದ್ದರಾಮಯ್ಯ, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಪಡಿಸಿದರು. ಬೆಳಗಾವಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಲಾಯಿತು. ಬಳ್ಳಾರಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿ, ವಕ್ಫ್ ಜಮೀನಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಬಿಜೆಪಿ ತೀವ್ರ ಹೋರಾಟ ಕೈಗೊಂಡಿದೆ ಎಂದರು.

ಪ್ರತಿಭಟನಾಕಾರರಿಂದ ಮನವಿಪತ್ರ ಸ್ವೀಕರಿಸಲು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸ್ಥಳಕ್ಕೆ ಧಾವಿಸದಿದ್ದಾಗ ತಾಳ್ಮೆ ಕಳೆದುಕೊಂಡ ವಿಜಯೇಂದ್ರ, 'ಮುಂದೆ ಬನ್ನಿ ಸಾರ್, ನಾವೇನೂ ಕಳ್ಳರು, ದರೋಡೆಕೋರರಲ್ಲ' ಎಂದಾಗ, ಜಿಲ್ಲಾಧಿಕಾರಿ ಮುಂದೆ ಬಂದರು.

ಮಾಜಿ ಸಚಿವರಾದ ಗಾಲಿ ಜನಾರ್ದನ ರೆಡ್ಡಿ, ಬಿ.ಶ್ರೀರಾಮುಲು ಮತ್ತು ಗಾಲಿ ಸೋಮಶೇಖರ್ ರೆಡ್ಡಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ವಿಜಯೇಂದ್ರ ಅವರು ಮನವಿಪತ್ರವನ್ನು ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು ಮೂಲಕ ಜಿಲ್ಲಾಧಿಕಾರಿ ಅವರಿಗೆ ಕೊಡಿಸಿದರು.

ವಿಧಾನಸಭೆಯಲ್ಲಿನ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ರಾಜ್ಯದಲ್ಲಿ ತುಘಲಕ್ ಸರ್ಕಾರ ಇದೆ, ಲ್ಯಾಂಡ್ ಜಿಹಾದ್ ಹೆಸರಲ್ಲಿ ರೈತರನ್ನ ಮತಾಂತರ ಮಾಡುತ್ತಿದ್ದಾರೆ, ರಾಜ್ಯ ಬಿಜೆಪಿ ರೈತರ ಪರವಾಗಿ ಮಾಡುತ್ತಿರುವ ಹೋರಾಟ, ಪ್ರತಿಭಟನೆ ರಾಜಕೀಯ ದುರುದ್ದೇಶದ್ದು ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆಯಲ್ಲಿ ಯಾವುದೇ ಹುರುಳಿಲ್ಲ, ಅವರ ಮಾತನ್ನು ರಾಜ್ಯದಲ್ಲಿ ಯಾರೂ ನಂಬಲ್ಲ, ಮಸೀದಿಗೆ ಹೋದಾಗ ಟೋಪಿ ಹಾಕುವ ಅವರು, ಹೊರಗಡೆ ಬಂದು ಟೋಪಿ ತೆಗೆಯುತ್ತಾರೆ, ವಕ್ಫ್ ಜಮೀನಿಗೆ ಸಂಬಂಧಿಸಿದಂತೆ ರಾಜ್ಯದ ರೈತರಿಗೆ ಟೋಪಿ ಹಾಕಲು ಹೊರಟಿದ್ದಾರೆ ಎಂದು ಟೀಕಿಸಿದರು. ರೈತರಿಗೆ ವಕ್ಫ್ ನೋಟಿಸ್ ಖಂಡಿಸಿ ಮೈಸೂರು, ■6ನೇ ಪುಟಕ್ಕೆ

ಮೈಸೂರಲ್ಲೂ ಬಿಜೆಪಿ ಆಕ್ರೋಶ
ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ, ಸಚಿವ ಜಮೀರ್ ರಾಜೀನಾಮೆಗೆ ಆಗ್ರಹ



ರಾಜ್ಯ ಕಾಂಗ್ರೆಸ್ ಸರ್ಕಾರದ ವಕ್ಫ್ ತಿದ್ದುಪಡಿ ವಿರೋಧಿಸಿ ಸೋಮವಾರ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕುವ ಮುನ್ನ ಮೈಸೂರು ಡೈರಿ ಮುಂದೆ ಪ್ರತಿಭಟನೆ ನಡೆಸಿದರು.

ಮೈಸೂರು, ನ.4(ಬಿಎಲ್‌ಯು)– ರೈತರ ಜಮೀನು, ಸರ್ಕಾರಿ ಶಾಲೆಗಳು, ದೇವಸ್ಥಾನಗಳನ್ನು ವಕ್ಫ್ ಆಸ್ತಿ ಎಂದು ಘೋಷಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ವಿರೋಧಿಸಿ ಬಿಜೆಪಿ ಕಾರ್ಯಕರ್ತರು ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು. ನಗರದ ತಿ.ನರಸೀಪುರ ರಸ್ತೆಯ ಮೈಸೂರು ಡೈರಿ ಮುಂದೆ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ಮುಸ್ಲಿಂ ಸಮುದಾಯದ ತುಷ್ಟೀಕರಣಕ್ಕಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ರೈತರ ಜಮೀನುಗಳನ್ನು ವಕ್ಫ್ ಆಸ್ತಿಗಳೆಂದು ಘೋಷಿಸಿದೆ. ಅಷ್ಟೆ ಅಲ್ಲದೆ ಸರ್ಕಾರಿ ಶಾಲೆ ಹಾಗೂ ದೇವಸ್ಥಾನಗಳ ಆಸ್ತಿ ಕಬಳಿಸಲು ಕೂಡ ವಕ್ರ ದೃಷ್ಟಿ ಬೀರಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಲ್ಯಾಂಡ್ ಜಿಹಾದ್ ನಡೆಸುತ್ತಿರುವ ಸರ್ಕಾರದ ಈ ಧೋರಣೆಯಿಂದ ರೈತರು ಕಂಗಾಲಾಗಿದ್ದಾರೆ. ಇದು ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಬಿಂಬಿಸುತ್ತದೆ ಎಂದು ಆರೋಪಿಸಿದರು.

'ಪ್ರಾಣ ಕೊಟ್ಟೇವು ಭೂಮಿ ಬಿಡೆವು', 'ಕಾಂಗ್ರೆಸ್ ಸರ್ಕಾರದ ಲ್ಯಾಂಡ್ ಜಿಹಾದ್‌ಗೆ ಧಿಕ್ಕಾರ', 'ರೈತರ ಜಮೀನು ಕಬಳಿಸಿದ ವಕ್ಫ್ ಗೂಂಡಾಗಿರಿಗೆ ಧಿಕ್ಕಾರ', 'ರೈತರ ಬದುಕಿಗೆ ಕೊಳ್ಳಿ ಇಟ್ಟ ಜಮೀರ್ ರಾಜೀನಾಮೆ ಕೊಡಬೇಕು', 'ಕರ್ನಾಟಕವನ್ನು ಪಾಕಿಸ್ತಾನ ಮಾಡಲು ಹುನ್ನಾರ ನಡೆಸಿದ ಸಿದ್ದರಾಮಯ್ಯಗೆ ಧಿಕ್ಕಾರ', 'ಅನ್ನದಾತರ ಜಮೀನು ಕಬಳಿಸಿದ ಜಮೀರ್‌ಗೆ ಧಿಕ್ಕಾರ', 'ಸಿದ್ದರಾಮಯ್ಯ ಜಮೀರ್ ಕುತಂತ್ರಕ್ಕೆ ಧಿಕ್ಕಾರ' ಎಂಬ ಘೋಷಣಾ ಫಲಕ ಹಿಡಿದ ಬಿಜೆಪಿ ಕಾರ್ಯಕರ್ತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ಆರ್. ರಘು ಕೌಟಿಲ್ಯ, ವಂಶಪಾರಂಪರ್ಯವಾಗಿ ಬಂದ ರೈತರ ಆಸ್ತಿಯನ್ನು ಸರ್ಕಾರ ವಕ್ಫ್ ಆಸ್ತಿಯೆಂದು ಘೋಷಿಸಿದೆ. ರೈತರು ಮುಗ್ಧರಲ್ಲ, ಸರ್ಕಾರದ ಈ ನಡೆಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಸಿದರು. ಈ ಕೂಡಲೇ ಸರ್ಕಾರವು ವಕ್ಫ್ ತಿದ್ದುಪಡಿ ರದ್ದು ಮಾಡಲಾಗಿದೆ, ■6ನೇ ಪುಟಕ್ಕೆ

ವಕ್ಫ್ ಬೋರ್ಡ್ ಆಸ್ತಿ ವಿವಾದ: ಅಮಿತ್ ಶಾ, ಸಂಸತ್ ಜಂಟಿ ಸದನ ಸಮಿತಿಗೆ ಆರ್.ಅಶೋಕ್ ಪತ್ರ

ಬೆಂಗಳೂರು: ರಾಜ್ಯದಲ್ಲಿ ವಕ್ಫ್ ಬೋರ್ಡ್ ಆಸ್ತಿ ವಿವಾದ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಸೋಮವಾರ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದೆ.



ಈ ಮಧ್ಯೆ, ಪ್ರತಿಪಕ್ಷ ನಾಯಕ ಆರ್ ಅಶೋಕ್ ಅವರು ಈ ಸಂಬಂಧ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಸಂಸತ್ ಜಂಟಿ ಸದನ ಸಮಿತಿ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರಿಗೆ ಪತ್ರ ಬರೆದಿದ್ದು, ತಕ್ಷಣವೇ ವಕ್ಫ್ ಬೋರ್ಡ್‌ಗೆ ಆಸ್ತಿ ನೋಂದಣಿಯನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚಿಸುವಂತೆ ಮನವಿ ಮಾಡಿದ್ದಾರೆ.

ಕರ್ನಾಟಕದಲ್ಲಿ ರಾಜ್ಯ ಸರ್ಕಾರ ಮತ್ತು ವಕ್ಫ್ ಮಂಡಳಿಯು ಕಂದಾಯ ದಾಖಲೆಗಳನ್ನು ತಿದ್ದುವ ಹಾಗೂ ರೈತರ ಜಮೀನುಗಳ ಮಾಲೀಕತ್ವ ವರ್ಗಾಯಿಸಿಕೊಳ್ಳುವ ಪ್ರಯತ್ನ ಆರಂಭವಾಗಿದೆ. ಈ ರೀತಿ ತರಾತುರಿಯಲ್ಲಿ ಜಮೀನುಗಳನ್ನು ವಕ್ಫ್ ಮಂಡಳಿ ನೋಂದಾಯಿಸಿಕೊಳ್ಳುತ್ತಿರುವ ■6ನೇ ಪುಟಕ್ಕೆ

ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಗಡುವು ಮತ್ತೆ ವಿಸ್ತರಣೆ



ಬೆಂಗಳೂರು,ನ.4– ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸಲು ಈಗಾಗಲೇ ರಾಜ್ಯ ಸರ್ಕಾರ ಮೂರ್ನಾಲ್ಕು ಬಾರಿ ಬಾರಿ ಗಡುವು ವಿಸ್ತರಣೆ ಮಾಡಿದೆ. ಬರೋಬ್ಬರಿ 4 ಬಾರಿ ಸಮಯ ವಿಸ್ತರಿಸಿದರೂ ವಾಹನ ಮಾಲೀಕರು ತಮ್ಮ ವಾಹನಕ್ಕೆ ಹೆಚ್‌ಎಸ್‌ಆರ್‌ಪಿ ■6ನೇ ಪುಟಕ್ಕೆ

ಮುಡಾದಿಂದ ಶೇ. 50:50ರ ಅನುಪಾತದಡಿ ಅಕ್ರಮ ನಿವೇಶನ ಪಡೆದ ಹಗರಣ

ಲೋಕಾಯುಕ್ತ ಎಸ್ಪಿಯಿಂದ
ಸಿಎಂ ಸಿದ್ದರಾಮಯ್ಯಗೆ ನೋಟಿಸ್

● ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ನಾಳೆ ಬೆಳಿಗ್ಗೆ 10.30ಕ್ಕೆ ವಿಚಾರಣೆಗೆ ಹಾಜರಾಗಲು ಸೂಚನೆ ● ವಿಚಾರಣೆಗೆ ಹಾಜರಾಗುವುದಾಗಿ ಸಿದ್ದರಾಮಯ್ಯ ಪ್ರತಿಕ್ರಿಯೆ



ಮೈಸೂರು, ನ.4(ಬಿಎಲ್‌ಯು)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಶೇ. 50:50ರ ಅನುಪಾತದಲ್ಲಿ ಅಕ್ರಮವಾಗಿ ನಿವೇಶನ ಪಡೆದ ಆರೋಪದಡಿ ದಾಖಲಾಗಿರುವ ಪ್ರಕರಣದಲ್ಲಿ ವಿಚಾರಣೆಗೆ ಹಾಜರಾಗುವಂತೆ ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ಅವರು ಪ್ರಕರಣದ 1ನೇ ಆರೋಪಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೋಟಿಸ್ ಜಾರಿ ಮಾಡಿದ್ದಾರೆ.

ಮೈಸೂರಿನ ದಿವಾನ್ಸ್ ರಸ್ತೆಯಲ್ಲಿರುವ ಲೋಕಾಯುಕ್ತ ಕಚೇರಿಯಲ್ಲಿ ನವೆಂಬರ್ 6ರಂದು ಬೆಳಗ್ಗೆ 10.30ಕ್ಕೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್‌ನಲ್ಲಿ ಸೂಚಿಸಲಾಗಿದೆ. ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ.ಉದೇಶ್ ಸಿದ್ದರಾಮಯ್ಯಗೆ ನೋಟಿಸ್ ಜಾರಿ ಮಾಡಿದ್ದಾರೆ. ಲೋಕಾಯುಕ್ತ ಎಸ್ಪಿ ಜಾರಿ ಮಾಡಿರುವ ನೋಟಿಸ್ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ■6ನೇ ಪುಟಕ್ಕೆ

ಸಿಬಿಐ ತನಿಖೆಗೆ ಕೋರಿ ಸಲ್ಲಿಸಿರುವ ಅರ್ಜಿ ಇಂದು ಹೈಕೋರ್ಟ್‌ನಲ್ಲಿ ವಿಚಾರಣೆ

ಮೈಸೂರು:ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಬಗ್ಗೆ ಸಿಬಿಐ ತನಿಖೆ ನಡೆಸಬೇಕೆಂದು ಕೋರಿ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಾಳೆ (ನ.5) ಬೆಳಗ್ಗೆ 10.30ಕ್ಕೆ ಹೈಕೋರ್ಟ್‌ನಲ್ಲಿ ನಡೆಯಲಿದೆ. ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲರ ಆದೇಶ ಎತ್ತಿ ಹಿಡಿದ ಹೈಕೋರ್ಟ್ ನ್ಯಾಯಾಧೀಶ ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠದಲ್ಲೇ ಈ ಅರ್ಜಿ ■6ನೇ ಪುಟಕ್ಕೆ



ಡಿಕೆಶಿಗೆ ಸುಪ್ರೀಂಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್
ಸಿಬಿಐ ಸಲ್ಲಿಸಿದ್ದ ಅರ್ಜಿ ವಿಚಾರಣೆ ಮುಂದೂಡಿಕೆ



ನವದೆಹಲಿ: ಕರ್ನಾಟಕದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧದ ಆದಾಯಕ್ಕೂ ಮೀರಿದ ಆಸ್ತಿ ಗಳಿಕೆ ಪ್ರಕರಣದ ತನಿಖೆಗೆ ಸಿಬಿಐಗೆ ನೀಡಿದ ಅನುಮತಿಯನ್ನು ರಾಜ್ಯ ಸರ್ಕಾರ ಹಿಂಪಡೆದಿರುವುದನ್ನು ಪ್ರಶ್ನಿಸಿ ಕೇಂದ್ರೀಯ ತನಿಖಾ ದಳ (ಸಿಬಿಐ) ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಸೋಮವಾರ ನಾಲ್ಕು ವಾರಗಳ ಕಾಲ ಮುಂದೂಡಿದೆ. ಕರ್ನಾಟಕ ಹೈಕೋರ್ಟ್ ಆದೇಶದ ವಿರುದ್ಧ ಸಿಬಿಐ ಮೇಲ್ಮನವಿ ಸಲ್ಲಿಸಿದೆ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಹೇಳಿದ ನಂತರ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಉಜ್ಜಲ್ ಭುಯಾನ್ ಅವರ ಪೀಠವು ಪ್ರಕರಣವನ್ನು ಮುಂದೂಡಿತು. ಸಿಬಿಐ ತನಿಖೆಗೆ ನೀಡಿದ ಅನುಮತಿಯನ್ನು ಹಿಂಪಡೆಯುವ ವಿರುದ್ಧ ಅರ್ಜಿಯನ್ನು ತಿರಸ್ಕರಿಸಿ ಕರ್ನಾಟಕ ಹೈಕೋರ್ಟ್ ಆಗಸ್ಟ್ 29 ರಂದು ನೀಡಿದ ಆದೇಶದ ವಿರುದ್ಧ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಲ್ಲಿಸಿರುವ ಅರ್ಜಿಯನ್ನು ಕೂಡಾ ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ.

ಸಿಬಿಐ ಮೇಲ್ಮನವಿಯನ್ನು ಇನ್ನೂ ವಿಚಾರಣೆಗೆ ಪಟ್ಟಿ ಮಾಡಿಲ್ಲ ಎಂದು ಮೆಹ್ತಾ ನ್ಯಾಯಪೀಠಕ್ಕೆ ತಿಳಿಸಿದರು. ಆದರೆ ಶಿವಕುಮಾರ್ ಪರವಾಗಿ ವಾದಿಸಿದ ಹಿರಿಯ ವಕೀಲ ರಂಜಿತ್‌ಕುಮಾರ್, ಈ ವಿಷಯದಲ್ಲಿ ಉತ್ತರ ಸಲ್ಲಿಸಲು ಸಮಯ ಕೋರಿದರು. ಶಿವಕುಮಾರ್ ಮತ್ತು ರಾಜ್ಯ ಸರ್ಕಾರದ ಮನವಿಯ ಮೇರೆಗೆ ಸುಪ್ರೀಂ ಕೋರ್ಟ್ ಸೆಪ್ಟೆಂಬರ್ 17ರಂದು ನೋಟಿಸ್ ಜಾರಿ ಮಾಡಿತ್ತು. ಶಿವಕುಮಾರ್ ವಿರುದ್ಧದ ಅಕ್ರಮ ಆಸ್ತಿ (ಡಿಎ) ■6ನೇ ಪುಟಕ್ಕೆ

ನ.25ರಿಂದ ಸಂಸತ್ ಚಳಿಗಾಲದ ಅಧಿವೇಶನ




ನವದೆಹಲಿ: ಸಂಸತ್ತಿನ ಚಳಿಗಾಲದ ಅಧಿವೇಶನ ನ.25ರಿಂದ ಡಿಸೆಂಬರ್ 20ರವರೆಗೆ ನಡೆಯುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಅಧಿವೇಶನದ ಸಮಯದಲ್ಲಿ, ದೇಶಾದ್ಯಂತ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದ ಒಂದು ರಾಷ್ಟ್ರ ಒಂದು ಚುನಾವಣೆ ಮತ್ತು ವಕ್ಫ್ ಮಸೂದೆಗಳನ್ನು ಪರಿಚಯಿಸುತ್ತದೆ. ನ.23ರಂದು ಪ್ರಕಟವಾಗಲಿರುವ ಜಾರ್ಖಂಡ್ ಮತ್ತು ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಫಲಿತಾಂಶಗಳು ಅಧಿವೇಶನದ ಮೇಲೆ ಮಹತ್ವದ ಪ್ರಭಾವ ಬೀರುತ್ತವೆ. ಹರಿಯಾಣದ ಸೋಲಿನಿಂದ ಚುರುಕಾಗಿರುವ ಕಾಂಗ್ರೆಸ್ ಮತ್ತು ಮಹಾ ವಿಕಾಸ್ ಅಘಾಡಿಯಲ್ಲಿರುವ ಅದರ ಮಿತ್ರಪಕ್ಷಗಳು ಜಾರ್ಖಂಡ್‌ನಲ್ಲಿ ಹೇಮಂತ್ ಸೋರೆನ್ ನೇತೃತ್ವದ ಸರ್ಕಾರವನ್ನು ಉಳಿಸಿಕೊಂಡು ಮಹಾರಾಷ್ಟ್ರದಲ್ಲಿ ಅಧಿಕಾರವನ್ನು ಹಿಡಿಯುವ ಭರವಸೆಯನ್ನು ಇಟ್ಟುಕೊಂಡಿವೆ. ಸಾಂವಿಧಾನಿಕ ಹಕ್ಕುಗಳನ್ನು ಮರುಸ್ಥಾಪಿಸುವ ಹಾಗೂ ■6ನೇ ಪುಟಕ್ಕೆ

ಮೈಸೂರಿನ ಹೋಟೆಲ್‌ನಲ್ಲಿ ಯುವತಿ ಮೇಲೆ ಸಾಮೂಹಿಕ ಅತ್ಯಾಚಾರ

● ಪರಿಚಯವಾದ ದಿನವೇ ಅತ್ಯಾಚಾರವೆಸಗಿ, ಘಟನೆಯನ್ನು ವಿಡಿಯೋ ಚಿತ್ರೀಕರಣ ಮಾಡಿದ ಯುವಕರು
● ದೂರು ದಾಖಲಾದ 24 ಗಂಟೆಯೊಳಗೆ ಇಬ್ಬರೂ ಕಾಮುಕರನ್ನು ಸೆರೆ ಹಿಡಿದ ಪೊಲೀಸರು



ಮೈಸೂರು, ನ. 4(ಬಿಎಲ್‌ಯು)– ಪಾರ್ಟಿ ಮಾಡುವ ಸೋಗಿನಲ್ಲಿ ಖಾಸಗಿ ಹೋಟೆಲ್‌ಗೆ ಯುವತಿಯನ್ನು ಕರೆದೊಯ್ದು ಸಾಮೂಹಿಕ ಅತ್ಯಾಚಾರ ನಡೆಸಿದ ಘಟನೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಶನಿವಾರ ರಾತ್ರಿ ನಡೆದಿದ್ದು, ಇಬ್ಬರು ಕಾಮುಕ ಯುವಕರು ಯುವತಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ್ದಲ್ಲದೇ, ಮೊಬೈಲ್‌ನಲ್ಲಿ ವಿಡಿಯೋ ಚಿತ್ರೀಕರಣ ಮಾಡಿ, ಅದನ್ನು ಕೆಲ ಸ್ನೇಹಿತರಿಗೆ ರವಾನಿಸಿದ್ದಾರೆ.

ವಿಜಯನಗರ ಪೊಲೀಸ್ ಠಾಣೆ ವ್ಯಾಪ್ತಿಗೊಳಪಟ್ಟ ರಿಂಗ್ ರಸ್ತೆಗೆ ಹೊಂದಿಕೊಂಡಂತಿರುವ ಹೋಟೆಲ್‌ನಲ್ಲಿ ಈ ಘಟನೆ ನಡೆದಿದ್ದು, ಇದರಿಂದ ದಿಗ್ಭ್ರಮೆಗೊಳಗಾಗಿದ್ದ ಯುವತಿ ಭಾನುವಾರ ಸಂಜೆ ವಿಜಯನಗರ ಠಾಣೆಗೆ ದೂರು ಸಲ್ಲಿಸಿದ್ದು, ಪೊಲೀಸರು ಇಂದು (ಸೋಮವಾರ) ಸಂಜೆ ಇಬ್ಬರು ಯುವಕರನ್ನು ಬಂಧಿಸಿದ್ದಾರೆ. ಬಂಧಿತ ಯುವಕರನ್ನು ಮೈಸೂರಿನ ಹೂಟಗಳ್ಳಿ ನಿವಾಸಿ ಶ್ರೇಯಸ್ ಮತ್ತು ಸಕಲೇಶಪುರದ ಶಶಾಂಕ್ ಎಂದು ಗುರುತಿಸಲಾಗಿದ್ದು, ಇವರಿಬ್ಬರೂ ಪದವೀಧರರಾಗಿದ್ದಾರೆ. ಸಂತ್ರಸ್ತ ಯುವತಿಯೂ ಕೂಡ ಪದವೀಧರೆಯಾಗಿದ್ದು, ಚನ್ನಪಟ್ಟಣ ಮೂಲದ ಈಕೆ ಮೈಸೂರಿನ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಾ ಪಿಜಿಯಲ್ಲಿ ವಾಸ್ತವ್ಯ ಹೂಡಿದ್ದಾಳೆ ಎನ್ನಲಾಗಿದೆ.

ನಿನ್ನೆ ಸಂಜೆ ಸಾಮೂಹಿಕ ಅತ್ಯಾಚಾರ ಪ್ರಕರಣ ದಾಖಲಾಗುತ್ತಿದ್ದಂತೆಯೇ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರು, ಡಿಸಿಪಿ ಮುತ್ತುರಾಜ್ ಮಾರ್ಗದರ್ಶನದಲ್ಲಿ ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರಪ್ರಸಾದ್ ನೇತೃತ್ವದಲ್ಲಿ ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ಸುರೇಶ್, ಸಬ್ ಇನ್‌ಸ್ಪೆಕ್ಟರ್ ವಿಶ್ವನಾಥ್, ಹೆಬ್ಬಾಳ್ ಠಾಣೆ ಇನ್‌ಸ್ಪೆಕ್ಟರ್ ಮಲ್ಲೇಶ್, ಮೇಟಗಳ್ಳಿ ಠಾಣೆ ಸಬ್ ಇನ್‌ಸ್ಪೆಕ್ಟರ್ ಶಬರೀಶ್, ಸರಸ್ವತಿಪುರಂ ಠಾಣೆ ಸಬ್‌ಇನ್‌ಸ್ಪೆಕ್ಟರ್ ಮಹೇಂದ್ರ ಅವರನ್ನೊಳಗೊಂಡ ಐದು ವಿಶೇಷ ತಂಡಗಳನ್ನು ರಚಿಸಿದ್ದರು. ಈ ತಂಡಗಳು ಕಾರ್ಯೋನ್ಮುಖರಾಗಿ ದೂರು ದಾಖಲಾದ 24 ಗಂಟೆಯೊಳಗಾಗಿ ಇಬ್ಬರೂ ಕಾಮುಕರನ್ನು ಬಂಧಿಸುವಲ್ಲಿ ಯಶಸ್ವಿಯಾಗಿವೆ.

ವಿವರ: ಮೈಸೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಯುವತಿಗೆ ಶನಿವಾರ ಮಧ್ಯಾಹ್ನದ ವೇಳೆಗೆ ಪಬ್‌ವೊಂದರಲ್ಲಿ ಶ್ರೇಯಸ್ ಪರಿಚಯವಾಗಿದ್ದಾನೆ. ಮೊದಲ ಪರಿಚಯವೇ ಸ್ನೇಹಕ್ಕೆ ತಿರುಗಿದ್ದು, ಆತ ರಾತ್ರಿ ಹೋಟೆಲ್‌ವೊಂದರಲ್ಲಿ ಪಾರ್ಟಿ ಮಾಡೋಣವೆಂದು ಆಹ್ವಾನಿಸಿದ್ದನ್ನು ಆಕೆಯೂ ಒಪ್ಪಿಕೊಂಡಿದ್ದಾಳೆ. ಪಬ್‌ನಿಂದಲೇ ರಿಂಗ್ ರಸ್ತೆಯಲ್ಲಿರುವ ಹೋಟೆಲ್‌ನಲ್ಲಿ ಯುವಕ ರೂಂ ಬುಕ್ ಮಾಡಿದ್ದು, ಅಂದು ರಾತ್ರಿ ವೇಳೆಗೆ ಯುವಕನೊಂದಿಗೆ ಸಂತ್ರಸ್ತೆ ಹೋಟೆಲ್‌ನ ರೂಂಗೆ ತೆರಳಿದಾಗ ಶ್ರೇಯಸ್‌ನ ಸಂಬಂಧಿಕನೇ ಆದ ಶಶಾಂಕ್ ಅಲ್ಲಿಗೆ ಹಾಜರಾಗಿದ್ದಾನೆ.

ಇವರಿಬ್ಬರೂ ಸಂತ್ರಸ್ತೆ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ, ದೃಶ್ಯವನ್ನು ಮೊಬೈಲ್ ಮೂಲಕ ವಿಡಿಯೋ ಚಿತ್ರೀಕರಣ ಮಾಡಿದ್ದಾರೆ. ನಂತರ ಅವರ ಇಬ್ಬರು ಸ್ನೇಹಿತರಿಗೆ ವಿಡಿಯೋವನ್ನು ರವಾನಿಸಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಇದರಿಂದಾಗಿ ದಿಗ್ಭ್ರಮೆಗೊಂಡ ಸಂತ್ರಸ್ತೆ ತಾನು ವಾಸ್ತವ್ಯ ಹೂಡಿದ್ದ ಪಿಜಿಗೆ ತೆರಳಿ ವಿಶ್ರಾಂತಿ ಪಡೆದ ನಂತರ ಭಾನುವಾರ ಸಂಜೆ ವಿಜಯನಗರ ಠಾಣೆಗೆ ಆಗಮಿಸಿ, ದೂರು ಸಲ್ಲಿಸಿದ್ದಾಳೆ. ನಂತರ ಆರೋಪಿಗಳ ಪತ್ತೆಗಾಗಿ ರಚಿಸಲ್ಪಟ್ಟ 5 ವಿಶೇಷ ತಂಡಗಳು ಕಾರ್ಯೋನ್ಮುಖರಾಗಿ ಇಂದು ಸಂಜೆ ಇಬ್ಬರೂ ಕಾಮುಕರನ್ನು ಬಂಧಿಸುವಲ್ಲಿ ಯಶಸ್ವಿಯಾಗಿವೆ.

ಬೆಳಗಾವಿ ಜಂಟಿ ಅಧಿವೇಶನಕ್ಕೆ ಅಮೆರಿಕಾ ಮಾಜಿ ಅಧ್ಯಕ್ಷ ಒಬಾಮಾಗೆ ಸರ್ಕಾರ ಆಹ್ವಾನ


ಒಬಾಮಾ

ಗದಗ: ಬೆಳಗಾವಿಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಅಧ್ಯಕ್ಷತೆಯಲ್ಲಿ ನಡೆದ ಎಐಸಿಸಿ ಸಭೆಗೆ 100 ವರ್ಷ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ವಿಶೇಷ ಜಂಟಿ ಅಧಿವೇಶನ ನಡೆಸಲು ಸರ್ಕಾರ ನಿರ್ಧರಿಸಿದ್ದು, ಜಂಟಿ ಅಧಿವೇಶನಕ್ಕೆ ಅಮೆರಿಕಾದ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರಿಗೆ ಆಹ್ವಾನ ನೀಡಲಾಗಿದೆ ಎಂದು ಕಾನೂನು ಸಚಿವ ಹಾಗೂ ಶತಮಾನೋತ್ಸವ ಸಮಿತಿ ಅಧ್ಯಕ್ಷ ಹೆಚ್.ಕೆ.ಪಾಟೀಲ್ ಅವರು ಸೋಮವಾರ ಹೇಳಿದರು.

ಖಾಸಗಿ ಸುದ್ದಿ ವಾಹಿನಿಯೊಂದಕ್ಕೆ ಹೇಳಿಕೆ ನೀಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನನ್ನು ಶತಮಾನೋತ್ಸವ ಸಮಿತಿ ಅಧ್ಯಕ್ಷನನ್ನಾಗಿ ಮಾಡಿದ್ದಾರೆ. ಈ ಸಮಿತಿ ನ.5ರಂದು ಬೆಳಗಾವಿಗೆ ಭೇಟಿ ನೀಡಲಿದೆ. 2025ರ ಅಕ್ಟೋಬರ್ 2ರವರೆಗೆ ಶತಮಾನೋತ್ಸವ ಮಾಡಲಾಗುತ್ತದೆ ಎಂದು ಹೇಳಿದರು. ಸಮಿತಿಯು ವಿಶೇಷ ಜಂಟಿ ಅಧಿವೇಶನವನ್ನು ಬೆಳಗಾವಿಯಲ್ಲಿ ಆಯೋಜಿಸಲು ನಿರ್ಧರಿಸಿದ್ದು, ಕಾರ್ಯಕ್ರಮಕ್ಕೆ ■6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ತಿಮ್ಮ ತನ್ನ ಆಪ್ತ ಸ್ನೇಹಿತ ಗುಂಡನ ಮನೆಗೆ ಬರುತ್ತಾನೆ.

ತಿಮ್ಮ : ಏನೋ ಇದು, ಬಟ್ಟೆ ಒಗಿತಾ ಇದ್ಯಾ?

ಗುಂಡ : ಹೌದು, ಏನ್ ಮಾಡೋದಪ್ಪಾ..

ತಿಮ್ಮ : ಅಲ್ವೋ..ಮನೆ ಕೆಲಸಕ್ಕೆ ಕೆಲಸದವಳನ್ನು ಇಟ್ಟುಕೊಂಡಿದ್ದೆಲ್ಲಾ.. ಎಲ್ಲಿ ಅವಳು.. ನೀನ್ಯಾಕೆ ಈ ಕೆಲಸ ಮಾಡ್ತಾ ಇದ್ಯಾ?

ಗುಂಡ : ಅವಳನ್ನೇ ಮದುವೆಯಾಗಿದ್ದೆ ಇದಕ್ಕೆಲ್ಲ ಕಾರಣವಷ್ಟೆ

ಮೈಸೂರು ಮಿತ್ರ

ಮಂಗಳವಾರ, 5 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*


ಅಮೃತವಾಹಿನಿ..........

ಇನ್ನೊಬ್ಬರ ಬಗ್ಗೆ ಏನು ನಮಗೆ ತಿಳಿದಿದೆಯೋ ಅದನ್ನು ನಂಬಬೇಕೇ ಹೊರತು ಬೇರೆಯವರಿಂದ ಕೇಳಿದ್ದನ್ನಲ್ಲ. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಾಡೋದೆಲ್ಲ ಅನಾಚಾರ, ಮನೆ ಮುಂದೆ ಬೃಂದಾವನ

ನಿಮ್ಮ ಪತ್ರಗಳು

■ ಮೈಸೂರಿನ ಇತಿಹಾಸವನ್ನು ಬದಲಿಸುವುದು ಸರಿಯೆ?



ಮಾನ್ಯರೆ,

ಚಾಮುಂಡಿಬೆಟ್ಟದ ಮೇಲಿರುವ ಏಕಶಿಲಾ ನಂದಿ ವಿಗ್ರಹವನ್ನು 350 ವರ್ಷಗಳ ಹಿಂದೆ ಮೈಸೂರು ಸಂಸ್ಥಾನದ ಮಹಾರಾಜ ದೊಡ್ಡದೇವರಾಜ ಒಡೆಯರ್ ಸ್ಥಾಪಿಸಿರುವುದನ್ನು ದಾಖಲೆಗಳು ಹೇಳುತ್ತವೆ. ಅವರ ಆಡಳಿತಾವಧಿ 1659 ರಿಂದ 1673ರ ಆಗಿರುವುದಾಗಿ ಮೈಸೂರು ಪ್ಯಾಲೇಸ್ ವೆಬ್‌ಸೈಟ್ ಹಾಗೂ ಇತರೆ ಸಾಹಿತ್ಯ ಕೃತಿಗಳಲ್ಲಿ ಕಂಡುಬರುವುದು. ಆ ಮೂಲಕ 1664ರಲ್ಲಿ ಚಾಮುಂಡಿಬೆಟ್ಟಕ್ಕೆ ಒಂದು ಸಾವಿರ ಮೆಟ್ಟಿಲುಗಳನ್ನು ನಿರ್ಮಿಸಿದನೆಂದು ಹಾಗೂ ಏಕಶಿಲಾ ನಂದಿಯನ್ನು ಸ್ಥಾಪಿಸಲಾಯಿತೆಂದು ತಿಳಿಯಲಾಗಿದೆ. ಮಹಾರಾಜ ದೊಡ್ಡದೇವರಾಜರು ಹುಟ್ಟಿದ್ದು 25 ಮೇ 1627 ರಂದು. ಆದರೆ ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ಅವರ ಹೆಸರಿನಲ್ಲಿ ಬೆಟ್ಟದ ನಂದಿ ಬಳಿ ಹಾಕಿರುವ ಮಾಹಿತಿ ಫಲಕದಲ್ಲಿ ಬೆಟ್ಟಕ್ಕೆ ಮೆಟ್ಟಿಲುಗಳನ್ನು ದೊಡ್ಡದೇವರಾಜ ಒಡೆಯರ್ 1569 ರಲ್ಲಿ ನಿರ್ಮಾಣ ಮಾಡಿಸಿದರು ಎಂದು ಬರೆದಿದೆ. ಜೊತೆಗೆ 800ನೇ ಮೆಟ್ಟಿಲು ಬಳಿ ಸಮತಟ್ಟಾದ ಜಾಗದಲ್ಲಿ ನಂದಿ ಸ್ಥಾಪಿಸಲಾಗಿದೆಯೆಂದು ಹಾಗೂ ನಂದಿ ವಿಗ್ರಹದ ಅಳತೆಯಲ್ಲೂ ಸಹ ವ್ಯತ್ಯಾಸ ಇರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

ವಿಶ್ವದ ಎಲ್ಲೆಡೆಯಿಂದ ಬರುವ ಪ್ರವಾಸಿಗರಿಗೆ ತಪ್ಪು ಮಾಹಿತಿಯನ್ನು ನೀಡುವ ಈ ಫಲಕದ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಸರಿಪಡಿಸುವುದು ಸೂಕ್ತ. ಇಲ್ಲವಾದಲ್ಲಿ ಮೈಸೂರು ಇತಿಹಾಸವನ್ನು ತಿರುಚಿ ಮುಂದಿನ ಪೀಳಿಗೆಯವರಿಗೆ ಸುಳ್ಳಿನ ಸಂದೇಶ ರವಾನೆ ಆಗುವುದು ಬೇಡ ಎಂಬುದು ನನ್ನ ಆಶಯ. ಈಗಾಗಲೇ ಹಾಕಿರುವ ಮಾಹಿತಿಯ ಫಲಕವೇ ಸರಿ ಎಂಬುದಾದರೆ ದೊಡ್ಡದೇವರಾಜರು ಹುಟ್ಟಿದ ದಿನಾಂಕವು ಸುಳ್ಳೇ?

ಮೈಸೂರು ಸಂಸ್ಥಾನದ ಇತಿಹಾಸವು ಸ್ಪಷ್ಟವಾಗಿ ಹಾಗೂ ನಿಖರವಾಗಿ ದೊರೆಯುತ್ತಿರುವಾಗ ಇಂತಹ ತಪ್ಪುಗಳಾಗಿರುವುದು ವಿಪರ್ಯಾಸ, ದಯಮಾಡಿ ಸಂಬಂಧಿಸಿದವರು ತ್ವರಿತವಾಗಿ ಕ್ರಮವಹಿಸುವುದು ಪಾರಂಪರಿಕ ನಗರದ ಇತಿಹಾಸ ಸ್ಪಷ್ಟ ಮಾಹಿತಿಯನ್ನು ಸಂರಕ್ಷಿಸಿಕೊಳ್ಳುವ ದೃಷ್ಟಿಯಿಂದ ಒಳ್ಳೆಯದು.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

■ ವಕ್ಫ್ ಬೋರ್ಡ್ : ಗಾಬರಿ ಪಡಿಸುವ ಆಸ್ತಿ

ಮಾನ್ಯರೆ,

ಉತ್ತರ ಕರ್ನಾಟಕದ ಕೆಲ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ನಮೂದಾಗಿದೆ, ನಮಗೆ ನೋಟೀಸ್ ಬಂದಿದೆ ಎಂದು ಸಣ್ಣ ಮಟ್ಟದಲ್ಲಿ ಕಾಣಿಸಿಕೊಂಡ ವಿವಾದ ನಂತರ ಅನೇಕ ಜಿಲ್ಲೆಗಳ ರೈತರಿಗೂ ವಿಸ್ತರಿಸಿ, ನಂತರ ಸ್ಮಶಾನ, ದೇವಸ್ಥಾನವನ್ನು ಕೂಡ ಆಕ್ರಮಿಸಿರುವುದು ವರದಿಯಾಗಿದೆ. ವಿವಾದ ದೊಡ್ಡದಾಗುತ್ತಿದ್ದಂತೆ ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೋಟೀಸ್ ವಾಪಸ್ ಪಡೆಯಲಾಗುವುದು ಎಂದು ಹೇಳಿದ್ದಾರೆ.

ವಿವಾದ ಆರಂಭವಾದಾಗ ಯಾವುದೇ ಹೇಳಿಕೆ ನೀಡದೆ ಮೌನ ವಹಿಸಿದ್ದ ವಕ್ಫ್ ಸಚಿವ ಝಡ್ ಎಚ್ ಜಮೀರ್ ಅಹಮದ್ ಅವರು ಈಗ ನೋಟೀಸ್ ಹಿಂಪಡೆಯಲಾಗುವುದು ಎಂದಿದ್ದಾರೆ. ವೈರಲ್ ಆಗಿರುವ ವಿಡಿಯೋ ಒಂದರಲ್ಲಿ ಜಮೀರ್ ಅಹಮದ್ ಖಾನ್ ಅವರು, ನಾನೇನು ನಾಮಕಾವಸ್ತೆಗೆ ವಕ್ಫ್ ಅದಾಲತ್ ಮಾಡುತ್ತಿಲ್ಲ. ಅನೇಕ ವಕ್ಫ್ ಆಸ್ತಿಗಳು ಒತ್ತುವರಿಯಾಗಿವೆ ಎಂದು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದೇನೆ. ಅವರ ಸೂಚನೆಯಂತೆ ಪ್ರತಿ ಜಿಲ್ಲೆಗೆ ಹೋಗಿ ವಿಡಿಯೋ ಕಾನ್ಫರೆನ್ಸ್ ಮೂಲಕ ವಕ್ಫ್ ಅದಾಲತ್ ಮಾಡುತ್ತಿದ್ದೇನೆ. ಹೀಗೆ ಮಾಡಲು ಅವರೇ ಸೂಚನೆ ಕೊಟ್ಟಿದ್ದಾರೆ ಎಂದು ವಿಡಿಯೋದಲ್ಲಿ ಹೇಳಿದ್ದಾರೆ. ಅದರ ಫಲವೇ ರೈತರ ಜಮೀನುಗಳ ಪಹಣಿಯಲ್ಲಿ ಗೋಚರಿಸಿರುವ ವಕ್ಫ್ ಮಾಲೀಕತ್ವದ ಹೆಸರು! ಸರಿ ಅವರೇನೋ ಹೀಗೆ ವಕ್ಫ್ ಹೆಸರು ಸೇರಿಸಲು ಹೇಳಿದರು ಎಂದುಕೊಳ್ಳೋಣ. ಆದರೆ ರಾಜ್ಯದ ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಲೆಕ್ಕಿಗನಿಂದ ಹಿಡಿದು ಜಿಲ್ಲಾಧಿಕಾರಿಯವರೆಗಿನ ನೌಕರರ ಗಮನಕ್ಕೆ ಇದು ಬರಲಿಲ್ಲವೇ? ಅಥವಾ ಸಚಿವರು ಮುಖ್ಯಮಂತ್ರಿಗಳ ಬಲಗೈ ಎಂದು ಹೆದರಿ ಶಿರಸಾವಹಿಸಿ ಆರ್‌ಟಿಸಿಯಲ್ಲಿ ವಕ್ಫ್ ಹೆಸರು ಸೇರಿಸಿದರೇ? ವಕ್ಫ್ ಆಸ್ತಿಯಾಗಿದ್ದರೆ ನೋಟೀಸ್ ಪ್ರಕಾರ ಮೊದಲು ತಿಳಿಸಿ ಕಾನೂನು ಪ್ರಕಾರ ಮುಂದುವರಿಯಬೇಕಾಗಿತ್ತು. ಆದರೆ ಸಚಿವ ಹೇಳಿದರೆಂದು ಹೇಗೆ ಆಜ್ಞೆ ಪಾಲಿಸಿದರು? ವಿಧಾನಸೌಧ, ಮೈಸೂರು ಅರಮನೆ, ಬೆಂಗಳೂರು ಅರಮನೆಯನ್ನು ಸಚಿವರು ಹೇಳಿದರೆಂದು ವಕ್ಫ್ ಬೋರ್ಡ್‌ಗೆ ಸೇರಿಸಲು ಹಿಂಜರಿಯದ ನಮ್ಮ ಸಿಬ್ಬಂದಿಗಳ ಕ್ರಮಕ್ಕೆ ಶಹಬ್ಬಾಸ್ ಹೇಳಲೇಬೇಕು!

ಈಗ ಮತ್ತೊಂದು ವಿಡಿಯೋ ಕೂಡ ಬಿಡುಗಡೆಯಾಗಿದ್ದು, ಬಿಜೆಪಿ ಸರ್ಕಾರದ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಕೂಡ ವಕ್ಫ್ ಮಂಡಳಿ ಸಭೆಯಲ್ಲಿ ವಕ್ಫ್ ಆಸ್ತಿ ಸುಮಾರು 2 ಸಾವಿರ ಕೋಟಿಯಷ್ಟು ಆಸ್ತಿ ಬೇರೆಯವರ ಪಾಲಾಗಿದೆ. ಅದನ್ನು ಕಾಪಾಡಿಕೊಳ್ಳುವುದು ನಿಮ್ಮ ಡ್ಯೂಟಿ. ಅದು ಅಲ್ಲಾನ ಅಸ್ತಿ ಎಂದು ಸ್ವತಃ ಬಸವರಾಜ ಬೊಮ್ಮಾಯಿ ಹೇಳಿರುವ ವಿಡಿಯೋ ವೈರಲ್ ಆಗಿದೆ. ಎಂದರೆ ತಾವು ಅಧಿಕಾರದಲ್ಲಿದ್ದಾಗ ಸಮಯಕ್ಕೆ ತಕ್ಕಂತೆ ಮಾತನಾಡಿ ಅವರನ್ನು ಓಲೈಸಿ, ಅವರಿಗೆ ಬೇಕಾದ ಕೆಲಸವನ್ನು ಮಾಡಿಕೊಡುವುದು ಅಧಿಕಾರಸ್ಥರಿಂದ ಆಗುತ್ತಿದೆ ಎನ್ನುವುದು ಸ್ಪಷ್ಟವಾಗುತ್ತಿದೆ. ಅದು ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಎಂಬ ಭೇದವಿಲ್ಲ. ವಕ್ಫ್ ಬೋರ್ಡ್‌ಗಳನ್ನು ರದ್ದು ಮಾಡಿ ಎಂಬ ಕೂಗು ಜೋರಾಗುತ್ತಿದೆ. ಹೌದು ಯಾವುದೇ ಒಂದು ಸಮುದಾಯದ ಒಂದು ಮಂಡಳಿ ಪ್ರತ್ಯೇಕ ಆಸ್ತಿ ಹೊಂದುವುದು ಹೇಗೆ?

–ಮುಳ್ಳೂರು ಪ್ರಕಾಶ್, ಕನಕದಾಸ ನಗರ, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ನಿಮ್ಮ ವೃತ್ತಿಯ ನೀವು ಇಷ್ಟಪಡುವಿರಾ?

ನಾವೆಲ್ಲ ನಮ್ಮ ಜೀವನ ನಿರ್ವಹಣೆಗಾಗಿ ಯಾವುದಾದರೂ ಒಂದು ವೃತ್ತಿಯನ್ನು ಹುಡುಕಿಕೊಂಡಿರುತ್ತೇವೆ. ಅದು ನಾವು ಮೆಚ್ಚಿ ಪಡೆದ ಕೆಲಸವಾಗಿರಬಹುದು ಅಥವಾ ಬಲವಂತವಾಗಿ ಆಯ್ಕೆ ಮಾಡಿಕೊಂಡ ಕೆಲಸವಾಗಿರಬಹುದು. ಜೀವನ ಮಾಡುವ ಅನಿವಾರ್ಯತೆ ಅಂತಹ ಕೆಲಸವನ್ನು ಮಾಡುವಂತೆ ಮಾಡುತ್ತದೆ. ನಮಗೆ ಹೆಚ್ಚಿನ ಜ್ಞಾನ ಹಾಗೂ ವಿದ್ಯಾರ್ಹತೆ ಇರಬಹುದು, ಆದರೆ ಅದಕ್ಕೆ ತಕ್ಕ ಕೆಲಸ ಸಿಗದೇ ಇರಬಹುದು. ಆದರೂ ನಾವು ಒಂದು ಕೆಲಸವನ್ನು ಮಾಡುವುದು ಅನಿವಾರ್ಯವಾಗುತ್ತದೆ. ಹಾಗೆ ಕೆಲಸ ಮಾಡುವವರನ್ನು ನಿಮಗೆ ನಿಮ್ಮ ಕೆಲಸ ಖುಷಿ ನೀಡಿದೆಯೇ? ನಿಮಗೆ ನಿಮ್ಮ ಕೆಲಸದ ಬಗ್ಗೆ ತೃಪ್ತಿ ಸಿಕ್ಕಿದೆಯೇ? ಎಂದು ಕೇಳಿದರೆ ಶೇಕಡಾ 75ಕ್ಕಿಂತ ಹೆಚ್ಚಿನ ಜನರು ತಮಗೆ ತಮ್ಮ ಕೆಲಸದಲ್ಲಿ ಖುಷಿ ಇಲ್ಲ ಎಂದೇ ಹೇಳುತ್ತಾರೆ. ಖುಷಿ ಇಲ್ಲದ ಮೇಲೆ ಏಕೆ ಕೆಲಸ ಮಾಡುತ್ತಿದ್ದೀರಿ ಎಂದರೆ, ಅನಿವಾರ್ಯತೆ. ಇದನ್ನು ಬಿಟ್ಟರೆ ಬೇರೆ ಕೆಲಸ ಸಿಗುವುದು ಕಷ್ಟ. ಆದ್ದರಿಂದ ನನ್ನ ಹಣೆಬರಹ ಎಂದು ಇದೇ ಕೆಲಸದಲ್ಲಿ ಮುಂದುವರೆದಿದ್ದೇನೆ ಎಂದೇ ನಿರುತ್ಸಾಹದಿಂದ ಹೇಳುತ್ತಾರೆ. ಹಾಗೆ ತಾವು ಆ ಕೆಲಸದಲ್ಲಿ ಮುಂದುವರೆಯುವುದು ಅನಿವಾರ್ಯ ಎಂದಾದಾಗ ಆ ಕೆಲಸವನ್ನೇ ಏಕೆ ಇಷ್ಟಪಟ್ಟು ಮಾಡಬಾರದು? ಎಂದು ಕೇಳಿದರೆ, ಮತ್ತದೇ ನೀರಸ ಉತ್ತರ, ಈ ಕೆಲಸದಲ್ಲಿ ಯಾವ ನಾವೀನ್ಯತೆಯೂ ಇಲ್ಲ. ನಿನ್ನೆ ಮಾಡಿದ್ದನ್ನೇ ಇಂದು ಮಾಡಬೇಕು, ಅದನ್ನೇ ನಾಳೆಯೂ ಮುಂದುವರೆಸಬೇಕು. ಹೀಗಾದಾಗ ಕೆಲಸದಲ್ಲಿ ಯಾವ ಸಂತೋಷ ಸಿಗುತ್ತದೆ? ಎಂದು ಮರುಪ್ರಶ್ನೆ ಹಾಕುತ್ತಾರೆ.

ಮತ್ತಷ್ಟು ಜನರಿಗೆ ತಾವು ಮಾಡುತ್ತಿರುವ ಕೆಲಸದಲ್ಲಿ ಅಪಾರವಾದ ಲಾಭ ಸಿಗುತ್ತಿರುತ್ತದೆ. ನೆಮ್ಮದಿಯ ಜೀವನ ನಡೆಸಲು ಅವರಿಗೆ ಯಾವುದೇ ತೊಂದರೆ ಇರುವುದಿಲ್ಲ. ಅಂತಹವರಿಗೆ ನಿಮಗೆ ನಿಮ್ಮ ಕೆಲಸ ತೃಪ್ತಿ ತಂದಿದೆಯೇ ಎಂದರೆ 'ಇಲ್ಲ' ಎಂದೇ ಉತ್ತರಿಸುತ್ತಾರೆ. ಮತ್ತೇನಾಗಬೇಕಾಗಿತ್ತು ಎಂದರೆ ನಿರ್ದಿಷ್ಟ ಉತ್ತರ ದೊರಕುವುದಿಲ್ಲ, ಆದರೆ ನನ್ನ ಕೆಲಸ ನನಗೆ ಖುಷಿ ನೀಡುತ್ತಿಲ್ಲ ಎನ್ನುತ್ತಾರೆ. ಹಾಗಾದರೆ ಯಾರು ತಮ್ಮ ಕೆಲಸವನ್ನು ಸಂತೋಷದಿಂದ ಸ್ವೀಕರಿಸುತ್ತಾರೆ? ನಮಗೆ ಹೆಚ್ಚು ಹಣ ಸಿಗುವ, ಆದರೆ ಕಷ್ಟವಾಗುವಂತಹ ಕೆಲಸ ಬೇಕು ಎಂಬ ಮಾನಸಿಕ ಸ್ಥಿತಿ ಹೀಗೆ ನಾವು ಮಾಡುವ ಕೆಲಸದ ಬಗ್ಗೆ ನಮಗೆ ಆಸಕ್ತಿ ಇಲ್ಲದಂತೆ ಮಾಡುತ್ತದೆ. ಆದರೆ ನಾನು ಮಾಡುವ ಕೆಲಸವನ್ನು ನಾನು ನಿಷ್ಠೆಯಿಂದ ಮಾಡುತ್ತೇನೆ, ಅದು ನನಗೆ ಜೀವನ ನೀಡಿರುವ ಕೆಲಸ. ಈ ಕೆಲಸವನ್ನೇ ಮತ್ತೆ ಹೇಗೆ ಉತ್ತಮಗೊಳಿಸಬಹುದು ಎಂಬ ಬಗ್ಗೆ ನಾನು ಯೋಚನೆ ಮಾಡುತ್ತೇನೆ ಎಂದು ಹೇಳುವ ಮನೋಭಾವದವರು ಕಂಡುಬರುವುದು ಕಡಿಮೆಯೇ.

ನಾವು ಕಂಡು ಕೇಳಿರುವ ಒಂದೆರಡು ಉದಾಹರಣೆಗಳನ್ನು ಇಲ್ಲಿ ನೆನಪಿಸಿಕೊಳ್ಳಬಹುದು. ಒಬ್ಬ ಬಸ್ಸಿನ ನಿರ್ವಾಹಕ, ಅದೂ ಸರ್ಕಾರಿ ಬಸ್ಸಿನ ಉದ್ಯೋಗಿ, ತನ್ನ ಕೆಲಸ ನೀರಸವಾಗಬಾರದು ಎಂದು ಬಸ್ಸಿನಲ್ಲಿ ಕನ್ನಡದ ಖ್ಯಾತ ಸಾಹಿತಿಗಳ ಚಿತ್ರ ಹಾಕಿಕೊಂಡಿರುವುದು, ಕೆಲವು ಪತ್ರಿಕೆ ಹಾಗೂ ಪುಸ್ತಕಗಳನ್ನು ಬಸ್ಸಿನಲ್ಲಿ ಇರಿಸಿ, ತನ್ನ ಪ್ರಯಾಣಿಕರಿಗೆ ಓದಲು ನೀಡುತ್ತಿರುವ ಬಗ್ಗೆ ನಾವು ನೋಡಿದ್ದೇವೆ. ಇದೀಗ ರಾಜ್ಯೋತ್ಸವ ಆರಂಭವಾಗಿದೆ. ಈಗ ಕನ್ನಡದ ಬಗ್ಗೆ ಎಲ್ಲೆಲ್ಲೂ ಮುತುವರ್ಜಿ ವಹಿಸಲಾಗುತ್ತಿದೆ. ಈ ಬಸ್ಸಿನ ನಿರ್ವಾಹಕ ಹಾಗೂ ಚಾಲಕ ಇಡೀ ಬಸ್ಸನ್ನು ಕನ್ನಡಮಯವಾಗಿಸಿ, ಅಲಂಕರಿಸಿ ಕನ್ನಡ ಹಾಡುಗಳನ್ನು ಹಾಕಿ ನೋಡಿದವರಲ್ಲಿ ಕನ್ನಡದ ಭಾವನೆ ಬರುವಂತೆ ಮಾಡುತ್ತಾರೆ. ಅವರು ತಮ್ಮ ಕೆಲಸವನ್ನು ನೀರಸ ಎಂದು ಭಾವಿಸದೇ ತಮ್ಮ ಕೆಲಸವನ್ನು ಆನಂದಿಸಲು ಇಂತಹ ನಿರ್ಧಾರ ಕೈಗೊಂಡಿರುತ್ತಾರೆ. ಅಂತಹವರು ಸದಾ ಲವಲವಿಕೆಯಿಂದ ಇರುವುದನ್ನು ಗಮನಿಸಬಹುದು.

ಇತ್ತೀಚೆಗೆ ಕಂಡ ಮತ್ತೊಂದು ಉದ್ಯೋಗಿಯ ಬಗ್ಗೆ ಹೇಳಬೇಕು. ಆತ ಹೇರ್‌ಕಟಿಂಗ್ ಸಲೂನ್ ನಡೆಸುವವನು. ಸಾಮಾನ್ಯವಾಗಿ ಕ್ಷೌರಕ್ಕೆ ಹೋದಾಗ ತಕ್ಷಣವೇ ಕ್ಷೌರ ಆಗುವುದು ಕಡಿಮೆಯೇ. ಕೆಲವು ನಿಮಿಷಗಳು ಅಥವಾ ಗಂಟೆಗಳನ್ನು ನಮ್ಮ ಸರದಿಗಾಗಿ ಅಲ್ಲಿ ಕಳೆಯಬೇಕಾಗುತ್ತದೆ. ಒಬ್ಬ ಇಂತಹ ಅಂಗಡಿಯ ಮಾಲಿಕ ತನ್ನ ಸೆಲೂನಿನಲ್ಲಿ ಒಂದಷ್ಟು ಪುಸ್ತಕಗಳನ್ನು ತಂದಿರಿಸಿ, ತನ್ನ ಗ್ರಾಹಕರಿಗೆ ಅದನ್ನು ಓದುವಂತೆ ಮಾಡುತ್ತಿದ್ದಾನೆ. ಹೋದವರು ಬಲವಂತವಾಗಿಯಾದರೂ ಒಂದು ಪುಸ್ತಕ ಕೈಯಲ್ಲಿ ಹಿಡಿದು ಕುಳಿತುಕೊಳ್ಳುವಂತಾಗುತ್ತದೆ. ಅಕ್ಷರಸ್ಥರು ಆ ಅಂಗಡಿಯವನು ಇಂತಹ ಪುಸ್ತಕ ತಂದಿರಿಸಿ ಓದಿ ಎಂದು ಹೇಳಿದಾಗ ಓದದಿರುವುದು ಹೇಗೆ? ಎಂದಾದರೂ ಪುಸ್ತಕ ಹಿಡಿದು ಕೂರುತ್ತಾರೆ. ಅವರಿಗೆ ಸಮಯ ಹೋಗುವುದು ಗೊತ್ತೇ ಆಗುವುದಿಲ್ಲ. ಇಲ್ಲಿ ಮಾಲೀಕ ಒಂದು ಕಲ್ಲಿನಲ್ಲಿ ಎರಡು ಹಕ್ಕಿ ಹೊಡೆದಂತೆ ಮಾಡಿದ್ದಾನೆ. ಬರುವವರು ಕಾಯಬೇಕಾದಾಗ ಅಸಹನೆಯಿಂದ ಕಾಯದೇ, ಪುಸ್ತಕ ಓದುತ್ತಾ ಸಹನೆ ಬೆಳೆಸಿಕೊಳ್ಳುವಂತೆ ಮಾಡುವುದು ಒಂದು ಬಗೆಯದಾದರೆ, ಬಲವಂತವಾಗಿ ಒಂದಷ್ಟು ಪುಸ್ತಕ ಓದುವಂತೆ ಮಾಡುವ ಅವನ ಶ್ರೇಷ್ಠ ಉದ್ದೇಶವೂ ಈಡೇರುತ್ತದೆ.



> ❝ ಯಾವುದೇ ಕೆಲಸ ಸುಲಭವಲ್ಲ. ಹಾಗೆಂದೂ ಎಲ್ಲಾ ಕೆಲಸಗಳು ಕಷ್ಟ ಎಂದೂ ಅಲ್ಲ. ನಾವು ನಮ್ಮನ್ನು ಅದರಲ್ಲಿ ಹೇಗೆ ತೊಡಗಿಸಿಕೊಳ್ಳುತ್ತೇವೋ ಹಾಗೆ ಅದು ನಮಗೆ ಸಂತೋಷ, ದುಃಖ ನೀಡುತ್ತದೆ. ಮಾಡುವ ಕೆಲಸ ಅನಿವಾರ್ಯವಾಗಿರಲಿ ಅಥವಾ ಅದು ತಾತ್ಕಾಲಿಕವಾಗಿರಲಿ, ಅದನ್ನು ಹರ್ಷದಿಂದ ಮಾಡುವುದರಿಂದ ನಮಗೆ ಖಂಡಿತಾ ನೆಮ್ಮದಿ ಸಮಾಧಾನ ಸಿಗುತ್ತದೆ. ನಮ್ಮನ್ನು ನಾವು ಇತರರೊಡನೆ ಹೋಲಿಸಿಕೊಳ್ಳುವುದು ನಿಲ್ಲಿಸಿದರೆ ಅರ್ಧ ಸಮಸ್ಯೆ ಅಲ್ಲೇ ನಿವಾರಣೆಯಾಗುತ್ತದೆ.

ಮಗದೊಬ್ಬ ವ್ಯಾಪಾರಿ, ತನ್ನ ಬಳಿ ಬರುವ ಗ್ರಾಹಕರಿಗೆ ತಾನು ಅವರೆಡೆಗೆ ಗಮನಹರಿಸಲು ತಡವಾಗುತ್ತದೆ ಎಂದಾಗ, ತಿನ್ನಲು ತನ್ನ ಅಂಗಡಿಯ ತುಸು ತಿನಿಸು ನೀಡಿ ಕೂರಿಸುತ್ತಾನೆ. ಹೋದವರು ಆ ತಿನಿಸು ತಿನ್ನುವುದರಿಂದ, ಹಾಗೇ ವ್ಯಾಪಾರ ಮಾಡದೇ ಹಿಂದಿರುಗಲು ಸಾಧ್ಯವಿಲ್ಲ. ಇದೂ ಒಂದು ರೀತಿಯ ಉಪಾಯವೇ. ನಾನು ಮಾರುಕಟ್ಟೆಯಲ್ಲಿ ಇಂತಹ ವ್ಯಾಪಾರಿಗಳನ್ನು ಕಂಡಿದ್ದೇನೆ. ಅವರ ಅಂಗಡಿಯಲ್ಲಿ ಕಡಲೆ–ಪುರಿಯನ್ನೂ ಮಾರುತ್ತಾರೆ. ಮೊದಲಿನ ಗ್ರಾಹಕರ ನಂತರ ಹೊಸ ಗ್ರಾಹಕರನ್ನು ಅವರು ಗಮನಿಸಬೇಕಾಗುತ್ತದೆ. ಹಾಗಾಗಿ ತಡವಾಗಿ ಬಂದವರಿಗೆ ಅಥವಾ ಯಾವಾಗ ಬಂದರೂ ಒಂದಷ್ಟು ಪುರಿಗೆ ಖಾರ ಸೇರಿಸಿ ಗ್ರಾಹಕರಿಗೆ ನೀಡುತ್ತಾರೆ. ಆಗ ಗ್ರಾಹಕ ತನ್ನ ಸರದಿಗಾಗಿ ಕಾಯುತ್ತಾರೆ. ಇದೂ ಬುದ್ಧಿವಂತಿಕೆ ಎನಿಸುತ್ತದೆ.

ಒಬ್ಬ ಖ್ಯಾತ ಹಾಸ್ಯ ಸಾಹಿತಿ ಹೇಳಿದ ಒಂದು ಕಥೆ ನೆನಪಾಗುತ್ತದೆ. ಅವರು ಹೇಳಿದ ಕಥೆ ಎಂದರೆ ಒಮ್ಮೆ ಸೂಟು–ಬೂಟು–ಹ್ಯಾಟು ಧರಿಸಿದ್ದ ವ್ಯಕ್ತಿಯೊಬ್ಬ ವಿಮಾನ ನಿಲ್ದಾಣಕ್ಕೆ ಹೋಗಲು ಒಂದು ಟ್ಯಾಕ್ಸಿ ಹತ್ತುತ್ತಾನೆ. ಬಹಳ ಗಂಭಿರವಾಗಿ ಕುಳಿತಿದ್ದ ಅವನನ್ನು ಟ್ಯಾಕ್ಸಿ ಚಾಲಕ ಗಮನಿಸುತ್ತಾನೆ. ಆತ ಕೇಳುತ್ತಾನೆ, 'ನೀವೇನೋ ಚಿಂತೆಯಲ್ಲಿ ಇರುವಂತಿದೆ, ನೀವು ವಿಮಾನದಲ್ಲಿ ಹಾರಾಡುವವರು, ನಿಮಗೆ ಯಾವುದರ ಚಿಂತೆ?' ಎಂದು. ಅದಕ್ಕೆ ಆ ವ್ಯಕ್ತಿ ಹೇಳುತ್ತಾನೆ 'ವಿಮಾನದ ಹಾರಾಟದ ಕಷ್ಟ ಅದನ್ನು ಅನುಭವಿಸಿದವರಿಗೇ ಗೊತ್ತು. ನೆಲದ ಮೇಲಿನಿಂದ 40 ಸಾವಿರ ಅಡಿ ಎತ್ತರದಲ್ಲಿ ವಿಮಾನ ಹಾರುತ್ತದೆ. ಅಲ್ಲಿ ಏನಾದರೂ ಆದರೆ ನಮ್ಮ ಎಲುಬೂ ಸಹಾ ಸಿಗುವುದಿಲ್ಲ. ಕೆಳಗಿಳಿದು ಬಂದರೆ ನಮಗೆ ಪುನರ್ಜನ್ಮ ಬಂದಂತೆ ಆಗುತ್ತದೆ. ವಿಮಾನದೊಳಗೆ ಹವಾನಿಯಂತ್ರಿತ ವಾತಾವರಣ ಇರುತ್ತದೆ. ಅಂದರೆ ಉಸಿರಾಡಿದ ಗಾಳಿಯನ್ನೇ ಮತ್ತೆಮತ್ತೆ ಉಸಿರಾಡುವುದು. ಇದರಿಂದ ತಲೆಯೆಲ್ಲಾ ಬಿಸಿಯಾಗುತ್ತದೆ. ವಿಮಾನದಲ್ಲಿ ಪ್ರಯಾಣಿಸುವ ಬಹಳ ಜನ ತಾವು ಅಸಮಾನರು ಎಂಬ ಅಹಮ್ಮಿನಲ್ಲಿರುತ್ತಾರೆ. ಅವರು ಗಂಟುಮುಖದವರು. ಯಾರೊಡನೆಯೂ ಮಾತನಾಡುವುದಿಲ್ಲ. ಕೆಲವೊಮ್ಮೆ ಬಲವಂತದ ನಗೆ ನಕ್ಕು ಸುಮ್ಮನಾಗುತ್ತಾರೆ. ಸದಾ ನಗುವ ಗಗನಸಖಿಯರದ್ದು ಪ್ಲಾಸ್ಟಿಕ್ ನಗೆ. ಅದರಲ್ಲಿ ಸತ್ವವಿರುವುದಿಲ್ಲ. ಅಲ್ಲಿ ಕೊಡುವ ಊಟ ಶ್ರೀಮಂತರ ಪುಷ್ಕಳದ ಊಟ. ದಿನಾ ಅದನ್ನೇ ತಿನ್ನುವುದು ಕಷ್ಟ!' ಎನ್ನುತ್ತಾ ಸಮಸ್ಯೆಗಳ ಸರಮಾಲೆಯನ್ನೇ ಹೇಳಿದ. ಅವನ ಹೇಳಿಕೆ ಕೇಳಿದ ಟ್ಯಾಕ್ಸಿ ಚಾಲಕ ಸಹಾನುಭೂತಿಯಿಂದ ಹಾಗಿದ್ದರೆ ವಿಮಾನದಲ್ಲೇ ಏಕೆ ಪ್ರಯಾಣಿಸುತ್ತೀರಿ? ರೈಲು–ಬಸ್ಸು–ಕಾರುಗಳಲ್ಲಿ ಹೋಗಬಹುದಲ್ಲವೇ? ಎಂದಾದಾಗ ಆ ವ್ಯಕ್ತಿ ನಿಟ್ಟುಸಿರಿಟ್ಟು ಹೇಳುತ್ತಾನೆ 'ನಾನು ವಿಮಾನದಲ್ಲೇ ಏಕೆ ಪ್ರಯಾಣಿಸುತ್ತಿದ್ದೇನೆ ಎಂದರೆ ನಾನು ವೃತ್ತಿನಿರತ ವಿಮಾನದ ಪೈಲಟ್ ಎಂದು. ಅದನ್ನು ಕೇಳಿದ ಟ್ಯಾಕ್ಸಿ ಚಾಲಕನಿಗೆ ನಗು ಬರುತ್ತದೆ. ಇಷ್ಟೆಲ್ಲಾ ಬೇಸರವಿದ್ದರೆ ಪೈಲಟ್ ವೃತ್ತಿಯೇ ಏಕೆ? ಎಂದು ಕೇಳಿದಾಗ ಅವನು ಹೇಳುವ ಉತ್ತರ, 'ಕೈತುಂಬಾ ಸಂಬಳ, ದೇಶ–ವಿದೇಶಗಳನ್ನು ನೋಡುವ ಅವಕಾಶ, ಒಳ್ಳೆಯ ಯೂನಿಫಾರಂ, ಬಂಧು–ಬಳಗದಲ್ಲಿ ಘನತೆ ಗೌರವ ಸಿಗುತ್ತದೆ. ಇದು ಇನ್ನೆಲ್ಲಿ ಸಿಗಲು ಸಾಧ್ಯ?' ಎನ್ನುತ್ತಾನೆ.

ಆಗ ಟ್ಯಾಕ್ಸಿ ಚಾಲಕ ಹೇಳುವ ಮಾತು ಮನನೀಯ. 'ನಾನು ಈ ಟ್ಯಾಕ್ಸಿಯ ಮಾಲೀಕ ಹಾಗೂ ಚಾಲಕ. ನಾನು ಕೆಲಸಕ್ಕೂ ಹೋಗುತ್ತೇನೆ, ಮಕ್ಕಳೊಂದಿಗೆ ಕಾಲವನ್ನೂ ಕಳೆಯುತ್ತೇನೆ. ಬೆಂಗಳೂರು ಹಾಗೂ ವಿಮಾನ ನಿಲ್ದಾಣ ಬಿಟ್ಟು ನಾನು ಬೇರೇನೂ ನೋಡಿಲ್ಲ. ನನ್ನ ಒಂದು ತಿಂಗಳ ಸಂಪಾದನೆ ಬಹುಶಃ ನಿಮ್ಮ ಒಂದು ದಿನದ ಸಂಪಾದನೆ ಇರಬಹುದು. ಆದರೆ ನಾನು ನಿಮಗಿಂತ ಆನಂದವಾಗಿದ್ದೇನೆ' ಎನ್ನುತ್ತಾನೆ. ಇದರಿಂದ ಪೈಲಟ್‌ಗೆ ಯೋಚನಾ ಸರಣಿ ಆರಂಭವಾಗುತ್ತದೆ ಎಂಬುದು ಕಥೆ. ಆದರೆ ಇದು ನಿಜ ಜೀವನಕ್ಕೆ ಹತ್ತಿರವಾದಂತೆ ಭಾಸವಾಗುತ್ತದೆ.

ನಮ್ಮಲ್ಲಿ ಅನೇಕರು ಹೀಗೆ ಹಣಕ್ಕಾಗಿ, ಮೋಜಿಗಾಗಿ ತಮಗೆ ಇಷ್ಟವಾಗದ ಕೆಲಸ ಆರಿಸಿಕೊಳ್ಳುತ್ತಾರೆ. ಆದರೆ ಆ ಕೆಲಸವನ್ನು ಹೇಗೆ ಸದುಪಯೋಗಪಡಿಸಿಕೊಳ್ಳಬಹುದು ಎಂದು ಯೋಚಿಸುವುದಿಲ್ಲ. ನಮ್ಮಲ್ಲಿ ಒಂದು ಮಾತಿದೆ. 'ದೂರದ ಬೆಟ್ಟ ನುಣ್ಣಗೇ' ಎಂದು. ದೂರದಿಂದ ಬೆಟ್ಟ ನೋಡಿದರೆ ಅದು ಸಮತಟ್ಟಾಗಿರುವಂತೆ ಕಂಡುಬರುತ್ತದೆ. ದೂರದಿಂದ ಅದನ್ನು ಸುಲಭವಾಗಿ ಏರಬಹುದು ಎಂದೂ ಎನಿಸುತ್ತದೆ. ಆದರೆ ಹತ್ತಿರ ಹೋಗಿ ಏರಲು ಆರಂಭಿಸಿದಾಗಲೇ ಅದರಲ್ಲಿನ ಓರೆಕೋರೆಗಳು ನಮಗೆ ಕಂಡುಬರುತ್ತದೆ. ಅದನ್ನು ಕಂಡು ಅಧೈರ್ಯಪಟ್ಟರೆ ನಾವು ಎಂದಿಗೂ ಆ ಬೆಟ್ಟವನ್ನು ಹತ್ತಲಾಗುವುದಿಲ್ಲ. ಹತ್ತಬೇಕೆಂದು ನಿರ್ಧಾರ ಮಾಡಿದ ನಂತರ ಹತ್ತುವ ಸುಲಭ ವಿಧಾನ ಯಾವುದು ಎಂದು ಮೊದಲು ಕಂಡುಕೊಳ್ಳಬೇಕು. ಹತ್ತಲು ಆರಂಭಿಸಬೇಕು. ಕ್ರಮೇಣ ಅದು ನಮಗೆ ಅಭ್ಯಾಸವಾಗುತ್ತದೆ. ಹೆಜ್ಜೆ ಮುಂದುವರೆದಂತೆ ಮೊದಲಿನಷ್ಟು ಕಷ್ಟ ಎನಿಸುವುದಿಲ್ಲ. ಕೊನೆಗೆ ಗುರಿ ಮುಟ್ಟಿದಾಗ ನಮ್ಮ ಸಾಧನೆ ನಮಗೆ ಖುಷಿ ನೀಡುತ್ತದೆ.

ಇದನ್ನೇ ನಾವು ನಮ್ಮ ಉದ್ಯೋಗದಲ್ಲೂ ಅಳವಡಿಸಿಕೊಳ್ಳಬೇಕು. ಉದ್ಯೋಗ ಮಾಡಲೇಬೇಕು ಎಂದಾದ ಮೇಲೆ ಅದನ್ನು ಸರಿಯಾಗಿ ಹಾಗೂ ಸಂತೋಷ ಸಿಗುವಂತೆ ಹೇಗೆ ಮಾಡಬೇಕು ಎಂಬುದನ್ನು ನಾವೇ ಆಲೋಚಿಸಬೇಕು. ನಮ್ಮಲ್ಲಿ ಸಾಕಷ್ಟು ಜನರು ತಮ್ಮ ವೃತ್ತಿಯಲ್ಲಿ ಸಾಕಷ್ಟು ಹಣ ಹಾಗೂ ಹೆಸರು ಎರಡನ್ನೂ ಸಂಪಾದಿಸಿರುತ್ತಾರೆ. ಆದರೂ ಅವರು ಈ ಕೆಲಸ ನನ್ನ ತಲೆಗೇ ಸಾಕು. ನನ್ನ ಮಕ್ಕಳು ಈ ಕೆಲಸ ಮಾಡದಂತಾಗಬೇಕು ಎಂದು ಬಯಸುತ್ತಾರೆ. ಹಣ ಹಾಗೂ ಹೆಸರು ಬಂದಮೇಲೂ ಅವರು ಈ ರೀತಿ ಏಕೆ ಹೇಳುತ್ತಾರೆ? ಎಂಬುದನ್ನು ಗಮನಿಸಬೇಕು. ಅವರು ತಮ್ಮ ಉದ್ಯೋಗವನ್ನು ಪ್ರೀತಿಸದೇ ಅದನ್ನು ಹಣ ಗಳಿಸುವ ಮಾರ್ಗವಾಗಿ ಕಂಡುಕೊಂಡಿರುತ್ತಾರೆ. ಆ ಕೆಲಸದಲ್ಲಿನ ಪೈಪೋಟಿ ಅವರಿಗೆ ಸಹ್ಯವಾಗಿರುವುದಿಲ್ಲ. ನಾನು ಸಾರ್ವಭೌಮನಂತೆ ಇರಬೇಕು ಎಂದು ಬಯಸುತ್ತಾರೆ. ಅಂತಹವರು ಎದುರಾಳಿಯ ಸ್ಪರ್ಧೆಯನ್ನು ಸಹಿಸುವುದಿಲ್ಲ. ಅಂತಹವರು ಇಂತಹ ಮಾತನಾಡುತ್ತಾರೆ.

ಆದರೆ ಒಂದಂತೂ ನಿಜ. ಯಾವುದೇ ಕೆಲಸ ಸುಲಭವಲ್ಲ. ಹಾಗೆಂದೂ ಎಲ್ಲಾ ಕೆಲಸಗಳು ಕಷ್ಟ ಎಂದೂ ಅಲ್ಲ. ನಾವು ನಮ್ಮನ್ನು ಅದರಲ್ಲಿ ಹೇಗೆ ತೊಡಗಿಸಿಕೊಳ್ಳುತ್ತೇವೋ ಹಾಗೆ ಅದು ನಮಗೆ ಸಂತೋಷ, ದುಃಖ ನೀಡುತ್ತದೆ. ಮಾಡುವ ಕೆಲಸ ಅನಿವಾರ್ಯವಾಗಿರಲಿ ಅಥವಾ ಅದು ತಾತ್ಕಾಲಿಕವಾಗಿರಲಿ, ಅದನ್ನು ಹರ್ಷದಿಂದ ಮಾಡುವುದರಿಂದ ನಮಗೆ ಖಂಡಿತಾ ನೆಮ್ಮದಿ ಸಮಾಧಾನ ಸಿಗುತ್ತದೆ. ನಮ್ಮನ್ನು ನಾವು ಇತರರೊಡನೆ ಹೋಲಿಸಿಕೊಳ್ಳುವುದು ನಿಲ್ಲಿಸಿದರೆ ಅರ್ಧ ಸಮಸ್ಯೆ ಅಲ್ಲೇ ನಿವಾರಣೆಯಾಗುತ್ತದೆ.

ಡಾ.ಹೆಚ್.ಪಿ.ಶೋಭಾ ಅವರಿಗೆ ಅಭಿನಂದನೆ



ಮೈಸೂರು ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಕೆ.ಆರ್.ಆಸ್ಪತ್ರೆ ವೈದ್ಯಕೀಯ ಅಧೀಕ್ಷಕರಾದ ಡಾ.ಹೆಚ್.ಪಿ.ಶೋಭಾ ಅವರನ್ನು ಆಸ್ಪತ್ರೆಯ ಮಹಿಳಾ ಶುಶ್ರೂಷಕರು ಆತ್ಮೀಯವಾಗಿ ಅಭಿನಂದಿಸಿದರು.

ಕಾನೂನುಬಾಹಿರವಾಗಿ ರೈತರ ಒಂದಿಂಚು ಜಾಗವನ್ನು ವಕ್ಫ್ ವಶಪಡಿಸಿಕೊಳ್ಳಲು ಬಿಡಲ್ಲ



ಬೆಂಗಳೂರು: ರೈತರ ಒಂದಿಂಚು ಜಾಗವನ್ನು ಕಾನೂನುಬಾಹಿರವಾಗಿ ವಕ್ಫ್ ವಶಪಡಿಸಿಕೊಳ್ಳಲು ನಾನು ಬಿಡೋದಿಲ್ಲ ಎಂದು ಸಚಿವ ಎಂಬಿ ಪಾಟೀಲ್ ತಿಳಿಸಿದ್ದಾರೆ.

ವಕ್ಫ್ ವಿಚಾರವಾಗಿ ಬಿಜೆಪಿ ಪ್ರತಿಭಟನೆಗೆ ಪ್ರತಿಕ್ರಿಯೆ ನೀಡಿದ ಅವರು, ವಕ್ಫ್ ವಿಚಾರವಾಗಿ ಬಿಜೆಪಿ ಪ್ರತಿಭಟನೆ ಮಾಡಿ ರಾಜಕೀಯ ಮಾಡುತ್ತಿದೆ. ಬೊಮ್ಮಾಯಿ ಸಿಎಂ ಆಗಿದ್ದಾಗ ಏನು ಹೇಳಿದ್ದಾರೆಂದು ಎಲ್ಲಾ ನೋಡಿದ್ದಾರೆ. ಬಿಜೆಪಿ ಅವಧಿಯಲ್ಲಿ ನೋಟಿಸ್ ಕೊಟ್ಟಿದ್ದಾರೆ. ಬಿಜೆಪಿ ಅವಧಿಯಲ್ಲಿ ವಕ್ಫ್ ಆಸ್ತಿ ಎಂದು ಹೆಸರು ಬಂದಿತ್ತು. ಈಗಾಗಲೇ ಸಿಎಂ ಕ್ಲಿಯರ್ ಮಾಡಿದ್ದಾರೆ. ಯಾವ ರೈತರ ಜಮೀನು ಸರ್ಕಾರ ಪಡೆಯೋದಿಲ್ಲ ಎಂದು ತಿಳಿಸಿದರು.

ನಮ್ಮ ಜಿಲ್ಲೆಯಲ್ಲಿ ಟಾಸ್ಕ್ ಫೋರ್ಸ್ ಮಾಡಿದ್ದೇವೆ. ಎಲ್ಲಾ ದಾಖಲಾತಿ ತೆಗೆದು ರೈತರ ಜಾಗ ಇದ್ದರೆ ರೈತರಿಗೆ ಕೊಡುತ್ತೇವೆ. ವಕ್ಫ್ ಆಸ್ತಿ ಇದ್ದರೆ ಅವರಿಗೆ ಕೊಡುತ್ತೇವೆ. ಸರ್ಕಾರದ ಜಾಗ ಇದ್ದರೆ ಸರ್ಕಾರ ಪಡೆಯುತ್ತದೆ. ಬಿಜೆಪಿ ಅವರು ಜನರನ್ನು ಕೆರಳಿಸುವ ಕೆಲಸ ಮಾಡುತ್ತಿದ್ದಾರೆ. ಒಂದು ಇಂಚು ರೈತರ ಆಸ್ತಿ ಕಾನೂನುಬಾಹಿರವಾಗಿ ವಕ್ಫ್ ಆಸ್ತಿ ಆಗಲು ನಾನು ಬಿಡೋದಿಲ್ಲ ಎಂದು ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟಪಡಿಸಿದರು.

ಶಾಸಕ ಯತ್ನಾಳ್ ಅವರಿಂದ ಅಹೋರಾತ್ರಿ ಧರಣಿ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯತ್ನಾಳ್ ಮೊದಲು ಜೆಡಿಎಸ್‌ನಲ್ಲಿ ಇದ್ದವರು. ಯತ್ನಾಳ್ ಹಿಂದೆ ಟಿಪ್ಪು ಸುಲ್ತಾನ್ ಡ್ರೆಸ್ ಹಾಕಿದ್ದರು. ನಮ್ಮ ಜೊತೆಗೆ ದರ್ಗಾಗೆ ಬಂದಿದ್ದಾರೆ. ನಾವು ರಾಜಕೀಯ ಮಾಡಲ್ಲ. ಅವರು ರಾಜಕೀಯ ಮಾಡುತ್ತಿದ್ದಾರೆ. ನಾವು ಯಾವುದೇ ಧರ್ಮದವರು, ಜಾತಿಯವರು ಇದ್ದರೂ ಯಾರಿಗೂ ಅನ್ಯಾಯ ಮಾಡಲು ಬಿಡಲ್ಲ. ಈಗಾಗಲೇ ಸಿಎಂ ಅವರು ಹೇಳಿದ್ದಾರೆ. ನಾನು ಹೇಳಿದ್ದೇನೆ, ಕಂದಾಯ ಸಚಿವರು ಹೇಳಿದ್ದಾರೆ ಎಂದರು.

ಆಟವಾಡಲು ಕಾರಿಗೆ ಹತ್ತಿದ್ದ ನಾಲ್ವರು ಮಕ್ಕಳು ಉಸಿರುಗಟ್ಟಿ ದುರಂತ ಸಾವು!



ಗುಜರಾತ್: ಅಮ್ರೇಲಿ ಜಿಲ್ಲೆಯ ಹಳ್ಳಿಯೊಂದರಲ್ಲಿ ಕಾರಿನೊಳಗೆ ನಾಲ್ಕು ಮಕ್ಕಳು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ. ಘಟನೆ ಕುರಿತು ಪೊಲೀಸ್ ಅಧಿಕಾರಿಯೊಬ್ಬರು ಸುದ್ದಿ ಸಂಸ್ಥೆಗೆ ಮಾಹಿತಿ ನೀಡಿದ್ದಾರೆ.

ರಂಧಿಯಾ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಮಧ್ಯಪ್ರದೇಶದ ಧಾರ್ ಜಿಲ್ಲೆಯ ಕೃಷಿ ಕೂಲಿ ಕಾರ್ಮಿಕ ದಂಪತಿಯ ಮಕ್ಕಳು ಬಲಿಯಾಗಿದ್ದಾರೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಚಿರಾಗ್ ದೇಸಾಯಿ ತಿಳಿಸಿದ್ದಾರೆ. ಬೆಳಗ್ಗೆ 7.30ರ ಸುಮಾರಿಗೆ ಕಾರು ನಿಲ್ಲಿಸಿ ಭರತ್ ಮಂದಾನಿ ಎಂಬುವವರ ಜಮೀನಿನಲ್ಲಿ ಕೆಲಸಕ್ಕೆ ತೆರಳಿದ್ದರು. ಇದೇ ವೇಳೆ ನಾಲ್ವರು ಮಕ್ಕಳು ತಮ್ಮ ಮನೆ ಬಳಿ ನಿಲ್ಲಿಸಿದ್ದ ತೋಟದ ಮಾಲೀಕರ ಕಾರಿಗೆ ಹತ್ತಿದ್ದಾರೆ. ನಾಲ್ವರು 2ರಿಂದ 7 ವರ್ಷದೊಳಗಿನವರಾಗಿದ್ದು, ಕಾರನ್ನು ಒಳಗಿನಿಂದ ಲಾಕ್ ಮಾಡಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಕಾರು ನಿಲ್ಲಿಸಿದ್ದರಿಂದ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ. ಶನಿವಾರ ಸಂಜೆ ಮಕ್ಕಳ ಪೋಷಕರು ಮತ್ತು ಕಾರು ಮಾಲೀಕರು ಹಿಂದಿರುಗಿದಾಗ ಮೃತದೇಹಗಳನ್ನು ಕಂಡಿದ್ದಾರೆ ಎಂದು ಅಧಿಕಾರಿ ಹೇಳಿದರು. ಅಮ್ರೇಲಿ (ತಾಲೂಕಾ) ಪೊಲೀಸ್ ಠಾಣೆಯಲ್ಲಿ ಆಕಸ್ಮಿಕ ಸಾವಿನ ಪ್ರಕರಣ ದಾಖಲಾಗಿದ್ದು, ಮುಂದಿನ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

IAF ಯುದ್ಧ ವಿಮಾನ ಪತನ, ಪೈಲಟ್ ಪಾರು



ಆಗ್ರಾ: ಉತ್ತರ ಪ್ರದೇಶದ ಆಗ್ರಾ ಬಳಿ ಮಿಗ್–29 ಯುದ್ಧ ವಿಮಾನ ಸೋಮವಾರ ಪತನಗೊಂಡಿದ್ದು, ಅದೃಷ್ಟವಶಾತ್ ಇಬ್ಬರು ಪೈಲಟ್‌ಗಳು ಸುರಕ್ಷಿತವಾಗಿ ವಿಮಾನದಿಂದ ಹೊರ ಬಿದ್ದಿದ್ದಾರೆ. ಯುದ್ಧ ವಿಮಾನವು ಪಂಜಾಬ್‌ನ ಆದಂಪುರದಿಂದ ಟೇಕಾಫ್ ಆಗಿದ್ದು, ಆಗ್ರಾಕ್ಕೆ ತೆರಳುತ್ತಿದ್ದಾಗ ಈ ಘಟನೆ ನಡೆದಿದೆ. ಯುದ್ಧ ವಿಮಾನವು ನೆಲಕ್ಕೆ ಅಪ್ಪಳಿಸುತ್ತಿದ್ದಂತೆ ಹೊತ್ತಿ ಉರಿದಿದೆ.

ಪೈಲಟ್ ಸೇರಿದಂತೆ ಇಬ್ಬರು ವಿಮಾನದಿಂದ ಹಾರುವ ಮೂಲಕ ತಮ್ಮ ಪ್ರಾಣವನ್ನು ಉಳಿಸಿಕೊಂಡಿದ್ದಾರೆ. ಘಟನೆ ಕುರಿತು ಕೋರ್ಟ್ ತನಿಖೆಗೆ ಆದೇಶಿಸಲಾಗಿದೆ ಎಂದು ರಕ್ಷಣಾ ಅಧಿಕಾರಿಗಳು ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರಿನ ವಿವಿಧೆಡೆ ಸಂಭ್ರಮದ ಕನ್ನಡ ರಾಜ್ಯೋತ್ಸವ ಆಚರಣೆ

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ



ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಚಿತ್ರದಲ್ಲಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಮೈಸೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಉದ್ಯಮಿ ನಾಗೇಶ್ ಕಾಡಯ್ಯ, ಶ್ರೀ ರಾಘವೇಂದ್ರ ಪ್ರತಿಷ್ಠಾನದ ಅಧ್ಯಕ್ಷರು, ಕಾರ್ಯಕ್ರಮದ ಸಂಯೋಜಕ ಎಸ್.ನಾಗರಾಜ ಹಾಗೂ ಸಮಾಜ ಸೇವಕ ರಾಜೇಂದ್ರ ಅವರನ್ನು ಕಾಣಬಹುದು. ರಾಜ್ಯೋತ್ಸವದ ಅಂಗವಾಗಿ ಪೂಜ್ಯ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ ಅವರಿಗೆ ಗುರುವಂದನೆ ಮಾಡಲಾಯಿತು.

ಎಎಸ್‌ಜಿ ಕಣ್ಣಿನ ಆಸ್ಪತ್ರೆ



ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಎ.ಎಸ್.ಜಿ ಕಣ್ಣಿನ ಆಸ್ಪತ್ರೆಯ ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಹಿರಿಯ ಸಾಹಿತಿ ಸಿ.ಪಿ. ಕೃಷ್ಣಕುಮಾರ್ ಧ್ವಜಾರೋಹಣ ನೆರವೇರಿಸಿದರು. ಆಸ್ಪತ್ರೆ ಸಿಬ್ಬಂದಿ ಮತ್ತಿತರರಿದ್ದರು.

ರೋಟರಿ ಮೈಸೂರು ಉತ್ತರ ಹಿರಿಯ ಪ್ರಾಥಮಿಕ ಶಾಲೆ



ರೋಟರಿ ಮೈಸೂರು ಉತ್ತರ ಹಿರಿಯ ಪ್ರಾಥಮಿಕ ಶಾಲೆ ವಾಜಮಂಗಲದಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಚಿತ್ರದಲ್ಲಿ ರೋಟರಿ ಶಾಲೆಯ ಆಡಳಿತ ಅಧಿಕಾರಿ ತುಕಾರಾಂ ಶೆಟ್ಟಿ, ಮುಖ್ಯ ಶಿಕ್ಷಕ ಎಂ.ಎಸ್ ಸತೀಶ್, ಸಹ ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ಮಕ್ಕಳನ್ನು ಕಾಣಬಹುದು.

ಅನಂತಗೀತ ವಿದ್ಯಾಲಯ



ಮೈಸೂರಿನ ವಿಜಯನಗರದಲ್ಲಿರುವ ಅನಂತಗೀತ ವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಶಾಲೆಯ ಮುಖ್ಯ ಶಿಕ್ಷಕ ಲೋಕೇಶ್ ಹೆಚ್.ಪಿ. ಧ್ವಜಾರೋಹಣ ನೆರವೇರಿಸಿದರು. ಸುಲೋಚನಾ, ಗೌರಮ್ಮ, ಮಾದೇಶ್ ಮತ್ತಿತರರು ಹಾಜರಿದ್ದರು.

ಬ್ಯಾಂಕರ್ಸ್ ರಿಕ್ರಿಯೇಷನ್ ಕ್ಲಬ್



ಮೈಸೂರಿನ ಶಾರದಾದೇವಿ ನಗರದ ಬ್ಯಾಂಕರ್ಸ್ ರಿಕ್ರಿಯೇಶನ್ ಕ್ಲಬ್ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕಾರ್ಯದರ್ಶಿ ಆರ್.ರಂಗನಾಥ್ ಧ್ವಜಾರೋಹಣ ನೆರವೇರಿಸಿದರು. ಖಜಾಂಚಿ ಎನ್.ಸತ್ಯಪ್ರಕಾಶ್, ಕಾರ್ಯಕಾರಿ ಸದಸ್ಯರಾದ ಮರಿಗೌಡ ಹಾಗೂ ಸತೀಶ್ ಮತ್ತಿತರರು ಉಪಸ್ಥಿತರಿದ್ದರು.

ಸಂತ ಫಿಲೋಮಿನಾ ಚರ್ಚ್



ಮೈಸೂರು ಡಿವಿಷನ್ ಕ್ಯಾಥೋಲಿಕ್ ಕ್ರಿಶ್ಚಿಯನ್ ಅಸೋಸಿಯೇಷನ್ ವತಿಯಿಂದ ಸಂತ ಫಿಲೋಮಿನಾ ಚರ್ಚ್ ವೃತ್ತದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಎಂಡಿಸಿಸಿಎ ಸಂಸ್ಥಾಪಕ ಅಧ್ಯಕ್ಷ ಜೆ.ಸ್ಟೀಫನ್ ಸುಜೀತ್, ಜಾನ್ ಫೆರ್ನಾಂಡಿಸ್ ಬೆನ್ನ, ಶ್ರೀನಿವಾಸರಾವ್, ರಫ್ಪತುಲ್ಲಾಖಾನ್, ಶಾಂತಪ್ಪ, ನಗರಪಾಲಿಕೆ ಮಾಜಿ ಸದಸ್ಯ ಸುಹೇಲ್ ಬೇಗ್ ಮತ್ತಿತರರು ಉಪಸ್ಥಿತರಿದ್ದರು.

ಕಡಕೊಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ



ಮೈಸೂರು ತಾಲೂಕು ಕಡಕೊಳದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕನ್ನಡಪರ ಹೋರಾಟಗಾರ ಕಡಕೊಳ ಕುಮಾರಸ್ವಾಮಿ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷ ರವಿ, ಯುವ ಮುಖಂಡ ಶಿವಲಿಂಗು, ಶಾಲೆ ಮುಖ್ಯೋಪಾಧ್ಯಾಯ ದುಂಡಯ್ಯ, ಉರ್ದು ಶಾಲೆ ಮುಖ್ಯೋಪಾಧ್ಯಾಯಿನಿ ನೂರ್‌ಫಾತಿಮಾ ಸಿದ್ದಿಕಿ, ದೈಹಿಕ ಶಿಕ್ಷಕ ಕುಮಾರ್, ಶಿಕ್ಷಕರಾದ ಮಹಾಲಕ್ಷ್ಮಿ, ನಾಗರತ್ನ, ಮಂಗಳ, ಐಟಿಸಿ ಸ್ನೇಹ ಬಳಗದ ಯೋಗೇಶ್ ಇದ್ದರು.

ಯುವಪೀಳಿಗೆಗೆ ಇತಿಹಾಸ ಅರಿಯಲಿ: ಶಾಸಕ ಹರೀಶ್‌ಗೌಡ



ಮೈಸೂರಿನ ಲೋಕಾಯುಕ್ತ ಕಚೇರಿ ಮುಂಭಾಗ ಮೈಸೂರು ಯುವ ಬಳಗದಿಂದ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಹಿರಿಯ ಆಟೋ ಚಾಲಕರಾದ ಜಗದೀಶ್, ಬಸವರಾಜ್, ಪುರುಷೋತ್ತಮ್, ಜಗ್ಗಪ್ಪ ಅವರನ್ನು ಶಾಸಕ ಹರೀಶ್‌ಗೌಡ ಸನ್ಮಾನಿಸಿದರು.

ಮೈಸೂರು, ನ. 4–ಯುವ ಪೀಳಿಗೆಗೆ ಕನ್ನಡ ನಾಡಿನ ಇತಿಹಾಸ, ಸಂಸ್ಕೃತಿ, ಕಲೆ, ಭಾಷೆ ಬಗ್ಗೆ ಅರಿವು ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಶಾಸಕ ಹರೀಶ್‌ಗೌಡ ತಿಳಿಸಿದರು.

ನಗರದ ದಿವಾನ್ಸ್ ರಸ್ತೆಯಲ್ಲಿರುವ ಲೋಕಾಯುಕ್ತ ಕಚೇರಿ ಮುಂಭಾಗ ಮೈಸೂರು ಯುವ ಬಳಗದ ವತಿಯಿಂದ 69ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ಧ್ವಜಾರೋಹಣ ಮಾಡಿ ನಂತರ ಹಿರಿಯ ಆಟೋ ಚಾಲಕರಾದ ಜಗದೀಶ್, ಬಸವರಾಜ್, ಪುರುಷೋತ್ತಮ್, ಜಗ್ಗಪ್ಪ ಅವರನ್ನು ಸನ್ಮಾನಿಸಿ ಮಾತನಾಡಿದ ಅವರು, ಕನ್ನಡ ಭಾಷೆ ಕೇವಲ ಸಂವಹನ ಮಾಧ್ಯಮ ಮಾತ್ರ ವಲ್ಲ. ಅದು ನಮ್ಮ ನೆಲದ ಹಾಗೂ ಅನೇಕ ತಲೆಮಾರುಗಳ ಸಂಸ್ಕೃತಿಯನ್ನು ಕಾಪಿಟ್ಟುಕೊಂಡು ಬಂದ ಮಾಧ್ಯಮ. ಆದ್ದರಿಂದಲೇ ಭಾಷೆಗೂ ನೆಲದ ಸಂಸ್ಕೃತಿಗೂ ಅವಿನಾಭಾವ ಸಂಬಂಧ ವಿದೆ. ಸ್ವಾಭಿಮಾನ ಹಾಗೂ ಸಹ ಬಾಳ್ವೆಯ ಸಂಕೇತವೇ ರಾಜ್ಯೋತ್ಸವ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಹಿತ ರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ಗುರುರಾಜ್ ಶೆಟ್ಟಿ, ನವೀನ್, ಉತ್ತನಹಳ್ಳಿ ಶಿವಣ್ಣ, ರವಿಚಂದ್ರ, ಪ್ರಮೋದ್‌ಗೌಡ, ಮಂಜುಳಾ ಶಾಂತ, ಮಂಗಳ, ತೋಣಚಿಕೊಪ್ಪಲ್ ರಾಜು, ಪವನ್, ಹರೀಶ್‌ಗೌಡ, ನಂಜುಂಡ ಸ್ವಾಮಿ, ಮಂಜುನಾಥ್, ನಿತಿನ್, ಶರವಣ, ಪ್ರಜ್ವಲ್ ರೈನಾ, ಮಹಾನ್ ಶ್ರೇಯಸ್ ಮತ್ತಿತರರು ಉಪಸ್ಥಿತರಿದ್ದರು.

ಕನ್ನಡ ಗೆಳೆಯರ ಬಳಗದಿಂದ ರಾಜ್ಯೋತ್ಸವ

ಮೈಸೂರು,ನ.4–ನಗರದ ಕೆ.ಜಿ. ಕೊಪ್ಪಲಿನ ನ್ಯೂ ಕಾಂತರಾಜ ಅರಸ್ ರಸ್ತೆಯ ಕನ್ನಡ ಗೆಳೆಯರ ಬಳಗದ ವತಿಯಿಂದ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು.



ಕನ್ನಡ ಗೆಳೆಯರ ಬಳಗದಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಧ್ವಜಾರೋಹಣ ನೆರವೇರಿಸಿದ ಬಳಗದ ಅಧ್ಯಕ್ಷ ಬಿ.ಭೈರಪ್ಪ ಮಾತನಾಡಿ, ಕನ್ನಡ ನುಡಿ, ನೆಲ, ಜಲ, ನೈಪುಣ್ಯತೆ ಇಂದು ನಶಿಸುತ್ತಿದೆ. ಇದನ್ನು ಉಳಿಸಿ, ಬೆಳೆಸಬೇಕಾಗಿದೆ. ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾದರೆ, ಕನ್ನಡಕ್ಕೆ ಇನ್ನೂ ಹೆಚ್ಚಿನ ಗೌರವ, ಸ್ಥಾನಮಾನ ಲಭಿಸುತ್ತದೆಂದು ತಿಳಿಸಿದರು.

ಸಮಾಜ ಸೇವಕ ಚಾಮರಾಜು ಮಾತನಾಡಿ, ಕನ್ನಡ ಭಾಷೆ ಶಾಶ್ವತವಾಗಿ ಉಳಿಯಬೇಕಾದರೆ, ಸರ್ಕಾರಿ ಸಂಸ್ಥೆಗಳು ಹಾಗೂ ಶಾಲಾ–ಕಾಲೇಜುಗಳಲ್ಲಿ ಕಡ್ಡಾಯವಾಗಿ ಕನ್ನಡವನ್ನು ಮಾತನಾಡಬೇಕು ಮತ್ತು ಬರೆಯಲು ಪ್ರೋತ್ಸಾಹಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಮಾತೃಭಾಷೆಯನ್ನು ಉಳಿಸುವುದೇ ಒಂದು ಸವಾಲಿನ ಕೆಲಸವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿ ಮಾತನಾಡಿದ, ಎಸ್.ನಿಂಗರಾಜು ನಗರತಳ್ಳಿ, ಕನ್ನಡ ರಾಜ್ಯೋತ್ಸವ ಆಚರಿಸುತ್ತಿರುವುದು ತುಂಬಾ ಸಂತೋಷದ ಸಂಗತಿ. ಅದು ಒಂದು ದಿನಕ್ಕೆ ಸೀಮಿತವಾಗಬಾರದು. ಪ್ರತಿ ದಿನವೂ ಕನ್ನಡವನ್ನು ಬಳಸಬೇಕು. ಪೋಷಕರು ಕನ್ನಡ ಮಾಧ್ಯಮದ ಶಾಲೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ತಿಳಿಸಿದರು. ವೇದಿಕೆಯಲ್ಲಿ ಕನ್ನಡ ಗೆಳೆಯರ ಬಳಗದ ಪದಾಧಿಕಾರಿಗಳು, ಬೇಡನ್ ಪೊವೆಲ್ ಶಾಲೆಯ ವರುಣ್, ನರ್ತನಂ ನೃತ್ಯ ಶಾಲೆಯ ಕನಸು, ಸಾತಗಳ್ಳಿ ಲೇಔಟ್ ಸೆಂಟ್ ಅರ್ನಾಲ್ಡ್ ಶಾಲೆಯ ಯಾಲಿನಿ ಕೃಷ್ಣ ಪಿ., ಮಾನಿಶಾ, ನೈಪುಣ್ಯ ನೃತ್ಯಶಾಲೆಯ ಪ್ರಣವ್, ಸಮಾಜ ಸೇವಕ ಮೋಹನ್‌ಕುಮಾರ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ರಾಜ್ಯೋತ್ಸವ



ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಸಂಸ್ಥೆಯ ವ್ಯವಸ್ಥಾಪಕ ವಿಶ್ವಸ್ಥ ಡಾ.ಭವಾನಿ ಶಂಕರ್ ನಾಡ ಧ್ವಜಾರೋಹಣವನ್ನು ನೆರವೇರಿಸಿದರು. ಮಹರ್ಷಿ ವಿದ್ಯಾಸಂಸ್ಥೆಯ ಹಿರಿಯ ಪ್ರಾಚಾರ್ಯ ಗೋಪಾಲಸ್ವಾಮಿ, ಕಾಲೇಜು ಪ್ರಾಚಾರ್ಯ ಮಹದೇವಸ್ವಾಮಿ ಹಾಗೂ ಸಂಸ್ಥೆಯ ಪ್ರಾಚಾರ್ಯ ಎ.ಕುಮಾರ್ ಉಪಸ್ಥಿತರಿದ್ದರು.

ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ



ಮೈಸೂರಿನ ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯಲ್ಲಿ 69ನೇ ಕನ್ನಡ ರಾಜ್ಯೋತ್ಸವ ಹಾಗೂ ಧನಲಕ್ಷ್ಮಿ ಪೂಜೆ ಆಚರಿಸಲಾಯಿತು. ಸೊಸೈಟಿ ಅಧ್ಯಕ್ಷ ಎಂ.ಡಿ.ಗೋಪಿನಾಥ್, ಉಪಾಧ್ಯಕ್ಷೆ ಸೌಮ್ಯ, ಖಜಾಂಚಿ ನಾಗರಾಜ, ನಿರ್ದೇಶಕ ಮಂಡಳಿ ಸದಸ್ಯರಾದ ಸಿ.ವಿ. ಪಾರ್ಥಸಾರಥಿ, ಪ್ರಶಾಂತ್ ತಾತಾಚಾರ್, ಬಾಲಕೃಷ್ಣ, ಚೇತನ್, ಪಣಿರಾಜ್, ವಿಕ್ರಂ ಅಯ್ಯಂಗಾರ್, ಮಹಿಮ, ನಾಗಶ್ರೀ, ಅರುಣ್, ಶಿವರುದ್ರಪ್ಪ, ರಾಜಮ್ಮ, ಶಾಶ್ವತಿ ನಾಯಕ, ವೀಣಾ ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಕನ್ನಡ ಭಾಷೆಯನ್ನು ಮನಃಪೂರ್ವಕವಾಗಿ ಬಳಸಬೇಕು



ನಂಜನಗೂಡಿನ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು,ನ.4–ಪ್ರತಿಯೊಬ್ಬ ಕನ್ನಡಿಗರಿಗೆ ತನ್ನ ಮಾತೃಭಾಷೆ ಮುಖ್ಯ ಮಾತೃಭಾಷೆ ಕನ್ನಡವನ್ನು ಮನಃಪೂರಕವಾಗಿ ದೈನಂದಿನ ಕಾರ್ಯ ಚಟುವಟಿಕೆಗಳಲ್ಲಿ ಬಳಸಬೇಕು ಎಂದು ಕನ್ನಡ ಉಪನ್ಯಾಸಕ ಎನ್. ನಾಗರಾಜ್ ಹೇಳಿದರು.

ನಂಜನಗೂಡಿನ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡುತ್ತಾ ತಮ್ಮ ಅಭಿಮತವನ್ನು ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಆಂಗ್ಲ ಭಾಷೆ ಉಪನ್ಯಾಸಕ ರಂಗಸ್ವಾಮಿ ಮಾತನಾಡಿ, ಹರಿದು ಹಂಚಿ ಹೋಗಿದ್ದ ಕರ್ನಾಟಕ ರಾಜ್ಯ ಹೇಗೆ ಉಗಮವಾಯಿತು ಎಂಬುದರ ಬಗ್ಗೆ ಮಾಹಿತಿ ನೀಡಿದರು.

ಕನ್ನಡ ಉಪನ್ಯಾಸಕಿ ಡಾ.ಕೆ.ಮಾಲತಿ ಮಾತನಾಡಿ, ಕನ್ನಡ ಸಾಹಿತ್ಯ ಬೆಳೆದು ಬಂದ ಬಗೆಯನ್ನು ಮತ್ತು ಪ್ರಸ್ತುತ ಸನ್ನಿವೇಶದಲ್ಲಿ ಕನ್ನಡ ಭಾಷೆಯನ್ನು ಬಳಸುವುದರ ಬಗ್ಗೆ ಮಾಹಿತಿ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಸಿಆರ್ ದಿನೇಶ್ ಮಾತನಾಡಿ, ಮಾತೃಭಾಷೆ ಬೇರೆಯಾದರೂ ಕನ್ನಡದ ಮಹಾನ್ ಸಾಹಿತಿಗಳು ಕನ್ನಡದಲ್ಲಿ ಸಾಹಿತ್ಯ ಕೃಷಿ ಮಾಡಿ ಅಪಾರ ಪ್ರಮಾಣದಲ್ಲಿ ಸಾಹಿತ್ಯ ರಚನೆಯನ್ನು ಮಾಡಿರುವರು. ಹಾಗಾಗಿ ಕನ್ನಡ ಮಾತೃಭಾಷೆ ಮಾತನಾಡುವರು ಕನ್ನಡದಲ್ಲಿ ಸಾಹಿತ್ಯ ಕೃಷಿ ಮಾಡಿದರೆ ಖಂಡಿತವಾಗಿಯೂ ಕನ್ನಡವು ಇನ್ನು ಮೇಲ್ಮಟ್ಟಕ್ಕೆ ಹೋಗಲು ಸಾಧ್ಯ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಅಶ್ವಥ್ ನಾರಾಯಣಗೌಡ, ಟಿ.ಕೆ.ರವಿ, ಪ್ರಕಾಶ್, ಸ್ವಾಮಿಗೌಡ, ರೂಪ, ಸುಮಾ, ವತ್ಸಲ, ವಸಂತ್ ಕುಮಾರಿ, ಸುಮಿತ್ರ, ಹರೀಶ್ ಕೆ.ಎಸ್, ನಾಗರಾಜ ರೆಡ್ಡಿ, ಮೀನಾ, ಅದಿಲ್ ಹುಸೇನ್, ಸುಲಕ್ಷಣ, ಹರೀಶ್, ಕಾವ್ಯ, ಮಿಲ್ಟನ್, ಲಿಂಗಯ್ಯ, ಮಹದೇವಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

ಶ್ರೀ ಕೃಷ್ಣದೇವರಾಯ ಕನ್ನಡ ಸಂಘ



ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿ ಶ್ರೀ ಕೃಷ್ಣದೇವರಾಯ ಕನ್ನಡ ಸಂಘದ ಆಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಸಂಘದ ಅಧ್ಯಕ್ಷ ಎಂ.ಶಂಕರ್, ಮಂಜುನಾಥ್, ವಿಶ್ವನಾಥ್, ರಮೇಶ್ ರಾಮಪ್ಪ, ರಮೇಶ್, ಉತ್ತನಹಳ್ಳಿ ಶಿವಣ್ಣ, ರಾಜೀವ್, ಅಶೋಕ್‌ಪುರಂ ಮಧು, ರಾಜೇಂದ್ರ, ನಾಗೇಶ್, ಓಂಕಾರ್ ಚಂದ್ರು, ಸುಧು, ಡಿಪ್ಪೋ ಆನಂದ ಮತ್ತಿತರರಿದ್ದರು.

ಸುಯೋಗ್ ಆಸ್ಪತ್ರೆ



ಸುಯೋಗ ಆಸ್ಪತ್ರೆ ವತಿಯಿಂದ ನಡೆದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಹಿರಿಯ ವಿದ್ವಾಂಸ ಡಾ. ಕೆ.ಅನಂತರಾಮು ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಚಿತ್ರದಲ್ಲಿ ಸುಯೋಗ ಆಸ್ಪತ್ರೆ ಅಧ್ಯಕ್ಷರಾದ ಡಾ.ಎಸ್.ಪಿ.ಯೋಗಣ್ಣ, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಅನಂತ, ಆಸ್ಪತ್ರೆ ವ್ಯವಸ್ಥಾಪಕರಾದ ಸಾಗರ್, ವಿನೋದ್ ಇನ್ನಿತರರಿದ್ದರು.

ಹಣ್ಣು ಹಂಪಲು ವಿತರಿಸಿ ರಾಜ್ಯೋತ್ಸವ



ಮೈಸೂರಿನ ಸಿ.ಎಸ್.ಐ ಬಾಲಕಿಯರ ನಿಲಯದಲ್ಲಿ ವಿದ್ಯಾರ್ಥಿನಿಯರಿಗೆ ಎಸ್ ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಹಣ್ಣುಗಳು ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸಲಾಯಿತು. ಈ ವೇಳೆ ಬೋರ್ಡಿಂಗ್ ಹೋಮ್‌ನ ಗೀತಾ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯಾದರ್ಶನ್, ವೀರಭದ್ರ ಸ್ವಾಮಿ, ಮಹೇಶ್, ಮಹಾದೇವ್, ಮಹದೇವಸ್ವಾಮಿ, ವಿನಯ್ ದಾಸ್, ಎಸ್.ಪಿ.ಅಕ್ಷಯ್ ಪ್ರಿಯಾದರ್ಶನ್, ಹರ್ಷಿತ್ ಎಸ್.ನಾಗೇಶ್ ಇನ್ನಿತರರಿದ್ದರು.

ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆ



ಮೈಸೂರಿನ ಮೇಟಗಳ್ಳಿಯ ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಮುಖ್ಯೋಪಾಧ್ಯಾಯ ಎನ್.ಪಿ.ಸತೀಶ್ ಧ್ವಜಾರೋಹಣ ನೆರವೇರಿಸಿದರು. ಅತಿಥಿ ಶಿಕ್ಷಕ ಎಲ್.ಎನ್.ರವಿಶಂಕರ್, ಸುಮಂಗಲ ಜಂಗಮಶೆಟ್ಟಿ, ನರ್ಸರಿ ಶಿಕ್ಷಕರಾದ ಮಂಜುಳಾ, ಶಿಕ್ಷಕ ಚೇತನ್, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಶ್ರೀ ಸಿದ್ದೇಶ್ವರ ಪ್ರೌಢಶಾಲೆ



ಮೈಸೂರಿನ ಶ್ರೀ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ನಡೆದ ಕನ್ನಡ ರಾಜ್ಯೋತ್ಸವದಲ್ಲಿ ದೈಹಿಕ ಶಿಕ್ಷಕ, ಕವಿ ಡಾ.ಜಯಪ್ಪ ಹೊನ್ನಾಳಿ ಧ್ವಜಾರೋಹಣ ನೆರವೇರಿಸಿದರು. ಚಿತ್ರದಲ್ಲಿ ಮು.ಶಿ.ಮುರುಳೀಧರರಾವ್, ಶಿಕ್ಷಕರಾದ ಶಿವಮೂರ್ತಿ, ಶ್ರೀನಿವಾಸ್, ಹರೀಶ್, ಮಹದೇವಸ್ವಾಮಿ ಅವರನ್ನು ಕಾಣಬಹುದು.

ನಮ್ ಕನ್ನಡ ಹಬ್ಬ–ಕನ್ನಡ ಲಿಖಿತ ರಸಪ್ರಶ್ನೆ ಸ್ಪರ್ಧೆ

ಮೈಸೂರು,ನ.4–ಕನ್ನಡ ರಾಜ್ಯೋತ್ಸವದ ಅಂಗವಾಗಿ ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ನಮ್ ಕನ್ನಡ ಹಬ್ಬ–ಕನ್ನಡ ಲಿಖಿತ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಿದೆ.

ಸ್ಪರ್ಧೆಯಲ್ಲಿ 1) ಸಾಹಿತ್ಯ, ಸಂಸ್ಕೃತಿ 2) ಕಲೆ ನೃತ್ಯ ಸಂಗೀತ 3) ಜಾನಪದ, ಒಗಟು, ಗಾದೆ 4) ಕ್ರೀಡೆ ಮತ್ತು ಮನರಂಜನೆ 5) ಪ್ರಚಲಿತ ವಿದ್ಯಮಾನಗಳನ್ನೊಳಗೊಂಡ ಐದುವಿಭಾಗಗಳಿದ್ದು, ಒಂದು ನೂರು ಅಂಕಗಳ ಪ್ರಶ್ನೆ ಪತ್ರಿಕೆ ಇರಲಿದೆ. ಎರಡು ಹಂತಗಳ ಈ ಸ್ಪರ್ಧೆಯಲ್ಲಿ ಮೊದಲಿಗೆ ಲಿಖಿತ ರಸಪ್ರಶ್ನೆ ನಂತರ ಶೇಕಡ ಎಂಭತ್ತಕ್ಕಿಂತ ಹೆಚ್ಚು ಅಂಕಪಡೆದವರಿಗೆ ನೇರ ಪ್ರಶ್ನೆಗಳ ಸ್ಪರ್ಧೆಗಳಿರುತ್ತದೆ. ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೂ ಪ್ರಶಂಸನಾ ಪತ್ರ ಲಭ್ಯವಿರಲಿದೆ. ಇದೇ ಸಂದರ್ಭದಲ್ಲಿ ಕನ್ನಡ ನುಡಿ ಬೆರಳಚ್ಚು ತರಬೇತಿ ಪಡೆಯಲು ಅಸಕ್ತಿ ಇರುವವರಿಗೆ 15 ದಿನಗಳ ಪ್ರಾಯೋಗಿಕ ತರಬೇತಿಯನ್ನೂ ಸಂಸ್ಥೆಯು ಒದಗಿಸಿಕೊಡಲಿದೆ.

25ಕ್ಕಿಂತ ಹೆಚ್ಚು ವಯೋಮಾನದ ವಿದ್ಯಾರ್ಥಿಗಳು, ಗೃಹಿಣಿಯರು, ಉದ್ಯೋಗಸ್ಥರು, ಹಿರಿಯ ನಾಗರಿಕರು ಮುಂತಾದ ಎಲ್ಲಾ ವರ್ಗದ ಕನ್ನಡ ಪ್ರೇಮಿಗಳೂ ಈ ಸ್ಪರ್ಧೆಯಲ್ಲಿ ಹಾಗೂ ಬೆರಳಚ್ಚು ತರಬೇತಿ ಪಡೆಯಲು ಭಾಗವಹಿಸಬಹುದಾಗಿದೆ.

ಸ್ಪರ್ಧೆಯು ಇದೇ ನವೆಂಬರ್ 16ರಂದು 4 ಗಂಟೆಗೆ ರಾಮಕೃಷ್ಣನಗರದ ಜಯಲಕ್ಷ್ಮೀದೇವಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ನಡೆಯಲಿದೆ. ನೋಂದಾವಣೆಗೆ ಕಡೆಯ ದಿನಾಂಕ ನವೆಂಬರ್ 12, ನಿಯಮಗಳು ಹಾಗೂ ಪ್ರವೇಶ ಪ್ರಕ್ರಿಯೆಗಾಗಿ ಮೊ.ಸಂಖ್ಯೆ 9964790442, 9901311815 ಸಂಪರ್ಕಿಸಬಹುದಾಗಿದೆ.

ಸರ್ಕಾರ, ವಕ್ಫ್ ಬೋರ್ಡ್ ವಿರುದ್ಧ ಬಿಜೆಪಿ ಪ್ರತಿಭಟನೆ



ರೈತರ ಜಮೀನು ಕಬಳಿಕೆಗೆ ವಕ್ಫ್ ಬೋರ್ಡ್‌ಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕುಮ್ಮಕ್ಕು ನೀಡುತ್ತಿದೆ ಎಂದು ಆರೋಪಿಸಿ ಬಿಜೆಪಿ ಪಕ್ಷದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ದೇಶದ ಜನರ ಹಿತದೃಷ್ಟಿಯಿಂದ ವಕ್ಫ್ ಮಂಡಳಿಯಲ್ಲಿ ಅಕ್ರಮ ತಡೆಗಾಗಿ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುವ ವಿಧೇಯಕವನ್ನು ಮಂಡಿಸಿದೆ. ಸದರಿ ಕಾಯ್ದೆ ಕುರಿತು ಜಂಟಿ ಪಾರ್ಲಿಮೆಂಟರಿ ಬೋರ್ಡ್ ಪರಿಶೀಲನೆ ನಡೆಸುತ್ತಿದ್ದು, ಕಾಯ್ದೆಗೆ ತಿದ್ದುಪಡಿ ಖಚಿತವಾಗುತ್ತಿದ್ದಂತೆ ರಾಜ್ಯದಲ್ಲಿ ವಕ್ಫ್ ಬೋರ್ಡ್ ಸಾರ್ವಜನಿಕರ ಆಸ್ತಿ ಕಬಳಿಸುವ ಹುನ್ನಾರಕ್ಕೆ ಮುಂದಾಗಿದೆ. ಇದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಸಚಿವ ಜಮೀರ್ ಅಹಮದ್ ನೇರವಾಗಿ ಕುಮ್ಮಕ್ಕು ನೀಡುತ್ತಿದ್ದಾರೆ.

ಮಂಡ್ಯ,ನ.4– ರೈತರ ಜಮೀನು ಕಬಳಿಕೆಗೆ ವಕ್ಫ್ ಬೋರ್ಡ್‌ಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕುಮ್ಮಕ್ಕು ನೀಡುತ್ತಿದೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಸರ್‌ಎಂವಿ ಪ್ರತಿಮೆ ಬಳಿಯಿಂದ ಮೆರವಣಿಗೆ ಹೊರಟ ಪಕ್ಷದ ಕಾರ್ಯಕರ್ತರು ಮುಖ್ಯಮಂತ್ರಿ ಸಿದ್ದರಾಮಯ್ಯ, ವಕ್ಫ್ ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ, ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಿದ ಪ್ರತಿಭಟನಾಕಾರರು, ಅಲ್ಪಸಂಖ್ಯಾತರ ಓಲೈಕೆಗಾಗಿ ರೈತರ, ಜನಸಾಮಾನ್ಯರ ಭೂಮಿಯನ್ನು ವಕ್ಫ್ ಬೋರ್ಡ್‌ಗೆ ಕಾಂಗ್ರೆಸ್ ಸರ್ಕಾರ ವರ್ಗಾವಣೆ ಮಾಡುತ್ತಿದೆ ಎಂದು ದೂರಿದರು.

ಕಾಂಗ್ರೆಸ್ ಸರ್ಕಾರ ರೈತರ ಜಮೀನುಗಳನ್ನು ಕಬಳಿಸುವ ಷಡ್ಯಂತ್ರ ಮಾಡುತ್ತಿದೆ. ಇದಕ್ಕೆ ಸಚಿವ ಜಮೀರ್ ಅಹಮ್ಮದ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒಳಗೊಳಗೆ ಕುಮ್ಮಕ್ಕು ನೀಡುತ್ತಿದ್ದಾರೆ.

ರಾಜ್ಯಾದ್ಯಂತ ವಕ್ಫ್ ಬೋರ್ಡ್ ಕಂದಾಯ ಇಲಾಖೆಯ ನಿಯಮ ಮೀರಿ ಕಂಡ ಕಂಡ ಜಾಗಗಳ, ಆಸ್ತಿಗಳು ತಮ್ಮದೆಂದು ಆಕ್ರಮಿಸಿ ಮಾಡಿಕೊಳ್ಳಲು ಮುಂದಾಗಿದೆ. ಸರ್ಕಾರ ಮುಸ್ಲಿಮರ ಓಲೈಕೆ ಮಾಡಲು ಮೌನ ವಹಿಸಿದೆ. ಸರ್ಕಾರಕ್ಕೆ ರೈತರು, ಜನರ ಹಿತಕ್ಕಿಂತ ತುಷ್ಟೀಕರಣ ರಾಜಕಾರಣ ಮುಖ್ಯವಾಗಿದೆ ಎಂದು ಆರೋಪಿಸಿದರು.

ಬೆಳಗಾವಿ, ಹಾವೇರಿ, ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಬಹುತೇಕ ಜಿಲ್ಲೆ, ತಾಲೂಕುಗಳಲ್ಲಿ ರೈತರು, ಮಠ ಮಾನ್ಯಗಳು, ಬಡವರ ಜಾಗಗಳ ಪಹಣಿಯಲ್ಲಿ ವಕ್ಫ್ ಎಂದು ಉಲ್ಲೇಖಿಸಲಾಗಿದೆ. ಮಂಡ್ಯ ಜಿಲ್ಲೆಯಲ್ಲಿ ಬೆಳ್ಳೂರು, ಮಹದೇವಪುರ ಗ್ರಾಮದಲ್ಲಿಯೂ ಆಸ್ತಿ ಕಬಳಿಸಲು ಮುಂದಾಗಿದೆ, ಪೂರ್ವಜರಿಂದ ಬಂದ ಜಮೀನಿನಲ್ಲಿ ಬೇಸಾಯ ಮಾಡಿಕೊಂಡು ಬರುತ್ತಿದ್ದ ರೈತರಿಗೆ ನೋಟಿಸ್ ಜಾರಿ ಮಾಡಲಾಗಿತ್ತು. ಇದಕ್ಕೆ ಬಿಜೆಪಿ ಪಕ್ಷ ವ್ಯಾಪಕ ವಿರೋಧ ಮಾಡಿದ್ದರಿಂದ ನೋಟಿಸ್ ವಾಪಸ್ ಪಡೆಯಲಾಗಿತ್ತು, ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದು ಮಾಡುವಂತೆ ತಾತ್ಕಾಲಿಕವಾಗಿ ಕಾಂಗ್ರೆಸ್ ಸರ್ಕಾರ ತಡೆ ಹಿಡಿದಿದ್ದರೂ, ಚುನಾವಣಾ ತಂತ್ರಗಾರಿಕೆಯಾಗಿದ್ದು, ಇದೇ ರೀತಿ ಮುಂದುವರೆಸಿದರೆ ಮುಂದಾಗುವ ಅನಾಹುತಗಳಿಗೆ ಕಾಂಗ್ರೆಸ್ ಸರ್ಕಾರ ನೇರಹೊಣೆ, ಮತಬ್ಯಾಂಕ್‌ಗಾಗಿ ಮುಸ್ಲಿಮರ ಓಲೈಕೆಗಾಗಿ ಹಿಂದೂ ವಿರೋಧಿ ನಿರ್ಧಾರ ಕೈಗೊಳ್ಳುವ ಹಳೆ ಚಾಳಿಯನ್ನು ಕೈಬಿಡಬೇಕು, ವಕ್ಫ್ ಆಸ್ತಿ ಕುರಿತ ಗೆಜೆಟ್ ಅಧಿಸೂಚನೆ ರದ್ದುಪಡಿಸಬೇಕು, ಅಧಿಕಾರ ದುರ್ಬಳಕೆಯ ಕುರಿತು ಸಿಬಿಐ ತನಿಖೆ ನಡೆಸಬೇಕು ಹಾಗೂ ವಿವಾದಕ್ಕೆ ಕಾರಣವಾದ ವಕ್ಫ್ ಖಾತೆ ಸಚಿವ ಜಮೀರ್ ಅಹಮದ್‌ರನ್ನು ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ಮುಖಂಡರಾದ ಸಿದ್ದರಾಮಯ್ಯ, ವಿವೇಕ್, ಸಿ.ಟಿ.ಮಂಜುನಾಥ್, ಹಾಡ್ಯ ರಮೇಶ್‌ರಾಜು, ಕ್ರಾಂತಿ ಮಂಜು, ಶಿವಕುಮಾರ್ ಆರಾಧ್ಯ, ನಾಗಾನಂದ, ನಿತ್ಯಾನಂದ, ನಂದೀಶ್, ಧನಂಜಯ, ನರಂಜಾಹಾರ್, ಶಿವಲಿಂಗಯ್ಯ ಸೇರಿದಂತೆ ಹಲವು ಮಂದಿ ಭಾಗವಹಿಸಿದ್ದರು.

ಕ್ರಿಕೆಟ್ ಬೆಟ್ಟಿಂಗ್, ಇಸ್ಪೀಟ್ ದಂಧೆ ಮಟ್ಟ ಹಾಕುವಂತೆ ಆಗ್ರಹಿಸಿ ಪ್ರತಿಭಟನೆ



ಮಂಡ್ಯ,ನ.4– ಯುವಜನರನ್ನು ಬಲಿ ಪಡೆಯುತ್ತಿರುವ ಕ್ರಿಕೆಟ್ ಬೆಟ್ಟಿಂಗ್, ಇಸ್ಪೀಟ್ ಜೂಜಾಟ, ಹುಕ್ಕಾ ಅಡ್ಡಗಳನ್ನು ಮಟ್ಟ ಹಾಕಬೇಕು ಹಾಗೂ ಪೊಲೀಸರು ಇಂತಹ ಪ್ರಕರಣಗಳಲ್ಲಿ ವೈಫಲ್ಯ ಅನುಭವಿಸುತ್ತಿದ್ದಾರೆಂದು ಆರೋಪಿಸಿ ನಗರದಲ್ಲಿ ಕನ್ನಡಪರ, ಪ್ರಗತಿಪರ ಸಂಘಟನೆ ಕಾರ್ಯಕರ್ತರು ಹಾಗೂ ಸಾಮಾನ್ಯನಾಗರಿಕರು ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.

ಕರುನಾಡ ಸೇವಕರ ಸಂಘಟನೆ ನೇತೃತ್ವದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರು ಪ್ರತಿಭಟಿಸಿ ಮನವಿ ಸಲ್ಲಿಸಿ ಅಕ್ರಮ ತಡೆಯಲು ಪೊಲೀಸರು ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗುವಂತೆ ಒತ್ತಾಯಿಸಿದರು.

ಜಿಲ್ಲೆಯಲ್ಲಿ ಕ್ರಿಕೆಟ್ ಬೆಟ್ಟಿಂಗ್, ಅಕ್ರಮ ಇಸ್ಪೀಟ್ ಜೂಜಾಟ, ಹುಕ್ಕಾ ಅಡ್ಡ ಹಾಗೂ ಅಕ್ರಮ ಮದ್ಯ ಮಾರಾಟ ವ್ಯಾಪಕವಾಗಿದೆ. ಯುವ ಜನತೆ ಇದರ ದಾಸರಾಗಿ ಸಿಲುಕಿ ಹಣ ಆಸ್ತಿ ಕಳೆದುಕೊಂಡು ಜೀವನವನ್ನೇ ಕಳೆದುಕೊಳ್ಳುತ್ತಿದ್ದಾರೆ, ಜಿಲ್ಲೆಯಲ್ಲಿ ವ್ಯಾಪಕವಾಗಿರುವ ಕ್ರಿಕೆಟ್ ಬೆಟ್ಟಿಂಗ್, ಗದ್ದೆ ಬಯಲುಗಳಲ್ಲಿ ಅಕ್ರಮ ಇಸ್ಪೀಟ್ ಜೂಜಾಟ ಸಾವಿರಾರು ಯುವಕರನ್ನು ಲಕ್ಷಾಂತರ ರೂಪಾಯಿ ಸಾಲದ ಬಲೆಗೆ ಕೆಡವಿದೆ. ಬೆಟ್ಟಿಂಗ್ ದಂಧೆಕೋರರು, ಇಸ್ಪೀಟ್ ಜೂಜು ಮಾಫಿಯಾದವರ ಒತ್ತಡ ತಾಳಲಾರದೆ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಅದೇ ರೀತಿ ನಗರ ಹಾಗೂ ಗ್ರಾಮಾಂತರ ಭಾಗಗಳಲ್ಲಿ ವ್ಯಾಪಕವಾಗಿರುವ ಅಕ್ರಮ ಮದ್ಯ ಮಾರಾಟ, ಹುಕ್ಕಾ ಸರಬರಾಜು ನಾಗರಿಕ ಸಮಾಜವನ್ನು ದಿಗ್ಭ್ರಮೆ ಹುಟ್ಟಿಸಿದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು.

ನಾಳೆಯಿಂದ ಉದರ ದರ್ಶಕ ಶಸ್ತ್ರಚಿಕಿತ್ಸಾ ಶಿಬಿರ

ಮಂಡ್ಯ,ನ.4– ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ನ.6ರಿಂದ 27 ರವರೆಗೆ ಉದರ ದರ್ಶಕ ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ.

ನ.6 ರಂದು ಕೆ.ಆರ್.ಪೇಟೆ ತಾಲೂಕು ಆಸ್ಪತ್ರೆ, 8 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, 12 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, 13 ರಂದು ಪಾಂಡವಪುರ ಉಪ ವಿಭಾಗ ಸರ್ಕಾರಿ ಆರೋಗ್ಯ ಕೇಂದ್ರ, 14 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, 20ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸಾರ್ವಜನಿಕ ಆಸ್ಪತ್ರೆಯಲ್ಲಿ, 21ರಂದು ಕೆ.ಎಂ ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, 22ರಂದು ಮದ್ದೂರು ತಾಲೂಕು ಆಸ್ಪತ್ರೆ, 26ರಂದು ಕೆ.ಆರ್.ಪೇಟೆ ತಾಲೂಕು ಆಸ್ಪತ್ರೆ, 27ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀರಂಗಪಟ್ಟಣದಲ್ಲಿ ರೌಡಿ ಗುಂಪುಗಳ ಬಡಿದಾಟ

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವೀಡಿಯೋ

ಶ್ರೀರಂಗಪಟ್ಟಣ: ಕುಡಿದ ಮತ್ತಿನಲ್ಲಿ ಎರಡು ರೌಡಿಗಳ ಗುಂಪು ನಡುವೆ ಬಿಯರ್ ಬಾಟಲ್‌ನಿಂದ ಹಲ್ಲೆಗೆ ಯತ್ನಿಸಿ ಪುಂಡಾಟ ನಡೆದಿರುವ ಘಟನೆ ಪಟ್ಟಣದ ಹುಕ್ಕಾ ಬಾರ್‌ವೊಂದರಲ್ಲಿ ಸಂಭವಿಸಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಈ ರೌಡಿಶೀಟರ್‌ಗಳ ಹೊಡೆದಾಟದ ದೃಶ್ಯ ಹೋಟೆಲ್ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಪಟ್ಟಣದಲ್ಲಿರುವ ಹುಕ್ಕಾ ಬಾರ್‌ನಲ್ಲಿ ತಡರಾತ್ರಿ 1 ಗಂಟೆವರೆಗೂ ಪ್ರತ್ಯೇಕ ಪಾರ್ಟಿ ನಡೆಸುತ್ತಿದ್ದ, ಎರಡು ರೌಡಿಶೀಟರ್‌ಗಳ ಗುಂಪುಗಳು ಪಾರ್ಟಿ ಮುಗಿದು ಬಿಲ್ ಕೊಡುವಾಗ ಗಲಾಟೆ ತೆಗೆದು ಕ್ಷುಲ್ಲಕ ಕಾರಣಕ್ಕೆ ಎರಡು ಗುಂಪುಗಳ ನಡುವೆ ಜಗಳವಾಗಿದೆ. ಈ ವೇಳೆ ಎರಡೂ ಗುಂಪುಗಳ ನಡುವೆ ಮಾರಾಮಾರಿ ನಡೆದು ಬಿಯರ್ ಬಾಟಲ್‌ಗಳನ್ನು ಎಸೆದಾಡಲಾಗಿದೆ.

ಸದ್ಯ ಯಾವುದೇ ಅನಾಹುತಗಳು ನಡೆದಿರುವ ಬಗ್ಗೆ ಮಾಹಿತಿ ಇಲ್ಲ. ಆದರೆ ಪೊಲೀಸರು ರಾಜಕೀಯ ಒತ್ತಡದಿಂದ ರಾಜೀ ಮಾಡಿದ್ದಾರೆ ಎಂಬ ಮಾಹಿತಿಗಳು ಲಭ್ಯವಾಗಿದೆ. ಶ್ರೀರಂಗಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

16 ವರ್ಷದೊಳಗಿನ ಮಕ್ಕಳಿಗಾಗಿ ವಿವಿಧ ಸ್ಪರ್ಧೆ

ಮಂಡ್ಯ,ನ.4– 2024–25ನೇ ಸಾಲಿನ ಮಕ್ಕಳ ದಿನಾಚರಣೆ ಪ್ರಯುಕ್ತ 6 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ ನ.9 ರಂದು ಬೆಳಿಗ್ಗೆ 10 ಗಂಟೆಗೆ ಮಂಡ್ಯ ಜಿಲ್ಲಾ ಬಾಲ ಭವನದಲ್ಲಿ ಸೃಜನಾತ್ಮಕ ಪ್ರದರ್ಶನ ಕಲೆ, ವಾದ್ಯ ಸಂಗೀತ, ವಿಜ್ಞಾನದಲ್ಲಿ ನೂತನ ಆವಿಷ್ಕಾರ ಮತ್ತು ಚಿತ್ರಕಲಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರಗಳನ್ನು ವಿತರಿಸುವುದರ ಜೊತೆಗೆ ಬೆಂಗಳೂರಿನಲ್ಲಿ ನಡೆಯುವ ರಾಜ್ಯಮಟ್ಟದ ಸ್ಪರ್ಧೆಗೆ ಕರೆದೊಯ್ಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:– 9036801065 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಮಾರಸ್ವಾಮಿ ಮಾತಿನಲ್ಲಿ ಬುದ್ಧಿವಂತರು, ಅಭಿವೃದ್ಧಿಯಲ್ಲಲ್ಲ



ಮದ್ದೂರು,ನ.4– ಕೇಂದ್ರ ಸಚಿವ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರ ಹೇಳಿಕೆಗೆ ಪ್ರತಿಕ್ರಿಯೆ ನೀಡುವಲ್ಲಿ ಬುದ್ದಿವಂತರು, ಕ್ಷೇತ್ರದ ಅಭಿವೃದ್ಧಿಯಲ್ಲಿ ಯೋಜನಾತ್ಮಕ ಕೊಡುಗೆಯಲ್ಲಿ ಇಲ್ಲ ಎಂದು ಕೃಷಿ ಮತ್ತು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಗುದ್ದು ನೀಡಿದರು.

ಸೋಮವಾರ ತಾಲೂಕಿನ ಕದಲೂರು ಗ್ರಾಮದಲ್ಲಿನ ಶಾಸಕ ಕೆ.ಎಂ.ಉದಯ್ ನಿವಾಸದಲ್ಲಿ ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ಕ್ಷೇತ್ರದಲ್ಲಿಯೇ ಇದ್ದು ಅಭಿವೃದ್ಧಿ ಮಾಡುವಂತೆ ಜೆಡಿಎಸ್ ಬೆಂಬಲಿಗರೇ ಹೇಳಿಕೊಳ್ಳುತ್ತಿದ್ದಾರೆ. ಕೇಂದ್ರದಲ್ಲಿ ಮಂತ್ರಿಯಾಗುವ ಆಸೆಯಿಂದ ಚನ್ನಪಟ್ಟಣ ಕ್ಷೇತ್ರ ತ್ಯಜಿಸಿ ಮಂಡ್ಯದಲ್ಲಿ ಗೆದ್ದು ಕೇಂದ್ರ ಸಚಿವ ಸ್ಥಾನ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಕುಟುಕಿದರು.

ಅವರ ಮನೆಯೇ ಜೆಡಿಎಸ್‌ಗೆ ಕಂಟಕ ಎನ್ನುವ ಮಾತಿದೆ, ಚನ್ನಪಟ್ಟಣದಲ್ಲಿ ಚುನಾವಣೆ ಎದುರಿಸಿ ನಿಖಿಲ್ ಸೋತಿಲ್ಲ, ಒಮ್ಮೆ ರಾಮನಗರ, ಒಮ್ಮೆ ಮಂಡ್ಯದಲ್ಲಿ ನಿಂತು ಸೋತಿದ್ದಾರೆ. ಅವರು ಸ್ಥಳೀಯರು ಅಲ್ಲ ಅನ್ನೋದನ್ನ ಚನ್ನಪಟ್ಟಣ ಜನ ತಿಳಿದಿದ್ದಾರೆ. ಸಿ.ಪಿ.ಯೋಗೇಶ್ವರ್ ಸ್ಥಳೀಯರು, ಚನ್ನಪಟ್ಟಣ ಅಭಿವೃದ್ಧಿಯನ್ನೇ ಜೀವನದ ಗುರಿಯಾಗಿಸಿಕೊಂಡಿದ್ದಾರೆ. ಚನ್ನಪಟ್ಟಣದಲ್ಲಿ ಸ್ಥಳೀಯರನ್ನು ಗೆಲ್ಲಿಸಬೇಕೆ, ಕ್ಷೇತ್ರಬಿಟ್ಟು ಹೋದ ಹೊರಗಿನವರನ್ನು ಗೆಲ್ಲಿಸಬೇಕೆ. ಇದಕ್ಕೆ ಉತ್ತರ ಚನ್ನ ಪಟ್ಟಣ ಜನತೆ ನೀಡುವರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಕೆ.ಎಂ. ಉದಯ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ. ಗಂಗಾಧರ್, ಜಿಲ್ಲಾ ಕಾರ್ಯಾಧ್ಯಕ್ಷ ಎಂ.ಎಸ್. ಚಿದಂಬರ್, ಮನ್‌ಮುಲ್ ಮಾಜಿ ಅಧ್ಯಕ್ಷ ಕದಲೂರು ರಾಮಕೃಷ್ಣ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಆನೆಗೊಳ ಗ್ರಾಪಂ ಉಪಾಧ್ಯಕ್ಷೆಯಾಗಿ ಲಕ್ಷ್ಮೀ ಮಂಜೇಗೌಡ ಅವಿರೋಧ ಆಯ್ಕೆ



ಕಿಕ್ಕೇರಿ: ಹೋಬಳಿಯ ಗಡಿಭಾಗದ ಆನೆಗೊಳ ಗ್ರಾಪಂ ಉಪಾಧ್ಯಕ್ಷರಾಗಿ ಅಂಚೆಬೀರನಹಳ್ಳಿ ಧನಲಕ್ಷ್ಮೀ ಮಂಜೇಗೌಡ ಅವಿರೋಧವಾಗಿ ಸೋಮವಾರ ಆಯ್ಕೆಯಾದರು.

ಈ ಹಿಂದೆ ಉಪಾಧ್ಯಕ್ಷರಾಗಿದ್ದ ಎ.ಪಿ. ನಂಜೇಶ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಸೋಮವಾರ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಂಚೆಬೀರನಹಳ್ಳಿ ಧನಲಕ್ಷ್ಮೀ ಮಂಜೇಗೌಡ ಮಾತ್ರ ಉಮೇದುವಾರಿಕೆ ಸಲ್ಲಿಸಿದ್ದರು. ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾಗಿರುವುದನ್ನು ಚುನಾವಣಾಧಿಕಾರಿ ಘೋಷಣೆ ಮಾಡಿದರು.

ಚುನಾವಣಾಧಿಕಾರಿಯಾಗಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ್‌ಕುಮಾರ್, ಸಹ ಚುನಾವಣಾಧಿಕಾರಿ ಅನಿಲ್ ಬಾಬು, ಪಿಡಿಒ ರವಿಕುಮಾರ್, ಲೆಕ್ಕಸಹಾಯಕ ನವೀನ್‌ಕುಮಾರ್ ಕರ್ತವ್ಯ ನಿರ್ವಹಿಸಿದರು.

ನೂತನ ಉಪಾಧ್ಯಕ್ಷರಿಗೆ ಅಭಿಮಾನಿಗಳು, ಕಾರ್ಯಕರ್ತರು ಪುಷ್ಪಮಾಲೆ ಅರ್ಪಿಸಿ, ಸಿಹಿ ತಿನಿಸಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಜೆಡಿಎಸ್ ಮುಖಂಡರಾದ ಸಿ.ಎನ್. ಪುಟ್ಟಸ್ವಾಮಿಗೌಡ, ಬಿ.ಎಂ.ಕಿರಣ್, ಐಕನಹಳ್ಳಿ ಕೃಷ್ಣೇಗೌಡ, ಬಿ.ಎಸ್.ಮಂಜುನಾಥ್, ಗ್ರಾಪಂ ಸದಸ್ಯರಾದ ಎ.ಪಿ.ನಂಜೇಶ್, ಕಡಹೆಮ್ಮಿಗೆ ರಮೇಶ್, ಭಾಗ್ಯಮ್ಮ ಶಿಶುಪಾಲ್, ಎಲ್.ಪಿ.ಮಹಾಲಕ್ಷ್ಮಿ ವಿಶ್ವನಾಥ್, ಬಿ.ಎನ್. ಯೋಗೇಶ್, ಪಿ.ಪ್ರಕಾಶ, ಸಿ.ಆರ್. ಗಂಗಾಧರ್, ಮಂಜಶೆಟ್ಟಿ ಇತರರು ಇದ್ದರು.

ಮೂರನೇ ಪುಟದಿಂದ

ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ

ಮಂಗಳೂರಿನಲ್ಲೂ ಪ್ರತಿಭಟನೆ ನಡೆಸಲಾಯಿತು. ವಿಜಯಪುರ ದಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪ್ರತಿಭಟನೆಯಲ್ಲಿ ಪಾಲ್ಗೊಂಡರು.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾತನಾಡಿ, ರೈತರ ಪಹಣಿ ಸಿಗದಂತೆ ಸರ್ವರ್‌ಡೌನ್ ಮಾಡಲಾಗಿದೆ, ಸರ್ಕಾರವೇ ಡೌನ್ ಆಗಲಿದೆ, ಎಲ್ಲರೂ ಒಗ್ಗಟ್ಟಾದರೆ ರೈತರ, ಮಠಗಳ ಜಮೀನು ಉಳಿಯುತ್ತೆ ಎಂದರು. ವಕ್ಫ್ ಕಾಯ್ದೆ ವಿರುದ್ಧ ಹೋರಾಟ ಮಾಡಲಾಗುತ್ತಿದೆ, ಹೋರಾಟ ಶುರುವಾಗಿದ್ದೇ ವಿಜಯಪುರದ ಪವಿತ್ರ ಭೂಮಿಯಿಂದ, ವಕ್ಫ್ ಕಾಯ್ದೆ ವಿರುದ್ಧ ದೊಡ್ಡ ಮಟ್ಟದ ಹೋರಾಟ ಅಗತ್ಯವಿದೆ, ದೆಹಲಿಯಲ್ಲಿ ಮುಸ್ಲಿಂ ಮೌಲ್ವಿಗಳು ಸಭೆ ನಡೆಸಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಚ್ಚರಿಕೆ ನೀಡಿದ್ದು, ಮೋದಿ ತರುವ ಕಾಯ್ದೆ ಬೆಂಬಲಿಸದಂತೆ ನಿತೀಶ್ ಕುಮಾರ್ ಹಾಗೂ ಚಂದ್ರಬಾಬು ನಾಯ್ಡು ಅವರುಗಳಿಗೂ ಬೆದರಿಕೆ ಹಾಕಿದ್ದಾರೆ ಎಂದರು.

ಶಿಗ್ಗಾವಿಯಲ್ಲಿ ರೈತಪರ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ, ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲಿನಿಂದಲೂ ಮುಸಲ್ಮಾನರ ಓಲೈಕೆ ರಾಜಕಾರಣ ಮಾಡಿಕೊಂಡು ಬಂದಿದ್ದಾರೆ, ಅವರು ಮುಸಲ್ಮಾನರ ಪರ ಇಲ್ಲದಿದ್ದರೆ ಹುಬ್ಬಳ್ಳಿಯಲ್ಲಿ ಪೊಲೀಸರ ವಾಹನ ಜಖಂಗೊಳಿಸಿದ ಮೊಕದ್ದಮೆಗಳನ್ನು ವಾಪಸ್ ಪಡೆಯುತ್ತಿರಲಿಲ್ಲ, ರೈತರ ಆಸ್ತಿ ಕಬಳಿಸುವ ವಕ್ಫ್ ನೋಟಿಸ್ ವಾಪಸ್ ಪಡೆದರೆ ಸಾಲದು, ಗೆಜೆಟ್ ನೋಟಿಫಿಕೇಷನ್ ರದ್ದು ಮಾಡಬೇಕು ಎಂದು ಒತ್ತಾಯಿಸಿದರು.

ಮೈಸೂರಲ್ಲೂ ಬಿಜೆಪಿ ಆಕ್ರೋಶ

ರೈತರಿಗೆ ನೀಡಿದ್ದ ನೋಟಿಸ್ ವಾಪಾಸ್ ಪಡೆದಿದ್ದೇವೆ ಎಂದು ಕರ್ನಾಟಕ ರಾಜ್ಯದ ಗೆಜೆಟ್‌ನಲ್ಲಿ ಪ್ರಕಟಿಸಬೇಕು. ಇಲ್ಲದಿದ್ದರೆ ಬಿಜೆಪಿ ಮೈಸೂರು ಸೇರಿದಂತೆ ರಾಜ್ಯಾದ್ಯಂತ ತೀವ್ರ ರೀತಿಯ ಹೋರಾಟ ರೂಪಿಸಲಿದೆ. ಈ ಮೂಲಕ ಈ ವಿಚಾರವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ತನಕ ಹೋರಾಟ ಮಾಡುತ್ತೇವೆ ಎಂದು ಮತ್ತೊಮ್ಮೆ ಎಚ್ಚರಿಕೆ ನೀಡಿದರು.

ತರುವಾಯ ಮಾತನಾಡಿದ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಡಾ.ಅನಿಲ್ ಥಾಮಸ್, ಮುಸ್ಲಿಂರ ತೃಷ್ಟಿಕರಣಕ್ಕಾಗಿ ಸರ್ಕಾರ ರೈತರ ಆಸ್ತಿ ಕಬಳಿಸುತ್ತಿದೆ. ಇದಕ್ಕೆ ಕಾರಣರಾದ ವಕ್ಫ್ ಸಚಿವ ಜಮೀರ್ ಅಹಮ್ಮದ್ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು.

ಡೈರಿ ಮುಂದೆ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ಸಿದ್ದಾರ್ಥ ನಗರದ ನೂತನ ಜಿಲ್ಲಾಧಿಕಾರಿ ಕಚೇರಿ ತನಕ ಮೆರವಣಿಗೆಯಲ್ಲಿ ತೆರಳಿ ಮುತ್ತಿಗೆ ಹಾಕಿದರು. ಜಿಲ್ಲಾಧಿಕಾರಿ ಕಚೇರಿಯ ಎರಡು ಗೇಟ್‌ಗಳನ್ನು ಬಂದ್ ಮಾಡಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಿದ್ದರಿಂದ ಯಾರೂ ಒಳಗೆ ಹೋಗಲು ಸಾಧ್ಯವಾಗಲಿಲ್ಲ. ತರುವಾಯ ಡಾ. ಅನಿಲ್ ಥಾಮಸ್ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು. ಉತ್ತರ ಕರ್ನಾಟಕಕ್ಕೆ ಸೀಮಿತವಾಗಿದ್ದ ವಕ್ಫ್ ವಿವಾದದ ಹೋರಾಟ ಈಗ ಮೈಸೂರಿಗೂ ಕಾಲಿಟ್ಟಿದೆ.

ನ.25ರಿಂದ ಸಂಸತ್ ಚಳಿಗಾಲದ ಅಧಿವೇಶನ

ಈ ಪ್ರದೇಶದ ನಿವಾಸಿಗಳ ಅನನ್ಯ ಗುರುತನ್ನು ಕಾಪಾಡುವ ನಿಟ್ಟಿನಲ್ಲಿ ನಿರ್ಣಾಯಕ ಹೆಜ್ಜೆಯಾದ ಜಮ್ಮು ಮತ್ತು ಕಾಶ್ಮೀರಕ್ಕೆ ಸಂಪೂರ್ಣ ರಾಜ್ಯತ್ವದ ಸ್ಥಾನಮಾನ ನೀಡಲು ಸರ್ಕಾರವು ನಿರ್ಣಯವನ್ನು ಅಂಗೀಕರಿಸಬಹುದು ಎಂದು ಮೂಲಗಳು ತಿಳಿಸಿವೆ. ಇತ್ತೀಚೆಗೆ, ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ರಾಜ್ಯತ್ವವನ್ನು ಶೀಘ್ರ ಮರುಸ್ಥಾಪಿಸುವುದು ಸೇರಿದಂತೆ ಕೇಂದ್ರಾಡಳಿತ ಪ್ರದೇಶಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಿದರು.

ಮೂಲಗಳ ಪ್ರಕಾರ, ಭಾರತದ ಸಂವಿಧಾನವನ್ನು ಅಂಗೀಕರಿಸಿದ 75ನೇ ವಾರ್ಷಿಕೋತ್ಸವದ ಅಂಗವಾಗಿ ನವೆಂಬರ್ 26 ರಂದು ಸಂಸತ್ತಿನ ಉಭಯ ಸದನಗಳ ವಿಶೇಷ ಜಂಟಿ ಅಧಿವೇಶನ ನಡೆಯಲಿದೆ. ಲೋಕಸಭೆ ಮತ್ತು ರಾಜ್ಯಸಭೆಯ ಜಂಟಿ ಅಧಿವೇಶನವು ಸಂವಿಧಾನ ಸದನದ ಸೆಂಟ್ರಲ್ ಹಾಲ್‌ನಲ್ಲಿ ನಡೆಯುವ ಸಾಧ್ಯತೆಯಿದೆ, ಸಂವಿಧಾನ ಸಭೆಯು ನವೆಂಬರ್ 26, 1949 ರಂದು ಸಂವಿಧಾನವನ್ನು ಅಂಗೀಕರಿಸಿತು ಮತ್ತು ಅದು ಜನವರಿ 26, 1950 ರಂದು ಜಾರಿಗೆ ಬಂದಿತು. ಸರ್ಕಾರವು ಸಂಸತ್ತಿನಲ್ಲಿ ಒಂದು ರಾಷ್ಟ್ರ, ಒಂದು ಚುನಾವಣಾ ಮಸೂದೆಯನ್ನು ಮಂಡಿಸಿದರೆ, ಇದು ಸಂವಿಧಾನಕ್ಕೆ ವಿರುದ್ಧವಾಗಿದೆ ಎಂದು ಹೇಳುವ ಮೂಲಕ ವಿರೋಧ ಪಕ್ಷದ ಆಡಳಿತವಿರುವ ಹಲವಾರು ರಾಜ್ಯಗಳು ಈ ಪ್ರಸ್ತಾಪವನ್ನು ತಿರಸ್ಕರಿಸುವದರ ಜೊತೆಗೆ ತೀವ್ರ ಪ್ರತಿರೋಧವನ್ನು ಎದುರಿಸಬೇಕಾಗುತ್ತದೆ.

ಜಂಟಿ ಸದನ ಸಮಿತಿಗೆ ಆರ್.ಅಶೋಕ್ ಪತ್ರ

ಪರಿಣಾಮ ಸಾವಿರಾರು ಬಡವರು ಹಾಗೂ ರೈತರು ವಂಶಪಾರಂಪರ್ಯವಾಗಿ ಬಂದ ಭೂಮಿಯನ್ನು ಕಳೆದುಕೊಳ್ಳುತ್ತಿದ್ದಾರೆ.

ಜೆಪಿಸಿಯು ವಕ್ಫ್ ಕಾಯಿದೆಗೆ ತರಬಹುದಾದ ತಿದ್ದುಪಡಿಯ ನಿರೀಕ್ಷೆಯಲ್ಲಿ ವಕ್ಫ್ ಮಂಡಳಿಯು ರೈತರ ಜಮೀನುಗಳನ್ನು ನೋಂದಾಯಿಸಲು ತರಾತುರಿ ಪ್ರಯತ್ನಗಳು ನಡೆಸುತ್ತಿದೆ ಎಂದು ಪ್ರತಿಪಕ್ಷ ನಾಯಕರು ಪತ್ರದಲ್ಲಿ ಆರೋಪಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ 15,000 ಎಕರೆ ಜಮೀನನ್ನು ವಶಪಡಿಸಿಕೊಳ್ಳಲು ನೋಟಿಸ್ ನೀಡಲಾಗಿದೆ ಎಂದು ನೂರಾರು ರೈತರು ಹೇಳಿದ ಬಳಿಕ ಈ ಸಂಗತಿ ಬೆಳಕಿಗೆ ಬಂದಿದೆ. ಎಲ್ಲಾ ಜಿಲ್ಲೆಗಳಲ್ಲಿ ತಲಾ 10,000 ಎಕರೆ ಜಮೀನನ್ನು ವಕ್ಫ್ ನೋಂದಣಿ ಮಾಡಿಕೊಳ್ಳುವ ಪ್ರಯತ್ನ ಮಾಡಿದೆ ಎಂದು ಹೇಳಲಾಗಿದೆ. ವಕ್ಫ್ ಮಂಡಳಿಯು ದೇವಸ್ಥಾನ, ಮಠ ಹಾಗೂ ಇತರೆ ಹಿಂದೂ ಧಾರ್ಮಿಕ ಸಂಸ್ಥೆಗಳ ಜಮೀನುಗಳನ್ನು ಕೂಡ ತನ್ನದು ಎಂದು ಹೇಳಿಕೊಂಡಿದೆ. ಹಿಂದೂ ಸ್ಮಶಾನ ಕೂಡ ತನ್ನದು ಎಂದು ವಕ್ಫ್ ಉಲ್ಲೇಖಿಸಿರುವುದು ಇನ್ನಷ್ಟು ಆಘಾತದ ಸಂಗತಿ ಎಂದು ಆರ್ ಅಶೋಕ್ ಹೇಳಿದ್ದಾರೆ.

ಇದಲ್ಲದೆ, ವಕ್ಫ್ ಮಂಡಳಿಯು ದೇವಾಲಯಗಳು, ಮಠಗಳು ಮತ್ತು ಇತರ ಧಾರ್ಮಿಕ ಸಂಸ್ಥೆಗಳಿಗೆ ಸೇರಿದ ಭೂಮಿಯ ಮೇಲೂ ಹಕ್ಕು ಸಾಧಿಸುತ್ತಿದೆ. 13ನೇ ಶತಮಾನದಷ್ಟು ಇತಿಹಾಸ ಹೊಂದಿರುವ ವಿರಕ್ತ ಮಠಕ್ಕೆ ಸೇರಿದ ಸಿಂದಗಿಯ 1.28 ಎಕರೆ ಜಮೀನು, ವಿಜಯಪುರದ ಐತಿಹಾಸಿಕ ಸೋಮೇಶ್ವರ ದೇವಾಲಯ, ಕಲಬುರ್ಗಿಯ ಬೀರದೇವರ ಗುಡಿ ಸೇರಿದಂತೆ ಅನೇಕ ಜನಪ್ರಿಯ ಸ್ಥಳಗಳನ್ನು ಕೂಡ ವಕ್ಫ್ ತನ್ನದೆಂದು ಘೋಷಿಸಿ ಕೊಂಡಿದೆ. ಇದು ಜನರಲ್ಲಿ ಆತಂಕ ಉಂಟು ಮಾಡಿದ್ದು, ಹಾವೇರಿಯಲ್ಲಿ ಹಿಂಸಾಚಾರ, ಗಲಭೆ ಕೂಡ ನಡೆದಿದೆ ಈ ಎಲ್ಲಾ ಘಟನೆಗಳ ಹಿನ್ನೆಲೆಯಲ್ಲಿ, ಜಂಟಿ ಸಮಿತಿ ಕೂಡಲೇ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಯ ಜೊತೆ ಮಾತನಾಡಬೇಕು. ವಕ್ಫ್‌ಗೆ ಸಂಬಂಧಿಸಿದ ಜಮೀನು ನೋಂದಣಿ ಸ್ಥಗಿತಗೊಳಿಸಲು ಸೂಚಿಸಬೇಕು ಎಂದು ಪತ್ರದ ಮೂಲಕ ಆರ್.ಅಶೋಕ್ ಮನವಿ ಮಾಡಿದ್ದಾರೆ.

ಸುಪ್ರೀಂಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್

ಪ್ರಕರಣದ ತನಿಖೆಗೆ ಏಜೆನ್ಸಿಗೆ ಒಪ್ಪಿಗೆಯನ್ನು ಹಿಂತೆಗೆದುಕೊಳ್ಳುವ ಕರ್ನಾಟಕ ಕಾಂಗ್ರೆಸ್ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಿಬಿಐ ಸಲ್ಲಿಸಿದ ಅರ್ಜಿಯನ್ನು ಆ.29ರಂದು ಹೈಕೋರ್ಟ್ ವಜಾಗೊಳಿಸಿತ್ತು.

ಶಿವಕುಮಾರ್ ಅವರು 2013 ಮತ್ತು 2018 ರ ನಡುವೆ ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾಗಿದ್ದಾಗ ಆದಾಯಕ್ಕೂ ಮೀರಿ ಆಸ್ತಿಯನ್ನು ಗಳಿಸಿದ್ದಾರೆ ಎಂದು ಸಿಬಿಐ ಆರೋಪಿಸಿದೆ. ಬಿಜೆಪಿ ಅಧಿಕಾರಕ್ಕೆ ಬಂದಾಗ ಶಿವಕುಮಾರ್ ವಿರುದ್ಧ ಕಾನೂನು ಕ್ರಮ ಜರುಗಿಸಲು ಸಿಬಿಐಗೆ ಸರ್ಕಾರ ಅನುಮತಿ ನೀಡಿತ್ತು. ಸಿದ್ದರಾಮಯ್ಯ ನೇತೃತ್ವದ ಪ್ರಸ್ತುತದ ಸರ್ಕಾರ, ನ.23, 2023ರಂದು ಶಿವಕುಮಾರ್ ವಿರುದ್ಧದ ಪ್ರಕರಣದ ತನಿಖೆಗೆ ಸಿಬಿಐಗೆ ನೀಡಿದ್ದ ಅನುಮತಿಯನ್ನು ಅಕ್ರಮವೆಂದು ಪರಿಗಣಿಸಿ ಅದನ್ನು ಹಿಂಪಡೆಯಲು ನಿರ್ಧರಿಸಿತು.

ಒಬಾಮಾಗೆ ಸರ್ಕಾರ ಆಹ್ವಾನ

ಗಾಂಧೀಜಿಯವರ ಅನುಯಾಯಿ ಆಗಿರುವ ಮತ್ತು ಯುಎಸ್ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರನ್ನು ಅಹ್ವಾನಿಸಲಾಗಿದೆ. ಒಬಾಮಾ ಅವರು ನೀಡುವ ದಿನಾಂಕ ನೋಡಿಕೊಂಡು ಜಂಟಿ ಅಧಿವೇಶನ ದಿನಾಂಕವನ್ನು ನಿರ್ಧರಿಸಲಾಗುವುದು.

ಗಾಂಧೀಜಿ ಅವರು ಕೇವಲ ಭಾರತದ ನಾಯಕನಲ್ಲ. ವಿಶ್ವ ನಾಯಕ ಎಂದು ಸಾರುವ ಗಾಂಧಿ ಅನುಯಾಯಿ, ಅಭಿಮಾನಿಗೆ ಆಹ್ವಾನ ನೀಡಿದ್ದೇವೆ. ಇದೊಂದು ಉತ್ತಮವಾದ ಕಾರ್ಯಕ್ರಮ ಆಗಲಿದೆ ಎಂದು ತಿಳಿಸಿದರು. ಗಾಂಧೀಜಿ ಅವರು ರಾಜ್ಯದ 120 ಸ್ಥಳಗಳಿಗೆ ಭೇಟಿ ನೀಡಿದ್ದು, ಅವರು ಭೇಟಿ ನೀಡಿದ ರಾಜ್ಯದ 40 ಸ್ಥಳಗಳಲ್ಲಿ ಸ್ಮಾರಕ ನಿರ್ಮಾಣ ಮಾಡಲಾಗುವುದು. ಬೇರೆ ಬೇರೆ ಜಿಲ್ಲೆಗಳು ರಥಯಾತ್ರೆಯ ಜ್ಯೋತಿಗಳು ಡಿ.26 ಮತ್ತು 27ಕ್ಕೆ ಬೆಳಗಾವಿಗೆ ತಲುಪಲಿವೆ. ಬಳಿಕ ಯುವ, ಮಹಿಳಾ, ಸಾಮರಸ್ಯ ಸಮಾವೇಶ ಹಮ್ಮಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಅಳವಡಿಕೆ ಗಡುವು ಮತ್ತೆ ವಿಸ್ತರಣೆ

ನಂಬರ್ ಪ್ಲೇಟ್ ಅಳವಡಿಸಿಕೊಂಡಿಲ್ಲ. ಹೀಗಾಗಿ ರಾಜ್ಯ ಸರ್ಕಾರ ಮತ್ತೊಂದು ಅವಕಾಶ ನೀಡಿದೆ. ಈ ತಿಂಗಳು ಕೊನೆ ಅಂದರೆ ನ.30ರವರೆಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಸಮಯ ನೀಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಹೈಸೆಕ್ಯೂರಿಟಿ ನಂಬರ್ ಪ್ಲೇಟ್ ಅಳ ವಡಿಕೆಗೆ ಈಗಾಗಲೇ ಅವಧಿ ಮುಗಿದಿದ್ದರೂ ರಾಜ್ಯ ಸರ್ಕಾರ ವಾಹನ ಮಾಲೀ ಕರಿಗೆ ಮತ್ತೆ ಮತ್ತೆ ಅವಕಾಶ ನೀಡುತ್ತಲೇ ಬಂದಿದೆ. ಬರೋಬ್ಬರಿ 4 ಬಾರಿ ಗಡುವು ವಿಸ್ತರಿಸಿದೆ. ಆದರೂ 1.90 ಕೋಟಿ ಹಳೆ ವಾಹನಗಳ ಪೈಕಿ 55 ಲಕ್ಷ ವಾಹನಗಳಿಗೆ ಮಾತ್ರ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಮಾಡಲಾಗಿದೆ. ಇನ್ನೂ ಬಾಕಿ ವಾಹನಗಳ ಮಾಲೀಕರು ಅಳವಡಿಕೆ ಮಾಡಿಕೊಂಡಿಲ್ಲ. ಹೀಗಾಗಿ ಇದೀಗ ಅವಕಾಶ ಮಾಡಿಕೊಟ್ಟಿದೆ. ಒಂದು ವೇಳೆ ನ.30ರೊಳಗೆ ನಂಬರ್ ಪ್ಲೇಟ್ ಬದಲಾವಣೆ ಮಾಡಿಕೊಳ್ಳದಿದ್ದರೆ ಡಿ.1ರಿಂದ ದಂಡ ವಿಧಿಸಲು ಸಾರಿಗೆ ಇಲಾಖೆ ತೀರ್ಮಾನಿಸಿದೆ.

ಸಿದ್ದರಾಮಯ್ಯಗೆ ನೋಟಿಸ್

ಅವರಿಗೆ ತಲುಪಿದ್ದು, ತಾವು ಲೋಕಾಯುಕ್ತ ಎಸ್ಪಿ ಮುಂದೆ ವಿಚಾರಣೆಗೆ ಹಾಜರಾಗುವುದಾಗಿ ಸಿದ್ದರಾಮಯ್ಯ ಅವರು ಹಾವೇರಿಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ್ದಾರೆ. ಮೈಸೂರಿನ ಕೆಸರೆ ಸರ್ವೆ ನಂಬರ್ 464ರ 3.16 ಎಕರೆಯನ್ನು ಮುಡಾ ಭೂಸ್ವಾಧೀನ ಪಡೆಸಿಕೊಳ್ಳದೇ ಬಡಾವಣೆ ನಿರ್ಮಿಸಿದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರ ಪತ್ನಿ ಶ್ರೀಮತಿ ಪಾರ್ವತಿ ಅವರು ನೀಡಿದ ಅರ್ಜಿ ಮೇರೆಗೆ ಮುಡಾದಿಂದ ಶೇ. 50:50ರ ಅನುಪಾತದಲ್ಲಿ ಅವರಿಗೆ ಮೈಸೂರಿನ ವಿಜಯನಗರ ಬಡಾವಣೆಯಲ್ಲಿ 14 ನಿವೇಶನಗಳನ್ನು ನೀಡಲಾಗಿತ್ತು.

ಈ ಸಂಬಂಧ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ನೀಡಿದ ದೂರನ್ನು ದಾಖಲಿಸಿಕೊಂಡು ತನಿಖೆ ನಡೆಸುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನೀಡಿದ ಆದೇಶದ ಮೇರೆಗೆ ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್ ಅವರು ಎಫ್‌ಐಆರ್ ದಾಖಲಿಸಿದ್ದರು. ಈ ಪ್ರಕರಣದಲ್ಲಿ ಸಿದ್ದರಾಮಯ್ಯ ಮೊದಲನೇ ಆರೋಪಿಯಾಗಿದ್ದು, ಅವರ ಪತ್ನಿ ಶ್ರೀಮತಿ ಪಾರ್ವತಿ 2ನೇ ಆರೋಪಿ, ಪಾರ್ವತಿ ಅವರಿಗೆ ಜಮೀನು ದಾನ ಮಾಡಿದ್ದ ಸಹೋದರ ಮಲ್ಲಿಕಾರ್ಜುನ ಸ್ವಾಮಿ 3ನೇ ಆರೋಪಿ ಹಾಗೂ ಜಮೀನು ಮಾರಾಟ ಮಾಡಿದ್ದ ದೇವರಾಜು ಅವರನ್ನು 4ನೇ ಆರೋಪಿಯಾಗಿ ಉಲ್ಲೇಖಿಸಲಾಗಿತ್ತು.

ಲೋಕಾಯುಕ್ತ ಪೊಲೀಸರು ಈಗಾಗಲೇ ಸಿದ್ದರಾಮಯ್ಯ ಪತ್ನಿ ಶ್ರೀಮತಿ ಪಾರ್ವತಿ, ಅವರ ಸಹೋದರ ಮಲ್ಲಿಕಾರ್ಜುನಸ್ವಾಮಿ ಮತ್ತು ಜಮೀನು ಮಾರಾಟ ಮಾಡಿದ್ದ ದೇವರಾಜು ಅವರನ್ನು ವಿಚಾರಣೆಗೊಳಪಡಿಸಿ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದಾರೆ. 1ನೇ ಆರೋಪಿಯಾಗಿ ರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನವೆಂಬರ್ 6ರಂದು ವಿಚಾರಣೆಗೆ ಆಗಮಿಸುವಂತೆ ನೋಟಿಸ್ ನೀಡಲಾಗಿದೆ. ನಾಲ್ಕು ದಶಕಗಳಿಂದ ರಾಜಕಾರಣದಲ್ಲಿದ್ದು, ವಿವಿಧ ಹುದ್ದೆಗಳನ್ನು ನಿರ್ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇದೇ ಮೊದಲ ಬಾರಿಗೆ ಆರೋಪಿಯಾಗಿ ಲೋಕಾಯುಕ್ತ ಪೊಲೀಸರ ಮುಂದೆ ವಿಚಾರಣೆಗೆ ಹಾಜರಾಗಲಿದ್ದಾರೆ.

ಇಂದು ಹೈಕೋರ್ಟ್‌ನಲ್ಲಿ ವಿಚಾರಣೆ

ವಿಚಾರಣೆ ನಡೆಯಲಿದೆ. ಮುಖ್ಯಮಂತ್ರಿ ವಿರುದ್ಧ ಯಾವುದೇ ಆರೋಪ ಕೇಳಿ ಬಂದಾಗ ಹಾಗೂ 50 ಕೋಟಿಗಿಂತ ಹೆಚ್ಚು ಮೌಲ್ಯದ ಹಗರಣ ನಡೆದಿದ್ದರೆ ಸಿಬಿಐ ತನಿಖೆ ಆಗಬೇಕೆಂದು ಕಾನೂನು ನಿಯಮ ಇದೆ. ಈ ಹಿನ್ನೆಲೆ ಸಿಬಿಐ ತನಿಖೆ ನಡೆಸುವಂತೆ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದೇನೆ. ಈಗಾಗಲೇ ನ್ಯಾಯಮೂರ್ತಿ ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠದಲ್ಲಿ ತಮ್ಮ ಪರ ವಾದ ಮಂಡಿಸಿದ್ದ ರಾಘವನ್ ಅವರೇ ನಾಳೆ ಕೂಡ ತಮ್ಮ ಪರ ವಾದ ಮಂಡಿಸಲಿದ್ದಾರೆ ಎಂದು ಸ್ನೇಹಮಯಿ ಕೃಷ್ಣ 'ಮೈಸೂರು ಮಿತ್ರ'ಗೆ ತಿಳಿಸಿದರು. ನ.6 ರಂದು ವಿಚಾರಣೆಯಲ್ಲಿ ಭಾಗವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲೋಕಾಯುಕ್ತರು ಸಮನ್ಸ್ ಜಾರಿ ಮಾಡಿದ್ದಾರೆ. ಯಾವ ವಿಚಾರಗಳನ್ನು ಮುಂದಿಟ್ಟು ವಿಚಾರಣೆ ಮಾಡಬೇಕೆಂದು ಈಗಾಗಲೇ ಲೋಕಾಯುಕ್ತ ಎಸ್ಪಿ ಉದೇಶ್ ಅವರಿಗೆ ಮನವಿ ಸಲ್ಲಿಸಿದ್ದೇನೆ. ಅದರಂತೆ ವಿಚಾರಣೆ ಮಾಡುವಂತೆ ಆಗ್ರಹಿಸುತ್ತೇನೆ ಎಂದು ಸ್ನೇಹಮಯಿ ಕೃಷ್ಣ ತಿಳಿಸಿದರು.

ಮುಡಾ ಹಿಂದಿನ ಕಾರ್ಯದರ್ಶಿ ಶೇಖರ್ ವಿರುದ್ಧ ಶಿಸ್ತು ಕ್ರಮಕ್ಕಾಗಿ ಸರ್ಕಾರಕ್ಕೆ ಮುಡಾ ಆಯುಕ್ತ ವರದಿ

ಮೈಸೂರು, ನ.4(ಬಿಎಲ್‌ಯು)– ಖಾತಾ ನೋಂದಣಿಯ ಕಾನೂನು ನಿಯಮ ಉಲ್ಲಂಘನೆ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಿಂದಿನ ಕಾರ್ಯದರ್ಶಿ ಜಿ.ಡಿ.ಶೇಖರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಮುಡಾ ಆಯುಕ್ತ ರಘು ನಂದನ್ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ.

ಮೈಸೂರಿನ ನಜರ್‌ಬಾದ್ ವಾಸಿ ಎಂ.ಆರ್.ಅಶೋಕ್ ಕುಮಾರ್ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗೆ ಮೇ.25 ರಂದು ಶೇಖರ್ ವಿರುದ್ಧ ದೂರು ನೀಡಿದ್ದರು. ನಿವೇಶನದ ಖಾತೆಗೆ ಸಂಬಂಧಿಸಿದಂತೆ ಖಾತಾ ನೋಂದಣಿ, ಖಾತಾ ವರ್ಗಾವಣೆ, ಪೌತಿ ಖಾತಾ ವರ್ಗಾವಣೆ, ಕ್ರಯದ ಮೂಲಕ ಖಾತೆಯ ವರ್ಗಾವಣೆಗೆ ಸಂಬಂಧಿಸಿದಂತೆ ಕೆಯುಡಿಎ ಕಾಯ್ದೆ 1987 ರ ಸಂಪೂರ್ಣ ಉಲ್ಲಂಘನೆ ಮಾಡಿದ್ದಾರೆ ಎಂದು ದೂರು ಸಲ್ಲಿಸಿದ್ದರು.

ಈ ಸಂಬಂಧ ವರದಿ ನೀಡುವಂತೆ ಬೆಂಗಳೂರಿನ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತರಿಗೆ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಜುಲೈ 2 ರಂದು ಆದೇಶಿಸಿದ್ದರು.

ಈ ಬಗ್ಗೆ ಪೂರಕ ದಾಖಲೆಗಳೊಂದಿಗೆ ವರದಿ ಸಲ್ಲಿಸುವಂತೆ ಬೆಂಗಳೂರಿನ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತರು ಮುಡಾ ಆಯುಕ್ತರಿಗೆ ಜುಲೈ 19 ಸೂಚಿಸಿದ್ದರು.

ಈ ಸಂಬಂಧ ಮುಡಾ ಆಯುಕ್ತ ರಘು ನಂದನ್ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ. ಪ್ರಾಧಿಕಾರದ ಕಾರ್ಯದರ್ಶಿ ಆಗಿದ್ದ ಶೇಖರ ಅವರನ್ನು ಈಗಾಗಲೇ ಸರ್ಕಾರ ಸೇವೆಯಿಂದ ಬಿಡುಗಡೆಗೊಳಿಸಿದ್ದು, ಮುಂದಿನ ಶಿಸ್ತು ಕ್ರಮಕ್ಕಾಗಿ ತಮ್ಮ ಅವಗಾಹನೆಗೆ ಈ ವರದಿ ಸಲ್ಲಿಸಿದ್ದೇನೆ ಎಂದು ಮುಡಾ ಆಯುಕ್ತರು ಬೆಂಗಳೂರಿನ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತರಿಗೆ ತಿಳಿಸಿದ್ದಾರೆ.

ಪುರುಷರ ಕುಸ್ತಿ ಸಮಗ್ರ ಪ್ರಶಸ್ತಿ



ಮೈಸೂರು ವಿಶ್ವವಿದ್ಯಾನಿಲಯ ಇವರ ವತಿಯಿಂದ ಆಯೋಜಿಸಿದ್ದ, ಮೈಸೂರು ವಿಶ್ವವಿದ್ಯಾನಿಲಯ ಅಂತರ ಕಾಲೇಜು ಪುರುಷರ ಕುಸ್ತಿ ಪಂದ್ಯಾವಳಿಯಲ್ಲಿ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜು 2024–25ನೇ ಸಾಲಿನ ಪುರುಷರ ಕುಸ್ತಿ ಸಮಗ್ರ ತಂಡ ಪ್ರಶಸ್ತಿ ಪಡೆದಿದ್ದಾರೆ. (ಎಡದಿಂದ ಬಲಕ್ಕೆ ಕುಳಿತಿರುವವರು): ಪಿ.ಎಸ್. ಮಧುಸೂಧನ, ದೈಹಿಕ ಶಿಕ್ಷಣ ನಿರ್ದೇಶಕರು, ಡಾ.ಟಿ.ವಿಜಯಲಕ್ಷ್ಮಿ, ಗೌರವ ಕಾರ್ಯದರ್ಶಿ, ಡಾ.ಬಿ.ಆರ್.ಜಯಕುಮಾರಿ, ಪ್ರಾಂಶುಪಾಲರು, ಡಾ. ಭಾಸ್ಕರ್ ಹೆಚ್.ಎನ್., ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ತಂಡದ ನಾಯಕ ಮಂಚಣ್ಣ (ನಿಂತಿರುವವರು) ಸೋಮಶೇಖರ ಕೆ, ಅಬ್ದುಲ್ ಅವೇಜ್ ಖಾನ್, ಹೇಮಂತ್‌ಗೌಡ ಹೆಚ್.ಎ., ಪ್ರಥಮ್ ಜಿ.ಎಸ್., ಹರ್ಷವರ್ಧನ್ ಜಿ.ಎಸ್., ಗ್ಯಾಬ್ರಿಲ್, ಲಾಲು ಪ್ರಸಾದ್ ಅವರನ್ನು ಕಾಣಬಹುದು.

ರಾಷ್ಟ್ರೀಯ ಏಕತಾ ದಿವಸ ಆಚರಣೆ



ಕಾವೇರಿ ವಿದ್ಯಾಸಂಸ್ಥೆಯಲ್ಲಿ ರಾಷ್ಟ್ರೀಯ ಏಕತಾ ದಿವಸವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ದಿನದ ಪ್ರಯುಕ್ತ ಏಕತೆಯ ಪ್ರತಿಜ್ಞಾವಿಧಿಯನ್ನು ಸಂಸ್ಥೆಯ ಆಡಳಿತ ಅಧಿಕಾರಿ ಡಾ. ಸುಬ್ರಹ್ಮಣ್ಯ ಸಿ ಈ ರವರು ಬೋಧಿಸಿದರು. ಪ್ರಾಂಶುಪಾಲರಾದ ಎನ್.ಸಿ. ನವೀನ್ ಮತ್ತಿತರರು ಉಪಸ್ಥಿತರಿದ್ದರು.

ಚನ್ನಪಟ್ಟಣದಲ್ಲಿ ನಿಖಿಲ್ ಪರ ಪತ್ನಿ ರೇವತಿ ಬಿರುಸಿನ ಪ್ರಚಾರ



ನಿಖಿಲ್ ಕುಮಾರಸ್ವಾಮಿ ಪರ ಅವರ ಪತ್ನಿ ರೇವತಿ ಚನ್ನಪಟ್ಟಣ ಕ್ಷೇತ್ರದಲ್ಲಿ ಬಿರುಸಿನ ಪ್ರಚಾರ ನಡೆಸಿದರು.

ಬೆಂಗಳೂರು, ನ.4(ಕೆಎಂಶಿ)–ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಸೊಸೆ ರೇವತಿ ನಿಖಿಲ್ ತಮ್ಮ ಪತಿ ನಿಖಿಲ್ ಕುಮಾರಸ್ವಾಮಿ ಪರ ಚನ್ನಪಟ್ಟಣ ಕ್ಷೇತ್ರದಲ್ಲಿ ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ.

ಕ್ಷೇತ್ರದಲ್ಲಿ ಮಹಿಳೆಯರು ಮತ್ತು ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಮತದಾರರನ್ನು ಭೇಟಿ ಮಾಡಿ, ತಮ್ಮ ಪತಿ ಪರ ಮತ ಯಾಚಿಸಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ರಾಮನಗರದಿಂದ ನಿಖಿಲ್ ಕುಮಾರಸ್ವಾಮಿ ಕಣಕ್ಕಿಳಿದ ಸಂದರ್ಭದಲ್ಲಿ ಪ್ರಚಾರದಲ್ಲಿ ಪಾಲ್ಗೊಳ್ಳದ ರೇವತಿ ನಿಖಿಲ್ ಅವರು, ಈ ಬಾರಿ ಪತಿಯ ಗೆಲುವನ್ನು ಖಚಿತಪಡಿಸಿಕೊಳ್ಳಲು ಮತ ಯಾಚನೆಯಲ್ಲಿ ತೊಡಗಿದ್ದಾರೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಕರಪತ್ರಗಳನ್ನು ನೀಡಿ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಕುಶಲೋಪರಿ ವಿಚಾರಿಸಿದ ರೇವತಿ ನಿಖಿಲ್ ಅವರೊಂದಿಗೆ ವಿದ್ಯಾರ್ಥಿಗಳು ಸೆಲ್ಫಿ ತೆಗೆದುಕೊಂಡು ಸಂತಸಪಟ್ಟರು.

ಎಲ್ಲರನ್ನೂ ಅತ್ಯಂತ ಆತ್ಮೀಯತೆಯಿಂದ ಮಾತನಾಡಿಸಿದ ರೇವತಿ ನಿಖಿಲ್ ಅವರು, ವಿದ್ಯಾರ್ಥಿಗಳ ವಿದ್ಯಾಭ್ಯಾಸ ಹಾಗೂ ಕುಂದು ಕೊರತೆಗಳ ಮಾಹಿತಿ ಪಡೆದುಕೊಂಡರು.

ರೇವತಿ ನಿಖಿಲ್ ಅವರ ಸರಳತೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು. ಈ ವೇಳೆ ಪದವಿ ವಿದ್ಯಾರ್ಥಿನಿಯೊಬ್ಬರು, ಉಪಚುನಾವಣೆಯಲ್ಲಿ ಇಡೀ ಯುವ ಸಮುದಾಯ ನಿಖಿಲ್ ಅಣ್ಣನ ಬೆಂಬಲಕ್ಕಿದೆ ಎಂಬ ಭರವಸೆ ನೀಡಿದರು. ರೇವತಿ ಅವರೊಂದಿಗೆ ಜೆಡಿಎಸ್ ಮಹಿಳಾ ರಾಜ್ಯಾಧ್ಯಕ್ಷೆ ರಶ್ಮಿ ರಾಮೇಗೌಡ ಹಾಗೂ ಮಹಿಳಾ ಘಟಕದ ಅನೇಕ ನಾಯಕರು ಪ್ರಚಾರ ಕೈಗೊಂಡರು.

ಉಪಚುನಾವಣೆ ಅಖಾಡಕ್ಕಿಳಿದ ಸಿದ್ದರಾಮಯ್ಯ ಮಂತ್ರಿ ಮಂಡಲ



ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆಯುತ್ತಿರುವ ಉಪಚುನಾವಣೆ ಹಿನ್ನೆಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಮಂತ್ರಿಮಂಡಲದ ಸಚಿವರು ಸೋಮವಾರ ಮತಯಾಚನೆ ನಡೆಸಿದರು.

ಬೆಂಗಳೂರು, ನ. 4(ಕೆಎಂಶಿ)–ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪೂರ್ಣ ಪ್ರಮಾಣದಲ್ಲಿ ಉಪಚುನಾವಣಾ ಸಮರಕ್ಕೆ ಧುಮುಕಿದೆ.

ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆಯುತ್ತಿರುವ ಉಪಚುನಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಕಾಂಗ್ರೆಸ್ ಸರ್ಕಾರ ಮೂರರಲ್ಲೂ ಗೆಲುವು ಸಾಧಿಸಲು ಮಂತ್ರಿ ಮಂಡಲವನ್ನೇ ಅಖಾಡಕ್ಕೆ ಇಳಿಸಿದೆ.

ಸ್ವತಃ ಸಿದ್ದರಾಮಯ್ಯ ಅವರು, ಇಂದಿನಿಂದ ಶಿಗ್ಗಾವಿ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ಪ್ರಚಾರ ಆರಂಭಿಸಿದ್ದರೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಚನ್ನಪಟ್ಟಣದಲ್ಲಿ ಪ್ರಚಾರ ನಡೆಸಿದ್ದಾರೆ.

ಪ್ರತೀ ಕ್ಷೇತ್ರಕ್ಕೂ ತಲಾ 10 ಸಚಿವರನ್ನು ನಿಯೋಜಿಸಿದ್ದು ಅವರು, ಇಂದಿನಿಂದ ನವೆಂಬರ್ 11ರವರೆಗೂ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ಕೈಗೊಳ್ಳಲಿದ್ದಾರೆ.

ಇದರ ಮಧ್ಯೆ, ಆಯ್ದ ಮತ್ತು ಕೆಲವು ಪ್ರಭಾವೀ ಸಚಿವರನ್ನು ಮಹಾರಾಷ್ಟ್ರದಲ್ಲಿ ನಡೆಯುತ್ತಿರುವ ವಿಧಾನಸಭಾ ಚುನಾವಣೆಗೂ ಎಐಸಿಸಿ ವರಿಷ್ಠರೇ ನಿಯೋಜಿಸಿದ್ದಾರೆ. ಮಹಾರಾಷ್ಟ್ರದ ವಿವಿಧ ಭಾಗಗಳಿಗೆ ತೆರಳಿ, ಈ ಸಚಿವರು ಐದು ದಿನಗಳ ಕಾಲ ಚುನಾವಣಾ ಪ್ರಚಾರ ನಡೆಸಬೇಕು.

ಅಲ್ಲದೆ, ಕೆಲವು ಸಚಿವರು ಕೇರಳದ ವಯನಾಡು ಲೋಕಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಎರಡು ದಿನ ಪ್ರವಾಸ ಕೈಗೊಂಡು ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಗಾಂಧಿ ಪರ ಮತ ಯಾಚಿಸಬೇಕು.

ಮುಖ್ಯಮಂತ್ರಿ ಅವರು, ರಾಜ್ಯದ ಮೂರು ಕ್ಷೇತ್ರಗಳಲ್ಲೂ ತಲಾ ಎರಡು ದಿನ ಚುನಾವಣಾ ಪ್ರಚಾರ ಕೈಗೊಂಡು, ಮಹಾರಾಷ್ಟ್ರದಲ್ಲೂ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ಕೈಗೊಳ್ಳಲಿದ್ದಾರೆ. ಇದರ ನಡುವೆಯೇ ಸಿದ್ದರಾಮಯ್ಯ, ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಜೊತೆಗೂಡಿ ವಯನಾಡು ಕ್ಷೇತ್ರದಲ್ಲೂ ಪ್ರಚಾರದಲ್ಲಿ ಪಾಲ್ಗೊಳ್ಳಲಿದ್ದಾರೆ. ಮುಖ್ಯಮಂತ್ರಿ ಸೇರಿದಂತೆ ಇಡೀ ಸಂಪುಟ ನವೆಂಬರ್ 18ರವರೆಗೂ ಚುನಾವಣಾ ಪ್ರಚಾರ ಕಾರ್ಯದಲ್ಲಿ ನಿರತವಾಗಿರುತ್ತದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರಿನಲ್ಲಿ ಜೆಡಿಎಸ್, ಬಿಜೆಪಿ ಹಾಗೂ ಕಾಂಗ್ರೆಸ್ ತಲಾ ಒಂದು ಸ್ಥಾನಗಳಲ್ಲಿ ಜಯಗಳಿಸಿದ್ದವು.

ಉಪಚುನಾವಣೆಯಲ್ಲಿ ಮೂರೂ ಕ್ಷೇತ್ರಗಳಲ್ಲೂ ಗೆಲುವು ಸಾಧಿಸುವ ಮೂಲಕ ಪ್ರತಿಪಕ್ಷಗಳಿಗೆ ಪಾಠ ಕಲಿಸುವ ಉದ್ದೇಶದಿಂದ ಮತದಾರರ ಓಲೈಕೆಗೆ ತಮ್ಮ ಇಡೀ ಸಂಪುಟವನ್ನೇ ಸಿದ್ದರಾಮಯ್ಯ ಪಣಕ್ಕೊಡ್ಡಿದ್ದಾರೆ.

ಉಪಚುನಾವಣೆಯಲ್ಲಿ ಕಾಂಗ್ರೆಸ್ ಕೊಚ್ಚಿ ಹೋಗುವುದು ಗ್ಯಾರಂಟಿ

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ



ಶಿಗ್ಗಾವಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಮತಯಾಚಿಸಿದರು.

ಬೆಂಗಳೂರು, ನ.4 (ಕೆಎಂಶಿ)–ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಜನರು ತಿರುಗಿ ಬಿದ್ದಿದ್ದಾರೆ, ಈ ಅಲೆಗೆ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಕೊಚ್ಚಿ ಹೋಗುವುದು ಗ್ಯಾರಂಟಿ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ವಕ್ಫ್ ಆಸ್ತಿ ಹೆಸರಿನಲ್ಲಿ ರೈತರಿಗೆ ನೋಟೀಸ್ ಕೊಟ್ಟಿರುವುದಕ್ಕೆ ರಾಜ್ಯಾದ್ಯಂತ ಜನರು ಸರ್ಕಾರದ ವಿರುದ್ಧ ಆಕ್ರೋಶಗೊಂಡಿದ್ದಾರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ತಪ್ಪಿನ ಅರಿವಾಗಿ ನೋಟೀಸ್ ವಾಪಸ್ ತೆಗೆದುಕೊಳ್ಳಲು ಹೇಳಿದ್ದಾರೆ, ಸರ್ಕಾರ ತಪ್ಪು ಮಾಡದಿದ್ದರೆ ರೈತರಿಗೆ ನೀಡಿದ್ದ ನೋಟಿಸ್ ಏಕೆ ವಾಪಸ್ ಪಡೆಯುತ್ತಿದ್ದರು ಎಂದರು.

ವಕ್ಫ್ ಸಚಿವ ಜಮೀರ್ ಅಹಮದ್ ಖಾನ್, ಮುಖ್ಯಮಂತ್ರಿಗಳ ಆದೇಶದ ಮೇರೆಗೆ ನೋಟಿಸ್ ನೀಡಲಾಗಿದೆ ಎಂದಿದ್ದಾರೆ, ಜಿಲ್ಲಾಧಿಕಾರಿಗಳು ಸಚಿವರ ಆದೇಶದ ಮೇರೆಗೆ ನೋಟಿಸ್ ನೀಡಿರುವುದಾಗಿ ತಿಳಿಸಿದ್ದಾರೆ, ಈಗ ಜನ ತಿರುಗಿ ಬೀಳುತ್ತಾರೆ ಎನ್ನುವುದು ಗೊತ್ತಾದ ತಕ್ಷಣ ಎಲ್ಲರೂ 'ಯು–ಟರ್ನ್' ಹೊಡೆಯುತ್ತಿದ್ದಾರೆ. ಇದೊಂದು ರೀತಿ 'ಯು–ಟರ್ನ್ ಸರ್ಕಾರ', ಮುಡಾದಲ್ಲಿ ಸೈಟ್ ಪಡೆದು ವಾಪಸ್ ಕೊಡುತ್ತಾರೆ, ವಾಲ್ಮೀಕಿ ನಿಗಮದ ಹಣ ಲೂಟಿ ಮಾಡಿ ಅದನ್ನು ವಾಪಸ್ ಹಾಕುವುದಾಗಿ ಹೇಳುತ್ತಾರೆ, ಈಗ ವಕ್ಫ್ ವಿಚಾರದಲ್ಲಿ ರೈತರಿಗೆ ನೋಟಿಸ್ ನೀಡಿ, ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ನೋಟಿಸ್ ವಾಪಸ್ ಪಡೆಯುತ್ತಾರೆ, ರಾಜ್ಯ ಸರ್ಕಾರ ನಿರಂತರ ಇದೇ ರೀತಿ ಮಾಡುತ್ತಾ ಬರುತ್ತಿದೆ ಎಂದರು.

ನ.23ಕ್ಕೆ ಸರಗೂರು ಪಟ್ಟಣ ಪಂಚಾಯಿತಿ ಉಪಚುನಾವಣೆ

ಮೈಸೂರು,ನ.4– ಸರಗೂರು ಪಟ್ಟಣ ಪಂಚಾಯಿತಿ ವಾರ್ಡ್ ಸಂಖ್ಯೆ 4ರ ಸದಸ್ಯ ಸ್ಥಾನವು ಖಾಲಿಯಿರುವುದರಿಂದ ಖಾಲಿ ಸ್ಥಾನವನ್ನು ತುಂಬಲು ಚುನಾವಣೆ ನಡೆಸಬೇಕಾಗಿದ್ದು, ಈ ಹಿನ್ನೆಲೆ ಉಪ ಚುನಾವಣೆಯ ಸಂಬಂಧ ಕಾರ್ಯಕ್ರಮಗಳ ವೇಳಾಪಟ್ಟಿಯನ್ನು ಪ್ರಕಟ ಮಾಡಲಾಗಿದೆ. ಪರಿಶಿಷ್ಟ ಜಾತಿಗೆ ಸೇರಿದ ಅರ್ಹ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಬಹುದಾಗಿದೆ. ಚುನಾವಣಾ ಅಧಿಸೂಚನೆಯನ್ನು ನ.4ರಂದು ಹೊರಡಿಸಲಾಗಿದ್ದು, ನಾಮಪತ್ರ ಸಲ್ಲಿಸಲು ನ.11 ಕೊನೆಯ ದಿನವಾಗಿರುತ್ತದೆ. ನ.12 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಉಮೇದುವಾರಿಕೆಗಳನ್ನು ಹಿಂಪಡೆಯಲು ನ.14 ಕೊನೆಯ ದಿನ. ಮತದಾನ ಅವಶ್ಯವಿದ್ದರೆ, ಮತದಾನವನ್ನು ನ.23ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆವರೆಗೆ ನಡೆಸಲಾಗುವುದು. ಮರು ಮತದಾನ ಅವಶ್ಯವಿದ್ದರೆ, ಮತದಾನವನ್ನು ನ.25ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುತ್ತದೆ.

ಮತಗಳ ಎಣಿಕೆಯು ನ.26ರಂದು ಬೆಳಗ್ಗೆ 8 ಗಂಟೆಯಿಂದ ತಾಲೂಕು ಕೇಂದ್ರ ಸ್ಥಳದಲ್ಲಿ ನಡೆಯಲಿದೆ. ಚುನಾವಣೆಗೆ ಸ್ಪರ್ಧಿಸಲು ಬಯಸುವ ಅಭ್ಯರ್ಥಿಗಳು ನಾಮಪತ್ರಗಳನ್ನು ಸಂಬಂಧಪಟ್ಟ ತಾಲೂಕು ಕಚೇರಿಯಲ್ಲಿ ವೇಳಾಪಟ್ಟಿಯಂತೆ ಚುನಾವಣಾಧಿಕಾರಿಗಳಿಗೆ ಸಲ್ಲಿಸಬಹುದು. ಚುನಾವಣೆಗೆ ಸಂಬಂಧಿಸಿದಂತೆ ನ.4 ರಿಂದ 26ರವರೆಗೆ ಸದಾಚಾರ ಸಂಹಿತೆಯು ಜಾರಿಯಲ್ಲಿದ್ದು, ಚುನಾವಣಾ ನೀತಿ ಸಂಹಿತೆಯು ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ನ.9 ಎರಡನೇ ಶನಿವಾರವಾಗಿದ್ದು, ನೆಗೋಷಿಯಬಲ್ ಇನ್‌ಸ್ಟ್ರುಮೆಂಟ್ ಆಕ್ಟ್ ಅಡಿ ಸಾರ್ವತ್ರಿಕ ರಜಾದಿನವೆಂದು ಘೋಷಿಸಲ್ಪಟ್ಟಿದೆ. ಹಾಗಾಗಿ ಸದರಿ ದಿನದಂದು ಯಾವುದೇ ನಾಮಪತ್ರವನ್ನು ಸ್ವೀಕರಿಸದಂತೆ ಚುನಾವಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ವಸ್ತುಪ್ರದರ್ಶನದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ



ಮೈಸೂರು,ನ.4–ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಮೈಸೂರು ದಸರಾ ಅಂಗವಾಗಿ ನ.4 ರಿಂದ 8ರವರೆಗೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಪಿ.ಕಾಳಿಂಗರಾವ್ ಗಾನ ಮಂಟಪದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ನ.5ರಂದು ಬೆಳಗ್ಗೆ 6ರಿಂದ 7.15 ಗಂಟೆವರೆಗೆ ಚಾಮುಂಡಿಪುರಂನ ಅರುಣೋದಯ ವಿಕಲಚೇತನ ಆಶ್ರಮದವರಿಂದ ಸಾಮೂಹಿಕ ನೃತ್ಯ ಪ್ರದರ್ಶನ, ಬೆಳಗ್ಗೆ 7.15 ರಿಂದ 8.15 ಗಂಟೆಯವರೆಗೆ ಹೂಟಗಳ್ಳಿಯ ಶ್ರೀನಿವಾಸ್ ಅವರಿಂದ ನಾದಸ್ವರ ಮತ್ತು ಸ್ಯಾಕ್ಸೋಫೋನ್ ಹಾಗೂ ಬೆಳಗ್ಗೆ 8.30ರಿಂದ 9.30 ಗಂಟೆಯವರೆಗೆ ರಾಘವೇಂದ್ರ ರತ್ನಾಕರ್ ಅವರಿಂದ ಆರ್ಕೆಸ್ಟ್ರ, ನ.6ರಂದು ಬೆಳಗ್ಗೆ 6ರಿಂದ 7 ಗಂಟೆಯವರೆಗೆ ವರಕೂಡಿನ ರಾಜು ಅವರಿಂದ ತಂಬೂರಿ ಕಥೆ, ಬೆಳಗ್ಗೆ 7 ರಿಂದ 9.30 ಗಂಟೆಯವರೆಗೆ ಉಪ್ಪುಂದ ರಾಜೇಶ್ ಪಡಿಯಾರ್ ಅವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನ.7ರಂದು ಬೆಳಗ್ಗೆ 6ರಿಂದ 7.15 ಗಂಟೆಯವರೆಗೆ ನಂಜನಗೂಡಿನ ಸಪ್ತಸ್ವರ ಸಂಗೀತ ಶಾಲೆಯ ವತಿಯಿಂದ ಸಂಗೀತ ಕಾರ್ಯಕ್ರಮ, ಬೆಳಗ್ಗೆ 7.15 ರಿಂದ 9.30 ಗಂಟೆವರೆಗೆ ವೀಣಾ ಶಾರದಾ ಸಾಂಸ್ಕೃತಿಕ ಕಲಾತಂಡದಿಂದ ಚಲನಚಿತ್ರ ಗೀತೆಗಳು ಹಾಗೂ ನ.8ರಂದು ಬೆಳಗ್ಗೆ 6ರಿಂದ 7.15 ಗಂಟೆಯವರೆಗೆ ವರಲಕ್ಷ್ಮೀ ಸುಗಮ ಸಂಗೀತ ಅವರಿಂದ ಸುಗಮ ಸಂಗೀತ ಮತ್ತು ಬೆಳಗ್ಗೆ 7.15ರಿಂದ 9.30 ಗಂಟೆವರೆಗೆ ನಯನ ಕಲಾನಿಕೇತನ ಸಾಂಸ್ಕೃತಿಕ ಸಂಘದ ವತಿಯಿಂದ ಸಾಮಾಜಿಕ ನಾಟಕವನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇರಳ, ಪಂಜಾಬ್, ಉತ್ತರ ಪ್ರದೇಶ ಉಪಚುನಾವಣೆ ನ.20ಕ್ಕೆ ಮುಂದೂಡಿಕೆ



ನವದೆಹಲಿ: ಹಬ್ಬಗಳ ಕಾರಣದಿಂದ ನ.13ಕ್ಕೆ ನಿಗದಿಯಾಗಿದ್ದ ಕೇರಳ, ಪಂಜಾಬ್ ಮತ್ತು ಉತ್ತರ ಪ್ರದೇಶ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯನ್ನು ಕೇಂದ್ರ ಚುನಾವಣಾ ಆಯೋಗ ನವೆಂಬರ್ 20ಕ್ಕೆ ಮರು ನಿಗದಿಪಡಿಸಿದೆ.

ಕೆಲವು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣಾ ದಿನಾಂಕ ಬದಲಾವಣೆಗಾಗಿ ವಿವಿಧ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ಪ್ರಾದೇಶಿಕ ರಾಜಕೀಯ ಪಕ್ಷಗಳು (ಬಿಜೆಪಿ, ಐಎನ್‌ಸಿ, ಬಿಎಸ್‌ಪಿ, ಆರ್‌ಎಲ್‌ಡಿ ಸೇರಿದಂತೆ) ಮತ್ತು ಕೆಲವು ಸಾಮಾಜಿಕ ಸಂಸ್ಥೆಗಳು ಆಯೋಗಕ್ಕೆ ಮನವಿ ಮಾಡಿದ್ದವು. ನ.13ರಂದು ಉಪ–ಚುನಾವಣೆ ನಡೆಯುವ ದಿನದಂದು ದೊಡ್ಡ ಪ್ರಮಾಣದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಧಾರ್ಮಿಕ ಹಬ್ಬಗಳು ಇರುವುದನ್ನು ಪರಿಗಣಿಸಿ ಮತ್ತು ಇದು ಹೆಚ್ಚಿನ ಸಂಖ್ಯೆಯ ಜನರಿಗೆ ಅನಾನುಕೂಲತೆಯನ್ನು ಉಂಟು ಮಾಡಬಹುದು ಮತ್ತು ಮತದಾನದ ಸಮಯದಲ್ಲಿ ಕಡಿಮೆ ಮತದಾರರ ಭಾಗವಹಿಸುವಿಕೆಗೆ ಕಾರಣವಾಗಬಹುದು ಎಂಬ ಉದ್ದೇಶದಿಂದ ಉಪ ಚುನಾವಣೆಯನ್ನು ನ.20ಕ್ಕೆ ಮುಂದೂಡಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ಉತ್ತರ ಪ್ರದೇಶದಲ್ಲಿ ಒಂಬತ್ತು, ಪಂಜಾಬ್‌ನಲ್ಲಿ ನಾಲ್ಕು ಮತ್ತು ಕೇರಳದಲ್ಲಿ ಒಂದು ಸ್ಥಾನಕ್ಕೆ ಚುನಾವಣೆ ನಡೆಯುತ್ತಿದೆ. ಕಾಂಗ್ರೆಸ್, ಬಿಜೆಪಿ, ಬಿಎಸ್‌ಪಿ ಮತ್ತು ಆರ್‌ಎಲ್‌ಡಿ ಸೇರಿದಂತೆ ಹಲವು ಪಕ್ಷಗಳು ವಿವಿಧ ಹಬ್ಬಗಳ ದೃಷ್ಟಿಯಿಂದ ಚುನಾವಣೆಯನ್ನು ಮರು ನಿಗದಿಪಡಿಸುವಂತೆ ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದವು.

ಕಾಂಗ್ರೆಸ್ ಪ್ರಕಾರ, ಕೇರಳದ ಪಾಲಕ್ಕಾಡ್ ವಿಧಾನಸಭಾ ಕ್ಷೇತ್ರದ ಮತದಾರರಲ್ಲಿ ಬಹುತೇಕರು ನವೆಂಬರ್ 13 ರಿಂದ 15 ರವರೆಗೆ ಕಲ್ಪಾತಿ ರಸ್ತೋಲ್ಸವಂ ಹಬ್ಬವನ್ನು ಆಚರಿಸುತ್ತಾರೆ.

ಪಂಜಾಬ್‌ನಲ್ಲಿ, ಶ್ರೀ ಗುರುನಾನಕ್ ದೇವ್ ಅವರ 555ನೇ ಪ್ರಕಾಶ್ ಪರ್ವ್ ಅನ್ನು ನವೆಂಬರ್ 15ರಂದು ಆಚರಿಸಲಾಗುತ್ತಿದೆ ಮತ್ತು ನವೆಂಬರ್ 13ರಿಂದ 'ಅಖಂಡ ಪಥ'ವನ್ನು ಆಯೋಜಿಸಲಾಗುವುದು ಎಂದು ಕಾಂಗ್ರೆಸ್ ತಿಳಿಸಿದೆ.

ಉತ್ತರ ಪ್ರದೇಶದಲ್ಲಿ ನವೆಂಬರ್ 15 ರಂದು ಕಾರ್ತಿಕ ಪೂರ್ಣಿಮೆಗೆ ಮುಂಚಿತವಾಗಿ ಜನ ಮೂರು–ನಾಲ್ಕು ದಿನಗಳ ಕಾಲ ಪ್ರಯಾಣಿಸುತ್ತಾರೆ ಎಂದು ಬಿಜೆಪಿ, ಬಿಎಸ್‌ಪಿ ಮತ್ತು ಆರ್‌ಎಲ್‌ಡಿ ಹೇಳಿವೆ.

ನ.14ರಿಂದ ಕೃಷಿ ಮೇಳ



ಮೈಸೂರು,ನ.4– ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರು ವತಿಯಿಂದ ವಿವಿಧ ಅಭಿವೃದ್ಧಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನ.14ರಿಂದ 17ರವರೆಗೆ ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಈ ಕೃಷಿ ಮೇಳದಲ್ಲಿ ರೈತರ ಸಮಸ್ಯೆಗಳಿಗೆ ತಜ್ಞರಿಂದ ಸಲಹೆ ಹಾಗೂ ರೈತರಿಂದ ರೈತರಿಗಾಗಿ ಚರ್ಚಾಗೋಷ್ಠಿ, ಕೃಷಿ ಪರಿಕರಗಳ ಹಾಗೂ ಪ್ರಕಟಣೆಗಳ ಮಾರಾಟ ವ್ಯವಸ್ಥೆ ಮಾಡಲಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಮೈಸೂರು ಜಿಲ್ಲೆಯ ರೈತರಿಗೆ ನ.15ರಂದು ನಿಗದಿಪಡಿಸಲಾಗಿದೆ ಎಂದು ನಾಗನಹಳ್ಳಿ ವಿಸ್ತರಣಾ ಶಿಕ್ಷಣ ಘಟಕದ ಮುಖ್ಯಸ್ಥರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುತ್ತೂರಲ್ಲಿ ರಾಸುಗಳಿಗೆ ಕಾಲುಬಾಯಿ ಜ್ವರ ಲಸಿಕೆ



ಸುತ್ತೂರು ಸೇರಿದಂತೆ ಹಲವು ಗ್ರಾಮಗಳಲ್ಲಿ ರಾಸುಗಳಿಗೆ ಕಾಲುಬಾಯಿ ಜ್ವರ ಲಸಿಕೆ ನೀಡಲಾಯಿತು.

ಸುತ್ತೂರು, ನ.4–ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಜಿಲ್ಲಾ ಪಂಚಾಯತ್ ಮೈಸೂರು, ತಾಲೂಕು ಪಂಚಾಯತ್ ನಂಜನಗೂಡು, ಪಶು ಚಿಕಿತ್ಸಾಲಯ ಸುತ್ತೂರು ವತಿಯಿಂದ ರಾಷ್ಟ್ರೀಯ ರೋಗ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ 6ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಪಶು ಚಿಕಿತ್ಸಾಲಯದ ವ್ಯಾಪ್ತಿಗೆ ಒಳಪಡುವ 9 ಗ್ರಾಮಗಳಲ್ಲಿ ಸುಮಾರು 2200 ದನ, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ರೈತರ ಮನೆ ಬಾಗಿಲಿಗೆ ತೆರಳಿ ರಾಸುಗಳಿಗೆ ಓಲೆಯನ್ನು ಅಳವಡಿಸಿ, ಲಸಿಕೆಯನ್ನು ಹಾಕಲಾಯಿತು. ಈ ವೇಳೆ ಪಶು ವೈದ್ಯಾಧಿಕಾರಿ ಡಾ.ನಿಖಿತ್ ಮಾತನಾಡಿ, ಕಾಲು ಬಾಯಿ ರೋಗ ಲಸಿಕೆ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಿ ರೈತರು ಇಲಾಖೆಯೊಂದಿಗೆ ಸಹಕರಿಸಿ ತಮ್ಮ ರಾಸುಗಳಿಗೆ ಲಸಿಕೆ ಹಾಕಿಸಬೇಕೆಂದು ತಿಳಿಸಿದರು.

ಈ ವೇಳೆ ಪಶು ವೈದ್ಯಕೀಯ ಪರೀಕ್ಷಕ ಮೋಹನ್, ಸುತ್ತೂರು ಗ್ರಾಮ ಪಂಚಾಯಿತಿ ಪಶುಸಖಿ ಸೌಮ್ಯ, ಗ್ರಾಮದ ಮುಖಂಡರು, ಗ್ರಾಮಸ್ಥರು ಹಾಜರಿದ್ದರು.

ಗಾಳಿಪಟಕ್ಕೆ ಬಳಸುವ ಗಾಜಿನ ಪುಡಿಸಹಿತ 'ಮಾಂಜಾದಾರ' ನಿಷೇಧ



ಬೆಂಗಳೂರು: ಉತ್ತರ ಭಾರತದಲ್ಲಿ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವ ಗಾಳಿಪಟಕ್ಕೆ ಬಳಸುವ 'ಮಾಂಜಾದಾರ'ದ ಕುರಿತು ಕರ್ನಾಟಕ ಸರ್ಕಾರ ಮಹತ್ವದ ನಿರ್ಣಯ ಕೈಗೊಂಡಿದೆ. ಪ್ರಾಣಿಪ್ರಿಯರ ಸಲಹೆಗಳನ್ನು ಸ್ವೀಕರಿಸಿ, ಮಾನವರು, ಪಕ್ಷಿಗಳು ಮತ್ತು ಪರಿಸರಕ್ಕೆ ಹಾನಿಯನ್ನು ತಡೆಯಲು ಗಾಳಿಪಟ ಹಾರಿಸಲು ಬಳಸುವ ಲೋಹ ಅಥವಾ ಗಾಜಿನ ಲೇಪಿತ ದಾರ ಅಥವಾ ಮಾಂಜಾದಾರ ಬಳಸುವುದನ್ನು ಕರ್ನಾಟಕ ಸರ್ಕಾರ ನಿಷೇಧಿಸಿದೆ ಎಂದು ಸೋಮವಾರ ಪ್ರಕಟಣೆ ತಿಳಿಸಿದೆ.

ಪರಿಸರ (ಸಂರಕ್ಷಣೆ) ಕಾಯಿದೆ (ಇಪಿಎ), 1986 ರ ಸೆಕ್ಷನ್ 5 ರ ಅಡಿಯಲ್ಲಿ ಸರ್ಕಾರವು ತನ್ನ ಅಧಿಸೂಚನೆಗೆ ತಿದ್ದುಪಡಿಯನ್ನು ತಂದು ಆದೇಶ ಹೊರಡಿಸಿದ್ದು, ಯಾವುದೇ ಚೂಪಾದ, ಲೋಹೀಯ ಅಥವಾ ಗಾಜಿನ ಪುಡಿ, ಅಂಟುಗಳು ಅಥವಾ ಇತರ ಯಾವುದೇ ವಸ್ತುಗಳು ಅಂದರೆ ದಾರವನ್ನು ಬಲಪಡಿಸುವ ಸಾಮಗ್ರಿ ಲೇಪಿತ ಮಾಂಜಾದಾರವನ್ನು ನಿಷೇಧಿಸಲಾಗಿದೆ. ಗಾಜಿನಪುಡಿ ಅಥವಾ ಲೋಹೀಯ ಘಟಕ ರಹಿತ ದಾರವನ್ನು ಮಾತ್ರ ಗಾಳಿಪಟ ಹಾರಿಸಲು ಅನುಮತಿಸಲಾಗಿದೆ. ಈ ಹಿಂದೆ ನೈಲಾನ್ "ಚೈನೀಸ್" ಮಾಂಜಾಗೆ ಮಾತ್ರ ಸೀಮಿತವಾಗಿದ್ದ ನಿಷೇಧವನ್ನು ಗಾಜಿನ ಅಥವಾ ಲೋಹದ ಪುಡಿಲೇಪಿತ ದಾರಗಳಿಗೂ ನಿಷೇಧ ಅನ್ವಯಿಸಲು ಸರ್ಕಾರ ಅಧಿಸೂಚನೆ ಮೂಲಕ ತಿಳಿಸಿದೆ.

ನಿಷೇಧ ಸ್ವಾಗತಿಸಿದ ಪೇಟಾ: ಗಾಜಿನ ಪುಡಿ ಲೇಪಿತ ಮಾಂಜಾದಾರ ನಿಷೇಧವನ್ನು ಪೀಪಲ್ ಫಾರ್ ಎಥಿಕಲ್ ಟ್ರೀಟ್ಮೆಂಟ್ ಆಫ್ ಅನಿಮಲ್ಸ್ (ಪೇಟಾ) ಇಂಡಿಯಾ ಸ್ವಾಗತಿಸಿದ್ದು, ಮಾಂಜಾದಿಂದ ಉಂಟಾದ ಪಕ್ಷಿ ಮತ್ತು ಮಾನವ ಸಾವುಗಳ ತಡೆಯಲು ತಾವು ಮಾಡಿದ್ದ ಮನವಿಯನ್ನು ಅನುಸರಿಸಿ ಕರ್ನಾಟಕ ಸರ್ಕಾರವು ತಿದ್ದುಪಡಿ ಮಾಡಿದೆ ಎಂದು ಹೇಳಿದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಪೇಟಾ ಇಂಡಿಯಾದ ಹಿರಿಯ ವಕೀಲ ಫರ್ಹತ್ ಉಲ್ ಐನ್, ನೈಲಾನ್ ಮಾಂಜಾ ಜೊತೆಗೆ ಗಾಜು ಮತ್ತು ಲೋಹದಿಂದ ಬಲಪಡಿಸಲಾದ ಗಾಳಿಪಟದ ದಾರಗಳಿಂದ ಉಂಟಾಗುವ ಅಪಾಯಗಳನ್ನು ಪರಿಹರಿಸಲು ಕರ್ನಾಟಕ ಸರ್ಕಾರವನ್ನು ನಾವು ಪ್ರಶಂಸಿಸುತ್ತೇವೆ ಎಂದು ಹೇಳಿದರು.

ಅಲ್ಲದೆ ಈ ನಿರ್ಣಾಯಕ ಕ್ರಮವು ಅಸಂಖ್ಯಾತ ಮಾನವರು ಮತ್ತು ಪ್ರಾಣಿಗಳನ್ನು ಉಳಿಸುತ್ತದೆ, ವಿಮರ್ಶಾತ್ಮಕವಾಗಿ ಅಳಿವಿನಂಚಿನಲ್ಲಿರುವ ರಣಹದ್ದುಗಳು, ಈ ಅಪಾಯಕಾರಿ ಮಾಂಜಾದಾರಗಳಿಂದ ಆಗಾಗ್ಗೆ ಅಂಗವಿಕಲವಾಗುತ್ತವೆ. ಸಾಮಾನ್ಯ ಹತ್ತಿ ಗಾಳಿಪಟದ ದಾರಗಳು ಅಥವಾ ಇತರ ರೀತಿಯ ಮನರಂಜನೆಯನ್ನು ಆರಿಸಿಕೊಳ್ಳುವ ಮೂಲಕ ಪ್ರತಿಯೊಬ್ಬರೂ ಈ ವಿನಾಶಕಾರಿ ಗಾಯಗಳು ಮತ್ತು ದುರಂತ ಸಾವುಗಳನ್ನು ತಡೆಯಲು ಸಹಾಯ ಮಾಡಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಹಿಂದೆ ಚಂಡೀಗಢ, ದೆಹಲಿ, ಗೋವಾ, ಹರಿಯಾಣ, ಹಿಮಾಚಲ ಪ್ರದೇಶ, ಮಹಾರಾಷ್ಟ್ರ, ಪಂಜಾಬ್, ತೆಲಂಗಾಣ ಮತ್ತು ತ್ರಿಪುರ ಸರ್ಕಾರಗಳು ಕೂಡ ಇದೇ ರೀತಿಯ ಅಧಿಸೂಚನೆಗಳನ್ನು ಹೊರಡಿಸಿವೆ.

ದೇಶ – ವಿದೇಶ

ಬಟ್ಟೆ ಬಿಚ್ಚಿ ಪ್ರತಿಭಟಿಸಿದ್ದ ಇರಾನ್ ಮಹಿಳೆ ನಿಗೂಢ ನಾಪತ್ತೆ

ಟೆಹರಾನ್: ಕೂದಲು ಕಾಣುತ್ತಿದೆ ಎಂದು ಥಳಿಸಿದ್ದ ನೈತಿಕ ಪೊಲೀಸರ ವಿರುದ್ಧ ತನ್ನ ಬಟ್ಟೆ ಬಿಚ್ಚಿ ಪ್ರತಿಭಟನೆ ನಡೆಸಿ, ಬಂಧನಕ್ಕೀಡಾಗಿದ್ದ ಇರಾನ್ ಮಹಿಳೆ ಇದೀಗ ನಿಗೂಢವಾಗಿ ನಾಪತ್ತೆಯಾಗಿದ್ದಾರೆ. ಕಳೆದ 2 ದಿನಗಳ ಹಿಂದೆ ಇರಾನ್ ರಾಜಧಾನಿ ಟೆಹ್ರಾನ್‌ನ ಇಸ್ಲಾಮಿಕ್ ಆಜಾದ್ ವಿಶ್ವವಿದ್ಯಾಲಯದ ಆವರಣದಲ್ಲಿ ವಿದ್ಯಾರ್ಥಿನಿಯೊಬ್ಬಳು ತಲೆಗೆ ಸ್ಕಾರ್ಫ್ ಸರಿಯಾಗಿ ಧರಿಸಿಲ್ಲ ಎಂದು ಸ್ಥಳದಲ್ಲಿದ್ದ ನೈತಿಕ ಪೊಲೀಸರು ಆಕೆ ಮೇಲೆ ಹಲ್ಲೆ ಮಾಡಿದ್ದರು. ಈ ವೇಳೆ ಆಕೆಯ ಹಣೆಗೆ ಬಲವಾದ ಪೆಟ್ಟು ಬಿದ್ದಿದ್ದು, ಇದರಿಂದ ಆಕ್ರೋಶಗೊಂಡ ಆಕೆ ನೋಡ ನೋಡುತ್ತಲೇ ಘೋಷಣೆಗಳನ್ನು ಕೂಗುತ್ತಾ ತಾನು ಧರಿಸಿದ್ದ ಬಟ್ಟೆಗಳನ್ನು ಬಿಚ್ಚಿ ಪ್ರತಿಭಟನೆ ನಡೆಸಿದ್ದಳು. ಅಲ್ಲದೆ ಅರೆನಗ್ನಾವಸ್ಥೆಯಲ್ಲೇ ಅಲ್ಲಿ ತಿರುಗಾಡಿದ್ದಳು. ಬಳಿಕ ಆಕೆಯನ್ನು ನೈತಿಕ ಪೊಲೀಸರು ಥಳಿಸಿ ಬಂಧಿಸಿದ್ದರು. ಇದೀಗ ಈ ಮಹಿಳೆ ನಿಗೂಢ ನಾಪತ್ತೆಯಾಗಿದ್ದಾರೆ ಎಂದು ತಿಳಿದುಬಂದಿದೆ. ಮಹಿಳೆ ಬಂಧನದ ಬಳಿಕ ಆಕೆ ಎಲ್ಲಿದ್ದಾಳೆ ಎಂದು ಪತ್ತೆಯಾಗಿಲ್ಲ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆ ನಡೆಯುತ್ತಿದ್ದು, ಆಕೆಯನ್ನು ಬಂಧಿಸಿದ್ದ ನೈತಿಕ ಪೊಲೀಸರು ರಹಸ್ಯ ಸ್ಥಳಕ್ಕೆ ಕರೆದೊಯ್ದು ಚಿತ್ರಹಿಂಸೆ ನೀಡುತ್ತಿದ್ದಾರೆ ಎಂದು ಕೆಲ ನೆಟ್ಟಿಗರು ಕಿಡಿಕಾರಿದ್ದಾರೆ.

ಪ್ರಪಾತಕ್ಕೆ ಉರುಳಿದ ಬಸ್: 23 ಮಂದಿ ಸಾವು



ಅಲ್ಮೋರಾ/ಡೆಹ್ರಾಡೂನ್: ಸೋಮವಾರ ಬೆಳಗ್ಗೆ ಅಲ್ಮೋರಾ ಜಿಲ್ಲೆಯ ಮಾರ್ಚುಲಾ ಬಳಿ 35–40 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಪ್ರಪಾತಕ್ಕೆ ಉರುಳಿದೆ. ಬಸ್‌ನಲ್ಲಿದ್ದ ಸುಮಾರು 23ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದಾರೆ. ಕನಿಷ್ಠ ಐವರು ನಾಪತ್ತೆಯಾಗಿದ್ದಾರೆ ಮತ್ತು 10 ಮಂದಿ ಗಾಯಗೊಂಡಿದ್ದಾರೆ.

ಅಲ್ಮೋರಾದ ವಿಪತ್ತು ನಿರ್ವಹಣಾ ಅಧಿಕಾರಿ, ವಿನೀತ್ ಪಾಲ್ ಮಾಧ್ಯಮಗಳ ಜೊತೆ ಮಾತನಾಡಿ, ಈ ದುರಂತದಲ್ಲಿ ಕನಿಷ್ಠ 20 ಜನರು ಸಾವಿಗೀಡಾಗಿರುವ ಸಾಧ್ಯತೆ ಇದೆ. ಹಲವರು ಗಾಯಗೊಂಡಿದ್ದಾರೆ. ಅವರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಕರೆದೊಯ್ಯಲಾಗಿದೆ. ಅವಶೇಷಗಳಲ್ಲಿ ಇನ್ನೂ ಸಿಲುಕಿರುವ ಪ್ರಯಾಣಿಕರನ್ನು ಪತ್ತೆಹಚ್ಚಲು ಸ್ಥಳೀಯ ಗ್ರಾಮಸ್ಥರು ರಕ್ಷಣಾ ಕಾರ್ಯಕರ್ತರಿಗೆ ಸಹಾಯ ಮಾಡುತ್ತಿದ್ದಾರೆ. ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗಬಹುದು ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಪೌರಿ ಗರ್ವಾಲ್ ಜಿಲ್ಲೆಯ ನೈನಿ ದಂಡಾದಿಂದ ನೈನಿತಾಲ್ ಜಿಲ್ಲೆಯ ರಾಮನಗರಕ್ಕೆ ತೆರಳುತ್ತಿದ್ದ ಬಸ್ ಸರದ್ ಬೆಂಡ್ ಬಳಿ ನಿಯಂತ್ರಣ ಕಳೆದುಕೊಂಡು ಗೀತ್ ಜಾಗೀರ್ ನದಿಯ ದಡದ ಕಮರಿಗೆ ಉರುಳಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇಂಡೋನೇಷ್ಯಾದಲ್ಲಿ ಜ್ವಾಲಾಮುಖಿ ಸ್ಫೋಟ; ಕನಿಷ್ಠ 9 ಮಂದಿ ಸಾವು



ಜಕಾರ್ತ: ಇಂಡೋನೇಷ್ಯಾದಲ್ಲಿ ಮತ್ತೊಂದು ಜ್ವಾಲಾಮುಖಿ ಸ್ಫೋಟಗೊಂಡಿದ್ದು, ಪರಿಣಾಮ 9 ಮಂದಿ ಸಾವಿಗೀಡಾಗಿ ಒಂದಿಡೀ ಅರಣ್ಯ ಪ್ರದೇಶ ಸುಟ್ಟುಕರಕಲಾಗಿದೆ ಎಂದು ತಿಳಿದುಬಂದಿದೆ. ಇಂಡೋನೇಷ್ಯಾದ ಫ್ಲೋರ್ಸ್ ದ್ವೀಪದಲ್ಲಿ ಜ್ವಾಲಾಮುಖಿ ಸ್ಫೋಟ ತೀವ್ರಗೊಂಡಿದ್ದು, ಇಲ್ಲಿನ ಅರಣ್ಯ ಪ್ರದೇಶವೂ ಸೇರಿದಂತೆ ಹಲವು ಮನೆಗಳು ಭಸ್ಮವಾಗಿವೆ. ಈ ಜ್ವಾಲಾಮುಖಿಯಿಂದ ಸಂಭವಿಸಿದ ವಿವಿಧ ಅವಘಡಗಳಲ್ಲಿ ಈವರೆಗೂ ಕನಿಷ್ಠ 9 ಮಂದಿ ಸಾವಿಗೀಡಾಗಿದ್ದಾರೆ ಎಂದು ಇಂಡೋನೇಷ್ಯಾದ ವಿಪತ್ತು ನಿರ್ವಹಣಾ ಸಂಸ್ಥೆ ತಿಳಿಸಿದೆ. ಕಳೆದೊಂದು ವಾರದಿಂದ ಇಂಡೋನೇಷ್ಯಾದ ಮೌಂಟ್ ಲೆವೊಟೊಬಿ ಲಕಿ ಲಕಿ ಜ್ವಾಲಾಮುಖಿ ಉಕ್ಕಿ ಹರಿಯುತ್ತಿದ್ದು, ಸಮೀಪದ ಒಂದಿಡೀ ಅರಣ್ಯ ಪ್ರದೇಶ ಸುಟ್ಟು ಕರಕಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಅಧಿಕಾರಿಗಳು ಸ್ಥಳೀಯರಿಗೆ ಎಚ್ಚರಿಕೆ ನೀಡಿದ್ದಾರೆ. ಅಲ್ಲದೆ, ಅಪಾಯದ ವಲಯ (ಡೇಂಜರ್ ಝೋನ್) ವನ್ನು ವಿಸ್ತರಿಸಲಾಗಿದೆ. ದೇಶದ ಜ್ವಾಲಾಮುಖಿ ಏಜೆನ್ಸಿಯು ಜ್ವಾಲಾಮುಖಿಯ ಅಲರ್ಟ್ ಘೋಷಿಸಿದೆ. ಮಧ್ಯರಾತ್ರಿ ನಂತರ ಆಗಾಗ್ಗೆ ಸ್ಫೋಟಗಳು ಸಂಭವಿಸಿರುವುದರಿಂದ ಅಪಾಯದ ವಲಯವನ್ನು 7–ಕಿ.ಮೀಗೆ (4.3–ಮೈಲಿ) ವಿಸ್ತರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೆನಡಾದ ಹಿಂದೂ ದೇವಸ್ಥಾನದಲ್ಲಿ ಭಕ್ತರ ಮೇಲೆ ಖಲಿಸ್ತಾನಿಗಳ ದಾಳಿ



ಟೊರಾಂಟೊ: ಕೆನಡಾದಲ್ಲಿ ಖಲಿಸ್ತಾನಿ ಉಗ್ರರಿಗೆ ಜಸ್ಟಿನ್ ಟ್ರುಡೊ ನೇತೃತ್ವದ ಸರ್ಕಾರ ಬೆಂಬಲ ನೀಡುತ್ತಿದೆ ಎಂಬ ಭಾರತದ ಆರೋಪದ ನಡುವೆಯೇ ಖಲಿಸ್ತಾನಿ ಕಿಡಿಗೇಡಿಗಳು ಬ್ರಾಂಪ್ಟನ್‌ನಲ್ಲಿರುವ ದೇವಸ್ಥಾನವೊಂದರಲ್ಲಿ ಹಿಂದೂ–ಕೆನಡಿಗರ ಮೇಲೆ ದಾಳಿ ನಡೆಸಿದ್ದಾರೆ. ಖಲಿಸ್ತಾನಿಗಳ ದುಷ್ಕೃತ್ಯದ ವಿಡಿಯೋ ವೈರಲ್ ಆಗಿದ್ದು, ಇದನ್ನು ಜಸ್ಟಿನ್ ಟ್ರುಡೊ ಖಂಡಿಸಿದ್ದಾರೆ. ಈ ಘಟನೆಗೆ ಭಾರತ ಕಟುವಾಗಿ ಪ್ರತಿಕ್ರಿಯೆ ನೀಡಿದೆ. ಈ ವಿಡಿಯೋ ಹಂಚಿಕೊಂಡಿರುವ ಕರ್ನಾಟಕ ಮೂಲದ ಕೆನಡಾ ಸಂಸದ ಚಂದ್ರ ಆರ್ಯ, ಇಂದು ಕೆನಡಿಯನ್ ಖಲಿಸ್ತಾನಿಗಳು ತಮ್ಮ ಎಲ್ಲೆ ಮೀರಿದ್ದಾರೆ. ಬ್ರಾಂಪ್ಟನ್‌ನಲ್ಲಿನ ಹಿಂದೂ ಸಭಾ ದೇವಸ್ಥಾನದ ಆವರಣದ ಒಳಗೆ ಹಿಂದೂ ಕೆನಡಿಯನ್ ಭಕ್ತರ ಮೇಲಿನ ಖಲಿಸ್ತಾನಿಗಳ ದಾಳಿಯು ಕೆನಡಾದಲ್ಲಿ ಖಲಿಸ್ತಾನಿ ಹಿಂಸಾ ಉಗ್ರವಾದವು ಎಷ್ಟು ಆಳವಾಗಿದೆ ಹಾಗೂ ಮಿತಿ ಮೀರಿದೆ ಎಂಬುದನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ. ಅಭಿವ್ಯಕ್ತಿ ಸ್ವಾತಂತ್ರ್ಯದಡಿ ಖಲಿಸ್ತಾನ ಉಗ್ರರು ಕೆನಡಾದಲ್ಲಿ ಫ್ರೀ ಪಾಸ್ ಪಡೆದುಕೊಳ್ಳುತ್ತಿರುವುದರಲ್ಲಿ ಯಾವ ಅಚ್ಚರಿ ಇಲ್ಲ.

ವಾಯುಮಾಲಿನ್ಯದಿಂದ ಜಗತ್ತಿನ ಅತಿ ಕಲುಷಿತ ನಗರವಾದ ಲಾಹೋರ್; ಭಾರತವೇ ಕಾರಣವೆಂದ ಪಾಕ್

ಲಾಹೋರ್: ಪಾಕಿಸ್ತಾನದ 2ನೇ ಅತಿದೊಡ್ಡ ನಗರವಾದ ಲಾಹೋರ್ ಭಾನುವಾರ (ನ.3) ದಟ್ಟವಾದ ಹೊಗೆಯಿಂದ ಆವೃತವಾಗಿತ್ತು. ವಾಯು ಗುಣಮಟ್ಟ ಸೂಚ್ಯಂಕವು 1,067ಕ್ಕೆ ತಲುಪಿತ್ತು. ಇದೀಗ, ವಾಯುಮಾಲಿನ್ಯದ ಮಟ್ಟದ ಹಠಾತ್ ಹೆಚ್ಚಳಕ್ಕೆ ಪಾಕಿಸ್ತಾನದ ಸಚಿವರು ಭಾರತವನ್ನು ದೂಷಿಸಲು ಪ್ರಾರಂಭಿಸಿದ್ದಾರೆ. ಹಿರಿಯ ಸಚಿವ ಮರಿಯುಮ್ ಔರಂಗಜೇಬ್ ಭಾರತದಿಂದ ಪಾಕಿಸ್ತಾನಕ್ಕೆ ಬರುತ್ತಿರುವ ಹೊಗೆಯ ಬಗ್ಗೆ ತಮ್ಮ ದೇಶದ ಜನರಿಗೆ ಎಚ್ಚರಿಕೆ ನೀಡಿದ್ದಾರೆ. ಇನ್ನೂ ಕನಿಷ್ಠ ಒಂದು ವಾರದವರೆಗೆ ಗಾಳಿಯು ಲಾಹೋರ್ ಕಡೆಗೆ ಬೀಸಲಿದೆ ಎಂದು ಹೇಳಿದ್ದಾರೆ. ನಾಗರಿಕರು ಮನೆಯೊಳಗೆ ಇರಲು, ಬಾಗಿಲು ಮತ್ತು ಕಿಟಕಿಗಳನ್ನು ಮುಚ್ಚಿ ಮತ್ತು ಅನಗತ್ಯ ಪ್ರಯಾಣವನ್ನು ತಪ್ಪಿಸಲು ಸೂಚಿಸಲಾಗಿದೆ. ಆಸ್ಪತ್ರೆಗಳಿಗೆ ಸ್ಮಾಗ್ ಕೌಂಟರ್‌ಗಳನ್ನು ನೀಡಲಾಗಿದೆ. ವಾಹನ ಮಾಲಿನ್ಯವನ್ನು ಕಡಿಮೆ ಮಾಡಲು, 50% ಕಚೇರಿ ನೌಕರರು ಮನೆಯಿಂದಲೇ ಕೆಲಸ ಮಾಡಲಿದ್ದಾರೆ. ಅಮೃತಸರ ಮತ್ತು ಚಂಡೀಗಢದಿಂದ ಪೂರ್ವ ದಿಕ್ಕಿನ ಮಾರುತಗಳು ಲಾಹೋರ್‌ನಲ್ಲಿ ಕಳೆದ 2 ದಿನಗಳಿಂದ ವಾಯು ಗುಣಮಟ್ಟದ ಸೂಚ್ಯಂಕವನ್ನು 1,000ಕ್ಕೆ ಹೆಚ್ಚಿಸುತ್ತಿವೆ. ಪಂಜಾಬ್ ಪ್ರಾಂತ್ಯದ ಸರ್ಕಾರವು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕೆಂದು ಹೇಳಿದೆ.

ಪ್ರತಿ ಹೋಬಳಿಯಲ್ಲೂ ಕಾಫಿ ಕೃಷಿಕ ಗುಂಪು ಆರಂಭ

ಭಾರತೀಯ ಕಾಫಿ ಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಗದೀಶ್ ಮಾಹಿತಿ



ಮಡಿಕೇರಿಯಲ್ಲಿ ನಡೆದ ಕೂರ್ಗ್ ಪ್ಲಾಂಟರ್ಸ್ ಅಸೋಸಿಯೇಷನ್ ವಾರ್ಷಿಕ ಸಭೆಯನ್ನು ಭಾರತೀಯ ಕಾಫಿ ಮಂಡಳಿಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಜಿ.ಜಗದೀಶ್ ಉದ್ಘಾಟಿಸಿದರು.

ಮಡಿಕೇರಿ, ನ.4–ಹೋಬಳಿ ಮಟ್ಟದಲ್ಲಿ ಸಮುದಾಯ ಕೃಷಿಕ ಗುಂಪುಗಳನ್ನು ಪ್ರಾರಂಭಿಸುವ ಮೂಲಕ ಆಯಾ ವಲಯಗಳ ಕಾಫಿ ಗುಣಮಟ್ಟದ ಬಗ್ಗೆ ಮಾಹಿತಿ ಪಡೆದು ಮತ್ತಷ್ಟು ಗುಣಮಟ್ಟ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳುವ ವಿನೂತನ ಯೋಜನೆ ಭಾರತೀಯ ಕಾಫಿ ಮಂಡಳಿ ಮುಂದಿದೆ ಎಂದು ಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯದರ್ಶಿ ಡಾ.ಕೆ.ಜಿ.ಜಗದೀಶ್ ಹೇಳಿದರು.

ನಗರದಲ್ಲಿ ನಡೆದ ಕೂರ್ಗ್ ಪ್ಲಾಂಟರ್ಸ್ ಅಸೋಸಿಯೇಷನ್‌ನ 145ನೇ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಕಾಫಿ ಬೆಳೆ ಗುಣಮಟ್ಟಕ್ಕೆ ಆದ್ಯತೆ ನೀಡಿದಾಗ ಭಾರತೀಯ ಕಾಫಿ ಬೆಳೆಗೆ ಎಂದಿಗೂ ಹಿನ್ನಡೆಯಾಗಲಾರದು. ಈ ನಿಟ್ಟಿನಲ್ಲಿ ಕಾಫಿ ಗುಣಮಟ್ಟ ಕಾಪಾಡುವ ದೃಷ್ಟಿಯಿಂದ ಪ್ರತಿ ಹೋಬಳಿಯಲ್ಲೂ 100 ಕೃಷಿಕರನ್ನೊಳಗೊಂಡ ಸಮುದಾಯ ಗುಂಪು ಪ್ರಾರಂಭಿಸಲಾಗುವುದು ಎಂದರು.

ಕಾಫಿ ಸಂಗ್ರಹಿಸಿ ಅದರ ಗುಣಮಟ್ಟದ ಬಗ್ಗೆ ಪ್ರಯೋಗಾಲಯದಿಂದ ಮಾಹಿತಿ ಪಡೆಯಲಾಗುತ್ತದೆ. ಯಾವ ರೀತಿ ಗುಣಮಟ್ಟ ಹೆಚ್ಚಳ ಮಾಡಬಹುದು ಎಂಬ ಬಗ್ಗೆ ಕಾಫಿ ಮಂಡಳಿಯಿಂದ ಸೂಕ್ತ ಮಾಹಿತಿಯನ್ನು ತಜ್ಞರು ಕೃಷಿಕರಿಗೆ ನೀಡಲಿದ್ದಾರೆ. ಈ ಯೋಜನೆಯಿಂದ ಪ್ರತಿ ಗ್ರಾಮದ ಕಾಫಿ ಕೃಷಿಕರಿಗೆ ಗುಣಮಟ್ಟ ಹೆಚ್ಚಳ ಕಾಪಾಡಿಕೊಳ್ಳಲು ಸಾಧ್ಯ, ಜೊತೆಗೆ ಉತ್ತಮ ಬೆಲೆಯನ್ನು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪಡೆಯಬಹುದು ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ಭಾರತೀಯ ಕಾಫಿ ಮಂಡಳಿಯಿಂದ ಶೀಘ್ರದಲ್ಲೇ 2 ವರ್ಷಗಳ ಕಾಫಿ ಕೃಷಿ ಡಿಪ್ಲೊಮಾ ಪದವಿ ನೀಡಲಾಗುತ್ತದೆ. ಇದರಿಂದಾಗಿ ಯುವ ಪೀಳಿಗೆಯು ಕಾಫಿ ಕೃಷಿಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಲು ಸಹಕಾರಿಯಾಗಲಿದೆ. ತೋಟ ನಿರ್ವಹಣೆಗೆ ಸೂಕ್ತ ತರಬೇತಿ ಹೊಂದಿದವರ ಕೊರತೆ ಗಮನಿಸಿದ ಕಾಫಿ ಮಂಡಳಿಯು ತೋಟಗಳ ಸೂಪರ್‌ವೈಸರ್‌ಗಳು ಮತ್ತು ವ್ಯವಸ್ಥಾಪಕರಾಗಿ ತರಬೇತಿ ನೀಡುವ ಯೋಜನೆ ಪ್ರಾರಂಭಿಸಲಿದೆ. 10ನೇ ತರಗತಿ ಉತ್ತೀರ್ಣರಾದವರು ತರಬೇತಿ ಪಡೆಯುವ ಮೂಲಕ ಕಾಫಿ ತೋಟಗಳಲ್ಲಿ ಉದ್ಯೋಗ ಪಡೆಯಲು ಸಾಧ್ಯವಾಗಲಿದೆ ಎಂದು ಮಾಹಿತಿ ನೀಡಿದರು.

ಹೆಚ್ಚುತ್ತಿರುವ ಕಾಫಿ ಕೆಫೆಗಳಿಗೆ ಸೂಕ್ತ ಸಿಬ್ಬಂದಿ ಅಗತ್ಯತೆಯನ್ನು ಮನಗಂಡು ಮಹಿಳೆಯರು, ಮಕ್ಕಳು ಸೇರಿದಂತೆ ಆಸಕ್ತಿಯುಳ್ಳವರಿಗೆ ಕೆಫೆ ಬರಿಸ್ಟಾ (ಕೆಫೆ ನಿರ್ವಾಹಕರು) ತರಬೇತಿ ನೀಡುವ ಯೋಜನೆ ಮಂಡಳಿ ಮುಂದಿದೆ. ಈ ಮೂಲಕ ಕಾಫಿ ತೋಟಗಳಿಗೆ ಬರುವ ಸಂದರ್ಶಕರು, ಪ್ರವಾಸಿಗರಿಗೂ ಗುಣಮಟ್ಟದ ಸ್ವಾದಿಷ್ಟ ಕಾಫಿ ತಯಾರಿಸಿ ನೀಡಬಹುದು ಎಂದು ತಿಳಿಸಿದರು.

ಟಾಟಾ ಕಾಫಿ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಪಿ.ಎ.ಮಂದಣ್ಣ ಮಾತನಾಡಿ, ಸುಸ್ಥಿರ ಕಾಫಿ ಬೆಳೆಯತ್ತ ಪ್ರತಿ ಬೆಳೆಗಾರರೂ ಆದ್ಯತೆ ನೀಡುವಂತಾಗಬೇಕು. ಪರಿಸರ, ಆರ್ಥಿಕತೆ ಮತ್ತು ಸಾಮಾಜಿಕ ಸೇವೆಯತ್ತಲೂ ಕೃಷಿಕರು ಗಮನ ಹರಿಸಬೇಕು. ಟಾಟಾ ಕಾಫಿ ಸಂಸ್ಥೆಯ ತೋಟಗಳಲ್ಲಿ ಪರಿಸರ ಸ್ನೇಹಿ ಪಲ್ಪರ್‌ಗಳು, ಮಳೆ ಕೊಯ್ಲು ವ್ಯವಸ್ಥೆಯನ್ನು ಸೂಕ್ತ ರೀತಿ ನಿರ್ವಹಿಸಿರುವ ಪರಿಣಾಮ ಮಣ್ಣಿನ ಫಲವತ್ತತೆ ಹೆಚ್ಚಳಕ್ಕೆ ಕಾರಣವಾಗಿದೆ. ಅಂತರಜಲ ಮಟ್ಟದಲ್ಲೂ ಹೆಚ್ಚಳವಾಗಿದೆ ಎಂದು ಮಾಹಿತಿ ನೀಡಿದರು.

ಡಾ.ರಾಜಾ ವಿಜಯ್ ಕುಮಾರ್, ಯುನೈಟೈಡ್ ಕಿಂಗ್ ಡಮ್‌ನ ಕೃಷಿ ಪರಿಣಿತ ಮಾರ್ಕ್ ತ್ರಿಸ್ಸಿ, ಕೆ.ಸುದೀಂದ್ರ ಅವರು ಕಾಫಿ ಕೃಷಿ ಸಂಬಂಧ ವಿವಿಧ ವಿಚಾರಗಳ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಉಪಯುಕ್ತ ಮಾಹಿತಿ ಬೆಳೆಗಾರರಿಗೆ ನೀಡಿದರು. ಅಸೋಸಿಯೇಷನ್ ಕಾರ್ಯದರ್ಶಿ ಸಿ.ಕೆ.ಬೆಳ್ಳಿಯಪ್ಪ, ಉಪಾಧ್ಯಕ್ಷ ಎ.ಚಂಗಪ್ಪ, ಕರ್ನಾಟಕ ಕಾಫಿ ಪ್ಲಾಂಟರ್ಸ್ ಅಸೋಸಿಯೇಷನ್ ಅಧ್ಯಕ್ಷ ಕೆ.ರಾಜೀವ್, ಕಾಫಿ ಮಂಡಳಿ ಮಾಜಿ ಉಪಾಧ್ಯಕ್ಷರಾದ ನಡಿಕೇರಿಯಂಡ ಬೋಸ್ ಮಂದಣ್ಣ, ಬಿ.ಡಿ.ಮಂಜುನಾಥ್, ಮೋಹನ್ ದಾಸ್, ಕೆ.ಪಿ.ಉತ್ತಪ್ಪ, ಕಾಫಿ ಉದ್ಯಮದ ಅನೇಕರು ಹಾಜರಿದ್ದರು. ಇದೇ ಸಂದರ್ಭ ವಿವಿಧ ಕೃಷಿ ಯಂತ್ರೋಪಕರಣ ಪ್ರದರ್ಶನ ಮತ್ತು ಮಾರಾಟ ಆಯೋಜಿಸಲಾಗಿತ್ತು.

> ‘ ಭವಿಷ್ಯದಲ್ಲಿ ಕಾರ್ಮಿಕರ ಸಮಸ್ಯೆ ಮತ್ತಷ್ಟು ಬಿಗಡಾಯಿಸುವ ಹಿನ್ನೆಲೆಯಲ್ಲಿ ಶೇ.60ರಷ್ಟು ತೋಟವನ್ನಾದರೂ ಯಾಂತ್ರೀಕರಣಕ್ಕೆ ಒಳಪಡಿಸುವ ಅನಿವಾರ್ಯತೆ ಕಾಫಿ ಕೃಷಿಕರಿಗಿದೆ. ಇದನ್ನು ಗಂಭೀರವಾಗಿ ಪರಿಗಣಿಸದೆ ಕಾರ್ಮಿಕರನ್ನೇ ನಂಬಿಕೊಂಡರೆ ಸಮಸ್ಯೆಯಾಗಲಿದೆ. ಪ್ರಸ್ತುತ ಶೇ.5ರಷ್ಟಿರುವ ಸ್ಪೆಷಾಲಿಟಿ ಕಾಫಿ ಶೇ.40ರಷ್ಟು ಮಾರುಕಟ್ಟೆ ಪ್ರಮಾಣ ಹೊಂದುವ ಸಾಧ್ಯತೆ ಇದೆ. ಹೀಗಾಗಿ ಸ್ಪೆಷಾಲಿಟಿ ಕಾಫಿಯತ್ತ ಹೆಚ್ಚಿನ ಗಮನ ನೀಡುವುದು ಸೂಕ್ತ.
>
> –ಡಾ.ಕೆ.ಜಿ.ಜಗದೀಶ್, ಸಿಇಓ ಕಾಫಿ ಮಂಡಳಿ

> ‘ ಕಳೆದ 1 ವರ್ಷದಲ್ಲಿ ಅಸೋಸಿಯೇಷನ್ ವತಿಯಿಂದ ಹಲವಾರು ಗಮನಾರ್ಹ ಯೋಜನೆ ಜಾರಿಗೊಳಿಸಲಾಗಿದೆ. ಜಮ್ಮ, ಸಾಗು ಸೇರಿದಂತೆ ಅನೇಕ ಸಮಸ್ಯೆಗಳ ಬಗ್ಗೆ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತಲಾಗಿದೆ. ಬೆಳೆಗಾರರಿಗೆ ಕಾಲದಿಂದ ಕಾಲಕ್ಕೆ ಅಗತ್ಯ ಮಾಹಿತಿ ನೀಡಿದ ಕೀರ್ತಿ ಸಂಸ್ಥೆಗೆ ಸಲ್ಲುತ್ತದೆ.
>
> –ಎ.ನಂದ ಬೆಳ್ಯಪ್ಪ, ಕೂರ್ಗ್ ಪ್ಲಾಂಟರ್ಸ್ ಅಸೋಸಿಯೇಷನ್ ಅಧ್ಯಕ್ಷ

ಮಡಿಕೇರಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ



ಸರ್ಕಾರ ವಕ್ಫ್ ಮಂಡಳಿ ಮೂಲಕ ಬಡವವರ ಜಾಗ ಕಬಳಿಸಲು ಮುಂದಾಗಿದೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿದರು.

ಮಡಿಕೇರಿ, ನ.4–ರಾಜ್ಯ ಕಾಂಗ್ರೆಸ್ ಸರ್ಕಾರ ‘ವಕ್ಫ್’ ಮಂಡಳಿ ಬಳಸಿಕೊಂಡು ರಾಜ್ಯ ವ್ಯಾಪಿ ಬಡವರ್ಗದ ಜಾಗ ಕಬಳಿಸಲು ಮುಂದಾಗಿದೆ ಎಂದು ಆರೋಪಿಸಿ ಕೊಡಗು ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದ ಜನರಲ್ ಕೆ.ಎಸ್.ತಿಮ್ಮಯ್ಯ ವೃತ್ತದಲ್ಲಿ ಸೋಮವಾರ ಮಾನವ ಸರಪಳಿ ರಚಿಸಿ ಪ್ರತಿಭಟನೆ ನಡೆಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ ನೇತೃತ್ವದಲ್ಲಿ ಸಮಾವೇಶಗೊಂಡ ಕಾರ್ಯಕರ್ತರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಹಲವಾರು ವರ್ಷಗಳಿಂದ ಕೃಷಿ ಚಟುವಟಿಕೆ ನಡೆಸಿಕೊಂಡು ಬಂದಿರುವ ಬಡವರ ಜಾಗದ ಆರ್‌ಟಿಸಿಯಲ್ಲಿ ‘ವಕ್ಫ್ ಆಸ್ತಿ’ ಎಂದು ನಮೂದಿಸಿರುವುದನ್ನು ತೆಗೆದು, ವಕ್ಫ್ ನಿಯಮಾವಳಿ ಬದಲಿಸುವವರೆಗೆ ಪ್ರತಿಭಟನೆ ಮುಂದುವರೆಸುವುದಾಗಿ ಎಚ್ಚರಿಸಿದರು.

ರಾಜ್ಯ ಸರ್ಕಾರವನ್ನು ವಜಾಗೊಳಿಸಬೇಕು. ವಕ್ಫ್ ಆಸ್ತಿ ಕಬಳಿಸಲು ಕುಮ್ಮಕ್ಕು ನೀಡುತ್ತಿರುವ ಸಚಿವ ಜಮೀರ್ ಅಹಮದ್ ಖಾನ್‌ನನ್ನು ಸಂಪುಟದಿಂದ ಹೊರ ಕಳಿಸಬೇಕು. ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ನೀತಿ ಅನುಸರಿಸುತ್ತಿದ್ದು, ಇದನ್ನು ಕೈಬಿಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಒಂದು ಸಮೂಹದ ತುಷ್ಟೀಕರಣ ಮಾಡುತ್ತಾ ಬಂದಿದೆ. ಅದರ ಭಾಗವಾಗಿ ಇದೀಗ ವಕ್ಫ್ ಮೂಲಕ ಜಾಗ ಕಬಳಿಸುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದರು.

ಪ್ರತಿಭಟನೆ ಬಳಿಕ ಬಿಜೆಪಿ ಪ್ರಮುಖರು ಮತ್ತು ಕಾರ್ಯಕರ್ತರು ಮೆರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಬಿಜೆಪಿ ಚುನಾವಣಾ ಉಸ್ತುವಾರಿ ಸುಲೋಚನಾ ಭಟ್, ಪ್ರಮುಖರಾದ ರಾಬಿನ್ ದೇವಯ್ಯ, ಶಾಂತೆಯಂಡ ರವಿ ಕುಶಾಲಪ್ಪ ಅನಿತಾ ಪೂವಯ್ಯ, ಸುವಿನ್ ಗಣಪತಿ, ವಿ.ಕೆ.ಲೋಕೇಶ್, ಮಹೇಶ್ ಜೈನಿ, ಕಾಂಗೀರ ಸತೀಶ್, ಕನ್ನಂಡ ಸಂಪತ್, ಕೆ.ಎಸ್.ರಮೇಶ್, ತಳೂರು ಕಿಶೋರ್ ಕುಮಾರ್, ಉಮೇಶ್ ಸುಬ್ರಮಣಿ, ಬಿ.ಬಿ.ಭಾರತೀಶ್, ಡೀನ್ ಬೋಪಣ್ಣ, ಅರುಣ್ ಶೆಟ್ಟಿ, ಬಿ.ಕೆ.ಜಗದೀಶ್, ಬಿ.ಕೆ.ಅರುಣ್ ಕುಮಾರ್, ಮನು ಮಂಜುನಾಥ್, ಕನ್ನಿಕೆ, ಬಿ.ಪಿ.ಡಿಶು, ಎಸ್.ಸಿ.ಸತೀಶ್, ಸವಿತಾ ರಾಕೇಶ್ ಪಾಲ್ಗೊಂಡಿದ್ದರು.

ಹಳೇ ವಿದ್ಯಾರ್ಥಿಗಳ ಪಾತ್ರ ಮಹತ್ವ : ಪಟ್ಟಡ ರೀನಾ ಪ್ರಕಾಶ್



ವಿರಾಜಪೇಟೆ ಕಾವೇರಿ ಕಾಲೇಜಿನ ಹಳೇ ವಿದ್ಯಾರ್ಥಿಗಳ ಸಂಘದ ವಾರ್ಷಿಕ ಸಭೆಯಲ್ಲಿ ಹಳೇ ವಿದ್ಯಾರ್ಥಿಗಳು ಹಾಜರಿದ್ದರು.

ವಿರಾಜಪೇಟೆ, ನ.4– ವಿದ್ಯಾಸಂಸ್ಥೆಗಳ ಅಭಿವೃದ್ಧಿಯಲ್ಲಿ ಹಳೇ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದಾಗಿದೆ ಎಂದು ವಿರಾಜಪೇಟೆ ಕಾವೇರಿ ಕಾಲೇಜಿನ ಹಳೇ ವಿದ್ಯಾರ್ಥಿಗಳ ಸಂಘದ ಉಪಾಧ್ಯಕ್ಷೆ ಪಟ್ಟಡ ರೀನಾ ಪ್ರಕಾಶ್ ಹೇಳಿದರು.

ಪಟ್ಟಣದ ಕಾವೇರಿ ಕಾಲೇಜಿನಲ್ಲಿ ನಡೆದ ಹಳೇ ವಿದ್ಯಾರ್ಥಿಗಳ ಸಂಘದ ವಾರ್ಷಿಕ ಸಭೆಯಲ್ಲಿ ಮಾತನಾಡಿದ ಅವರು, ಹಳೇ ವಿದ್ಯಾರ್ಥಿಗಳು ಒಂದೆಡೆ ಸೇರಲು ಸಂಘ ಅಗತ್ಯವಾಗಿದೆ. ಹಳೇ ವಿದ್ಯಾರ್ಥಿ ಸಂಘದಿಂದ ವಿದ್ಯಾಸಂಸ್ಥೆಗಳ ಬೆಳವಣಿಗೆಗೆ ಪೂರಕವಾಗಿದೆ. ನಾವು ಕಲಿತ ವಿದ್ಯಾಸಂಸ್ಥೆಗಳನ್ನು ಬೆಳೆಸುವ ಜವಾಬ್ದಾರಿ ಹಳೆಯ ವಿದ್ಯಾರ್ಥಿಗಳ ಮೇಲಿದೆ ಎಂದರು.

ಕಾಲೇಜಿನ ಪ್ರಾಂಶುಪಾಲ ಬೆನೆಡಿಕ್ಟ್ ಆರ್.ಸಲ್ಡಾನ ಮಾತನಾಡಿ, ನಮ್ಮ ಕಾಲೇಜನ್ನು ಪರಿಚಯಿಸುವಂತ ಕಾರ್ಯವನ್ನು ಹಳೆಯ ವಿದ್ಯಾರ್ಥಿಗಳು ಮಾಡುತ್ತಿದ್ದಾರೆ. ಹಳೇ ವಿದ್ಯಾರ್ಥಿಗಳು ವಿದ್ಯಾಸಂಸ್ಥೆಯ ಅಭಿವೃದ್ಧಿಗೆ ಸಲಹೆ ಸೂಚನೆ ನೀಡುವಂತಹ ರಾಯಭಾರಿ ಹಾಗೂ ಮಾರ್ಗದರ್ಶಕರಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಭೆಯಲ್ಲಿ ಹಳೇ ವಿದ್ಯಾರ್ಥಿಗಳಿಗೆ ಮುಕ್ತ ಚರ್ಚೆ ಏರ್ಪಡಿಸಲಾಗಿತ್ತು. ಸಂಘಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಕಾಲೇಜಿನ ಪ್ರಾಂಶುಪಾಲ ಬೆನೆಡಿಕ್ಟ್ ಆರ್.ಸಾಲ್ಡಾನ, ಉಪಾಧ್ಯಕ್ಷರಾಗಿ ಬಿ.ಟಿ.ವಿದ್ಯಾ, ಕಾರ್ಯದರ್ಶಿ ಪುಣ್ಯ ಬೆಳ್ಳಿಯಪ್ಪ ಜಂಟಿ ಕಾರ್ಯದರ್ಶಿ ಹೆಚ್.ಎಂ.ಹರೀಶ್, ಖಜಾಂಚಿ ಎ.ಎನ್.ರೇಷ್ಮಾ, ಸದಸ್ಯರಾಗಿ ಕೆ.ಪಿ.ಶಿಲ್ಪ, ಅಂಮ್ರಿನ್ ತಾಜ್, ಸಿ.ಎಂ.ಸೋಮಣ್ಣ, ಮಂಜುಳಾ, ಕರಣ್, ಮಮತಾ, ಲಸಿಕ ಕಾರ್ಯಪ್ಪ, ಗುಲ್ನಾರ್ ಭಾನು ಅವರು ಆಯ್ಕೆಯಾದರು.

ನ.18ರಂದು ರಾಷ್ಟ್ರೀಯ ವರ್ಣಚಿತ್ರ ಸ್ಪರ್ಧೆ

ಮಡಿಕೇರಿ: ರಾಷ್ಟ್ರೀಯ ಶಿಶು ಕಲ್ಯಾಣ ಸಂಸ್ಥೆಯ ಕಾರ್ಯಕ್ರಮದ ಅಂಗವಾಗಿ ಕೊಡಗು ಜಿಲ್ಲಾ ಶಿಶು ಕಲ್ಯಾಣ ಸಂಸ್ಥೆ, ಇನ್ನರ್‌ವ್ಹೀಲ್, ರೋಟರಿ ಮಿಸ್ಟಿಹಿಲ್ಸ್, ಲಯನ್ಸ್ ಕ್ಲಬ್ ಹಾಗೂ ರೆಡ್‌ಕ್ರಾಸ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನ.18ರಂದು ರಾಷ್ಟ್ರೀಯ ವರ್ಣಚಿತ್ರ ಸ್ಪರ್ಧೆ ನಡೆಯಲಿದೆ. ಮಾಹಿತಿಗೆ ಕೊಡಗು ಜಿಲ್ಲಾ ಶಿಶು ಕಲ್ಯಾಣ ಸಂಸ್ಥೆ, ಚೇತನ ಚಿಲುಮೆ (ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಹತ್ತಿರ) ಅಥವಾ ಮೊ.ಸಂ: 9880985939, 9480745776 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

2 ದೇವಾಲಯದ ಹುಂಡಿ ಕಳ್ಳತನ

ಮಡಿಕೇರಿ, ನ.4–ಎರಡು ದೇವಾಲಯಗಳ ಹುಂಡಿ ಕಳ್ಳತನ ಮಾಡಿರುವ ಘಟನೆ ಶನಿವಾರಸಂತೆಯಲ್ಲಿ ಭಾನುವಾರ ರಾತ್ರಿ ನಡೆದಿದೆ.

ಶ್ರೀ ವಿಜಯ ವಿನಾಯಕ ಹಾಗೂ ಶ್ರೀರಾಮ ಮಂದಿರ ದೇವಾಲಯದಲ್ಲಿ ಹುಂಡಿ ಕಳ್ಳತನ ಮಾಡಲಾಗಿದ್ದು, ರಾಮ ಮಂದಿರದ ಹುಂಡಿ ಹಣ ಕದ್ದು ಹುಂಡಿಯನ್ನು ಕಳ್ಳರು ಹೊರಗಡೆ ಬಿಸಾಡಿದ್ದಾರೆ. ಕಳ್ಳರು ಸ್ಕೂಟಿಯಲ್ಲಿ ಬಂದು ಕಳ್ಳತನ ಮಾಡಿರುವ ದೃಶ್ಯ ದೇವಾಲಯ ಆವರಣದ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಕಳ್ಳರು ಗುರುತು ಪತ್ತೆಯಾಗದಂತೆ ಮುಖಕ್ಕೆ ಮಾಸ್ಕ್ ಧರಿಸಿ ಕಳ್ಳತನ ಮಾಡಿದ್ದಾರೆ.

ವಿಜಯ ವಿನಾಯಕ ದೇವಾಲಯದಲ್ಲಿ ಎರಡನೇ ಬಾರಿ ಕಳ್ಳತವಾಗಿದ್ದು, ಹಿಂದೆ ಕಳ್ಳತನ ನಡೆದಾಗ ಪೊಲೀಸರು ಸರಿಯಾಗಿ ತನಿಖೆ ನಡೆಸಿಲ್ಲ. ಸೂಕ್ತ ಕ್ರಮ ಕೈಗೊಳ್ಳದೆ ಇರುವುದೇ ಕಳ್ಳತನವಾಗಲು ಕಾರಣ ಎಂದು ದೇವಾಲಯ ಸಮಿತಿ ಪದಾಧಿಕಾರಿಗಳು ಆರೋಪಿಸಿದ್ದಾರೆ. ಶನಿವಾರಸಂತೆ ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.



ಕೊಳೆತ ಸ್ಥಿತಿಯಲ್ಲಿ ಕಾಡಾನೆ ಕಳೇಬರ ಪತ್ತೆ



ಯಳಂದೂರು ವನ್ಯಜೀವಿ ವಲಯದ ಬಾವಿಯಾಣೆ ಶಾಖೆಯ ಕಡಿತಾಳಕಟ್ಟೆಯಲ್ಲಿ ಕೊಳೆತ ಸ್ಥಿತಿಯಲ್ಲಿ ಪತ್ತೆಯಾದ ಕಾಡಾನೆ ಕಳೇಬರ.

ಚಾಮರಾಜನಗರ: ಬಿಆರ್‌ಟಿ ಹುಲಿ ಸಂರಕ್ಷಿತ ಅರಣ್ಯ ಪ್ರದೇಶ ವ್ಯಾಪ್ತಿ ಯಳಂದೂರು ವನ್ಯಜೀವಿ ವಲಯದ ಬಾವಿಯಾಣೆ ಶಾಖೆಯ ಕಡಿತಾಳಕಟ್ಟೆಯಲ್ಲಿ ಸೋಮವಾರ ಕಾಡಾನೆ ಕಳೇಬರ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದೆ. ಅರಣ್ಯ ಸಿಬ್ಬಂದಿ ಕಾಲ್ನಡಿಗೆಯಲ್ಲಿ ಗಸ್ತು ಮಾಡುತ್ತಿದ್ದಾಗ ವೀರನಕಾನುಹಳ್ಳ ಅರಣ್ಯ ಪ್ರದೇಶದಲ್ಲಿ ಸುಮಾರು 50 ರಿಂದ 55 ವರ್ಷದ ಗಂಡಾನೆ ಕಳೇಬರ ಪತ್ತೆಯಾ ಗಿದ್ದು, ಆನೆ ಸ್ವಾಭಾವಿಕವಾಗಿ ಮೃತಪಟ್ಟಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ. ಪಶು ವೈದ್ಯಾಧಿಕಾರಿ ಮಿರ್ಜಾ ವಾಸಿಂ ಮರಣೋತ್ತರ ಪರೀಕ್ಷೆ ನಡೆಸಿದರು. ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀಪತಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲೇಶಪ್ಪ, ಪ್ರಕಾಶ್, ಅಕ್ಷಯ್, ಅಶೋಕ್ ಮತ್ತಿತರರು ಸ್ಥಳ ಪರಿಶೀಲಿಸಿದರು.

ನ.7ರಂದು ರೈತರಿಂದ ಬೈಕ್ ರ‍್ಯಾಲಿ ಮೂಲಕ ಜಿಲ್ಲಾಡಳಿತ ಭವನಕ್ಕೆ ಮುತ್ತಿಗೆ



ಚಾಮರಾಜನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಹೊನ್ನೂರು ಪ್ರಕಾಶ್ ಮಾತನಾಡಿದರು.

ಚಾಮರಾಜನಗರ, ನ.4–ಜಿಲ್ಲೆಯ ರೈತರ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿ ನ.7ರಂದು ರೈತರು ಬೈಕ್ ರ‍್ಯಾಲಿ ಮೂಲಕ ಜಿಲ್ಲಾಡಳಿತ ಭವನಕ್ಕೆ ಮುತ್ತಿಗೆ ಹಾಕಲಿದ್ದಾರೆ ಎಂದು ಸಾಮೂಹಿಕ ನಾಯಕತ್ವದ ರಾಜ್ಯ ರೈತ ಸಂಘದ ಸದಸ್ಯ ಹೊನ್ನೂರು ಪ್ರಕಾಶ್ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮೂಹಿಕ ನಾಯಕತ್ವದ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಚಾಮರಾಜನಗರ ಜಿಲ್ಲಾ ಘಟಕದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ರೈತರು ತತ್ತರಿಸಿದ್ದು, ಸೂಕ್ತ ಪರಿಹಾರ ದೊರಕಿಲ್ಲ. ಬೆಳೆ ವಿಮೆ ಸರಿಯಾದ ವೇಳೆಗೆ ಸಿಗುತ್ತಿಲ್ಲ. ಇದರಿಂದ ರೈತರು ಕಂಗಾಲಾಗಿದ್ದಾರೆ ಎಂದು ಆರೋಪಿಸಿದರು.

ಅತಿ ಹೆಚ್ಚು ಮಳೆ ಬೀಳುತ್ತಿದ್ದರೂ ಕೆಲ ಕೆರೆಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆ ಕೈ ಬಿಡಲಾಗಿದೆ. ಜಿಲ್ಲೆಯ ರೈತರ ಜ್ವಲಂತ ಸಮಸ್ಯೆಗಳನ್ನು ಒತ್ತಾಯಿಸಿ ಬೈಕ್ ರ‍್ಯಾಲಿ ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸಬೇಕು. ಜಿಎಂ ಮುಕ್ತ ಭಾರತ ಹಾಗೂ ಜಿಎಂ ಮುಕ್ತ ಕರ್ನಾಟಕ ಎಂದು ಘೋಷಿಸಬೇಕು. ಐಸಿಆರ್ ಮತ್ತು ಬಾಯರ್ ಕಂಪನಿಗಳ ಕೃಷಿ ಒಪ್ಪಂದವನ್ನು ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಿ ರದ್ದುಗೊಳಿಸಬೇಕು. ಜಿಲ್ಲೆಯಲ್ಲಿ ಕರಾ ನಿರಾಕರಣ ಚಳವಳಿ ಸಂದರ್ಭದಲ್ಲಿ ಕಟ್ಟಲಾಗದ ವಿದ್ಯುತ್ ಬಾಕಿಯನ್ನು ಮನ್ನಾ ಮಾಡಬೇಕು. ಅಕ್ರಮ–ಸಕ್ರಮ ಮುಂದುವರೆಯಬೇಕು. ಸೆಸ್ಕ್ ನೌಕರರ ಬೇಜವಾಬ್ದಾರಿತನದಿಂದ ಜನ ಜಾನುವಾರುಗಳಿಗೆ ಪ್ರಾಣಾಪಾಯವಾಗುತ್ತಿದ್ದು, ಇದು ನಿಲ್ಲಬೇಕು ಎಂದು ಆಗ್ರಹಿಸಿದರು.

ಚಾಮರಾಜನಗರ ಮಾರ್ಗ ತೆರಕಣಾಂಬಿ ಗುಂಡ್ಲುಪೇಟೆ ರಸ್ತೆ ದುರಸ್ತಿಗೊಳಿಸಬೇಕು ಸೇರಿದಂತೆ 15 ಪ್ರಮುಖ ಹಕ್ಕೊತ್ತಾಯಕ್ಕಾಗಿ ರ‍್ಯಾಲಿ ನಡೆಸಿ, ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಲೋಕೇಶ್, ಪಾಪಣ್ಣ, ಕರಿಯಪ್ಪ, ನಟರಾಜು, ಈಶ್ವರ್, ಪ್ರಭು, ನಿರಂಜನ ಮೂರ್ತಿ ಉಪಸ್ಥಿತರಿದ್ದರು.

ಜಾತಿ ಸಮೀಕ್ಷೆಯಲ್ಲಿ ನಿಖರ ಮಾಹಿತಿ ನೀಡಿ

● ಒಳಮೀಸಲಾತಿ ಜಾರಿಯಿಂದ 101 ಜಾತಿಗಳಿಗೆ ನ್ಯಾಯ ಸಿಗಬೇಕು ● ಐಎಫ್‌ಎಸ್ ನಿವೃತ್ತ ಅಧಿಕಾರಿ ರಾಜು ಆಗ್ರಹ



ಚಾ.ನಗರದ ಶ್ರೀರಾಮಚಂದ್ರ ಕಾಲೇಜಿನಲ್ಲಿ ನಡೆದ ಜಾಗೃತಿ ಸಭೆಯಲ್ಲಿ ಜ್ಞಾನಪ್ರಕಾಶಸ್ವಾಮೀಜಿ ಮಾತನಾಡಿದರು.

ಚಾಮರಾಜನಗರ, ನ.4– ಜಾತಿ ಸಮೀಕ್ಷೆಯಲ್ಲಿ ನಿಖರ ಮಾಹಿತಿ ನೀಡಿ, ಒಳಮೀಸಲಾತಿ ಜಾರಿಯಿಂದ 101 ಜಾತಿಗಳಿಗೆ ನ್ಯಾಯ ಸಿಗಬೇಕು ಎಂದು ಐಎಫ್‌ಎಸ್ ನಿವೃತ್ತ ಅಧಿಕಾರಿ ಡಾ.ಆರ್.ರಾಜು ತಿಳಿಸಿದರು.

ನಗರದ ಶ್ರೀರಾಮಚಂದ್ರ ಕಾಲೇಜು ಆವರಣದಲ್ಲಿ ಒಳಮೀಸಲಾತಿ ಜಾಗೃತಿ ಸಮಿತಿ ವತಿಯಿಂದ ನಡೆದ ಜಾಗೃತಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಒಳಮೀಸಲಾತಿ ವರ್ಗೀಕರಣ ಸಂಬಂಧ ನ್ಯಾಯಮೂರ್ತಿಗಳ ಸಮಿತಿ ಮೂರು ತಿಂಗಳಲ್ಲಿ ಸಮೀಕ್ಷೆ ನಡೆಸಿ ವರದಿ ನೀಡಲಿದ್ದಾರೆ. ಆದ್ದರಿಂದ ಬಲಗೈ ಸಮುದಾಯದವರು ನಿಖರ ಮಾಹಿತಿ ದಾಖಲು ಮಾಡಲು ಸಂಘಟನೆಗಳು, ಪ್ರಗತಿಪರ ಚಿಂತಕರು ಹಾಗೂ ದಲಿತ ಹೋರಾಟಗಾರರು ಕಾರ್ಯಪ್ರವೃತ್ತರಾಗಬೇಕು ಎಂದರು.

ಸುಪ್ರೀಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಒಳಮೀಸಲಾತಿ ನೀಡುವ ಬಗ್ಗೆ ಚಿಂತನೆ ಮಾಡಿದೆ. ಹಿಂದೆ ನೀಡಿದ್ದ ಆಯೋಗಗಳ ವರದಿ ಅವೈಜ್ಞಾನಿಕವಾಗಿದ್ದು, ಎಲ್ಲಾ ವರದಿಗಳು ಸಹ ಸತ್ತು ಹೋಗಿವೆ. ಈ ವರದಿಗಳ ಬಗ್ಗೆ ನಾವು ಚರ್ಚಿಸುವುದು ಸರಿಯಲ್ಲ. ಈಗ ಸರ್ಕಾರ ನೇಮಕ ಮಾಡಿರುವ ಸಮಿತಿ ಮುಂದೆ ಬಲಗೈ ಸಮುದಾಯದವರು ನಿಖರ ಮಾಹಿತಿ ನೀಡಬೇಕು. ಈ ಮೂಲಕ ಗಂಡಾಂತರದಿಂದ ಪಾರಾಗಬೇಕಾಗಿದೆ. ಈ ನಿಟ್ಟಿನಲ್ಲಿ ಸಮುದಾಯದ ವಿದ್ಯಾವಂತರು, ಪ್ರಗತಿಪರರು, ಬುದ್ಧಿಜೀವಿಗಳು, ದಲಿತ ಹೋರಾಟಗಾರರು 3 ತಿಂಗಳ ಅವಧಿಯಲ್ಲಿ ಸಕ್ರಿಯವಾಗಿ ಕೆಲಸ ಮಾಡಬೇಕು. ಮನೆ ಮನೆಗೆ ಕರಪತ್ರ ಹಂಚಿ, ಸಮರ್ಪಕ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಬಲಗೈ ಸಮುದಾಯ ಒಳಮೀಸಲಾತಿ ವಿರೋಧಿ ಎಂಬ ಮಾತು ಕೇಳಿ ಬರುತ್ತಿವೆ. 101 ಜಾತಿಗಳಲ್ಲಿ ಬಲಗೈ ಸಮುದಾಯದ ಹಿರಿಯ ಅಣ್ಣನಂತೆ ಇದೆ. ನಮ್ಮಲ್ಲೇ ಹೊಡೆದಾಟ ಬೇಡ, ಎಲ್ಲಾ ಸಮುದಾಯವನ್ನು ಒಟ್ಟಿಗೆ ತೆಗೆದುಕೊಂಡುವ ಹೋಗುವ ಜಾಣ್ಮೆ ನಮ್ಮದಾಗಬೇಕು. ಈ ನಿಟ್ಟಿನಲ್ಲಿ ನಮ್ಮ ನಡೆ ಜಾಗೃತವಾಗಿರಬೇಕು. ನ್ಯಾಯಾಲಯ ತೀರ್ಪುಗಳಲ್ಲೂ ಸಮುದಾಯಕ್ಕೆ ಅನ್ಯಾಯವಾಗಿದೆ. ಮೀಸಲಾತಿ ನೀಡುವಾಗ ದತ್ತಾಂಶಗಳು ಇರಬೇಕು. ಈ ದತ್ತಾಂಶ ಇಲ್ಲದಿದ್ದರೆ ಯಾವುದೇ ಮೀಸಲಾತಿ ಒಪ್ಪಲು ಸಾಧ್ಯವಿಲ್ಲ. ಸಮೀಕ್ಷೆ ತಂಡ ಬಂದಾಗ ಬಲಗೈ ಹಾಗೂ ಎಡಗೈ ಸಮುದಾಯ ಉಪಜಾತಿಗಳ ಬಗ್ಗೆ ನಿಖರವಾಗಿ ಬರೆಸಬೇಕು ಎಂದರು.

ಬಲಗೈ–ಎಡಗೈ ವಿಂಗಡಣೆ ಬೇಡ: ಮೀಸಲಾತಿ ವರ್ಗೀಕರಣ ವಿಚಾರದಲ್ಲಿ ರಾಜಕಾರಣ ನಡೆಯುತ್ತಿದೆ. ಈ ವಿಚಾರದಲ್ಲಿ ಕೈ ಕಾಯಿಸಿಕೊಳ್ಳುವವರು ಬಹಳಷ್ಟು ಮಂದಿ ಇದ್ದಾರೆ. ಹೀಗಾಗಿ ಬಲಗೈ–ಎಡಗೈ ಸಮುದಾಯಗಳು ಒಂದೇ ಆಗಿವೆ ಎಂದರು.

ಒಳಮೀಸಲಾತಿ ವಿರೋಧಿಗಳಲ್ಲ: ಬಲಗೈ ಸಮುದಾಯದವರು ಯಾವುದೇ ಕಾರಣಕ್ಕೂ ಒಳಮೀಸಲಾತಿ ವಿರೋಧಿಗಳಲ್ಲ. ಬಲಗೈ ಹಾಗೂ ಎಡಗೈ ಸಮುದಾಯಕ್ಕೆ ಜನಸಂಖ್ಯೆ ಆಧಾರಿತ ಮೀಸಲಾತಿ ಬೇಕು ಎಂಬುದು ನಮ್ಮ ಒತ್ತಾಯವಾಗಿದೆ ಎಂದು ಯೋಜನಾ ಇಲಾಖೆ ರಾಜ್ಯ ನಿರ್ದೇಶಕ ಡಿ.ಚಂದ್ರಶೇಖರಯ್ಯ ತಿಳಿಸಿದರು.

ಜ್ಞಾನಪ್ರಕಾಶಸ್ವಾಮೀಜಿ, ದಲಿತ ಮುಖಂಡರಾದ ಹೊನ್ನೂರು ಕೃಷ್ಣಮೂರ್ತಿ, ಅಶೋಕಪುರಂ ಭಾಸ್ಕರ್, ಶೇಖರ್ ಬುದ್ಧ, ಸಿ.ಎಂ.ಕೃಷ್ಣಮೂರ್ತಿ, ವಾಸು, ಡಾ.ಶಿವಕುಮಾರ್, ಸುಭಾಷ್ ಮಾಡ್ರಹಳ್ಳಿ, ಕೆ.ಎಂ.ನಾಗರಾಜು ತಮ್ಮ ಅಭಿಪ್ರಾಯ ಮಂಡಿಸಿದರು. ಸಭೆಯಲ್ಲಿ ದಲಿತ ಮುಖಂಡರಾದ ಚನ್ನಕೇಶವ, ಚಿಕ್ಕಜವರಯ್ಯ ಇತರರು ಇದ್ದರು.

ಬಿಹಾರ ಮೂಲದ ಬಾಲಕಿ ಪತ್ತೆ



ಚಾಮರಾಜನಗರ, ನ.4– ಗುಂಡ್ಲುಪೇಟೆ ಪಟ್ಟಣದ ಸೂರ್ಯಬೇಕರಿ ಬಳಿ ಬಿಹಾರ ಮೂಲದ ಬಾಲಕಿ ಪತ್ತೆಯಾಗಿದ್ದಾಳೆ.

ಸುಮಾರು 5 ವರ್ಷದ ಬಿಹಾರ ಮೂಲದ ಸಿರಿಸ್ತಿ ಸಿಕ್ಕಿದ್ದು, ಈಕೆ ತಂದೆ ವಿನೋದ್ ಚೌಧರಿ, ತಾಯಿ ಪೂಲ ಕುಮಾರಿ ಎಂದು ತಿಳಿಸಿದ್ದಾರೆ.

ಈಕೆಯ ಪೋಷಕರು ಇದ್ದಲ್ಲಿ ಜಿಲ್ಲಾ ನಗರದ ಜಿಲ್ಲಾಡಳಿತ ಭವನದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಅಥವಾ ದೂರವಾಣಿ ಸಂಖ್ಯೆ: 08226–222354, ಮೊಬೈಲ್ ಸಂಖ್ಯೆ: 9902956010, ಮಕ್ಕಳ ಕಲ್ಯಾಣ ಸಮಿತಿ ದೂ.ಸಂಖ್ಯೆ 08226–225711, ಮೊಬೈಲ್ ನಂಬರ್: 9483930393 ಅನ್ನು ಸಂಪರ್ಕಿಸಬಹುದು.

ಖಾಸಗಿ ಬಸ್ ಡಿಕ್ಕಿ : ಪಾದಚಾರಿ ಸ್ಥಳದಲ್ಲೇ ಸಾವು

ಬೇಗೂರು, ನ.4– ರಸ್ತೆ ದಾಟುತ್ತಿದ್ದ ಪಾದಚಾರಿ ಖಾಸಗಿ ಬಸ್ ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪ ರಾಘವಪುರ ಗೇಟ್ ಬಳಿ ನಡೆದಿದೆ.

ನಂಜನಗೂಡು ತಾಲೂಕಿನ ಹುರ ಗ್ರಾಮದ ಗೋಪಾಲಕೃಷ್ಣ(70) ಮೃತಪಟ್ಟಿದ್ದು, ಈತ ರಾಘವಪುರ ಗ್ರಾಮದ ತಮ್ಮ ಸಂಬಂಧಿಕರ ಮನೆಗೆ ತೆರಳಿದ್ದರು. ಈ ವೇಳೆ ಗುಂಡ್ಲುಪೇಟೆ ಕಡೆಯಿಂದ ಬಂದ ಖಾಸಗಿ ಬಸ್ ಡಿಕ್ಕಿ ಹೊಡೆದಿದೆ. ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೇಗೂರು ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ವಿಶ್ವ ಕರಾಟೆಯಲ್ಲಿ ಚಾ.ನಗರದ ವಿದ್ಯಾರ್ಥಿಗಳು



ಚಾಮರಾಜನಗರ, ನ.4–ಗೋವಾದಲ್ಲಿ ನ.7 ರಿಂದ 10ರವರೆಗೆ ನಡೆಯಲಿರುವ 24ನೇ ವಿಶ್ವ ಕರಾಟೆ ಪಂದ್ಯಾವಳಿಯಲ್ಲಿ ನಗರದ ಯುನಿವರ್ಸಲ್ ಶಾಲೆಯ ವರುಣ್ ಶೆಟ್ಟಿ ಸೇರಿ ಹಾಗೂ ಸೇವಾ ಭಾರತಿ ಪಬ್ಲಿಕ್ ಶಾಲೆಯ 7 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಯುನಿವರ್ಸಲ್ ಶಾಲೆಯ ವರುಣ್ ಶೆಟ್ಟಿ, ಸೇವಾ ಭಾರತಿ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳಾದ ಹಿತೈಷಿ, ವೈಷ್ಣವಿ ಬಂಗಾರು, ಸುಶ್ಮಿತಾ, ಸ್ಕಂದ, ಸಿ.ಮೋಹನ್ ಹಾಗೂ ಶುಬಿತ್ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದು, ಕರಾಟೆ ಶಿಕ್ಷಕ ಕೆ.ಜಿ.ಮುರುಳಿ ತಂಡದ ನೇತೃತ್ವ ವಹಿಸಲಿದ್ದಾರೆ.

ನಗರದಲ್ಲಿ ಹಲ್ಮಿಡಿ ಶಾಸನ ಪ್ರತಿಕೃತಿ ಅನಾವರಣ

ಚಾಮರಾಜನಗರ, ನ.4–ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ನಗರದಲ್ಲಿ ಕನ್ನಡದ ಮೊದಲ ಹಲ್ಮಿಡಿ ಶಾಸನದ ಪ್ರತಿಕೃತಿ ಅನಾವರಣಗೊಳಿಸಿದರು.

ರಾಜ್ಯೋತ್ಸವ ಕಾರ್ಯಕ್ರಮದ ಬಳಿಕ ಸಚಿವ ಕೆ.ವೆಂಕಟೇಶ್ ನಗರದ ಜಿಲ್ಲಾಡಳಿತ ಭವನದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರ ಆವರಣದಲ್ಲಿ ಕರ್ನಾಟಕ–ಸಂಭ್ರಮ–50ರ ಹಿನ್ನೆಲೆಯಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿ ಪರದೆ ಸರಿಸುವ ಮೂಲಕ ಉದ್ಘಾಟಿಸಿದರು.


ಶಾಸಕ ಸಿ.ಪುಟ್ಟರಂಗಶೆಟ್ಟಿ, ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಪಿ.ಮರಿಸ್ವಾಮಿ, ನಗರಸಭೆ ಅಧ್ಯಕ್ಷ ಎಸ್.ಸುರೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಹಮ್ಮದ್ ಅಸ್ಗರ್ (ಮುನ್ನ), ನಗರಸಭಾ ಉಪಾಧ್ಯಕ್ಷೆ ಹೆಚ್.ಎಸ್. ಮಮತಾ, ಜಿಲ್ಲಾಧಿಕಾರಿ ಶಿಲ್ಪನಾಗ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದಾ ಇದ್ದರು.

ಬೇಗೂರು ಸರ್ಕಾರಿ ಶಾಲೆಯಲ್ಲಿ ರಾಜ್ಯೋತ್ಸವ...


ಬೇಗೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಮುಖ್ಯ ಶಿಕ್ಷಕಿ ಕಮಲಮ್ಮ, ಸಹ ಶಿಕ್ಷಕ ಚಂದಶೇಖರ್, ಎಸ್‌ಡಿಎಂಸಿ ಸದಸ್ಯ ಮಾದೇಶ್, ದೇವರಾಜ್, ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

ನಾಲ್ಕು ದಿನಗಳ ಸಾಲು ರಜೆ ; ಮೃಗಾಲಯ, ಕಾರಂಜಿಕೆರೆಗೆ ಲಕ್ಷಕ್ಕೂ ಅಧಿಕ ಮಂದಿ ಭೇಟಿ

ಮೃಗಾಲಯಕ್ಕೆ 1,01,710 ಮಂದಿ, ಕಾರಂಜಿ ಕೆರೆಗೆ 7,378 ಮಂದಿ ಭೇಟಿ



ಮೈಸೂರು,ನ.4(ಪಿಎಂ)– ಸಾಲು ಸಾಲು ರಜೆಗಳ ಹಿನ್ನೆಲೆಯಲ್ಲಿ ಅ.31ರಿಂದ ನ.3ರವರೆಗೆ ನಾಲ್ಕು ದಿನಗಳು ಮೈಸೂರಿನ ಪ್ರವಾಸಿ ತಾಣಗಳಿಗೆ ಪ್ರವಾಸಿಗರು ಲಗ್ಗೆ ಯಿಟ್ಟಿದ್ದರು. ಅಂತೆಯೇ ಈ ಅವಧಿಯಲ್ಲಿ ನಗರದ ಪ್ರಮುಖ ಪ್ರವಾಸಿ ತಾಣಗಳಾದ 'ಮೈಸೂರು ಮೃಗಾಲಯ' ಮತ್ತು 'ಕಾರಂಜಿಕೆರೆ'ಗೆ ಒಟ್ಟಾರೆ 1,09,088 ಮಂದಿ ಭೇಟಿ ನೀಡಿ ವನ್ಯಜೀವಿಗಳು ಹಾಗೂ ಕಾರಂಜಿ ಕೆರೆಯ ಪ್ರಾಕೃತಿಕ ಸೌಂದರ್ಯ ಕಣ್ತುಂಬಿಕೊಂಡಿದ್ದಾರೆ.

ದೀಪಾವಳಿ, ಕನ್ನಡ ರಾಜ್ಯೋತ್ಸವ ಮತ್ತು ವಾರಾಂತ್ಯ ರಜೆಗಳು ಸೇರಿದಂತೆ ಈ ನಾಲ್ಕು ದಿನಗಳಲ್ಲಿ ಮೃಗಾಲಯಕ್ಕೆ 1,01,710 ಮಂದಿ ಭೇಟಿ ನೀಡಿದ್ದರೆ, ಕಾರಂಜಿಕೆರೆಗೆ 7,378 ಮಂದಿ ಭೇಟಿ ನೀಡಿದ್ದಾರೆ. ಅ.31ರಂದು ಮೃಗಾಲಯಕ್ಕೆ 15,177 ಮಂದಿ ಹಾಗೂ ಕಾರಂಜಿಕೆರೆಗೆ 1,382 ಮಂದಿ ಸೇರಿದಂತೆ ಒಟ್ಟಾರೆ 16,559 ಮಂದಿ ಈ ಎರಡೂ ತಾಣಗಳಿಗೆ ಭೇಟಿ ನೀಡಿದ್ದಾರೆ.

ಅದೇ ರೀತಿ ನ.1ರಂದು ಮೃಗಾಲಯಕ್ಕೆ 28,478 ಮಂದಿ, ಕಾರಂಜಿಕೆರೆಗೆ 1,947 ಮಂದಿ ಸೇರಿದಂತೆ ಒಟ್ಟು 30,425 ಮಂದಿ, ನ.2ರಂದು ಮೃಗಾಲಯಕ್ಕೆ 35,138 ಮಂದಿ, ಕಾರಂಜಿಕೆರೆಗೆ 2,159 ಮಂದಿ ಸೇರಿದಂತೆ ಒಟ್ಟು 37,297 ಮಂದಿ ಹಾಗೂ ನ.3ರಂದು ಮೃಗಾಲಯಕ್ಕೆ 22,917 ಮಂದಿ ಹಾಗೂ ಕಾರಂಜಿ ಕೆರೆಗೆ 1,890 ಮಂದಿ ಸೇರಿದಂತೆ ಒಟ್ಟು 24,807 ಮಂದಿ ಭೇಟಿ ನೀಡಿದ್ದಾರೆ.

ರಾಜ್ಯಮಟ್ಟದ ಚರ್ಮರೋಗ ತಜ್ಞರ ಸಮ್ಮೇಳನಕ್ಕೆ ಡಾ.ಹೆಚ್.ಹನುಮಂತಪ್ಪ



ಮೈಸೂರು,ನ.4(ಪಿಎಂ)– ಚಿತ್ರದುರ್ಗದಲ್ಲಿ ನ.8ರಿಂದ 10ರವರೆಗೆ ನಡೆಯಲಿರುವ ರಾಜ್ಯ ಮಟ್ಟದ ಚರ್ಮರೋಗ ತಜ್ಞರ ಸಮ್ಮೇಳನದ 'ಕಪ್ಪು ಬಣ್ಣ ಚರ್ಮದ ಸಮಸ್ಯೆಗಳ ನಿವಾರಣೆಗೆ ಆಧುನಿಕ ಚಿಕಿತ್ಸೆ ವಿಚಾರಗೋಷ್ಠಿಯ ಅಧ್ಯಕ್ಷತೆ ವಹಿಸಲು ಖ್ಯಾತ ಚರ್ಮರೋಗ ತಜ್ಞ ಡಾ.(ಪ್ರೊ).ಹೆಚ್.ಹನುಮಂತಪ್ಪ ಅವರಿಗೆ ಆಹ್ವಾನ ನೀಡಲಾಗಿದೆ.

ಅಂತಾರಾಷ್ಟ್ರೀಯ, ರಾಷ್ಟ್ರೀಯ ಸಮ್ಮೇಳನಗಳಲ್ಲಿ ಡಾ.ಹೆಚ್.ಹನುಮಂತಪ್ಪ ಅನೇಕ ಅತಿಥಿ ಉಪನ್ಯಾಸಗಳನ್ನು ನೀಡಿದ್ದಾರೆ. ಅಲ್ಲದೆ, ಅನೇಕ ವೈಜ್ಞಾನಿಕ ಪ್ರಬಂಧಗಳನ್ನು ಮಂಡಿಸಿದ್ದಾರೆ. ಹಲವು ವೈಜ್ಞಾನಿಕ ವಿಚಾರ ಗೋಷ್ಠಿಗಳಲ್ಲಿಯೂ ಭಾಗವಹಿಸಿರುವ ಇವರು ರಾಷ್ಟ್ರೀಯ ಮಕ್ಕಳ ಚರ್ಮರೋಗ ತಜ್ಞರ ಸಂಘದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಇವರ ಶೈಕ್ಷಣಿಕ ಮತ್ತು ಸಾಮಾಜಿಕ ಸೇವೆಗಳನ್ನು ಗುರುತಿಸಿ, ಅನೇಕ ಪ್ರಶಸ್ತಿ ಮತ್ತು ಪುರಸ್ಕಾರಗಳು ಇವರಿಗೆ ಸಂದಿವೆ ಎಂದು ಪ್ರಕಟಣೆ ತಿಳಿಸಿದೆ.

ಇಂದು ಚನ್ನಪಟ್ಟಣದಲ್ಲಿ ನಿಖಿಲ್ ಪರ ಹೆಚ್.ಡಿ.ದೇವೇಗೌಡರ ಪ್ರಚಾರ



ಬೆಂಗಳೂರು, ನ.4– ಚನ್ನಪಟ್ಟಣ ಉಪಚುನಾವಣೆ ಎನ್‌ಡಿಎ ಅಭ್ಯರ್ಥಿಯೂ ಆದ ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಮಂಗಳವಾರ ಪ್ರಚಾರ ನಡೆಸಲಿದ್ದಾರೆ.

ಬೆಂಗಳೂರಿನಿಂದ ರಸ್ತೆ ಮಾರ್ಗವಾಗಿ ಚನ್ನಪಟ್ಟಣ ಕ್ಷೇತ್ರಕ್ಕೆ ಆಗಮಿಸಲಿರುವ ಅವರು ಬೆಳಗ್ಗೆ 11.30ಕ್ಕೆ ವಿರುಪಾಕ್ಷಿಪುರ, ಮಧ್ಯಾಹ್ನ 1ಕ್ಕೆ ಕೋಡಂಬಹಳ್ಳಿ, ಮಧ್ಯಾಹ್ನ 3ಕ್ಕೆ ಜೆ.ಬ್ಯಾಡರಹಳ್ಳಿ ಹಾಗೂ ಸಂಜೆ 4ಕ್ಕೆ ವೈ.ಟಿ.ಹಳ್ಳಿಯಲ್ಲಿ ನಿಖಿಲ್ ಪರ ಮತಯಾಚಿಸಿ, ಸಂಜೆ 5ಕ್ಕೆ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ.

ಆಸ್ಕರ್‌ಗೆ ಅರ್ಹತೆ ಪಡೆದ ಕನ್ನಡದ 'ಸೂರ್ಯಕಾಂತಿ ಹೂಗೆ ಮೊದಲು ಗೊತ್ತಾಗಿದ್ದು'

ನವದೆಹಲಿ: 2025ರ ಆಸ್ಕರ್ ಪ್ರಶಸ್ತಿಗೆ ಕನ್ನಡದ 'ಸೂರ್ಯಕಾಂತಿ ಹೂಗೆ ಮೊದಲು ಗೊತ್ತಾಗಿದ್ದು' ಅರ್ಹತೆ ಪಡೆದಿದೆ.

ಈ ಚಿತ್ರ ನೈಜ ದೃಶ್ಯಗಳ ಕಿರುಚಿತ್ರ ವಿಭಾಗದಲ್ಲಿ ಅರ್ಹತೆ ಪಡೆದಿದೆ. ಈ ಕಿರು ಸಿನಿಮಾವನ್ನು ಫಿಲ್ಮಂ ಅಂಡ್ ಟೆಲಿವಿಷನ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ವಿದ್ಯಾರ್ಥಿಗಳು ಅಂತಿಮ ವರ್ಷದ ಅಧ್ಯಯನದ ಭಾಗವಾಗಿ ನಿರ್ಮಿಸಿದೆ. ಮೇ ತಿಂಗಳಲ್ಲಿ ಈ ಚಿತ್ರ ಕಾನ್ ಚಲನಚಿತ್ರೋತ್ಸವದಲ್ಲಿ ಅತ್ಯುತ್ತಮ ಕಿರು ಚಿತ್ರ (ಲಾ ಸಿನೆಫ್) ವಿಭಾಗದಲ್ಲಿ ಪ್ರಥಮ ಬಹುಮಾನ ಪಡೆದಿತ್ತು.

ಈ ಚಿತ್ರವನ್ನು ಮೈಸೂರಿನ ಚಿದಾನಂದ ಎಸ್. ನಾಯ್ಕ್ ನಿರ್ದೇಶಿಸಿದ್ದಾರೆ, ಸೂರಜ್ ಠಾಕೂರ್ ಛಾಯಾಗ್ರಹಣ, ಮನೋಜ್ ವಿ ಎಡಿಟಿಂಗ್, ಮತ್ತು ಅಭಿಶೇಕ್ ಕದಮ್ ಅವರು ಧ್ವನಿ ನೀಡಿದ್ದರು. ಈ ಕುರಿತು ಮಾತನಾಡಿರುವ ನಿರ್ದೇಶಕ ಚಿದಾನಂದ್, ನನಗೆ ನೆನಪಿರುವಷ್ಟು ಸಮಯದಿಂದ ಈ ಕಥೆಯನ್ನು ಹೇಳಲು ಬಯಸಿದ್ದೆ. ಈ ಕಥೆಯನ್ನು ಕೇಳುವುದು ಮಾತ್ರವಲ್ಲದೆ ಅದನ್ನು ಮರುಸೃಷ್ಟಿಸುವುದು ನಮ್ಮ ಗುರಿಯಾಗಿತ್ತು. ಈ ಕಥೆ ಪ್ರಪಂಚದಾದ್ಯಂತ ಇರುವ ಪ್ರೇಕ್ಷಕರನ್ನು ಪ್ರತಿಧ್ವನಿಸಲಿದೆ ಎಂದು ಭಾವಿಸುತ್ತೇನೆ ಎಂದಿದ್ದಾರೆ.

ಹಿರಿಯ ನಾಗರಿಕ ತಿಮ್ಮೇಗೌಡ ನಾಪತ್ತೆ



ಮೈಸೂರು,ನ.4(ಪಿಎಂ)– ಶ್ರೀರಂಗಪಟ್ಟಣ ತಾಲೂಕಿನ ಚುಂಡಾಲು ಗ್ರಾಮದ ತಿಮ್ಮೇಗೌಡ (78) ನಾಪತ್ತೆಯಾಗಿರುವ ಬಗ್ಗೆ ಶ್ರೀರಂಗಪಟ್ಟಣದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅ.31ರಂದು ಬೆಳಗ್ಗೆ 10ರ ವೇಳೆಯಲ್ಲಿ ಮನೆಯಿಂದ ಹೊರ ಹೋದವರು ವಾಪಸ್ ಮನೆಗೆ ಮರಳಿಲ್ಲ ಎಂದು ತಿಮ್ಮೇಗೌಡ ಅವರ ಪುತ್ರ ಟಿ.ರವಿಕುಮಾರ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಸಂಬಂಧಿಕರ ಮನೆಗಳು ಸೇರಿದಂತೆ ಎಲ್ಲೆಡೆ ಹುಡುಕಾಡಿದರೂ ಅವರು ಪತ್ತೆಯಾಗಿಲ್ಲ. ನಮ್ಮ ತಂದೆಯವರಿಗೆ ಬಲಗೈ ಕಿರುಬೆರಳು ಇರುವುದಿಲ್ಲ. ಬಲಭಾಗದ ಕೆನ್ನೆಯ ಮೇಲೆ ಕಾರಳ್ಳು ಹೊಂದಿದ್ದಾರೆ ಎಂದು ರವಿಕುಮಾರ್ ನ.3ರಂದು ಠಾಣೆಗೆ ದೂರು ನೀಡಿದ್ದಾರೆ. ತಿಮ್ಮೇಗೌಡ ಅವರ ಬಗ್ಗೆ ಮಾಹಿತಿ ದೊರೆತಲ್ಲಿ ಮೊ.ಸಂ. 97396 23282 ಸಂಪರ್ಕಿಸಬಹುದು.

ಕುಂಬಾರಕೊಪ್ಪಲು ಶ್ರೀ ಮಹದೇಶ್ವರಸ್ವಾಮಿ ಜಾತ್ರೆ ಪ್ರಯುಕ್ತ ನಡೆದ ಪ್ರೊ. ಕಬಡ್ಡಿ ಪಂದ್ಯಾವಳಿ

ಪಾಂಡವಪುರದ ಕೆ.ಎಸ್.ಪುಟ್ಟಣ್ಣಯ್ಯ ತಂಡ ಚಾಂಪಿಯನ್



ಮೈಸೂರಿನ ಕುಂಬಾರಕೊಪ್ಪಲಿನ ಕೆಂಪೇಗೌಡ ಕ್ರೀಡಾಂಗಣದ ಹಳ್ಳಿಕಟ್ಟೆ ಅಂಗಳದಲ್ಲಿ ಭಾನುವಾರ ನಡೆದ ಪ್ರೊ. ಕಬಡ್ಡಿ ಪಂದ್ಯಾವಳಿಯ ಫೈನಲ್‌ನಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ ಪಾಂಡವಪುರದ ಕೆ.ಎಸ್.ಪುಟ್ಟಣ್ಣಯ್ಯ ತಂಡಕ್ಕೆ ಶಾಸಕ ಕೆ.ಹರೀಶ್‌ಗೌಡ ಬಹುಮಾನ ವಿತರಣೆ ಮಾಡಿದರು. ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಪೈ.ಶ್ರೀನಿವಾಸ್, ಕಾಂಗ್ರೆಸ್ ಮುಖಂಡ ಚೇತನ್ ವಿಷಕಂಠೇಗೌಡ ಮತ್ತಿತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ನ.4(ಪಿಎಂ)– ಕುಂಬಾರ ಕೊಪ್ಪಲು ಶ್ರೀ ಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಪ್ರಯುಕ್ತ ಇಲ್ಲಿನ ಕೆಂಪೇ ಗೌಡ ಕ್ರೀಡಾಂಗಣದ ಹಳ್ಳಿಕಟ್ಟೆ ಅಂಗಳದಲ್ಲಿ ನಡೆದ ಮೈಸೂರು ವಿಭಾಗ ಮಟ್ಟದ ಪ್ರೊ. ಕಬಡ್ಡಿ ಪಂದ್ಯಾವಳಿಯಲ್ಲಿ ಪಾಂಡವ ಪುರದ ಕೆ.ಎಸ್.ಪುಟ್ಟಣ್ಣಯ್ಯ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿತು.

ಅಭ್ಯುದಯ ಸಂಘ, ಎಂಜಿ ಗ್ರೂಪ್ಸ್, ಗಂಧರ್ವ ಸ್ಪೋರ್ಟ್ಸ್ ಕ್ಲಬ್, ಹೊಯ್ಸಳ ಸ್ಪೋರ್ಟ್ಸ್ ಕ್ಲಬ್ ಹಾಗೂ ಕುಂಬಾರಕೊಪ್ಪಲು ಗ್ರಾಮಸ್ಥರ ಸಂಯುಕ್ತಾಶ್ರಯದಲ್ಲಿ ಹಮ್ಮಿ ಕೊಂಡಿದ್ದ ಪ್ರೊ. ಕಬಡ್ಡಿ ಪಂದ್ಯಾವಳಿಗೆ ಶುಕ್ರವಾರ ಚಾಲನೆ ಸಿಕ್ಕಿತ್ತು.


10 ಫ್ರಾಂಚೈಸಿ ತಂಡಗಳು ಭಾಗವಹಿಸಿದ್ದ ಪಂದ್ಯಾವಳಿಯಲ್ಲಿ ಕೆ.ಎಸ್.ಪುಟ್ಟಣ್ಣಯ್ಯ ತಂಡ ಮತ್ತು ಮೈಸೂರಿನ ಕ್ಯಾಪ್ಟನ್ ಅರ್ಜುನ ತಂಡ ಫೈನಲ್ ಪಂದ್ಯದಲ್ಲಿ ಗೆಲುವಿಗಾಗಿ ಭಾನುವಾರ ರಾತ್ರಿ ಹಣಾಹಣಿ ನಡೆಸಿದವು. ಅಂತಿಮವಾಗಿ ಕೆ.ಎಸ್. ಪುಟ್ಟಣ್ಣಯ್ಯ ತಂಡಕ್ಕೆ ಗೆಲುವು ಒಲಿದು ಬರುವ ಮೂಲಕ ಕ್ಯಾಪ್ಟನ್ ಅರ್ಜುನ ತಂಡ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟಿತು. ಯಜಮಾನ್ ಮಾದೇಗೌಡ ಕೃತಿಕ ವಾರಿಯರ್ಸ್ ತಂಡ ಮೂರನೇ ಸ್ಥಾನ ಹಾಗೂ ಹೊಯ್ಸಳ ಸ್ಪೋರ್ಟ್ಸ್ ಕ್ಲಬ್ ನಾಲ್ಕನೇ ಸ್ಥಾನ ಪಡೆದವು. ಸರ್ವೋತ್ತಮ ಆಟಗಾರನಾಗಿ ಕೆ.ಎಸ್.ಪುಟ್ಟಣ್ಣಯ್ಯ ತಂಡದ ಕೃಪಾ ನಾಗರ್, ಉತ್ತಮ ದಾಳಿಗಾರನಾಗಿ ಕ್ಯಾಪ್ಟನ್ ಅರ್ಜುನ್ ತಂಡದ ರಾಕಿ ಮತ್ತು ಇದೇ ತಂಡದ ವೆಂಕಟೇಶ್ ಉತ್ತಮ ಹಿಡಿತಗಾರನಾಗಿ ಹೊರಹೊಮ್ಮಿದರು.

ಚಾಂಪಿಯನ್ ಆಗಿ ಹೊರಹೊಮ್ಮಿದ ಕೆ.ಎಸ್.ಪುಟ್ಟಣ್ಣಯ್ಯ ತಂಡಕ್ಕೆ 1,50,000 ರೂ. ನಗದು ಬಹುಮಾನ ಮತ್ತು ಟ್ರೋಫಿ ಅನ್ನು ಶಾಸಕ ಕೆ.ಹರೀಶ್‌ಗೌಡ ವಿತರಣೆ ಮಾಡಿದರು. ಅಂತೆಯೇ ಕ್ರಮವಾಗಿ ಮೂರು ಸ್ಥಾನಗಳಿಗೆ ಭಾಜನವಾದ ಕ್ಯಾಪ್ಟನ್ ಅರ್ಜುನ ತಂಡ (ಲಕ್ಷ ರೂ.), ಯಜಮಾನ್ ಮಾದೇಗೌಡ ಕೃತಿಕ ವಾರಿಯರ್ಸ್ ತಂಡ (25 ಸಾವಿರ ರೂ.), ಹೊಯ್ಸಳ ಸ್ಪೋರ್ಟ್ಸ್ ಕ್ಲಬ್ ತಂಡಕ್ಕೂ (25 ಸಾವಿರ ರೂ.) ನಗದು ಬಹುಮಾನ ಮತ್ತು ಟ್ರೋಫಿ ವಿತರಣೆ ಮಾಡಲಾಯಿತು.

ಕಾಂಗ್ರೆಸ್ ಮುಖಂಡ ಚೇತನ್ ವಿಷಕಂಠೇಗೌಡ, ಎಕೆ ಎಂಟರ್‌ಪ್ರೈಸಸ್ ಮಾಲೀಕ ಕಿರಣ್, ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಪೈ.ಶ್ರೀನಿವಾಸ್, ರಾಜ್ಯ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ಉಪಾಧ್ಯಕ್ಷ ಅನಿಲ್ ಮತ್ತಿತರರು ಹಾಜರಿದ್ದರು.

ತಪೋವನ ಸೊಲೇಸ್ ಅಪಾರ್ಟ್‌ಮೆಂಟ್‌ನಲ್ಲಿ ಕನ್ನಡ ರಾಜ್ಯೋತ್ಸವ





ಮೈಸೂರಿನ ತಪೋವನ ಸೊಲೇಸ್ ಅಪಾರ್ಟ್‌ಮೆಂಟ್‌ನಲ್ಲಿ ನಡೆದ ಕನ್ನಡ ರಾಜ್ಯೋತ್ಸವದಲ್ಲಿ ಅಪಾರ್ಟ್‌ಮೆಂಟ್‌ನ ನಿವಾಸಿಗಳು ಭಾಗವಹಿಸಿದ್ದರು. ಮತ್ತೊಂದು ಚಿತ್ರದಲ್ಲಿ ಕುವೆಂಪು ಅವರ ಪುತ್ರಿ ಲೇಖಕಿ ತಾರಿಣಿ ಮತ್ತು ಅವರ ಪತಿ ವಿಶ್ರಾಂತ ಕುಲಪತಿ ಪ್ರೊ.ಚಿದಾನಂದಗೌಡ ಅತಿಥಿಗಳಾಗಿ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದನ್ನು ಕಾಣಬಹುದು.

ಮೈಸೂರು,ನ.4(ಪಿಎಂ)– ಮೈಸೂರಿನ ಶಾರದಾದೇವಿನಗರದ ತಪೋವನ ಸೊಲೇಸ್ ಅಪಾರ್ಟ್‌ಮೆಂಟ್‌ನಲ್ಲಿ ನ.1ರ ಶುಕ್ರವಾರ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ರಾಷ್ಟ್ರಕವಿ ಕುವೆಂಪು ಅವರ ಪುತ್ರಿ ಲೇಖಕಿ ತಾರಿಣಿ ಮತ್ತು ಅವರ ಪತಿ ವಿಶ್ರಾಂತ ಕುಲಪತಿ ಪ್ರೊ.ಚಿದಾನಂದ ಗೌಡ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಇದೇ ವೇಳೆ ಮಾತನಾಡಿದ ತಾರಿಣಿಯವರು, ತಮ್ಮ ತಂದೆ ರಾಷ್ಟ್ರಕವಿ ಕುವೆಂಪು ಅವರ ವಿಚಾರಧಾರೆಗಳು ಹಾಗೂ ಅವರು ಕನ್ನಡದ ಬಗ್ಗೆ ಹೊಂದಿದ್ದ ಅತೀವ ಅಭಿಮಾನದ ಬಗ್ಗೆ ಅಪಾರ್ಟ್‌ಮೆಂಟ್ ನಿವಾಸಿಗಳಿಗೆ ತಿಳಿಸಿಕೊಟ್ಟರು. ಅಲ್ಲದೆ, ತಮ್ಮ 'ಮಗಳು ಕಂಡ ಕುವೆಂಪು' ಪುಸ್ತಕವೂ ಸೇರಿದಂತೆ ಅನೇಕ ಪುಸ್ತಕಗಳನ್ನು ತಪೋವನ ಗ್ರಂಥಾಲಯಕ್ಕೆ ಕೊಡುಗೆಯಾಗಿ ನೀಡಿದರು. ಅಪಾರ್ಟ್‌ಮೆಂಟ್ ವ್ಯವಸ್ಥಾಪಕ ವಿವಿನ್ ವಾಜ್ ಅತಿಥಿಗಳನ್ನು ಸ್ವಾಗತಿಸಿದರು.

ಹಾಸನಾಂಬೆ ಹುಂಡಿ ಎಣಿಕೆ: 9 ದಿನದಲ್ಲಿ 12.63 ಕೋಟಿ ಸಂಗ್ರಹ



ಹಾಸನ: ಅ.24 ರಿಂದ ನ.3 ರವರೆಗೆ ನಡೆದ ಈ ಬಾರಿಯ ಹಾಸನಾಂಬೆ ದರ್ಶನೋತ್ಸವದಲ್ಲಿ ಕಾಣಿಕೆ ರೂಪದಲ್ಲಿ ಒಟ್ಟು 12,63,83,808 ರೂ. ದಾಖಲೆಯ ಆದಾಯ ಸಂಗ್ರಹವಾಗಿದೆ.

ಹಾಸನಾಂಬಾ ಜಾತ್ರಾ ಮಹೋತ್ಸವದಲ್ಲಿ ಇದೇ ಮೊದಲ ಬಾರಿಗೆ ಅತಿ ಹೆಚ್ಚಿನ ಕಾಣಿಕೆ ಸಂಗ್ರಹವಾಗಿದೆ. ಇಂದು ಬೆಳಗ್ಗೆ 10:00 ಗಂಟೆಯಿಂದ ಆರಂಭವಾದ ಹುಂಡಿ ಹಣ ಎಣಿಕೆ ಕಾರ್ಯ ಸಂಜೆ 4:00 ಗಂಟೆಗೆ ಮುಗಿಯಿತು. ನಿರಂತರ 6 ಗಂಟೆಗಳ ಕಾಲ ಸುಮಾರು 500ಕ್ಕೂ ಹೆಚ್ಚು ಮಂದಿ ಹುಂಡಿ ಎಣಿಕೆ ಕಾರ್ಯದಲ್ಲಿ ತೊಡಗಿದ್ದರು. 25 ಕ್ಕೂ ಹೆಚ್ಚು ಬ್ಯಾಂಕ್‌ನ ಸಿಬ್ಬಂದಿ ಹುಂಡಿ ಹಣ ಎಣಿಕೆ ಸ್ಥಳದಲ್ಲಿದ್ದು, ಎಣಿಕೆಯಾದ ಹಣವನ್ನು ಬ್ಯಾಂಕ್‌ಗೆ ಕೊಂಡೊಯ್ದರು. ಅಲ್ಲದೇ ಕಾಣಿಕೆ ರೂಪದಲ್ಲಿ 51 ಗ್ರಾಂ ಚಿನ್ನ, 913 ಗ್ರಾಂ ಬೆಳ್ಳಿ, 500 ಗ್ರಾಂ ತಾಮ್ರವನ್ನು ಭಕ್ತರು ನೀಡಿದ್ದಾರೆ.

ಈ ಬಾರಿ ವಿಶೇಷ ದರ್ಶನದ 1,000 ರೂ., 300 ರೂ., ಟಿಕೆಟ್ ಮತ್ತು ಲಾಡು ಮಾರಾಟದಿಂದ 9,67,37,567 ರೂ., ಹುಂಡಿಯಲ್ಲಿ 2,55,97,567 ರೂ., ಜಾಹೀರಾತಿನಿಂದ 5,50,000, ರೂ., ಸೀರೆ ಮಾರಾಟದಿಂದ 2,00,305 ರೂ., ದೇಣಿಗೆ 40,908 ರೂ., ತುಲಾಭಾರ ದಿಂದ 21,540 ರೂ., ಇ ಹುಂಡಿಯಿಂದ 3,98,859 ರೂ., ಒಟ್ಟು 12,63,83,808 ರೂ. ಹಣ ಸಂಗ್ರಹವಾಗಿದೆ.

ಬ್ಯಾನ್ ಆಗಿರುವ ಹಳೆಯ ನೋಟುಗಳು, ಚಲಾವಣೆಯಲ್ಲಿ ಇಲ್ಲದ ಕಾಯಿನ್‌ಗಳು, ಕರಿಮಣಿ ಸರ ಸೇರಿ ಅನೇಕ ವಸ್ತುಗಳನ್ನು ಭಕ್ತರು ಹುಂಡಿಯಲ್ಲಿ ಹಾಕಿದ್ದಾರೆ. ಭಕ್ತರು ನೂರಾರು ಬೇಡಿಕೆ ಪತ್ರಗಳನ್ನು ಹುಂಡಿಯಲ್ಲಿ ಹಾಕಿದ್ದು, ಯಾರೂ ಕೂಡ ಪತ್ರಗಳನ್ನು ತೆರೆದು ನೋಡದಂತೆ ಆದೇಶ ಹೊರಡಿಸಲಾಗಿತ್ತು. ಆದ್ದರಿಂದ ಭಕ್ತರ ಹರಕೆಗಳು, ಬೇಡಿಕೆಗಳು ಬಹಿರಂಗವಾಗಲಿಲ್ಲ.

ಕುವೆಂಪು ಶಾಲೆಯಲ್ಲಿ ರಾಜ್ಯೋತ್ಸವ ಆಚರಣೆ

ರೋಟರಿಯಿಂದ ಫಲಾನುಭವಿಗೆ ಹಸು, ಕರು ವಿತರಣೆ





ಮೈಸೂರು, ನ.4– ನಗರದ ಕುವೆಂಪು ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಧ್ವಜಾರೋಹಣವನ್ನು ವಿದ್ಯಾರ್ಥಿಗಳ ಸಮ್ಮುಖದಲ್ಲಿ ನೆರವೇರಿಸುವ ಮೂಲಕ ಆಚರಿಸಲಾಯಿತು.

ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕ್ಲಬ್‌ನ ಅಧ್ಯಕ್ಷ ರೊ.ರಾಜೇಶ್.ಆರ್ ಮಾತನಾಡಿ, ಕನ್ನಡ ನೆಲ, ಜಲ ಮತ್ತು ಭಾಷೆ ಇನ್ನೂ ಹಲವು ಮಹತ್ವದ ವಿಷಯದ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ ಕರುನಾಡಿನ ಇತಿಹಾಸದ ಬಗ್ಗೆ ತಿಳಿಸಿಕೊಟ್ಟರು.

ಕ್ಲಬ್‌ನ ಸಂಸ್ಥಾಪಕ ಅಧ್ಯಕ್ಷ ರೊ.ಮಂಜುನಾಥ್ ಮಾತನಾಡಿ, ಮಕ್ಕಳಿಗೆ ಕರುನಾಡ ಇತಿಹಾಸ ಮತ್ತು ಜ್ಞಾನಪೀಠ ಪ್ರಶಸ್ತಿ ವಿಜೇತರ ಬಗ್ಗೆ ತಿಳಿಸಿದರು.

ಕಾರ್ಯಕ್ರಮದ ನಿರೂಪಣೆಯನ್ನು ರೊ.ರಾಘವೇಂದ್ರ ಮಾಡಿದರು. ಇದೇ ವೇಳೆ ಸರ್ಕಾರದ ಆದೇಶ ಹೊಸ ಧ್ವಜ ಸ್ಥಂಭ ನಿರ್ಮಾಣಗೊಳಿಸುವಂತೆ, ಶಾಲಾ ಆಡಳಿತ ಮಂಡಳಿ ಮನವಿ ಮೇರೆಗೆ ಸ್ಪಂದಿಸಿದ ರಾಜೇಶ್ ಅವರು, ಧ್ವಜ ಸ್ಥಂಭದ ನಿರ್ಮಾಣ ಮಾಡಲು ಒಬ್ಬ ಮೇಸ್ತ್ರಿ ಮತ್ತು ಹೆಲ್ಪರ್‌ಗಳನ್ನು ಕಳುಹಿಸಿ ಧ್ವಜ ಸ್ಥಂಭದ ದುರಸ್ತಿಗೆ ಸಹಕಾರ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಶಂಕರೇಗೌಡ, ಕ್ಲಬ್‌ನ ಸಂಸ್ಥಾಪಕ ಅಧ್ಯಕ್ಷ ರೊ.ಮಂಜುನಾಥ್.ಕೆ, ಹಿರಿಯ ಸದಸ್ಯರಾದ ರೊ.ಶಂಭು ಹೆಗ್ಡೆ, ರೊ.ನಾರಾಯಣ್ ನಾಯಕ್ ಮತ್ತು ವೃತ್ತಿಸೇವೆ ನಿರ್ದೇಶಕರಾದ ರೊ. ರಾಘವೇಂದ್ರ ಹಾಗೂ ಸದಸ್ಯರುಗಳಾದ ರೊ.ಕಾರ್ತಿಕೇಯನ್ ಮತ್ತು ರೊ.ಬಾಲ ಸುಬ್ರಹ್ಮಣ್ಯ, ಶಾಲೆಯ ಶಿಕ್ಷಕರು ಮತ್ತು ಶಾಲೆಯ ವಿದ್ಯಾರ್ಥಿಗಳು ಭಾಗಿಯಾಗಿದ್ದರು.

ಫಲಾನುಭವಿಗೆ ಹಸು–ಕರು ವಿತರಣೆ: ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರಿನ ಸಮುದಾಯ ಮತ್ತು ಆರ್ಥಿಕ ಅಭಿವೃದ್ಧಿ ಯೋಜನೆಯಡಿ ಕ್ಲಬ್‌ನ ಈ ಸಾಲಿನ ಉಪಾಧ್ಯಕ್ಷ ರೊ.ಮನು ಅವರ ಹುಟ್ಟೂರಾದ ತಗಡೂರಿನಲ್ಲಿ ಈ ಹಿಂದೆ ಫಲಾನುಭವಿಯೊಬ್ಬರಿಗೆ ಹಸು ನೀಡಲಾಗಿತ್ತು.

ದೊಡ್ಡಕವಲಂದೆ ಹತ್ತಿರವಿರುವ ಕೊಣ ವಿನಪುರ ಗ್ರಾಮದ ರಾಜಪ್ಪ ಎಂಬುವರ ಬಳಿ ಹಸು ಮತ್ತು ಕರು ಇದ್ದು, ಕರು ಇದೀಗ ದೊಡ್ಡದಾಗಿದ್ದು, ಮತ್ತೊಂದು ಹೆಣ್ಣು ಕರುವಿಗೆ ಜನ್ಮ ನೀಡಿದೆ.

ಈ ಹಿನ್ನೆಲೆಯಲ್ಲಿ ಆ ಹಸು ಮತ್ತು ಕರುವನ್ನು ಬೇರೊಬ್ಬ ಫಲಾನುಭವಿಯಾದ ಅರಕೇಶ್ ಮೂರ್ತಿ ಅವರಿಗೆ ಕ್ಲಬ್‌ನ ಉಪಾಧ್ಯಕ್ಷ ರೊ.ಮನು ಉಪಸ್ಥಿತಿಯಲ್ಲಿ ಹಸ್ತಾಂತರಿಸಲಾಯಿತು.

ರೋಟರಿ ಜಿಲ್ಲೆ 3181ರ ಅಕ್ಟೋಬರ್ ಮಾಹೆಯ ಯೋಜನೆಯಂತೆ ಸಮುದಾಯ ಮತ್ತು ಆರ್ಥಿಕ ಅಭಿವೃದ್ಧಿ, ಇದಕ್ಕೆ ಸಂಬಂಧಪಟ್ಟಂತೆ ಈ ಮಾಹೆಯ ಯೋಜನೆಗೆ ಅನುಗುಣವಾಗಿ ಹಸು ಮತ್ತು ಕರುವನ್ನು ಅರಕೇಶ್‌ಮೂರ್ತಿರವರಿಗೆ ಅವರ ಆರ್ಥಿಕ ಅಭಿವೃದ್ಧಿಗೆ ಅನುಕೂಲವಾಗುವ ಉದ್ದೇಶದಿಂದ ನೀಡಲಾಗಿದೆ ಎಂದು ಅಧ್ಯಕ್ಷ ರಾಜೇಶ್ ಆರ್. ಈ ವೇಳೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಕ್ಲಬ್‌ನ ಹಿರಿಯ ಸದಸ್ಯರಾದ ರೊ.ಶಂಭು ಹೆಗ್ಡೆ ರೊ.ನಾರಾಯಣ್ ನಾಯಕ್ ಮತ್ತು ಕ್ಲಬ್ ಸೇವೆ ನಿರ್ದೇಶಕ ರೊ.ಸುಧೀಂದ್ರ ಮಿಂಚು ಭಾಗಿಯಾಗಿದ್ದರು.

ಮೈಸೂರಲ್ಲಿ ಒಂದೇ ದಿನ ಸರಣಿ ಕಳವು

ಮೈಸೂರು, ನ.4(ಎಸ್‌ಬಿಡಿ)– ದೀಪಾವಳಿಗೆಂದು ಊರಿಗೆ ತೆರಳಿದ್ದವರ ಮನೆ ಬೀಗ ಮುರಿದು ಖದೀಮರು ದೋಚಿರುವ ಬಗ್ಗೆ ಮೈಸೂರಿನ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾಗಿವೆ.

ಪ್ರಕರಣ 1: ಬೋಗಾದಿ, ಪ್ರೀತಿ ಲೇಔಟ್ ನಿವಾಸಿ ಪರಮೇಶ್ ಅವರ ಮನೆಯ ಬೀಗ ಮುರಿದು 3.50 ಲಕ್ಷ ಮೌಲ್ಯದ ಚಿನ್ನಾಭರಣ, 90 ಸಾವಿರ ಮೌಲ್ಯದ ಬೆಳ್ಳಿ ಪದಾರ್ಥಗಳು ಹಾಗೂ 10 ಸಾವಿರ ರೂ. ನಗದು ದೋಚಿದ್ದಾರೆ. ಪತ್ನಿ, ಪುತ್ರ ಹಾಗೂ ಸೊಸೆ ಆಂಧ್ರಕ್ಕೆ ಹೋಗಿರುವುದರಿಂದ ಪರಮೇಶ್ ಅವರು ಅ.31ರಂದು ಮನೆಗೆ ಬೀಗ ಹಾಕಿಕೊಂಡು ಹಬ್ಬಕ್ಕೆಂದು ಸ್ವಗ್ರಾಮಕ್ಕೆ ತೆರಳಿದ್ದರು. ಮರುದಿನ ವಾಪಸ್ಸಾದಾಗ ಮುಂಬಾಗಿಲಿನ ಬೀಗ ಮುರಿದಿತ್ತು. ಒಳಹೋಗಿ ನೋಡಿದಾಗ ಕಳ್ಳತನವಾಗಿರುವುದು ಗೊತ್ತಾಗಿ, ಸರಸ್ವತಿಪುರಂ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಪ್ರಕರಣ 2: ವಿಜಯನಗರ ನಾಲ್ಕನೇ ಹಂತ 2ನೇ ಘಟ್ಟ ನಿವಾಸಿ ಎಂ.ಯಶವಂತ ಅವರು ಅ.31ರಂದು ಮನೆಗೆ ಬೀಗ ಹಾಕಿಕೊಂಡು ಬೆಂಗಳೂರಿಗೆ ಹೋಗಿದ್ದರು. ಮರುದಿನ ಅವರ ಮನೆಯ ಬಾಗಿಲು ತೆರೆದಿರುವುದನ್ನು ಗಮನಿಸಿದ ನೆರೆಮನೆಯವರು ಅವರಿಗೆ ವಿಷಯ ತಿಳಿಸಿದ್ದರು. ಗಾಬರಿಯಿಂದ ಬೆಂಗಳೂರಿನಿಂದ ಬಂದು ಮನೆಯನ್ನು ಪರಿಶೀಲಿಸಿದಾಗ 1.30 ಲಕ್ಷ ರೂ. ನಗದು ಹಾಗೂ 10 ಸಾವಿರ ರೂ. ಮೌಲ್ಯದ ಬೆಳ್ಳಿ ಪದಾರ್ಥಗಳ ಕಳುವಾಗಿತ್ತು. ಖದೀಮರು ಚೂಪಾದ ಆಯುಧದಿಂದ ಬೀಗ ಮೀಟಿ, ಕಳ್ಳತನ ಮಾಡಿರುವುದಾಗಿ ಯಶವಂತ್ ಅವರು ವಿಜಯನಗರ ಠಾಣೆ ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಾಗಿದೆ.

ಸರಣಿ ಕಳ್ಳತನ?: ಮೈಸೂರಿನಲ್ಲಿ ಅ.31ರಂದು ರಾತ್ರಿ ಐದಾರು ಕಡೆ ಸರಣಿ ಕಳ್ಳತನವಾಗಿದೆ. ಬೆಳವಾಡಿ, ವಿಜಯನಗರ, ಟಿ.ಕೆ.ಲೇಔಟ್ ಸೇರಿದಂತೆ ಹಲವೆಡೆ ಕಳ್ಳತನವಾಗಿರುವ ಬಗ್ಗೆ ಮಾಹಿತಿ ಬಂದಿದೆ. ಖದೀಮರು ಮಾಸ್ಕ್ ಧರಿಸಿ, ಯಾವುದೋ ಆಯುಧ ಹಿಡಿದುಕೊಂಡು ದುಷ್ಕೃತ್ಯ ಎಸಗಿರುವುದು ಕೆಲ ಮನೆಯ ಸಿಸಿ ಕ್ಯಾಮರಾಗಳಲ್ಲಿ ಸೆರೆಯಾಗಿದೆ. ಒಂದೇ ರಾತ್ರಿ ಸರಣಿ ಕಳ್ಳತನವಾಗಿದ್ದರೂ ಪೊಲೀಸರು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡಂತಿಲ್ಲ. ಸಮರ್ಪಕ ಗಸ್ತು ನಿಯೋಜಿಸದಿರುವುದರಿಂದ ನಿರ್ಭಯವಾಗಿ ಕಳ್ಳತನ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ದೂರುತ್ತಿದ್ದಾರೆ. ಪೊಲೀಸರು ಕೂಡಲೇ ಪರಿಣಾಮಕಾರಿ ಕ್ರಮ ಕೈಗೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಸ್ಥೈರ್ಯ ತುಂಬಬೇಕಿದೆ ಎಂದು ಹಿರಿಯ ವಕೀಲ ಎಸ್.ಅರುಣ್‌ಕುಮಾರ್ ಆಗ್ರಹಿಸಿದ್ದಾರೆ.

ಎರಡು ಪ್ರಕರಣ ದಾಖಲಾಗಿವೆ: ಸರಣಿ ಕಳ್ಳತನ ವಿಚಾರವಾಗಿ ನಗರ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಜಾಹ್ನವಿ ಪ್ರತಿಕ್ರಿಯಿಸಿ, ಅ.31ರಂದು ರಾತ್ರಿ ಕಳ್ಳತನವಾಗಿರುವ ಬಗ್ಗೆ ಎರಡು ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾಗಿವೆ. ಆದರೆ ಐದಾರು ಕಡೆ ಕಳ್ಳತನವಾಗಿರುವ ಬಗ್ಗೆ ದೂರು ಬಂದಿಲ್ಲ. ಕಳ್ಳತನ ತಡೆಗೆ ಕ್ರಮ ವಹಿಸಲಾಗಿದೆ. ಹಾಗೆಯೇ ಹಲವು ಪ್ರಕರಣಗಳನ್ನು ಪತ್ತೆ ಹಚ್ಚಿ, ಆರೋಪಿಗಳನ್ನು ಬಂಧಿಸಲಾಗಿದೆ. ಕಳ್ಳತನ ನಡೆದಿರುವ ಬಗ್ಗೆ ಮಾಹಿತಿ ನೀಡಿದರೆ ಖಂಡಿತ ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

ಸಂತೆಪೇಟೆ ಮಳಿಗೆ ಮೇಲೆ ಪಾಲಿಕೆ ಅಧಿಕಾರಿಗಳ ದಾಳಿ; 275 ಕೆಜಿ ಪ್ಲಾಸ್ಟಿಕ್ ವಶ



ಮೈಸೂರು, ನ.4(ಎಸ್‌ಬಿಡಿ)– ಮೈಸೂರು ನಗರ ಪಾಲಿಕೆ ಅಧಿಕಾರಿಗಳು ಸಂತೆಪೇಟೆಯ ಮಳಿಗೆಯೊಂದರ ಮೇಲೆ ದಾಳಿ ನಡೆಸಿ, 275 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಂಡು 10 ಸಾವಿರ ರೂ. ದಂಡ ವಿಧಿಸಿದ್ದಾರೆ.

ಸಂತೆಪೇಟೆಯಲ್ಲಿ ವ್ಯಕ್ತಿಯೊಬ್ಬರು ಏಕ ಬಳಕೆ(ಸಿಂಗಲ್ ಯೂಸ್) ಪ್ಲಾಸ್ಟಿಕ್ ವಸ್ತುಗಳನ್ನು ಕೊಂಡೊಯ್ಯುವುದನ್ನು ಗಮನಿಸಿದ ಪಾಲಿಕೆ ಅಧಿಕಾರಿಗಳು, ಗ್ರಾಹಕರ ಸೋಗಿನಲ್ಲಿ ಮಳಿಗೆ ವಿಳಾಸ ತಿಳಿದು ನಂತರ ಕಾರ್ಯಾಚರಣೆ ನಡೆಸಿದ್ದಾರೆ.

ಆ ವ್ಯಕ್ತಿ ತಿಳಿಸಿದಂತೆ ಸಂತೆಪೇಟೆಯ ಧನ್ವಂತ್ರಿ ಟ್ರೇಡಿಂಗ್ಸ್ ಅಂಗಡಿಗೆ ತೆರಳಿ ಪರಿಶೀಲಿಸಿದಾಗ ಸುಮಾರು 275 ಕೆಜಿ ಪ್ಲಾಸ್ಟಿಕ್ ಲೋಟ, ಕ್ಯಾರಿ ಬ್ಯಾಗ್, ಸ್ಪೂನ್ ಇನ್ನಿತರ ಸಿಂಗಲ್ ಯೂಸ್ಡ್ ಪ್ಲಾಸ್ಟಿಕ್ ದೊರೆತಿದೆ ಆ ಪ್ಲಾಸ್ಟಿಕ್ ವಸ್ತುಗಳನ್ನು ಕೂಡಲೇ ವಶಪಡಿಸಿಕೊಂಡ ಪಾಲಿಕೆ ಅಧಿಕಾರಿಗಳು, ಮಳಿಗೆ ಮಾಲೀಕನಿಗೆ 10 ಸಾವಿರ ದಂಡ ವಿಧಿಸಿ, ಮತ್ತೆ ಈ ರೀತಿಯ ಪ್ಲಾಸ್ಟಿಕ್ ವಸ್ತುಗಳನ್ನು ಮಾರಾಟ ಮಾಡಿದರೆ ಕಠಿಣ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದ್ದಾರೆ.

ಪಾಲಿಕೆ ವಲಯಾಧಿಕಾರಿ ಪ್ರತಿಭಾ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಪರಿಸರ ಇಂಜಿನಿಯರ್ ಮೈತ್ರಿ, ಆರೋಗ್ಯ ಪರಿವೀಕ್ಷಕ ಮಂಜುಕುಮಾರ್, ಕೃಷ್ಣ ಧನಂಜಯಗೌಡ ಹಾಗೂ ಅಭಯ ತಂಡದವರು ಭಾಗವಹಿಸಿದ್ದರು.

ಇದು ಮುಗಿಯದ ಕತೆ: ಮೈಸೂರಿನಲ್ಲಿ ಪ್ಲಾಸ್ಟಿಕ್ ಹಾವಳಿ ಮುಗಿಯದ ಕತೆಯಾಗಿದೆ. ಪಾಲಿಕೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಟನ್‌ಗಳ ಲೆಕ್ಕದಲ್ಲಿ ಪ್ಲಾಸ್ಟಿಕ್ ವಶಪಡಿಸಿಕೊಂಡು ಭಾರಿ ದಂಡ ವಿಧಿಸಿದರೂ ಯಾವುದೇ ಪರಿಣಾಮ ಬೀರಿದಂತಿಲ್ಲ. ಒಂದಿಲ್ಲೊಂದು ಕಡೆ ಸಿಂಗಲ್ ಯೂಸ್ಡ್ ಪ್ಲಾಸ್ಟಿಕ್ ಗ್ರಾಹಕರ ಮೂಲಕ ಪ್ರಕೃತಿ ಒಡಲು ಸೇರುತ್ತಿದೆ. ಕೆಲ ದಿನಗಳ ಹಿಂದೆ ಎಲ್ಲಾ ವ್ಯಾಪಾರಿಗಳ ಸಭೆ ನಡೆಸಿ ಸಿಂಗಲ್ ಯೂಸ್ಡ್ ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಲಾಗಿತ್ತು. ಇದೀಗ ಮತ್ತೆ ಹಳೇ ಚಾಳಿ ಮುಂದುವರೆದಿದೆ ಎಂಬುದು ಪಾಲಿಕೆ ಅಧಿಕಾರಿಗಳ ಸ್ಪಷ್ಟನೆ. ಆದರೆ ಮೈಸೂರನ್ನು ಪ್ಲಾಸ್ಟಿಕ್ ಮುಕ್ತವಾಗಿಸಲು ಈ ರೀತಿಯ ಕಾರ್ಯಾಚರಣೆಗಿಂತ ಪರಿಣಾಮಕಾರಿ ಕ್ರಮದ ಅಗತ್ಯತೆಯಂತೂ ಇದೆ.

ಕಾಡಾನೆ ದಾಳಿಗೆ ಅರಣ್ಯ ಇಲಾಖೆ ವಾಚರ್ ಸಾವು

ಶಾಸಕರಿಂದ ಮೃತನ ಕುಟುಂಬಕ್ಕೆ ಸಾಂತ್ವನ: ಪರಿಹಾರದ ಚೆಕ್ ವಿತರಣೆ



ಶಶಾಂಕ್



ಶಾಸಕ ಅನಿಲ್ ಶಶಾಂಕ್ ಕುಟುಂಬಕ್ಕೆ 5 ಲಕ್ಷ ರೂ.ಗಳ ಚೆಕ್ ವಿತರಿಸಿದರು.

ಹೆಚ್.ಡಿ.ಕೋಟೆ, ನ.4– ಕಾಡಾನೆ ದಾಳಿಗೆ ಅರಣ್ಯ ಇಲಾಖೆ ವಾಚರ್ ಸಾವನ್ನಪ್ಪಿರುವ ಘಟನೆ ಎನ್.ಬೇಗೂರು ಗ್ರಾಪಂ ವ್ಯಾಪ್ತಿಯ ಗುಂಡ್ರೆ ಅರಣ್ಯ ಪ್ರದೇಶದಲ್ಲಿ ಭಾನುವಾರ ಸಂಜೆ ನಡೆದಿದೆ.

ತಾಲೂಕಿನ ಕಾಳಯ್ಯನಹಳ್ಳಿ ಗ್ರಾಮದ ನಿವಾಸಿ ಚಂದ್ರು ಅವರ ಪುತ್ರ ಶಶಾಂಕ್ (22) ಸಾವನ್ನಪ್ಪಿದವರು. ಭಾನುವಾರ ಸಂಜೆ ವಾಚರ್‌ಗಳಾದ ಶಶಾಂಕ್ ಹಾಗೂ ರಾಜು ಗುಂಡ್ರೆ ಅರಣ್ಯ ಪ್ರದೇಶದ ಐಬಿ ಸಮೀಪದ ಜಾಗೂರು ಬಳಿ ಗಸ್ತಿನಲ್ಲಿದ್ದಾಗ ಕಾಡಾನೆ ಏಕಾಏಕಿ ದಾಳಿ ನಡೆಸಿದೆ. ಈ ವೇಳೆ ರಾಜು ಹಾಗೂ ಶಶಾಂಕ್ ಆನೆ ದಾಳಿಯಿಂದ ತಪ್ಪಿಸಿಕೊಳ್ಳಲು ಕಬಿನಿ ಹಿನ್ನೀರು ಪ್ರದೇಶಕ್ಕೆ ಓಡುತ್ತಿದ್ದ ವೇಳೆ ಅವರನ್ನು ಹಿಂಬಾಲಿಸಿದ ಆನೆ ದಂತದಿಂದ ಶಶಾಂಕ್‌ನ ಹೊಟ್ಟೆ ಭಾಗಕ್ಕೆ ಚುಚ್ಚಿ ನೀರಿಗೆ ಎಸೆದಿದೆ. ತೀವ್ರ ಗಾಯಗೊಂಡ ಶಶಾಂಕ್ ಸಾವನ್ನಪ್ಪಿದರೆ, ರಾಜು ನದಿಗೆ ಹಾರಿ ಪ್ರಾಣಪಾಯದಿಂದ ಪಾರಾಗಿದ್ದಾರೆ. ಬಳಿಕ ರಾಜು ನೀಡಿದ ಮಾಹಿತಿ ಮೇರೆಗೆ ಸ್ಥಳಕ್ಕಾಗಮಿಸಿದ ಗುಂಡ್ರೆ ಅರಣ್ಯ ವಲಯದ ಆರ್‌ಎಫ್‌ಓ ಅಮೃತೇಶ್ ಹಾಗೂ ಸಿಬ್ಬಂದಿ ಶಶಾಂಕ್ ಶವವನ್ನು ನದಿಯಿಂದ ಮೇಲೆತ್ತಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದರು.

ಆಸ್ಪತ್ರೆಗೆ ಶಾಸಕ ಅನಿಲ್ ಭೇಟಿ: ವಿಷಯ ತಿಳಿದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ಅನಿಲ್ ಶಶಾಂಕ್‌ನ ಅಂತಿಮ ದರ್ಶನ ಪಡೆದು ಆತನ ಕುಟುಂಬದವರಿಗೆ ಸಾಂತ್ವನ ಹೇಳಿದರು.

> ಬಾಳಿ ಬದುಕಬೇಕಾಗಿದ್ದ ಯುವಕ ಶಶಾಂಕ್ ಸಾವಿನಿಂದ ಆತನ ಕುಟುಂಬಕ್ಕೆ ದಿಕ್ಕೇ ತೋಚದಂತಾಗಿದೆ. ಮೃತನ ಅಕ್ಕ ಭೂಮಿಕ ಅವರಿಗೆ ಅರಣ್ಯ ಕಚೇರಿಯಲ್ಲಿ ಕಂಪ್ಯೂಟರ್ ಆಪರೇಟರ್ ಕೆಲಸವನ್ನೇ ನೀಡಬೇಕು. ಬೇರೆ ಯಾವುದೇ ಕೆಲಸ ನೀಡಬಾರದು ಎಂದು ಎಸಿಎಫ್ ಸತೀಶ್ ಅವರಿಗೆ ಶಾಸಕ ಅನಿಲ್ ಸೂಚಿಸಿದರು.

ನಂತರ ಮಾತನಾಡಿದ ಅವರು, ಈ ಘಟನೆ ನಡೆಯಬಾರದಿತ್ತು. ತಾಲೂಕಿನಲ್ಲಿ ಕಾಡಾನೆ ಹಾವಳಿಯಿಂದ ಸಾವನ್ನಪ್ಪಿರುವ ಪ್ರಕರಣಗಳು ವರದಿ ಯಾಗುತ್ತಿವೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಅರಣ್ಯ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಈಗಾಗಲೇ ಕಾಡಂಚಿನ ಭಾಗದಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾಮಗಾರಿ ಆರಂಭಗೊಂಡಿದೆ ಎಂದ ಅವರು, ಯುವಕ ಆನೆ ದಾಳಿಗೆ ಸಿಲುಕಿ ಸಾವನ್ನಪ್ಪಿರುವುದು ಮನಸ್ಸಿಗೆ ನೋವು ತಂದಿದೆ. ಅರಣ್ಯ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಶಶಾಂಕ್ ಸಾವನ್ನಪ್ಪಿರುವ ಹಿನ್ನಲೆಯಲ್ಲಿ ಸರ್ಕಾರದಿಂದ ಆತನ ಕುಟುಂಬಕ್ಕೆ 30 ಲಕ್ಷ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು. ಇದೀಗ 5 ಲಕ್ಷದ ಚೆಕ್ ಅನ್ನು ವಿತರಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಉಳಿದ ಹಣ ವಿತರಿಸಲಾಗುವುದು. ಜೊತೆಗೆ ಶಶಾಂಕ್ ಅವರ ಅಕ್ಕನಿಗೆ ಅರಣ್ಯ ಇಲಾಖೆಯಲ್ಲಿ ಉದ್ಯೋಗ, ಸರ್ಕಾರದಿಂದ ಬರುವ ಸವಲತ್ತುಗಳನ್ನು ಕೊಡಿಸುತ್ತೇನೆ. ಅಲ್ಲದೇ ವೈಯಕ್ತಿಕವಾಗಿಯೂ ಸಹಾಯ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಇದೇ ವೇಳೆ ಮೃತ ಶಶಾಂಕ್ ತಾಯಿ ಪ್ರೇಮ ಅವರಿಗೆ 5 ಲಕ್ಷ ರೂ.ಗಳ ಪರಿಹಾರದ ಚೆಕ್ ಅನ್ನು ಶಾಸಕರು ವಿತರಿಸಿದರು. ಮರಣೋತ್ತರ ಪರೀಕ್ಷೆ ಬಳಿಕ ಶವವನ್ನು ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಅಂತರಸಂತೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಈ ವೇಳೆ ಎಸಿಎಫ್ ಸತೀಶ್, ಎನ್.ಬೇಗೂರು ಆರ್‌ಎಫ್‌ಓ ಮಂಜುನಾಥ್ ಬಾಗೇವಾಡಿ, ಸಿಬ್ಬಂದಿ ಮಹೇಶ್, ಸಾರ್ವನಿಕ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಶ್ರೀನಿವಾಸ್, ಅಂತರಸಂತೆ ಪೊಲೀಸ್ ಠಾಣೆ ಎಸ್‌ಐ ಚಂದ್ರಹಾಸ, ಸಿಬ್ಬಂದಿಗಳಾದ ಗೋಪಾಲ್, ಎನ್.ಬೇಗೂರು ಗ್ರಾಪಂ ಅಧ್ಯಕ್ಷ ಶೈಲೇಂದ್ರ, ಸದಸ್ಯ ಮಂಜು, ಆದಿವಾಸಿ ಮುಖಂಡ ಚಿಕ್ಕಣ್ಣ, ಮುಖಂಡರಾದ ನಟರಾಜು, ಸಿದ್ದರಾಜು, ಪ್ರಸನ್ನ ಕಾಡುಮನೆ ಇತರರಿದ್ದರು.

ಭತ್ತ ಖರೀದಿ ಕೇಂದ್ರ, ಬೆಂಬಲ ಬೆಲೆ ನಿಗದಿಗೆ ಮನವಿ



ಗ್ರಾಪಂ ವ್ಯಾಪ್ತಿಯಲ್ಲಿ ಭತ್ತ ಖರೀದಿ ಕೇಂದ್ರ ತೆರೆಯುವಂತೆ ಒತ್ತಾಯಿಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲಾಯಿತು.

ತಿ.ನರಸೀಪುರ, ನ.4– ರೈತರು ತಾವು ಬೆಳೆದ ಭತ್ತವನ್ನು ಕನಿಷ್ಠ ಬೆಂಬಲ ಬೆಲೆಗೆ ಮಾರಾಟ ಮಾಡಲು ಗ್ರಾಪಂ ಮಟ್ಟದಲ್ಲಿ ಖರೀದಿ ಕೇಂದ್ರಗಳನ್ನು ತೆರೆಯುವ ಜೊತೆಗೆ ಕ್ವಿಂಟಾಲ್ ಭತ್ತಕ್ಕೆ 500 ರೂ. ಬೆಂಬಲ ಬೆಲೆ ನಿಗದಿ ಮಾಡುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಸದಸ್ಯರು ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ನೇತೃತ್ವದಲ್ಲಿ ತಾಲೂಕು ಕಚೇರಿಗೆ ಆಗಮಿಸಿದ ರೈತರು ಭತ್ತಕ್ಕೆ ಬೆಂಬಲ ಬೆಲೆ, ಖರೀದಿ ಕೇಂದ್ರ ತೆರೆಯುವಂತೆ ಒತ್ತಾಯಿಸಿ ತಹಸೀಲ್ದಾರ್ ಟಿ.ಜೆ.ಸುರೇಶ್ ಆಚಾರ್ ಅವರಿಗೆ ಮನವಿ ಸಲ್ಲಿಸಿದರು.

ಅತ್ತಹಳ್ಳಿ ದೇವರಾಜ್ ಮಾತನಾಡಿ, ತಾಲೂಕಿನಾದ್ಯಂತ ಭತ್ತದ ಕುಯ್ಲು ಆರಂಭವಾಗಿದೆ. ಪ್ರಸಕ್ತ ಸಾಲಿನಲ್ಲಿ ಉತ್ತಮ ಮಳೆಯಾಗಿದ್ದರಿಂದ ಹೆಚ್ಚಿನ ರೈತರು ಭತ್ತವನ್ನು ಬೆಳೆದಿದ್ದಾರೆ. ಕೇಂದ್ರ ಸರ್ಕಾರ ಕ್ವಿಂಟಾಲ್ ಭತ್ತಕ್ಕೆ 2320 ರೂ. ಬೆಂಬಲ ಬೆಲೆ ಘೋಷಿಸಿದೆ. ಆದರೆ ಈ ಬೆಲೆ ರೈತ ವ್ಯವಸಾಯ ಮಾಡಿದ ಖರ್ಚಿಗೂ ಸಾಲದು. ಹೀಗಾಗಿ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಈಗಾಗಲೇ ಕೇರಳ, ಒಡಿಸ್ಸಾ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ನೀಡುತ್ತಿರುವಂತೆ ಕ್ವಿಂಟಾಲ್ ಭತ್ತಕ್ಕೆ 500 ರೂ. ಬೆಂಬಲ ಬೆಲೆ ಘೋಷಣೆ ಮಾಡಲು ರಾಜ್ಯ ಸರ್ಕಾರ ಮುಂದಾಗಬೇಕೆಂದು ಒತ್ತಾಯಿಸಿದರು.

ರೈತರು ಬೆಳೆದ ಬೆಳೆಗಳನ್ನು ಬೆಂಬಲ ಬೆಲೆಗೆ ಮಾರಾಟ ಮಾಡಲು ಗ್ರಾಪಂ ವ್ಯಾಪ್ತಿಯಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಬೇಕು. ಹೋಬಳಿ ಮಟ್ಟದಲ್ಲಿ ಖರೀದಿ ಕೇಂದ್ರಗಳಿವೆ. ಆದರೂ ಅವು ತೆರೆಯುವ ಮೊದಲೇ ರೈತರು ಭತ್ತವನ್ನು ಕಡಿಮೆ ಬೆಲೆಗೆ ಮಾರಾಟ ಮಾಡುತ್ತಾರೆ. ಹಾಗಾಗಿ ಭತ್ತದ ಕಟಾವು ಆರಂಭವಾಗುವ 20 ದಿನಗಳ ಮೊದಲೇ ಖರೀದಿ ಕೇಂದ್ರ ತೆರೆದು ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕೆಂದು ಮನವಿ ಮಾಡಿದ ಅವರು, ರೈತರು ಸರ್ಕಾರ ಘೋಷಿಸಿರುವ ಕ್ವಿಂಟಾಲ್ ಭತ್ತವನ್ನು 2320 ರೂ.ಗಿಂತ ಕಡಿಮೆ ಬೆಲೆಗೆ ಮಾರಾಟ ಮಾಡಬಾರದು ಹಾಗೂ ದಳ್ಳಾಳಿಗಳು ಕಡಿಮೆ ಬೆಲೆಗೆ ರೈತರಿಂದ ಭತ್ತ ಖರೀದಿಸುವುದು ಕಂಡು ಬಂದರೆ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

> ಭತ್ತಕ್ಕೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ 2320 ಕ್ಕಿಂತ ಕಡಿಮೆ ಬೆಲೆಗೆ ರೈತರು ಮಾರಾಟ ಮಾಡಬಾರದು. ರೈತರನ್ನು ವಂಚಿಸಿ ಬಂಡವಾಳಶಾಹಿಗಳು ಹಾಗೂ ಮಧ್ಯವರ್ತಿಗಳು ಕಡಿಮೆ ಬೆಲೆಗೆ ಖರೀದಿಸಿದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.
>
> - ಅತ್ತಹಳ್ಳಿ ದೇವರಾಜ್, ರಾಜ್ಯ ಸಂಘಟನಾ ಕಾರ್ಯದರ್ಶಿ ರಾಜ್ಯ ಕಬ್ಬು ಬೆಳೆಗಾರರ ಸಂಘ.

ಈ ವೇಳೆ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ತಾಲೂಕು ಉಪಾಧ್ಯಕ್ಷ ಹೆಗ್ಗೂರು ರಂಗರಾಜು, ತಾಲೂಕು ಸಂಘಟನಾ ಕಾರ್ಯದರ್ಶಿ ಕುರುಬೂರು ಪ್ರದೀಪ್, ರೈತ ಮುಖಂಡರಾದ ಅರುಣ್ ಕುಮಾರ್, ಬನ್ನೂರು ಸೂರಿ, ಕುಂತನಹಳ್ಳಿ ಕುಳ್ಳೇಗೌಡ, ವೆಂಕಟರಾಜು, ಸಿ.ಲಿಂಗಣ್ಣ, ಬೂದಹಳ್ಳಿ ನಂಜುಂಡಸ್ವಾಮಿ, ಕರೋಹಟ್ಟಿ ಉಮೇಶ್, ಆದಿ ಬೆಟ್ಟಹಳ್ಳಿ ರವಿ ಕುಮಾರ್, ಕರೋಹಟ್ಟಿ ರಾಜಶೇಖರ್, ಹಿಟ್ಟುವಳ್ಳಿ ಮರಿದೇವೇಗೌಡ ಹಾಜರಿದ್ದರು.

ನೂತನ ಬಸ್ ಸೇವೆಗೆ ಚಾಲನೆ



ನೂತನ ಬಸ್ ಸೇವೆಗೆ ಚಾಲನೆ ನೀಡಲಾಯಿತು.

ಚುಂಚನಕಟ್ಟೆ, ನ.4– ಶಾಸಕ ಡಿ.ರವಿಶಂಕರ್ ಸೂಚನೆ ಮೇರೆಗೆ ಸಾಲಿಗ್ರಾಮ ತಾಲೂಕಿನ ಮುದ್ದನಹಳ್ಳಿಯಿಂದ ಕೆ.ಆರ್.ನಗರ ಮಾರ್ಗವಾಗಿ ಮೈಸೂರಿಗೆ ತಲುಪುವ ನೂತನ ಬಸ್ ಸೇವೆಗೆ ಚಾಲನೆ ನೀಡಲಾಯಿತು.

ಈ ಬಸ್ ಬೆಳಗ್ಗೆ 6.10ಕ್ಕೆ ಮುದ್ದನಹಳ್ಳಿ ಗ್ರಾಮದಿಂದ ಹೊರಟು ಹೊಸೂರು–ಚುಂಚನಕಟ್ಟೆ ಮಾರ್ಗವಾಗಿ ಕೆ.ಆರ್.ನಗರ ಮೂಲಕ ಮೈಸೂರು ತಲುಪಿ ರಾತ್ರಿ 7.30ಕ್ಕೆ ಇದೇ ಮಾರ್ಗವಾಗಿ ಮುದ್ದನಹಳ್ಳಿ ಗ್ರಾಮಕ್ಕೆ ಬಂದು ತಂಗಲಿದೆ. ನೂತನ ಬಸ್ ಸಂಚಾರಕ್ಕೆ ಪೂಜೆ ಸಲ್ಲಿಸಿದ ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸದಸ್ಯ ಸಿ.ಕೆ.ಬಾಲಮನೋಹರ, ಚಾಲಕ ದಿವಾಕರ ಮತ್ತು ನಿರ್ವಾಹಕ ಪುಟ್ಟೇಗೌಡ ಅವರನ್ನು ಅಭಿನಂಭಿಸಿದರು.

ನಂತರ ಮಾತನಾಡಿದ ಅವರು, ರಾತ್ರಿ ವೇಳೆ ಕೆ.ಆರ್.ನಗರದಿಂದ ಗ್ರಾಮಕ್ಕೆ ಬರಲು ಬಸ್ ಸೌಲಭ್ಯ ಇಲ್ಲದೇ ಗ್ರಾಮಸ್ಥರಿಗೆ ತೊಂದರೆಯಾಗಿತ್ತು. ಆದ ಕಾರಣ ಶಾಸಕ ಡಿ.ರವಿಶಂಕರ್ ಅವರಿಗೆ ಮನವಿ ಮಾಡಲಾಗಿ ಈ ಭಾಗದ ಕುಪ್ಪೆ, ಚಿಕ್ಕಕೊಪ್ಪಲು, ದೊಡ್ಡ ಕೊಪ್ಪಲು, ಹಳಿಯೂರು ಈ ಗ್ರಾಮಗಳ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಕೆ.ಆರ್.ನಗರ ಬಸ್ ಡಿಪೋ ವ್ಯವಸ್ಥಾಪಕರಿಗೆ ಸೂಚಿಸಿದ ಹಿನ್ನೆಲೆಯಲ್ಲಿ ಈ ಬಸ್ ಸೇವೆ ಆರಂಭಿಸಲಾಗಿದ್ದು, ಇದಕ್ಕಾಗಿ ಶಾಸಕರಿಗೆ ಮತ್ತು ಡಿಪೋ ವ್ಯವಸ್ಥಾಪಕರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು. ಈ ಸಂದರ್ಭ ಗ್ರಾಪಂ ಮಾಜಿ ಉಪಾಧ್ಯಕ್ಷ ತಮ್ಮೇಗೌಡ, ಮಾಜಿ ಸದಸ್ಯರಾದ ಪಾರ್ಥ, ಚಿಕ್ಕಪ್ಪಾಜಿ, ಮುಖಂಡರಾದ ಸಿ.ಕೆ.ಹೇಮಂತ ಕುಮಾರ್, ಕೃಷ್ಣೇಗೌಡ, ಜಗದೀಶ್, ಅರುಣ್, ಮಂಜುನಾಥ, ಲೋಹಿತ್, ಮುದ್ದನಹಳ್ಳಿ ಗ್ರಾಮಸ್ಥರು ಇದ್ದರು.

ಅದ್ದೂರಿ ಶ್ರೀಕಾಲಭೈರವೇಶ್ವರಸ್ವಾಮಿ ಉತ್ಸವ



ಗಾವಡಗೆರೆಯಲ್ಲಿ ಶ್ರೀಕಾಲಭೈರವೇಶ್ವರ ಸ್ವಾಮಿ ಉತ್ಸವ ಅದ್ದೂರಿಯಾಗಿ ನೆರವೇರಿತು.

ಹುಣಸೂರು, ನ.4– ದೀಪಾವಳಿ ಅಮಾವಾಸ್ಯೆ ಪ್ರಯುಕ್ತ ಗಾವಡಗೆರೆಯಲ್ಲಿ ಶ್ರೀಕಾಲಭೈರವೇಶ್ವರಸ್ವಾಮಿ ಉತ್ಸವ ಅದ್ದೂರಿಯಾಗಿ ನಡೆಯಿತು.

ಉತ್ಸವ ಅಂಗವಾಗಿ ಸ್ವಾಮಿಗೆ ಮುಂಜಾನೆಯೇ ಅಭಿಷೇಕ, ಹೋಮ, ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಸರತಿ ಸಾಲಿನಲ್ಲಿ ನಿಂತು ಸಾವಿರಾರು ಭಕ್ತರು ದೇವರ ದರ್ಶನ ಪಡೆದರು. ಬಳಿಕ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಗ್ರಾಮದ ಕೆರೆ ಅಂಗಳದಿಂದ ವಿಶೇಷವಾಗಿ ಅಲಂಕರಿಸಿದ ಉತ್ಸವ ಮೂರ್ತಿಯನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಅಲ್ಲದೇ ಪ್ರಥಮ ಕಾರ್ತಿಕ ಅಂಗವಾಗಿ ದೇಗುಲದಲ್ಲಿ ಸಾವಿರಾರು ಹಣತೆ ಹಚ್ಚುವ ಮೂಲಕ ದೀಪೋತ್ಸವಕ್ಕೆ ಚಾಲನೆ ನೀಡಲಾಯಿತು.

ಇದೇ ವೇಳೆ ದೇವಸ್ಥಾನ ನಿರ್ಮಾಣಕ್ಕೆ ಭೂಮಿ ದಾನ ನೀಡಿದ ಶಿವಬಾಯಿ ಅವರನ್ನು ಸನ್ಮಾನಿಸಲಾಯಿತು. ಸಮಿತಿ ಅಧ್ಯಕ್ಷ ವಿಠಲ್ ರಾವ್ ಪವಾರ್, ಪ್ರಧಾನ ಕಾರ್ಯದರ್ಶಿ ಜಿ.ವಿ.ಶ್ರೀನಾಥ್, ಖಜಾಂಚಿ ಮದನ ಬೊಡೆ, ಸದಸ್ಯರಾದ ಹೊನ್ನಪ್ಪರಾವ್ ಕಾಳಿಂಗೆ, ಸತ್ಯಪ್ಪ, ಲಕ್ಷ್ಮಣ್ ರಾವ್ ಪವಾರ್, ಚೇತನ್, ಭರತ್, ಸುನೀಲ್, ರವಿ, ಸಮರ್ಥ, ಗ್ರಾಪಂ ಸದಸ್ಯರಾದ ಮಧುಮತಿ ಬಾಯಿ, ಶ್ರೀನಾಥ್ ಪಿ, ದೇವಸ್ಥಾನದ ಅರ್ಚಕರಾದ ಭೈರಾಶೆಟ್ಟಿ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಭಾಗಿಯಾಗಿದ್ದರು.

ಭೈರಾಪುರದಲ್ಲಿ 69ನೇ ಕನ್ನಡ ರಾಜ್ಯೋತ್ಸವ



ಕಾರ್ಯಕ್ರಮದಲ್ಲಿ ರಶ್ಮಿತಾ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ನ.4– ಕನ್ನಡದ ಕುಲಪುರೋಹಿತರಾದ ಆಲೂರು ವೆಂಕಟರಾಯರು ಕರ್ನಾಟಕ ಏಕೀಕರಣ ಚಳವಳಿಯನ್ನು 1905ರಲ್ಲಿ ಪ್ರಾರಂಭಿಸಿದರು. 1950ರಲ್ಲಿ ಭಾರತವು ಗಣರಾಜ್ಯವಾದ ನಂತರ ಭಾರತದ ವಿವಿಧ ಪ್ರಾಂತ್ಯಗಳು, ಭಾಷೆಗಳ ಆಧಾರದ ಮೇಲೆ ರಾಜ್ಯಗಳಾಗಿ ರೂಪುಗೊಂಡವು. ಈ ಹಿಂದೆ ರಾಜರ ಆಳ್ವಿಕೆಯಲ್ಲಿ ದಕ್ಷಿಣ ಭಾರತದಲ್ಲಿ ಹಲವಾರು ಸಂಸ್ಥಾನಗಳನ್ನು ಒಳಗೊಂಡಂತೆ ರಾಜ್ಯಗಳು ರೂಪುಗೊಂಡಿದ್ದವು. ಕನ್ನಡ ಮಾತನಾಡುವ ಪ್ರಾಂತ್ಯಗಳು ಸೇರಿ, ಮೈಸೂರು ರಾಜ್ಯವು ಉದಯವಾಯಿತು ಎಂದು ಪುರಸಭಾ ಸದಸ್ಯ ಎಲ್.ಮಂಜುನಾಥ್ ತಿಳಿಸಿದರು.

ಪಟ್ಟಣದ ಪುರಸಭಾ ವ್ಯಾಪ್ತಿಯ ಭೈರಾಪುರದಲ್ಲಿ ಡಾ.ಬಾಬು ಜಗಜೀವನ್ ರಾಂ ಕ್ಷೇಮಾಭಿವೃದ್ಧಿ ಸಂಘದಿಂದ ನಡೆದ 69ನೇ ಕನ್ನಡ ರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, 1956ರ ನ.1 ರಂದು, ಮದ್ರಾಸ್, ಮುಂಬಯಿ, ಹೈದರಾಬಾದ್ ಪ್ರಾಂತ್ಯದ ಕನ್ನಡ ಮಾತನಾಡುವ ಪ್ರದೇಶಗಳು ವಿಲೀನಗೊಂಡು ಮೈಸೂರು ರಾಜ್ಯ ಉದಯವಾಯಿತು ಹಾಗೂ ಉತ್ತರ ಕರ್ನಾಟಕ, ಮಲೆನಾಡು ಮತ್ತು ಹಳೆಯ ಮೈಸೂರು ಎಂಬುದಾಗಿ ಹೊಸದಾಗಿ ರೂಪುಗೊಂಡ ಮೈಸೂರು ರಾಜ್ಯವನ್ನು ಮೂರು ಪ್ರದೇಶಗಳಲ್ಲಿ ಗುರುತಿಸಲಾಯಿತು.

ಹೊಸದಾಗಿ ಏಕೀಕೃತಗೊಂಡ ರಾಜ್ಯದ ಆರಂಭದಲ್ಲಿ ಹೊಸ ಘಟಕದ ಕೋರ್ ರೂಪುಗೊಂಡು ಮುಂಚಿನ ರಾಜ್ಯದ ಹೆಸರು ಇರಲೆಂದು ಮೈಸೂರು ಹೆಸರನ್ನು ಉಳಿಸಿಕೊಂಡರು. ಆದರೆ ಉತ್ತರ ಕರ್ನಾಟಕದ ಜನರ ತರ್ಕ ಮಾನ್ಯತೆಗಾಗಿ, ರಾಜ್ಯದ ಹೆಸರು ನ.1, 1973 ರಂದು ಕರ್ನಾಟಕ ಎಂದು ಬದಲಾಯಿತು ಎಂದರು.

ಇದೇ ವೇಳೆ ಸ್ನಾತಕೋತ್ತರ ಪದವಿ ಇತಿಹಾಸ ವಿಭಾಗದಲ್ಲಿ ಚಿನ್ನದ ಪದಕ ಪಡೆದ ವಿದ್ಯಾರ್ಥಿನಿ ರಶ್ಮಿತಾ ಅವರನ್ನು ಸನ್ಮಾನಿಸಲಾಯಿತು. ಬಾಬು ಜಗಜೀವನ್ ರಾಂ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಚಯ್ಯ, ಉಪಾಧ್ಯಕ್ಷ ಪ್ರದೀಪ್, ಖಜಾಂಚಿ ಮರಿಲಿಂಗಯ್ಯ, ಪ್ರಧಾನ ಕಾರ್ಯದರ್ಶಿ ಪ್ರಸನ್ನ, ಹಿರಿಯ ಮುಖಂಡ ಪಿ.ಶೇಷಯ್ಯ, ಜೈ ಭೀಮ್ ಸೇವಾ ಸಂಸ್ಥೆ ಅಧ್ಯಕ್ಷ ಮಹದೇವಸ್ವಾಮಿ, ಮಹದೇವಮ್ಮ, ಕಾರ್ಯದರ್ಶಿಗಳಾದ ಗೋಪಿ, ಮಾದೇಶ್, ಮಂಜು, ಚನ್ನಯ್ಯ, ನಿಂಗರಾಜು, ಶಿವಣ್ಣ, ಜಗ್ಗು, ಶಂಕರ್, ಸುರೇಶ್, ಆನಂದ, ಶಿವಕುಮಾರ್, ಭಾರತ್, ರಾಜು, ಸಿದ್ದರಾಜು, ಗುಂಡು, ಸಿದ್ದರಾಜು, ಸ್ವಾಮಿ, ರಜನಿ ರಾಜ್, ರಾಜಣ್ಣ ಕೆಂಪರಾಜು, ಗ್ರಾಮಸ್ಥರು ಹಾಜರಿದ್ದರು

ಮಕ್ಕಳಿಗೆ ನೋಟ್‌ಬುಕ್, ಕಲಿಕಾ ಸಾಮಗ್ರಿ ವಿತರಣೆ



ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ಸೋಮಣ್ಣ ಅವರನ್ನು ಸನ್ಮಾನಿಸಲಾಯಿತು.

ಸರಗೂರು, ನ.4– ಕನ್ನಡ ರಾಜ್ಯೋತ್ಸವ ಅಂಗವಾಗಿ ತಾಲೂಕಿನ ಹುಸ್ಕೂರು ಗಿರಿಜನ ಹಾಡಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ನಟ ಚೇತನ್ ದೇವರಾಜ್ ನೋಟ್‌ಬುಕ್ ಹಾಗೂ ಕಲಿಕಾ ಸಾಮಗ್ರಿಗಳನ್ನು ವಿತರಿಸಿದರು.

ನಂತರ ಮಾತನಾಡಿದ ನಟ ಚೇತನ್, ಕನ್ನಡ ಶಾಲೆಗಳ ಅಭಿವೃದ್ಧಿ ದೃಷ್ಟಿಯಿಂದ ಬಡ ಹಾಗೂ ಕಾಡಂಚಿನ ಗ್ರಾಮಗಳ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವ ಉದ್ದೇಶದಿಂದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಹುಸ್ಕೂರು ಗಿರಿಜನ ಹಾಡಿ ಮಕ್ಕಳಿಗೆ ನೋಟ್‌ಬುಕ್ ಹಾಗೂ ಕಲಿಕಾ ಸಾಮಾಗ್ರಿಗಳನ್ನು ವಿತರಿಸಲಾಗಿದೆ. ಪ್ರತಿಯೊಬ್ಬರೂ ಸರ್ಕಾರಿ ಶಾಲೆ ಮಕ್ಕಳ ವಿದ್ಯಾರ್ಜನೆಗೆ ತಮ್ಮ ಕೈಲಾದ ಸಹಾಯ ಮಾಡುವ ಮೂಲಕ ಬಡಮಕ್ಕಳಿಗೆ ಆಸರೆಯಾಗೋಣ. ಮುಂದಿನ ದಿನಗಳಲ್ಲಿ 1 ಸಾವಿರ ಪುಸ್ತಕ ಹಂಚುವ ಗುರಿ ಹೊಂದಲಾಗಿದೆ. ಕನ್ನಡ ಶಾಲೆ ಉಳಿಯಲಿ ಹೆಮ್ಮರವಾಗಿ ಬೆಳೆಯಲಿ ಎಂಬುದೇ ನಮ್ಮ ಧ್ಯೇಯ ಎಂದು ತಿಳಿಸಿದರು. ಈ ವೇಳೆ ಆದಿವಾಸಿ ಬುಡಕಟ್ಟು ಜನಾಂಗದ ಹೋರಾಟಗಾರ ಪದ್ಮಶ್ರೀ ಪುರಸ್ಕೃತ ಸೋಮಣ್ಣ ಅವರನ್ನು ಶಾಲೆ ವತಿಯಿಂದ ಸನ್ಮಾನಿಸಲಾಯಿತು. ಶಾಲೆ ಮುಖ್ಯಶಿಕ್ಷಕ ಟಿ.ಎಂ.ಸುರೇಶ್ ಕುಮಾರ್ ಮಾತನಾಡಿದರು. ಇದೇ ವೇಳೆ ನೋಟ್‌ಬುಕ್ ವಿತರಿಸಲಾಯಿತು. ಈ ವೇಳೆ ಶಾಲೆ ಸಹ ಶಿಕ್ಷಕ ಆರ್.ಪ್ರೇಮ್ ಕುಮಾರ್, ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಗ್ರಾಪಂ ಪ್ರತಿನಿಧಿಗಳು ಹಾಗೂ ಗ್ರಾಮದ ಮುಖಂಡರು ಹಾಜರಿದ್ದರು.

ನ.17ಕ್ಕೆ ಮುಳ್ಳೂರು ಪಿಎಸಿಎಸ್ ಚುನಾವಣೆ

ಹುಣಸೂರು, ನ.4– ತಾಲೂಕಿನ ಮುಳ್ಳೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ಚುನಾವಣೆ ನ.17 ರಂದು ನಡೆಯಲಿದ್ದು, ಅರ್ಹ ಸದಸ್ಯರಿಗೆ ಈಗಾಗಲೇ ಅಂಚೆ ಮೂಲಕ ಚುನಾವಣಾ ನೋಟಿಸ್ ರವಾನಿಸಲಾಗಿದೆ ಎಂದು ರಿಟರ್ನಿಂಗ್ ಆಫೀಸರ್ ರಾಜಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಘದ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲು ನ.9ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಂಘದ ಮುಖ್ಯ ಪ್ರವರ್ತಕ ಎಂ.ಎನ್.ಮಹೇಶ್ ಅಥವಾ ರಿಟನಿಂಗ್ ಆಫೀಸರ್ ರಾಜಣ್ಣ ಅವರನ್ನು ಭೇಟಿ ಮಾಡಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೋಟೆಯಲ್ಲಿ ಹುಲಿ ಸೆರೆ ಕಾರ್ಯಾಚರಣೆ ಆರಂಭ





ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದ ಮಹೇಂದ್ರ, ಭೀಮ ಆನೆಗಳು

ಹೆಚ್.ಡಿ.ಕೋಟೆ ನ4– ಪಟ್ಟಣದ ಹೈಬ್ಬಳ್ಳ ಸ್ಟೇಡಿಯಂ ಬಡಾವಣೆ ಹಿಂಭಾಗ ಹುಲಿ ಕಾಣಿಸಿಕೊಂಡ ಹಿನ್ನಲೆಯಲ್ಲಿ ಅರಣ್ಯ ಇಲಾಖೆ ಹುಲಿ ಸೆರೆ ಕಾರ್ಯಾಚರಣೆ ಆರಂಭಿಸಿದೆ.

ಪಟ್ಟಣದ ನಾಗಮ್ಮ ಬಸವರಾಜು ಅವರ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಚಂದ್ರು ಮೇಲೆ ಸೋಮವಾರ ಹುಲಿ ದಾಳಿಗೆ ಮುಂದಾಗಿದೆ. ಆದರೆ ಜಮೀನಿಗೆ ಅಳಡಿಸಿದ್ದ ತಂತಿಬೇಲಿ ಅಡ್ಡಬಂದ ಹಿನ್ನಲೆಯಲ್ಲಿ ಚಂದ್ರು ಹುಲಿ ದಾಳಿಯಿಂದ ಪಾರಾಗಿದ್ದಾರೆ ಎನ್ನಲಾಗಿದೆ. ಬಳಿಕ ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಆರ್‌ಎಫ್‌ಓ ಪೂಜಾ ಹಾಗೂ ಸಿಬ್ಬಂದಿ ಬಳ್ಳೆ ಆನೆ ಶಿಬಿರದ ದಸರಾ ಆನೆಗಳಾದ ಮಹೇಂದ್ರ ಹಾಗೂ ಭೀಮನ ಸಹಾಯದಿಂದ ಹುಲಿ ಸೆರೆ ಕಾರ್ಯಾಚರಣೆ ಆರಂಭಿಸಿದರು.

2 ಕಡೆ ಕಾರ್ಯಾಚರಣೆ ಆರಂಭ: ಪಟ್ಟಣದ ಹೆಬ್ಬಳ್ಳ ಗ್ರಾಮದ ಬಳಿ ಮತ್ತು ಟೈಗರ್ ಬ್ಲಾಕ್ ಬಳಿ ಹುಲಿ ಇರುವ ಬಗ್ಗೆ ಮಾಹಿತಿ ದೊರೆತ ಹಿನ್ನಲೆಯಲ್ಲಿ 2 ಕಡೆ ಒಂದೊಂದು ದಸರಾ ಆನೆಗಳ ಸಹಾಯದಿಂದ ಕಾರ್ಯಾಚಣೆ ಆರಂಭಿಸಲಾಯಿತು. ನಂತರ ಹೆಬ್ಬಳ್ಳ ಸಮೀಪದ ರೈತ ದಯಾನಂದ ಅವರ ಜಮೀನಿನಲ್ಲಿ ಹುಲಿ ಪ್ರತ್ಯಕ್ಷವಾಗಿದ್ದು, ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು. ಈ ವೇಳೆ ಅಧಿಕಾರಿಗಳು ಟೈಗರ್ ಬ್ಲಾಕ್‌ನಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದ ಮತ್ತೊಂದು ಆನೆಯನ್ನು ಹೆಬ್ಬಳ್ಳಕ್ಕೆ ಕರೆಸಿಕೊಂಡು ನುರಿತ ವೈದ್ಯರು ಹಾಗೂ ಅರವಳಿಕೆ ತಜ್ಞರ ಮೂಲಕ ಕಾರ್ಯಾಚರಣೆ ಆರಂಭಿಸಿದರು. ಒಂದು ಗಂಟೆಗಳ ಸತತ ಕಾರ್ಯಾಚರಣೆ ಬಳಿಕ ಹುಲಿ ಕಾಣಿಸಿಕೊಂಡರೂ ಹುಲಿ ದೂರವಿದ್ದ ಕಾರಣ ಅರವಳಿಕೆ ಮದ್ದು ನೀಡಲು ಸಾಧ್ಯವಾಗಲಿಲ್ಲ. ಸಂಜೆಯಾಗಿದ್ದರಿಂದ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿ ನಾಳೆಗೆ ಮುಂದೂಡಲಾಯಿತು. ಈ ವೇಳೆ 50ಕ್ಕೂ ಹೆಚ್ಚು ಅರಣ್ಯ ಇಲಾಖೆ ಸಿಬ್ಬಂದಿ ಭಾಗವಹಿಸಿದ್ದರು. ಹುಲಿ 2 ಮರಿಗಳೊಂದಿಗೆ ಸಂಚರಿಸುವುದನ್ನು ಹೆಬ್ಬಳ್ಳ, ಶಾಂತಿಪುರ, ಹೆಚ್.ಡಿ.ಕೋಟೆ ಪಟ್ಟಣ ಸೇರಿದಂತೆ ಹಲವು ಮಂದಿ ನೋಡಿದ್ದು, ಕಾರ್ಯಾಚರಣೆ ವೇಳೆಯೂ ಮರಿಗಳು ಮತ್ತು ಹುಲಿ ಚಲಿಸುವುದನ್ನು ಅರಣ್ಯ ಸಿಬ್ಬಂದಿ ಮತ್ತು ಸಾರ್ವಜನಿಕರು ಮೊಬೈಲ್‌ಗಳಲ್ಲಿ ಸೆರೆ ಹಿಡಿದಿದ್ದಾರೆ.

ಹುಣಸೂರಲ್ಲಿ ಅದ್ದೂರಿ ಕನ್ನಡ ರಾಜ್ಯೋತ್ಸವ



ಮುನೇಶ್ವರ ಕಾವಲ್ ಮೈದಾನದಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ ಕನ್ನಡ ರಾಜ್ಯೋತ್ಸವಕ್ಕೆ ಚಾಲನೆ ನೀಡಿದರು.



ಹುಣಸೂರು, ನ.4– ನಗರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಆಯೋಜಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಕನ್ನಡ ನಾಡು, ನುಡಿ, ಪರಂಪರೆ ಬಿಂಬಿಸುವಲ್ಲಿ ಯಶಸ್ವಿಯಾಯಿತು.

ಒಂದೆಡೆ ಕಲಾ ತಂಡಗಳ ಮೇಳೈಸುವಿಕೆಯಾದರೆ, ಮತ್ತೊಂದೆಡೆ ಕನ್ನಡ ಭಾಷೆ ಉಳಿವು, ಬೆಳವಣಿಗೆಗೆ ಕಾಣಿಕೆ ನೀಡುತ್ತಿರುವ ಆಟೋ, ಟ್ಯಾಕ್ಸಿ ಚಾಲಕರು, ಮಾಲೀಕರ ಸಂಘದ ಸದಸ್ಯರು ಕನ್ನಡ ಸಂಸ್ಕೃತಿ ಬಿಂಬಿಸುವ ಕಲಾ ಪ್ರದರ್ಶನದೊಂದಿಗೆ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.

ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ ನಾಡ ಧ್ವಜಾರೋಹಣ ಮಾಡುವ ಮೂಲಕ ರಾಜ್ಯೋತ್ಸವ ಸಂಭ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಶಾಲಾ ಮಕ್ಕಳು, ಪೊಲೀಸ್ ಸಿಬ್ಬಂದಿ ಪಥಸಂಚಲನ ನಡೆಸಿ ಗಣ್ಯರಿಗೆ ಧ್ವಜವಂದನೆ ಸಲ್ಲಿಸಿದರು. ಉಪವಿಭಾಗಾಧಿಕಾರಿ ಹೆಚ್.ಬಿ.ವಿಜಯಕುಮಾರ್ ಇದ್ದರು.

ಆಕರ್ಷಕ ಮೆರವಣಿಗೆ: ನಗರದ ಕಲ್ಕುಣಿಕೆ ರಂಗನಾಥ ಬಡಾವಣೆಯಲ್ಲಿ ನಂದಿಧ್ವಜಕ್ಕೆ ಪೂಜೆ ಸಲ್ಲಿಸುವ ಮೂಲಕ ನಗರಸಭಾಧ್ಯಕ್ಷ ಎಸ್.ಶರವಣ ರಾಜ್ಯೋತ್ಸವ ಮೆರವಣಿಗೆಗೆ ಚಾಲನೆ ನೀಡಿದರು. ಬೆಳ್ಳಿ ರಥದಲ್ಲಿ ತಾಯಿ ಭುವನೇಶ್ವರಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿದ ಬಳಿಕ ಮೆರವಣಿಗೆ ಆರಂಭಗೊಂಡಿತು. ಈ ವೇಳೆ ನಗರಸಭಾ ಸದಸ್ಯರಾದ ಕೃಷ್ಣರಾಜಗುಪ್ತ, ರಮೇಶ್, ದೇವನಾಯ್ಕ, ಕಸಾಪ ಅಧ್ಯಕ್ಷ ಮಹದೇವ್, ತಹಸೀಲ್ದಾರ್ ಜೆ.ಮಂಜುನಾಥ್, ಪೌರಾಯುಕ್ತೆ ಕೆ.ಮಾನಸ, ಕನ್ನಡಪರ ಸಂಘಟನೆಗಳ ಮುಖಂಡರು, ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ಸದಸ್ಯ ಜಯರಾಮ್, ಪಿ.ಆರ್.ರಾಚಪ್ಪ ಇತರರಿದ್ದರು.

ಮೆರವಣಿಗೆಯಲ್ಲಿ ಕಲ್ಕುಣಿಕೆ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳ ಬ್ಯಾಂಡ್‌ಸೆಟ್, ಪ್ರೌಢಶಾಲೆ ಮತ್ತು ಹಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು, ಅರಣ್ಯ ಇಲಾಖೆಯ ಪರಿಸರ ಉಳಿಸುವ ಕುರಿತ ಸ್ತಬ್ಧಚಿತ್ರ, ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ನರೇಗಾ, ಸ್ವಚ್ಛತಾ ಅಭಿಯಾನ, ಕೂಸಿನ ಮನೆ ಸೇರಿದಂತೆ 40ಕ್ಕೂ ಹೆಚ್ಚು ಯೋಜನೆಗಳ ಸಾಂವಿಧಾನಿಕ ಸವಲತ್ತುಗಳ ಕುರಿತು ಮಾಹಿತಿ ನೀಡುವ ಸ್ತಬ್ಧ ಚಿತ್ರ, ಎಸ್ಸಿ, ಎಸ್ಟಿ ಇಲಾಖೆಗಳ ಜಂಟಿ ಆಶ್ರಯದಲ್ಲಿ ಸಮಾನತೆ ಹರಿಕಾರ ಶೀರ್ಷಿಕೆಯಡಿ ಅಂಬೇಡ್ಕರ್, ದೇವರಾಜ ಅರಸರ ಯೋಜನೆಗಳು, ಯೋಚನೆಗಳನ್ನು ತಿಳಿಸುವ ಸ್ತಬ್ಧ ಚಿತ್ರ ಎಲ್ಲರ ಗಮನ ಸೆಳೆಯಿತು.

ಕಲಾ ತಂಡಗಳ ಕಲರವ: ಸ್ಥಳೀಯ ಜಾನಪದ ಕಲಾತಂಡಗಳು ಮೆರವಣಿಗೆಯ ಮೆರುಗನ್ನು ಮತ್ತಷ್ಟು ಹೆಚ್ಚಿಸಿದವು. ತಾಲೂಕಿನ ವಿನೋಬಾ ಕಾಲೋನಿಯ ಶ್ರೀರಾಮ ಜಾನಪದ ನೃತ್ಯ ಕುಣಿತ ತಂಡದ ಗೆಜ್ಜೆ ಕುಣಿತ ನೋಡುಗರ ಮನ ಸೆಳೆಯಿತು. ಹೆಚ್.ಡಿ.ಕೋಟೆಯ ಬಸವಣ್ಣ ಮತ್ತವರ ತಂಡದ ವೀರಗಾಸೆ ಕುಣಿತ, ಮೈಸೂರಿನ ಮುತ್ತಪ್ಪನ್ ತಂಡದ ಚಂಡೆ ವಾದನ, ಗಾವಡಗೆರೆಯ ರಮ್ಯ ಮತ್ತು ತಂಡದ ಡೊಳ್ಳುಕುಣಿತ, ನಗರದ ಪೌರ ಕಾರ್ಮಿಕರ ಕಾಲೋನಿಯ ಮೋಹನ್ ಮತ್ತವರ ತಂಡದ ನಗಾರಿ ಮತ್ತು ಡೊಳ್ಳುಕುಣಿತ, ಕಿಂಗ್ ಅಕಾಡೆಮಿಯ ಮಕ್ಕಳ ಸ್ಕೇಟಿಂಗ್ ಪ್ರದರ್ಶನ ಸೇರಿದಂತೆ ಮತ್ತಿತರ ಕಲಾ ತಂಡಗಳು ನೋಡುಗರ ಮನ ಸೆಳೆಯಿತು. ಅಲ್ಲದೆ ಕಲ್ಕುಣಿಕೆ ದೊಡ್ಡಯ್ಯ, ಕುಮಾರ ಮತ್ತು ನರಸಯ್ಯರ ಜೋಡೆತ್ತುಗಳು ಭಾಗವಹಿಸಿದ್ದವು.

ವೃತ್ತಗಳಲ್ಲಿ ಅಲಂಕಾರ: ನಗರದ ಕೋಟೆ ವೃತ್ತ, ವಿಶ್ವೇಶ್ವರಯ್ಯ ವೃತ್ತ, ಮಾರುತಿ ಪೆಟ್ರೋಲ್ ಬಂಕ್ ವೃತ್ತ, ಬಸ್ ನಿಲ್ದಾಣಗಳ ಮುಂಭಾಗ, ಅಕ್ಷಯ ಬಂಡಾರ್ ಮುಂಭಾಗ ಮತ್ತಿತರ ಪ್ರಮುಖ ಸ್ಥಳಗಳಲ್ಲಿ ಆಟೋ ಚಾಲಕರು ಕನ್ನಡಾಂಬೆ ಆರಾಧಿಸಿದರು. ವಿಶ್ವೇಶ್ವರಯ್ಯ ವೃತ್ತದಲ್ಲಿ ದಸರಾ ಜಂಬೂ ಸವಾರಿ, ಶಂಖ, ಚಕ್ರ, ಗದೆ ಮುತಾದವುಗಳೊಂದಿಗೆ ರಾರಾಜಿಸಿದ ತಾಯಿ ಚಾಮುಂಡೇಶ್ವರಿ, ಹಿಮಾಲಯದ ತಪ್ಪಲಿನಲ್ಲಿ ಧ್ಯಾನಾಸಕ್ತ ಶಿವ ಆಕರ್ಷಕವಾಗಿತ್ತು. ಮಾರುತಿ ಪೆಟ್ರೋಲ್ ಬಂಕ್ ಬಳಿ ಶ್ರೀಮಂಜುನಾಥ ಆಟೋ ನಿಲ್ದಾಣದ ಸದಸ್ಯರು ತಾಯಿ ಭುವನೇಶ್ವರಿ ದೇವಿ ಗುಡಿಯನ್ನು ಮೈಸೂರು ಅರಮನೆಯ ದರ್ಬಾರ್ ಹಾಲ್‌ನಂತೆ ರೂಪುಗೊಳಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು. ಹೆಚ್.ಡಿ.ಕೋಟೆ ವೃತ್ತದಲ್ಲಿ ಜಲ ಪಾತದ ನಡುವೆ ಭುವನೇಶ್ವರಿ ತಾಯಿ ಕಂಗೊಳಿಸಿದರು.

ನಾಗರತ್ನ ನಿಧನ



ಹುಣಸೂರು, ನ.4– ತಾಲೂಕಿನ ಚಿಲ್ಕುಂದ ಗ್ರಾಮದ ನಿವಾಸಿ, ಮಾಜಿ ಜಿಪಂ ಸದಸ್ಯ ಸಿ.ಟಿ.ಪುಟ್ಟಸ್ವಾಮಿಗೌಡರ ಪತ್ನಿ ನಾಗರತ್ನ (63) ಸೋಮವಾರ ನಿಧನರಾದರು. ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮೃತರ ತೋಟದಲ್ಲಿ ಸಂಜೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ನ.8ರಿಂದ 10ರವರೆಗೆ ದಾಸಶ್ರೇಷ್ಠರ ಗಾನಗೋಷ್ಠಿ

●ಪ್ರವಾಸೋದ್ಯಮ ಇಲಾಖೆಯಿಂದ ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮ ●ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ಚಾಲನೆ ●ಮುಂಚೂಣಿಯ 21 ಕಲಾವಿದರಿಂದ ಸಂಗೀತ ಸುಧೆ



ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮದ ಕುರಿತು ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ದಕ್ಷಿಣ ವಲಯ ಪ್ರಾದೇಶಿಕ ನಿರ್ದೇಶಕ ಡಿ.ವೆಂಕಟೇಶನ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ನ.4(ಎಂಟಿವೈ)– ಸಾಂಸ್ಕೃತಿಕ ಪ್ರವಾಸೋದ್ಯಮ ಉತ್ತೇಜಿಸಲು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ನ.8ರಿಂದ 10ರವರೆಗೆ ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ವತಿಯಿಂದ ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ದಕ್ಷಿಣ ವಲಯ ಪ್ರಾದೇಶಿಕ ನಿರ್ದೇಶಕ ಡಿ.ವೆಂಕಟೇಶನ್ ತಿಳಿಸಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಪ್ರವಾಸೋದ್ಯಮ ಇಲಾಖೆಯ ಹೋಟೆಲ್ ಮಯೂರ ಹೊಯ್ಸಳ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರವಾಸಿಗರನ್ನು ಆಕರ್ಷಿಸುವುದರೊಂದಿಗೆ ಸಂಗೀತಗಾರರನ್ನು ಪ್ರೋತ್ಸಾಹಿಸಲು ದಾಸಶ್ರೇಷ್ಠರಾದ ಪುರಂದರದಾಸ, ಹರಿದಾಸ ಮತ್ತು ಕನಕದಾಸ ಸೇರಿದಂತೆ ದಾಸಶ್ರೇಷ್ಠರ ಗಳ ಕೀರ್ತನೆಗಳನ್ನು ದೇಶದ 21 ಹೆಸರಾಂತ ಸಂಗೀತಗಾರರು ಪ್ರಸ್ತುತಪಡಿಸಲಿದ್ದಾರೆ. ಕೇಂದ್ರ ಸಂಗೀತ ನಾಟಕ ಅಕಾಡೆಮಿ ಕಲಾವಿದರನ್ನು ಆಯ್ಕೆ ಮಾಡಿದೆ. ಸ್ಥಳೀಯ ಗಾಯಕರು ಭಾಗವಹಿಸಲಿದ್ದಾರೆ. ನ. 8ರಂದು ಬೆಳಗ್ಗೆ 10.30ಕ್ಕೆ ಸಂಗೀತ ಆರಂಭವಾಗಲಿದೆ. ಮಧ್ಯಾಹ್ನ 12.30ಕ್ಕೆ ಕೇಂದ್ರ ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಸಂಗೀತ ಸುಗಂಧ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಗೃಹ ಸಚಿವ ಡಾ.ಜಿ. ಪರಮೇಶ್ವರ, ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರನ್ನು ಆಹ್ವಾನಿಸಲಾಗಿದೆ. ಮೂರು ದಿನಗಳ ಅವಧಿಯಲ್ಲಿ ಪ್ರಸಿದ್ಧ ಕರ್ನಾಟಕ ಸಂಗೀತ ಲೈವ್ ಪ್ರದರ್ಶನಗಳು ಆಯೋಜಿಸಲ್ಪಡುತ್ತವೆ. Mysoremusicfestivel.com ವೆಬ್‌ಸೈಟ್‌ನಲ್ಲಿ ಲೈವ್ ಸಂಗೀತ ಕೇಳಬಹುದಾಗಿದೆ ಎಂದು ಹೇಳಿದರು.

ಸಾಂಸ್ಕೃತಿಕ ಪ್ರದರ್ಶನಗಳು: ಕರ್ನಾಟಕದ ಸಂಪ್ರದಾಯಿಕ ಹಸ್ತಕಲೆಗಳು ಮತ್ತು ವಸ್ತುಗಳ ಪ್ರದರ್ಶನವನ್ನು ಆಯೋಜಿಸಲಾಗುತ್ತದೆ. ಪ್ರಶಸ್ತಿ ಪುರಸ್ಕೃತ ಕಲಾವಿದರು ನಡೆಸುವ ವರ್ಕ್‌ಶಾಪ್‌ಗಳಲ್ಲಿ ಭಾಗವಹಿಸುವ ಅವಕಾಶವನ್ನು ಪ್ರೇಕ್ಷಕರಿಗೆ ಒದಗಿಸಲಾಗುತ್ತದೆ. ಕರ್ನಾಟಕ ಸಂಗೀತ, ಸಂಗೀತ ಸಂಯೋಜನೆ ಮತ್ತು ಪ್ರಾದೇಶಿಕ ಹಸ್ತಕಲೆಗಳ ಕುರಿತಾದ ಶಿಕ್ಷಣವನ್ನು ಉತ್ತೇಜಿಸುತ್ತದೆ.

ಆಹಾರ ಮತ್ತು ಹಸ್ತಕಲೆ ಮಳಿಗೆಗಳು: ಸಂಗೀತ ಪ್ರವಾಸೋದ್ಯಮದೊಂದಿಗೆ ಹ್ಯಾಂಡ್‌ಲೂಮ್‌ಗೆ ಉತ್ತೇಜನ ನೀಡಲು ಉದ್ದೇಶಿಸಲಾಗಿದೆ. ಪ್ರಶಸ್ತಿ ವಿಜೇತ ಹ್ಯಾಂಡ್‌ಲೂಮ್ಸ್ ತಯಾರಕರನ್ನು ಆಹ್ವಾನಿಸಿ, ಹ್ಯಾಂಡ್‌ಲೂಮ್ಸ್ ವಸ್ತುಗಳ ಮಾರಾಟ ಮತ್ತು ಪ್ರದರ್ಶನಕ್ಕೆ ಮಳಿಗೆ ನೀಡಲಾಗುತ್ತಿದೆ. ಐಎಚ್‌ಎಂ ಬೆಂಗಳೂರು ಕರ್ನಾಟಕದ ಸಾಂಪ್ರದಾಯಿಕ ಊಟವನ್ನು ಪ್ರಸ್ತುತಪಡಿಸುತ್ತದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಲೇಜು ಶಿಕ್ಷಣ ಇಲಾಖೆ ಪ್ರಾದೇಶಿಕ ಕಚೇರಿ ಸಹಾಯಕ ನಿರ್ದೇಶಕ ಎ.ಬಿ.ನಾಗೇಂದ್ರ ಪ್ರಸಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಸುದರ್ಶನ್, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ಮೈಸೂರು ವಿವಿ ರಾಸೋಯೋ ಅಧಿಕಾರಿ ಡಾ.ನಿಂಗರಾಜು ಇದ್ದರು.

ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮದ ವಿವರ

ನ.8ರಂದು ಬೆಳಗ್ಗೆ 10.30ಕ್ಕೆ ಮಂಗಳ ವಾದ್ಯ ನಾದಸ್ವರ– ಮೈಸೂರಿನ ವಿಜಯ ಸೂರ್ಯ, 10.45ಕ್ಕೆ ನಾದೋಪಾಸನೆ– ಶ್ರೀ ಸತ್ಯಸಾಯಿ ವಿಶ್ವವಿದ್ಯಾನಿಲಯದ ತಂಡ, ಗುಂಪು ಗಾಯನ– ಎನ್.ಪ್ರಶಾಂತ್ ಮತ್ತು ತಂಡ,

ಮಧ್ಯಾಹ್ನ 2.30ಕ್ಕೆ ಮೈಸೂರು ವಾಸುದೇವಾಚಾರ್ಯ ಸಂಗೀತ ಸಂಯೋಜನೆ ಕುರಿತು ಉಪನ್ಯಾಸ– ಬಳ್ಳಾರಿ ಎಂ.ರಾಘವೇಂದ್ರ, 3.15ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಬೆಂಗಳೂರಿನ ಟಿ.ಎಸ್. ಸತ್ಯವತಿ, ಸಂಜೆ 4.15ಕ್ಕೆ ಕೊಳಲು ವಾದನ– ಬೆಂಗಳೂರಿನ ಟಿ.ಆರ್.ಶ್ರೀನಾಥ್ ಮತ್ತು ತಂಡ. 5.15ಕ್ಕೆ ಕರ್ನಾಟಿಕ ಸಂಗೀತ ಗಾಯನ– ಬೆಂಗಳೂರಿನ ಆರ್.ಕೆ.ಪದನಾಭ, ಸಂಜೆ 6.15ಕ್ಕೆ ಕರ್ನಾಟಿಕ ಸಂಗೀತ ಗಾಯನ– ಮಲ್ಲಾಡಿ ಸಹೋದರರು, ಸಂಜೆ 7.15ಕ್ಕೆ ದ್ವಂದ್ವ ವಯೋಲಿನ್– ಮೈಸೂರು ನಾಗರಾಜ್ ಮತ್ತು ಮೈಸೂರು ಮಂಜುನಾಥ್, ರಾತ್ರಿ 8.15ಕ್ಕೆ ಕರ್ನಾಟಿಕ ಸಂಗೀತ ಗಾಯನ– ಚೆನ್ನೈ ಸುಧಾ ರಘುನಾಥನ್.

ನ. 9ರಂದು ಬೆಳಗ್ಗೆ 9ಕ್ಕೆ ನಾದಸ್ವರ– ವಿಜಯ ಸೂರ್ಯ, 9.15ಕ್ಕೆ ಸಮೂಹ ಗಾಯನ– ಗುಂಪು ಗಾಯನ– ಆರ್.ಎನ್.ಶ್ರೀಲತಾ ಮತ್ತು ತಂಡ, 10ಕ್ಕೆ ಪುರಂದರ ದಾಸರ ಸಂಗೀತ ಕುರಿತು ಉಪನ್ಯಾಸ– ಉಡುಪಿಯ ಅರವಿಂದ ಹೆಬ್ಬಾರ, 10.45ಕ್ಕೆ ವೀಣಾ ವಾದನ– ಮೈಸೂರಿನ ಡಿ.ಬಾಲಕೃಷ್ಣ, 11.45ಕ್ಕೆ ಮೈಸೂರು ಸಂಗೀತ ಕುರಿತು ಉಪನ್ಯಾಸ– ಶ್ರೀಕಂಠಂ ನಾಗೇಂದ್ರ ಶಾಸ್ತ್ರಿ, ಮಧ್ಯಾಹ್ನ 2ಕ್ಕೆ ಹರಿಕಥೆ– ತುಮಕೂರಿನ ಮೋಹನ ಕುಮಾರ್ ದಾಸರು, 2.45ಕ್ಕೆ ಅಕ್ಕ ಮಹಾದೇವಿ ಕುರಿತು ಉಪನ್ಯಾಸ– ಬೆಂಗಳೂರಿನ ವಿಜಯಲಕ್ಷ್ಮೀ ಸುರೇಶ್ ಬಾಳಕುಂದ್ರೆ, ಸಂಜೆ 4.45ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಚೆನ್ನೈ ಟಿ.ಕೆ.ರಾಮಚಂದ್ರನ್, 4.30ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಬೆಂಗಳೂರಿನ ಮಾನಸಿ ಪ್ರಸಾದ್, 5.15ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಕೆ.ಗಾಯತ್ರಿ, 6ಕಕೆ ಕರ್ನಾಟಿಕ್ ಸಂಗೀತ ಗಾಯನ– ಬೆಂಗಳೂರಿನ ಎಸ್.ಶಂಕರ್.

ನ. 10ರಂದು ಬೆಳಗ್ಗೆ 9ಕ್ಕೆ ವೀಣಾವಾದನ– ಬೆಂಗಳೂರಿನ ಸುಮಾ ಸುಧೀಂದ್ರ, 9.45ಕ್ಕೆ ಜಯಚಾಮರಾಜೇಂದ್ರ ಒಡೆಯರ್ ಸಂಗೀತ ಸಂಯೋಜನೆ ಕುರಿತು ಉಪನ್ಯಾಸ– ಸುಕನ್ಯಾ ಪ್ರಭಾಕರ್, 10.30ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಬೆಂಗಳೂರಿನ ಎಂ.ಎಸ್. ಶೀಲಾ, ಮಧ್ಯಾಹ್ನ 12ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ರುದ್ರಪಟ್ಟಣ ಸಹೋದರರು, 2ಕ್ಕೆ ಬಸವಣ್ಣ ಕುರಿತು–ಸರ್ವಮಂಗಳ ಶಂಕರ್, 3ಕ್ಕೆ ಸಮೂಹ ಗಾಯನ– ಬೆಂಗಳೂರಿನ ಪಟ್ಟಾಭಿ ರಾಮ ಪಂಡಿತ್ ಮತ್ತು ತಂಡ, ಸಂಜೆ 4ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ನಾಗಮಣಿ ಶ್ರೀನಾಥ್, ಸಂಜೆ 5ಕ್ಕೆ ಸಮಾರೋಪ ಸಮಾರಂಭ, 6ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಅಮೃತಾ ವೆಂಕಟೇಶ್, 7ಕ್ಕೆ ಕರ್ನಾಟಿಕ್ ಸಂಗೀತ ಗಾಯನ– ಚೆನ್ನೈ ಸಂದೀಪ್ ನಾರಾಯಣ, 8ಕ್ಕೆ ಬಹುಮಾನ ವಿತರಣೆ.

ಜಾನಪದ ಅಕಾಡೆಮಿ ಪ್ರಶಸ್ತಿಗಳು ಪ್ರಕಟ

ಮೈಸೂರಿನ ಗುರುಸಿದ್ದಯ್ಯ, ಕೊಡಗಿನ ಕೆ.ಸಿ. ದೇವಕಿ, ಮಂಡ್ಯದ ಗುರುಬಸವಯ್ಯ, ಚಾಮರಾಜನಗರದ ಗೌರಮ್ಮ, ಹಾಸನದ ವೀರಭದ್ರಯ್ಯಗೆ ಗೌರವ

ಬೆಂಗಳೂರು: 30 ಜಿಲ್ಲೆಗಳ 30 ಕಲಾವಿದರಿಗೆ ವಾರ್ಷಿಕ ಗೌರವ ಪ್ರಶಸ್ತಿ, ಇಬ್ಬರಿಗೆ ಜಾನಪದ ತಜ್ಞ ಪ್ರಶಸ್ತಿ, ಐವರಿಗೆ ಪುಸ್ತಕ ಪ್ರಶಸ್ತಿಯನ್ನು ಕರ್ನಾಟಕ ಜಾನಪದ ಅಕಾಡೆಮಿ ಪ್ರಕಟಿಸಿದೆ.

ಬೆಂಗಳೂರು ನಗರ ಜಿಲ್ಲೆಯ ಕೆ.ಎಂ. ರಾಮಯ್ಯ (ಏಕತಾರಿ, ತಂಬೂರಿ), ಬೆಂಗಳೂರು ಗ್ರಾಮಾಂತರದ ಓಬಮ್ಮ (ಸೋಬಾನೆ), ರಾಮನಗರ ಜಿಲ್ಲೆ ರಂಗಯ್ಯ (ಪಟ ಕುಣಿತ), ಕೋಲಾರದ ತೋಪಣ್ಣ ಮಂಚಂಡಹಳ್ಳಿ (ಕೀಲುಕುದುರೆ), ಚಿಕ್ಕಬಳ್ಳಾಪುರದ ದೊಡ್ಡಕೂರ್ಲಪ್ಪ (ತಮಟೆ ವಾದನ), ತುಮಕೂರಿ ಜಿಲ್ಲೆಯ ಕದರಮ್ಮ (ಜನಪದ ಹಾಡು), ದಾವಣಗೆರೆ ಜಿಲ್ಲೆಯ ಕಾಟಮ್ಮ (ಕಥನ ಕಾವ್ಯ), ಚಿತ್ರದುರ್ಗದ ಸಿರಿಯಮ್ಮ (ಮಹಾಕಾವ್ಯ), ಶಿವಮೊಗ್ಗ ಜಿಲ್ಲೆ ಟೀಕಪ್ಪ (ಡೊಳ್ಳು ಕುಣಿತ), ಕೊಡಗು ಜಿಲ್ಲೆಯ ದೇವಕಿ ಕೆ.ಸಿ. (ಊರ್ಟಿಕೋಟ್), ಮಂಡ್ಯದ ಗುರು ಬಸವಯ್ಯ (ತಂಬೂರಿಪದ), ಹಾಸನದ ವೀರಭದ್ರಯ್ಯ (ತತ್ವಪದ), ಚಿಕ್ಕಮಗಳೂರಿನ ನಾಗರಾಜಪ್ಪ ವೈ.ಪಿ. (ಕರಡಿಗೆ ಕಾವ್ಯ), ಮೈಸೂರಿನ ಗುರುಸಿದ್ದಯ್ಯ (ತಂಬೂರಿಪದ) ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಉಡುಪಿಯ ಅಪ್ಪಿ (ಜನಪದ ಸೂಲಗಿತ್ತಿ), ದಕ್ಷಿಣ ಕನ್ನಡದ ಲೀಲಾವತಿ (ನಾಟಿವೈದ್ಯೆ), ಚಾಮರಾಜನಗರದ ಗೌರಮ್ಮ (ಸೋಬಾನೆಪದ), ಬೆಳಗಾವಿಯ ಶಿವನಪ್ಪ ಚಂದರಗಿ (ಡೊಳ್ಳುಕುಣಿತ), ಬಾಗಲಕೋಟೆಯ ಹನಮಂತ ವೆಂಕಪ್ಪ ಸುಗತೇಕರ (ಗೊಂದಳಿಪದ), ವಿಜಯಪುರದ ಇಮಾಂಬಿ ಇಮಾಮಸಾಬ (ತತ್ವಪದ), ಗದಗದ ಬಸಪ್ಪ ಹಡಗಲಿ (ಗೀಗೀ ಪದ), ಬಳ್ಳಾರಿಯ ದಳವಾಯಿ ಚಿತ್ತಪ್ಪ (ಜನಪದ ಮಹಾಕಾವ್ಯ), ಹಾವೇರಿಯ ಸಾವಕ್ಕಾ ಓಲೇಕಾರ (ಸೋಬಾನೆ, ಸಂಪ್ರದಾಯ ಪದ), ಉತ್ತರ ಕನ್ನಡದ ಈರಯ್ಯ ಮೊಗೇರ (ಕಾರಿನ್‌ಮನೆ ಕುಣಿತ, ಹೌಂದೇರಾಯನ ಕುಣಿತ), ಕಲಬುರಗಿ ಅಕ್ಕಮ್ಮ (ಸಂಪ್ರದಾಯ ಪದ), ಬೀದರ್‌ನ ಏಸಪ್ಪಾ (ಶಹನಾಯಿ), ರಾಯಚೂರಿನ ಶಾಂತಮ್ಮ (ಬುರರಕಥೆ), ಕೊಪ್ಪಳದ ರೇವಣಪ್ಪ (ಡೊಳ್ಳಿನ ಹಾಡು, ಕುಣಿತ), ಧಾರವಾಡದ ರಾಮಪ್ಪ ಬಸವಂತಪ್ಪ ಮೂಲಗಿ (ಹಂತಿಪದ), ಯಾದಗಿರಿಯ ಅಮಯ್ಯಸ್ವಾಮಿ ಹಿರೇಮಠ (ಭಜನೆ) ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ತಜ್ಞ ಪ್ರಶಸ್ತಿ: ಜೀ.ಶಂ.ಪ ತಜ್ಞ ಪ್ರಶಸ್ತಿಗೆ ದಕ್ಷಿಣ ಕನ್ನಡದ ಕೆ. ಚಿನ್ನಪ್ಪ ಗೌಡ ಹಾಗೂ ಬಿ.ಎಸ್. ಗದ್ದಗಿಮಠ ತಜ್ಞ ಪ್ರಶಸ್ತಿಗೆ ವಿಜಯನಗರದ ಮಂಜುನಾಥ ಬೇವಿನಕಟ್ಟೆ ಅವರನ್ನು ಆಯ್ಕೆ ಮಾಡಲಾಗಿದೆ.

ಪುಸ್ತಕ ಬಹುಮಾನ: 2022ರ ಸಾಲಿನಲ್ಲಿ ಬೆಂಗಳೂರು ಬಿ.ಎಸ್. ಸ್ವಾಮಿ ಅವರ 'ಜಾನಪದ ಲೇಖನ ಗುಚ್ಛ', ಬೆಂಗಳೂರು ಕುರುವ ಬಸವರಾಜು ಅವರ 'ಭೌತಿಕ ವಸ್ತು ವಿಜ್ಞಾನ ಜಾನಪದ ಮತ್ತು ವಸ್ತು ಸಂಗ್ರಹಾಲಯಗಳ ಕುರಿತ ಲೇಖನಗಳು', ನಾಗ ಎಚ್. ಹುಬ್ಬಿ ಜಾರ್ಖಂಡ್ ಅವರ 'ಆದಿವಾಸಿ ಸಂಸ್ಕೃತಿ', 2023ನೇ ಸಾಲಿನಲ್ಲಿ ಮೈಸೂರಿನ ವ.ನಂ. ಶಿವರಾಮು ಅವರ 'ಜನಪದ–ಜಾನಪದ ಮತ್ತು ಕ್ಷೇತ್ರಕಾರ್ಯ' ಬೆಂಗಳೂರಿನ ವಿಜಯಶ್ರೀ ಸಬರದ ಅವರ 'ಸಬರದ ಮತ್ತು ಜಾನಪದ' ಕೃತಿಗಳನ್ನು ಪುಸ್ತಕ ಬಹುಮಾನಕ್ಕೆ ಆಯ್ಕೆ ಮಾಡಲಾಗಿದೆ.

'ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಶೀಘ್ರದಲ್ಲಿಯೇ ದಿನಾಂಕ ಮತ್ತು ಸ್ಥಳ ನಿಗದಿ ಮಾಡಲಾಗುವುದು. ಬೆಂಗಳೂರಿನಿಂದ ಹೊರಗೆ ಕಾರ್ಯಕ್ರಮ ಹಮ್ಮಿಕೊಳ್ಳುವ ಉದ್ದೇಶವಿದೆ' ಎಂದು ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ವಾರ್ಷಿಕ ಗೌರವ ಪ್ರಶಸ್ತಿಯು ತಲಾ 25,000, ತಜ್ಞ ಪ್ರಶಸ್ತಿಯು ತಲಾ 50,000, ಪುಸ್ತಕ ಪ್ರಶಸ್ತಿಯು ತಲಾ 25,000 ನಗದು, ಸ್ಮರಣಿಕೆ, ಶಾಲು, ಹಾರ, ಫಲತಾಂಬೂಲ ಹೊಂದಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಕಾಡೆಮಿ ಸದಸ್ಯರಾದ ಶಂಕರಪ್ಪ ಸಂಕಣ್ಣವರ್, ಉಮೇಶ್, ಮಲ್ಲಿಕಾರ್ಜುನ ಕಲಮರಹಳ್ಳಿ, ಹುಲಿಕುಂಟೆ ಮೂರ್ತಿ, ದೇವಾನಂದ ವರಪ್ರಸಾದ, ರಿಜಿಸ್ಟ್ರಾರ್ ಎನ್. ನಮ್ರತ ಭಾಗವಹಿಸಿದ್ದರು.

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಸ್ಥಳಾಂತರದ ಬಗ್ಗೆ ಚರ್ಚಿಸಲು ನಾಳೆ ಮೈಗ್ರಾಪ ಸಭೆ

ಮೈಸೂರು,ನ.4(ಎಸ್‌ಪಿಎನ್)– ಮೈಸೂರು ಗ್ರಾಮಾಂತರ ಬಸ್ ನಿಲ್ದಾಣವನ್ನು ಬನ್ನಿಮಂಟಪಕ್ಕೆ ಸ್ಥಳಾಂತರ ಮಾಡಲು ಕೆಎಸ್‌ಆರ್‌ಟಿಸಿ ಅಧಿಕಾರಿಗಳ ನಿರ್ಧರಿಸಿದ್ದು, ಇದರ ಸಾಧಕ–ಬಾಧಕಗಳ ಕುರಿತು ತಜ್ಞರೊಂದಿಗೆ ಸಂವಾದ ನಡೆಸಲು ಮೈಸೂರು ಯಾದವಗಿರಿಯ ವಿವೇಕಾನಂದ ರಸ್ತೆಯಲ್ಲಿರುವ ಮೈಗ್ರಾಪ ಕಚೇರಿಯಲ್ಲಿ ನ.6 ರಂದು ಸಂಜೆ 4 ಗಂಟೆಗೆ ಸಭೆ ಕರೆಯಲಾಗಿದೆ.

ಮೈಸೂರು ಗ್ರಾಮಾಂತರ ಬಸ್ ನಿಲ್ದಾಣವನ್ನು ಬನ್ನಿಮಂಟಪಕ್ಕೆ ಸ್ಥಳಾಂತರಿಸಲಾಗುವುದು. ಜನಸಂಖ್ಯೆಗೆ ಅನುಗುಣವಾಗಿ ಪ್ರಸ್ತುತ ಈಗಿನ ಗ್ರಾಮಾಂತರ ಬಸ್ ನಿಲ್ದಾಣ ಕಿಷ್ಕಿಂದೆಯಾಗಿದೆ. ಹಾಗಾಗಿ ಸ್ಥಳಾಂತರಿಸುವುದು ಅನಿವಾರ್ಯ ಎಂದು ಅಧಿಕಾರಿಗಳು, ಸ್ಥಳಾಂತರಕ್ಕೆ ಸಮಜಾಯಿಷಿ ನೀಡುತ್ತಿದ್ದಾರೆ.

ಅಂತೆಯೇ ಈಗಿನ ಬಸ್ ನಿಲ್ದಾಣವನ್ನು ಸ್ಥಳೀಯ ಬಸ್‌ಗಳ ಕಾರ್ಯಾಚರಣೆಗೆ ಬಳಸಿಕೊಳ್ಳಲಾಗುವುದು ಹಾಗೂ ಬನ್ನಿಮಂಟಪದ ಬಸ್ ನಿಲ್ದಾಣವನ್ನು ಹೊರರಾಜ್ಯದ ಬಸ್‌ಗಳ ಕಾರ್ಯಾಚರಣೆಗೆ ಆದ್ಯತೆ ನೀಡಲಾಗುವುದು ಎಂದಿದ್ದಾರೆ.

ಹಾಗಾಗಿ ಸಾರ್ವಜನಿಕರಲ್ಲಿನ ಗೊಂದಲ ಹಾಗೂ ನೂತನ ಗ್ರಾಮಾಂತರ ಬಸ್ ನಿಲ್ದಾಣದ ಸ್ಥಳಾಂತರಗೊಳ್ಳುವುದರಿಂದ ಭವಿಷ್ಯದಲ್ಲಿ ಎದುರಾಗುವ ಸಾಧಕ–ಬಾಧಕ ಬಗ್ಗೆ ಚರ್ಚಿಸಲು ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ಅವರು ಎಂಜಿಪಿ ಕಚೇರಿಯಲ್ಲಿ ಆಯೋಜಿಸಿರುವ ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಎಂಜಿಪಿ ಪ್ರಕಟಣೆಯಲ್ಲಿ ತಿಳಿಸಿದೆ. ಈ ಸಂಬಂಧ ಹೆಚ್ಚಿನ ಸಲಹೆ ನೀಡುವ ತಜ್ಞರು ದೂ: 0821–2515150 ಸಂಪರ್ಕಿಸಬಹುದು ಎಂದು ಎಂಜಿಪಿ ಪ್ರಕಟಣೆಯಲ್ಲಿ ತಿಳಿಸಿದೆ.

6 ವರ್ಷಗಳ ನಂತರ ಜಮ್ಮು–ಕಾಶ್ಮೀರದಲ್ಲಿ ಮೊದಲ ವಿಧಾನಸಭೆ ಅಧಿವೇಶನ

ಆರ್ಟಿಕಲ್ 370 ರದ್ದತಿ ವಿರುದ್ಧ ನಿರ್ಣಯ, ಬಿಜೆಪಿಯಿಂದ ಪ್ರತಿಭಟನೆ

ಶ್ರೀನಗರ: 6 ವರ್ಷಗಳಲ್ಲಿ ಮೊದಲ ಬಾರಿಗೆ ಜಮ್ಮು–ಕಾಶ್ಮೀರದಲ್ಲಿ ಮೊದಲ ವಿಧಾನಸಭೆ ಅಧಿವೇಶನ ಆರಂಭವಾಗಿದ್ದು, ಆರ್ಟಿಕಲ್ 370 ರದ್ದತಿ ವಿರುದ್ಧ ನಿರ್ಣಯ ಅಂಗೀಕರಿಸಲಾಗಿದೆ.

ಪಿಡಿಪಿ ಶಾಸಕ ವಾಹಿದ್ ಪಾರಾ ಸೋಮವಾರ (ನ.4ರಂದು) ಆರ್ಟಿಕಲ್ 370 ರದ್ದತಿ ವಿರುದ್ಧ ನಿರ್ಣಯ ಮಂಡಿಸಿದ್ದು, ಜಮ್ಮು–ಕಾಶ್ಮೀರಕ್ಕೆ ಈ ಹಿಂದೆ ಇದ್ದ ರಾಜ್ಯದ ಸ್ಥಾನಮಾನಗಳನ್ನು ಮರುಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಆರ್ಟಿಕಲ್ 370 ರದ್ದತಿ ವಿರುದ್ಧದ ನಿರ್ಣಯ ಕೈಗೊಂಡಿದ್ದರ ವಿರುದ್ಧ ವಿಪಕ್ಷ ಬಿಜೆಪಿ ಸದನದಲ್ಲಿ ಪ್ರತಿಭಟನೆ ನಡೆಸಿದೆ. ನ್ಯಾಷನಲ್ ಕಾನ್ಫರೆನ್ಸ್ (ಎನ್‌ಸಿ)ನ ಹಿರಿಯ ನಾಯಕ, ಏಳು ಬಾರಿ ಶಾಸಕರಾಗಿರುವ ಅಬ್ದುಲ್ ರಹೀಮ್ ರಾಥರ್ ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶದ ಶಾಸಕಾಂಗ ಸಭೆಯ ಮೊದಲ ಸ್ಪೀಕರ್ ಆಗಿ ಆಯ್ಕೆಯಾದ ತಕ್ಷಣ ಪುಲ್ವಾಮಾ ಶಾಸಕರು ಆರ್ಟಿಕಲ್ 370 ವಿರುದ್ಧದ ನಿರ್ಣಯ ಮಂಡಿಸಿದರು.

ಈ ನಿರ್ಣಯವನ್ನು ವಿರೋಧಿಸಿ ಬಿಜೆಪಿಯ ಎಲ್ಲಾ 28 ಮಂದಿ ಶಾಸಕರು ಪ್ರತಿಭಟನೆ ನಡೆಸಿದರು. ವಿಧಾನಸಭೆ ನಿಯಮಗಳನ್ನು ಉಲ್ಲಂಘಿಸಿ ನಿರ್ಣಯ ತಂದಿರುವ ಪಾರಾ ಅವರನ್ನು ಅಮಾನತುಗೊಳಿಸುವಂತೆ ಬಿಜೆಪಿ ಶಾಸಕ ಶಾಮ್ ಲಾಲ್ ಶರ್ಮಾ ಒತ್ತಾಯಿಸಿದರು. ಸ್ಪೀಕರ್ ಪ್ರತಿಭಟನಾನಿರತ ಸದಸ್ಯರಿಗೆ ತಮ್ಮ ಆಸನಗಳಲ್ಲಿ ಕುಳಿತುಕೊಳ್ಳುವಂತೆ ಪದೇ ಪದೆ ಮನವಿ ಮಾಡಿದರೂ ವ್ಯರ್ಥವಾಯಿತು. ಠರಾವು ಇನ್ನೂ ತನಗೆ ಬಂದಿಲ್ಲ, ಅದು ಬಂದಾಗ ಪರಿಶೀಲಿಸುತ್ತೇನೆ ಎಂದು ಹೇಳಿದರು.

ಬಿಜೆಪಿ ಸದಸ್ಯರು ಮಣಿಯಲು ನಿರಾಕರಿಸಿದ್ದರಿಂದ, ಸದನದ ಕಲಾಪಕ್ಕೆ ಅಡ್ಡಿಪಡಿಸಿದ್ದಕ್ಕಾಗಿ ಎನ್‌ಸಿ ಶಾಸಕರು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಗದ್ದಲದ ನಡುವೆ ಎನ್‌ಸಿ ಶಾಸಕ ಶಬೀರ್ ಕುಲ್ಲಯ್ ಬಾವಿಗೆ ನುಗ್ಗಿದರು. ಹಿಂದಿನ ಜಮ್ಮು ಮತ್ತು ಕಾಶ್ಮೀರ ರಾಜ್ಯಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿದ ಸಂವಿಧಾನದ 370 ನೇ ವಿಧಿಯನ್ನು ಕೇಂದ್ರವು ಆಗಸ್ಟ್ 5, 2019 ರಂದು ರದ್ದುಗೊಳಿಸಿತ್ತು.

ಪ್ರದರ್ಶನ ನಿಲ್ಲಿಸಿದ ಸರಸ್ವತಿ ಚಿತ್ರಮಂದಿರ



ಮೈಸೂರಿನ ಸರಸ್ವತಿಪುರಂನಲ್ಲಿರುವ ಸರಸ್ವತಿ ಚಿತ್ರಮಂದಿರ ನೆಲಸಮಗೊಳಿಸುತ್ತಿರುವುದು.

ಮೈಸೂರು,ನ.4(ಎಂಟಿವೈ)– ಮೈಸೂರಲ್ಲಿ ಚಲನಚಿತ್ರ ಮಂದಿರಗಳು ನೇಪಥ್ಯಕ್ಕೆ ಸರಿಯುತ್ತಿದ್ದು, 3–4 ದಶಕಗಳಿಂದ ಅಪಾರ ಸಂಖ್ಯೆಯ ಸಿನಿ ಪ್ರಿಯರಿಗೆ ನೆಚ್ಚಿನ ಚಲನಚಿತ್ರಗಳ ರಸದೌತಣ ಉಣ ಬಡಿಸುತ್ತಿದ್ದ 'ಸರಸ್ವತಿ' ಚಿತ್ರಮಂದಿರ ಇನ್ನಿಲ್ಲದಂತಾಗಿದೆ.

ಮೈಸೂರಿನ ಸರಸ್ವತಿಪುರಂನಲ್ಲಿ 3–4 ದಶಕಗಳಿಂದ ಸಿನಿ ಪ್ರಿಯರಿಗೆ ಅಚ್ಚುಮೆಚ್ಚಿನ ಚಲನಚಿತ್ರಗಳನ್ನು ಪ್ರದರ್ಶಿಸಿ ಎಲ್ಲರ ಪ್ರೀತಿಗೆ ಪಾತ್ರವಾಗಿದ್ದ 'ಸರಸ್ವತಿ' ಚಿತ್ರಮಂದಿರ ನಿರ್ವಹಣೆಯ ಸವಾಲು, ವಿತರಕರು ಹಾಗೂ ಚಿತ್ರ ನಿರ್ಮಾಪಕರು ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳ ಮೇಲಿನ ನಿರ್ಲಕ್ಷ್ಯ ಧೋರಣೆಯಿಂದ ಹಾಗೂ ಮಲ್ಟಿಪ್ಲೆಕ್ಸ್ ಚಿತ್ರಮಂದಿರಕ್ಕೆ ಮನ್ನಣೆ ನೀಡುತ್ತಿರುವುದರಿಂದ ಬೇಸತ್ತು, ಸಿಂಗಲ್ ಸ್ಕ್ರೀನ್ ಹೊಂದಿರುವ ಚಲನಚಿತ್ರ ಮಂದಿರಗಳನ್ನು ಮಾಲೀಕರು ಮುಚ್ಚುವುದಕ್ಕೆ ಮುಂದಾಗಿದ್ದಾರೆ. ಇದರಿಂದ 18 ಚಿತ್ರ ಮಂದಿರಗಳಿದ್ದ ಮೈಸೂರಲ್ಲಿ ಪ್ರಸ್ತುತ ಕೆಲವೇ ಚಿತ್ರಮಂದಿರಗಳಷ್ಟೇ ಉಳಿದಿದ್ದು, ಮುಂದಿನ ಕೆಲ ವರ್ಷಗಳ ನಂತರ ಬಹುತೇಕ ಎಲ್ಲಾ ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳು ಕಣ್ಮರೆಯಾಗುವ ಆತಂಕ ಎದುರಾಗಿದೆ.

ಸರಸ್ವತಿ ಚಿತ್ರಮಂದಿರ: ಸರಸ್ವತಿಪುರಂನಲ್ಲಿರುವ ಸರಸ್ವತಿ ಚಿತ್ರಮಂದಿರ ಆರು ತಿಂಗಳ ಹಿಂದೆಯೇ ಪ್ರದರ್ಶನ ಸ್ಥಗಿತಗೊಳಿಸಿತ್ತು. ಇದೀಗ ಎರಡು ತಿಂಗಳ ಹಿಂದಿನಿಂದ ಚಿತ್ರಮಂದಿರದ ನೆಲಸಮ ಕಾರ್ಯ ಆರಂಭಿಸಿದ್ದು, ಪೀಠೋಪಕರಣ ಹಾಗೂ ಕಿಟಕಿ, ಬಾಗಿಲು ಸೇರಿದಂತೆ ಎಲ್ಲವನ್ನು ಬೇರ್ಪಡಿಸಿ ಕೊಂಡೊಯ್ಯಲಾಗಿದೆ. ಇದೀಗ ಎರಡು ದಿನದಿಂದ ಚಿತ್ರಮಂದಿರದ ಮುಂಭಾಗದ ಗೋಡೆ ತೆರವುಗೊಳಿಸುವ ಕಾರ್ಯ ಆರಂಭಿಸಲಾಗಿದೆ.

ಮಲತಾಯಿ ಧೋರಣೆ: ಚಲನಚಿತ್ರ ಮಂದಿರಗಳ ಮಾಲೀಕರ ಸಂಘದ ಅಧ್ಯಕ್ಷ ರಾಜಾರಾವ್ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಚಲನಚಿತ್ರ [illegible] ಪ್ರದರ್ಶನದಲ್ಲಿ ವಿತರಕರು ಹಾಗೂ ನಿರ್ಮಾಪಕರಿಗೆ ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳು ಹೆಚ್ಚು ಲಾಭ ತಂದು ಕೊಡುತ್ತಿವೆ. ಆದರೆ, ವಿತರಕರು, ನಿರ್ಮಾಪಕರು ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳ ಮಾಲೀಕರಿಗೆ ನ್ಯಾಯಯುತವಾದ ಹಣ ನೀಡುತ್ತಿಲ್ಲ. ಮಲ್ಟಿಪ್ಲೆಕ್ಸ್ ಚಿತ್ರ ಮಂದಿರಗಳಿಗೆ ಚಿತ್ರ ಪ್ರದರ್ಶನದಿಂದ ಸಂಗ್ರಹವಾದ ಮೊತ್ತದಲ್ಲಿ ಮೊದಲ ವಾರ ಶೇ.50:50, ಎರಡನೇ ವಾರ 40:60ರಷ್ಟು ಹಣ ನೀಡುತ್ತಿದ್ದಾರೆ. ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳಿಗೆ ಕಡಿಮೆ ಮೊತ್ತ ನಿಗದಿ ಮಾಡಿದ್ದಾರೆ. ಇದರಿಂದ ನಿರ್ವಹಣೆ, ಖರ್ಚು ವೆಚ್ಚಕ್ಕೂ ಸಮಸ್ಯೆಯಾಗುತ್ತಿದ್ದು, ಆ ಕಾರಣದಿಂದ ಚಿತ್ರಮಂದಿರಗಳನ್ನು ಸ್ಥಗಿತಗೊಳಿಸುತ್ತಿದ್ದಾರೆ ಎಂದರು.

ಮೈಸೂರಲ್ಲಿ ಈ ಹಿಂದೆ 18 ಚಿತ್ರಮಂದಿರಗಳಿದ್ದವು. ಆದರೆ, ಇಂದು ಕೇವಲ ಕೆಲವೇ ಚಿತ್ರಮಂದಿರಗಳು ಮಾತ್ರ ಇವೆ. ಈ ಹಿಂದೆ ಶಾಲಿಮಾರ್, ರತ್ನ, ರಣಜಿತ್, ಅಪೇರಾ, ಶಾಂತಲಾ, ಲಕ್ಷ್ಮೀ, ಸರಸ್ವತಿ ಚಿತ್ರಮಂದಿರಗಳು ಮುಚ್ಚಿದೆ. ಮುಂದಿನ ಕೆಲ ವರ್ಷಗಳಲ್ಲಿ ಆ ಚಿತ್ರಮಂದಿರಗಳು ಸ್ಥಗಿತಗೊಂಡರೆ ಆಶ್ಚರ್ಯವೇನಿಲ್ಲ. ಕಳೆದ ಎರಡು ವರ್ಷದಲ್ಲಿ ರಾಜ್ಯದಲ್ಲಿ 160 ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳು ಸ್ಥಗಿತಗೊಂಡಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಯಾವ ಜಿಲ್ಲೆಗಳಲ್ಲೂ ಇರದ ತೆರಿಗೆ ನೀತಿ ಮೈಸೂರಲ್ಲಿದೆ. ಈ ಸಂಬಂಧ ಜನರು ಜಾಗೃತರಾಗದೇ ಸುಮ್ಮನಿರುವುದೇ ತೆರಿಗೆ ದರ ಹೆಚ್ಚಳಕ್ಕೆ ಕಾರಣವಾಗಿದೆ. ರಾಜಧಾನಿ ಬೆಂಗಳೂರಲ್ಲಿ ವ್ಯಾಪಾರ, ವಹಿವಾಟು ಹೆಚ್ಚಾಗಿದ್ದರೂ, ಆಸ್ತಿ ತೆರಿಗೆ ಪ್ರಮಾಣ ಕಡಿಮೆ ಇದೆ. ಆದರೆ, ಮೈಸೂರಲ್ಲಿ ದುಪ್ಪಟ್ಟು ತೆರಿಗೆ ವಸೂಲಿ ಮಾಡಲಾಗುತ್ತಿದ್ದರೂ, ನಿರೀಕ್ಷಿಸಿದ ಪ್ರಮಾಣದಲ್ಲಿ ವಹಿವಾಟು ನಡೆಯುತ್ತಿಲ್ಲ. ಈ ಕಾರಣದಿಂದ ಚಿತ್ರಮಂದಿರಗಳು ಮುಚ್ಚುತ್ತಿವೆ. ನೆಲಸಮ ಮಾಡಿರುವ ಚಿತ್ರಮಂದಿರಗಳ ಸ್ಥಳದಲ್ಲಿ ಬೃಹತ್ ವಾಣಿಜ್ಯ ಕಟ್ಟಡಗಳ ನಿರ್ಮಾಣಕ್ಕೂ ತೆರಿಗೆ ದರ ಅಡ್ಡಿಯುಂಟು ಮಾಡುತ್ತಿದೆ. ಆ ಕಾರಣದಿಂದಾಗಿ ರಿಂಗ್ ರಸ್ತೆಯ ಹೊರಗೆ ಕಟ್ಟಡಗಳು ತಲೆ ಎತ್ತುತ್ತಿವೆ. ಬೃಹತ್ ಮಹಾನಗರ ಪಾಲಿಕೆ ಮಾಡುವುದಕ್ಕೆ ಹಿಂದೇಟು ಹಾಕುತ್ತಿರುವುದರಿಂದ ಮೈಸೂರಲ್ಲಿ ವಾಣಿಜ್ಯೋದ್ಯಮಿಗಳಿಗೆ ಮಾತ್ರವಲ್ಲದೆ, ಸಾಮಾನ್ಯ ಜನರಿಗೂ ಆಸ್ತಿ ತೆರಿಗೆ ಪ್ರಮಾಣ ಸಂಕಷ್ಟ ತಂದೊಡ್ಡುತ್ತಿದೆ ಎಂದು ಕಿಡಿಕಾರಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಅಮರನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬಘೀರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೂಲ್ ಭುಲಯ್ಯ 3 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಬಘೀರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಬಘೀರ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೂಲ್ ಭುಲಯ್ಯ 3 (ಹಿಂ)	4 ಪ್ರದರ್ಶನಗಳು
ಲಿಡೋ	
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವೇಟೇಯನ್ (ತ)	4 ಪ್ರದರ್ಶನಗಳು
ಪ್ರಭಾ	
ಅಂಜದಗಂಡು (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಲಕ್ಕಿ ಭಾಸ್ಕರ್ (ತೆ): ಬೆ.10.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ವೇನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಲಕ್ಕಿ ಭಾಸ್ಕರ್ (ಮ): ರಾ.9.55ಕ್ಕೆ.
ಸ್ಕ್ರೀನ್ 2	ವೇನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಬೆ.10.55ಕ್ಕೆ, ಬ್ಲಡಿ ಬೆಗ್ಗರ್ (ತ): ಮ.1.20ಕ್ಕೆ, ಬ್ರದರ್ (ತ): ಸಂ.4.20ಕ್ಕೆ, ಬಘೀರ (ಕ): ರಾ.7.05ಕ್ಕೆ, ಕ (ತೆ): ರಾ.10.10ಕ್ಕೆ.
ಸ್ಕ್ರೀನ್ 3	ಅಮರನ್ (ತ): ಬೆ.10.05ಕ್ಕೆ, ಮ.1.15ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಅನ್ನ (ಕ): ಸಂ.4.30ಕ್ಕೆ.
ಸ್ಕ್ರೀನ್ 4	ಬಘೀರ (ಕ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.20ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ವೆಟ್ಟೈಯನ್ (ತ): ಮ.1ಕ್ಕೆ, ಎಲ್ಲಿಗೆ ಪಯಣ ಯಾವುದೋ ದಾರಿ (ಕ): ಸಂ.4ಕ್ಕೆ, ಮಾರ್ಟಿನ್ (ಕ): ಸಂ.6.30ಕ್ಕೆ, ವೆಟ್ಟೈಯನ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ವೇನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ.
ಸ್ಕ್ರೀನ್ 3	ಯಲಾಕುನ್ನಿ (ಕ): ಮ.1.30ಕ್ಕೆ, ಒಬ್ಬಟ್ಟು (ಕ): ಸಂ.4.30ಕ್ಕೆ, ಉದಾಹರಣೆ (ಕ): ರಾ.7ಕ್ಕೆ, ವೇನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ರಾ.9.15ಕ್ಕೆ.
ಸ್ಕ್ರೀನ್ 4	ಮಾರ್ಟಿನ್ (ಕ): ಮ.1.10ಕ್ಕೆ, ಯಲಾಕುನ್ನಿ (ಕ): ಮ.3.55ಕ್ಕೆ, ವೆಟ್ಟೈಯನ್ (ತ): ಸಂ.6.30ಕ್ಕೆ, ಪಣಿ (ಮ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವರಕೋಡು ಗ್ರಾಪಂಗೆ ಕೃಷ್ಣ ದೊಡ್ಡರಾಮೇಗೌಡ ಅಧ್ಯಕ್ಷ



ಮೈಸೂರು, ನ4– ಮೈಸೂರು ತಾಲೂಕು ವರಕೋಡು ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಕೃಷ್ಣ ದೊಡ್ಡ ರಾಮೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗ್ರಾಪಂ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಕೃಷ್ಣ ದೊಡ್ಡ ರಾಮೇಗೌಡ ಮಾತ್ರ ನಾಮಪತ್ರ ಸಲ್ಲಿಸಿದ್ದು, ಉಳಿದವರ್‍ಯಾರು ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅವರ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಘೋಷಿಸಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಸದಸ್ಯ ಮುದ್ದರಾಮೇಗೌಡ, ಮಾಜಿ ಗ್ರಾಪಂ ಅಧ್ಯಕ್ಷ ಬಸವರಾಜು.ವಿ.ಸಿ, ಬೀರಪ್ಪ, ಸಣ್ಣತಾಯಮ್ಮ, ಉಪಾಧ್ಯಕ್ಷೆ ಸುಮಿತ್ರ ಸುಬ್ಬಯ್ಯ, ಮಾಜಿ ಉಪಾಧ್ಯಕ್ಷ ಮಹದೇಮ್ಮ ಶಂಕರ್, ಸದಸ್ಯರುಗಳಾದ ರಾಜಮ್ಮ ಸಿದ್ದೇಗೌಡ, ಶಿವಣ್ಣ, ರಾಧ ಮಹದೇವು, ಶಿವರಾಜು, ಸುಮಾರವಿ, ರತ್ನಮ್ಮ ರಾಜಣ್ಣ, ಗ್ರಾಮದ ಯಜಮಾನರುಗಳಾದ ಗುರು ಮಠದ ಗುರುಸ್ವಾಮಪ್ಪ, ವರಕೋಡು ರಮೇಶ್, ಅಪ್ಪಯ್ಯನ ಮರೀಗೌಡ, ಬೋಳಯ್ಯನ ಪ್ರಕಾಶ್, ಚರಣ್, ರವಿಮೈಕ್, ಬಸವಯ್ಯ, ಸಾಕಪ್ಪ, ಪ್ರಭಾಕರ್, ರವಿ, ಉಮೇಶ್, ಕತ್ತಮರಿ ಮಹದೇವು, ಮಾಜಿ ಸದಸ್ಯರಾದ ಬಸವರಾಜು ಕುಂಟಿ, ಮುದ್ದಬಸವ, ಅಣಬೆ ಕುಮಾರ್, ಈರುಳ್ಳಿ ಕುಮಾರ್, ಕೆ.ಆರ್. ಸಿದ್ದರಾಮೇಗೌಡ, ಸೊಸೈಟಿ ಅಧ್ಯಕ್ಷರಾದ ಕರಿಗೌಡ, ಉಪಾಧ್ಯಕ್ಷರಾದ ಮಂಗಳಮ್ಮ ಚಿಕ್ಕಣ್ಣ, ಚಿಕ್ಕರಾಮೇಗೌಡ, ಕೆಳ್ಳಾಲು ಚಿಕ್ಕುಡು, ದಕ್ಷ ಚಿಕ್ಕುಡು, ರಾಮಲಿಂಗು, ಮೆಲ್ಲಹಳ್ಳಿ ಸಾಕಣ್ಣ ಮತ್ತು ಎಲ್ಲಾ ಗ್ರಾಮದ ಮುಖಂಡರು ಶುಭ ಹಾರೈಸಿದರು.

ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ



ಮೈಸೂರು ವಿಶ್ವವಿದ್ಯಾನಿಲಯದ ಎದುರಿನ ಓವಲ್ ಮೈದಾನದಲ್ಲಿ ಶುಕ್ರವಾರ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ "ಮೈಸೂರು ಮಿತ್ರ" ಛಾಯಾಗ್ರಾಹಕ ಎಂ.ಎನ್. ಲಕ್ಷ್ಮಿ ನಾರಾಯಣ ಯಾದವ್ ಅವರಿಗೆ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ ಮಾಡಿದರು. ಶಾಸಕರಾದ ತನ್ವೀರ್ ಸೇಠ್, ಸಿ.ಎನ್.ಮಂಜೇಗೌಡ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ವಕ್ಫ್ ಭೂಮಿ ವಿವಾದ ಬಗೆಹರಿಸದಿದ್ದರೆ ರೈತರಿಂದ ಸಿಎಂ ನಿವಾಸಕ್ಕೆ ಮುತ್ತಿಗೆ

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಎಚ್ಚರಿಕೆ



ರಾಮನಗರ: ವಕ್ಫ್ ಭೂಮಿ ವಿವಾದವನ್ನು ಆದಷ್ಟು ಬೇಗ ಬಗೆಹರಿಸದಿದ್ದರೆ ರೈತರು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರ ನಿವಾಸಕ್ಕೆ ಮುತ್ತಿಗೆ ಹಾಕಲಿದ್ದಾರೆ ಎಂದು ಕೇಂದ್ರ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಸೋಮವಾರ ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಚನ್ನಪಟ್ಟಣ ಉಪಚುನಾವಣೆ ಹಿನ್ನೆಲೆಯಲ್ಲಿ ದೊಡ್ಡನಹಳ್ಳಿಯ್ಲಿ ಪ್ರಚಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಾಂಗ್ರೆಸ್ ಒಂದು ಸಮುದಾಯವನ್ನು ಮಾತ್ರ ಓಲೈಸುತ್ತಿದ್ದು, ಇತರರನ್ನು ನಿರ್ಲಕ್ಷಿಸುತ್ತಿದೆ. ರೈತರು ಕಾನೂನು ತೆಗೆದುಕೊಂಡು ನಿಮ್ಮ ಮನೆಗಳಿಗೆ ಮುತ್ತಿಗೆ ಹಾಕುವ ಮುನ್ನಾ, ಸಾರ್ವಜನಿಕವಾಗಿ ಕ್ಷಮೆ ಕೇಳಿ, ವಕ್ಫ್ ಭೂಮಿ ವಿವಾದವನ್ನು ಬಗೆಹರಿಸಿ ಎಂದು ಎಚ್ಚರಿಸಿದರು.

ಹಿಂದಿನ ಮುಖ್ಯಮಂತ್ರಿಗಳ ಕಾಲದಲ್ಲಿಯೂ ವಕ್ಫ್ ಭೂಮಿಗೆ ಸಂಬಂಧಿಸಿದಂತೆ ನಿರ್ಧಾರ ಕೈಗೊಳ್ಳಲಾಗಿದೆ ಎಂಬ ಸಿಎಂ ಸಿದ್ದರಾಮಯ್ಯ ಅವರ ಇತ್ತೀಚಿನ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ನಾನು ಸಿಎಂ ಆಗಿದ್ದಾಗ ವಕ್ಫ್ ಸಂಬಂಧಿತ ಯಾವುದೇ ಕಡತಗಳು ನನ್ನ ಮುಂದೆ ಬಂದಿರುವುದನ್ನು ನೋಡಿಲ್ಲ. ಈ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಅವರ ಹೇಳಿಕೆ ಜವಾಬ್ದಾರಿಯ ಕೊರತೆಯಿಂದ ಕೂಡಿದೆ ಎಂದರು.

ನನ್ನ ಕಾಲದಲ್ಲಿ ರೈತರ ಜಮೀನು, ಹಿಂದೂ ದೇವಾಲಯಗಳ ಜಮೀನು, ರಾಮನಗರದ ಬೆಟ್ಟಗಳನ್ನು ವಕ್ಫ್‌ಗೆ ನೀಡಿಲ್ಲ. ಸಿಎಂ ಯಾವ ಆಧಾರದಲ್ಲಿ ಇಂತಹ ಹೇಳಿಕೆ ನೀಡಿದ್ದಾರೆ ಎಂಬುದು ಅರ್ಥವಾಗು ತ್ತಿಲ್ಲ. ನಿಮ್ಮ ಸ್ವಂತ ತಪ್ಪುಗಳಿಗಾಗಿ ಇತರರನ್ನು ದೂಷಿಸಬೇಡಿ. ನನ್ನಿಂದ ಏನಾದರೂ ತಪ್ಪಿದ್ದರೆ ಅದನ್ನು ಜನರ ಮುಂದಿಡಲಿ ಎಂದು ಸಿದ್ದರಾಮಯ್ಯಗೆ ಸವಾಲು ಹಾಕಿದರು.

ನನ್ನ ಅಧಿಕಾರಾವಧಿಯಲ್ಲಿ ವಕ್ಫ್ ಸಂಬಂಧಿತ ನಿರ್ಧಾರಗಳು ನಡೆದಿದ್ದಲ್ಲಿ ಅದಕ್ಕೆ ಕಾಂಗ್ರೆಸ್ ನಾಯಕರೇ ಹೊಣೆಯಾಗುತ್ತಾರೆ. ಆ ಸಮಯದಲ್ಲಿ ಕೃಷ್ಣ ಬೈರೇಗೌಡ ಅವರು ಕಂದಾಯ ಸಚಿವರಾಗಿದ್ದರು ಮತ್ತು ಆಗಲೂ ಜಮೀರ್ ಅಹ್ಮದ್ ಖಾನ್ ಅವರೇ ವಕ್ಫ್ ಸಚಿವರಾಗಿದ್ದರು. ಅವರು ನನಗೆ ತಿಳಿಯದಂತೆ ಮಾಡಿದ್ದರೆ ಅದು ಅವರಿಗೆ ಸಂಬಂಧಿಸಿದ್ದು, ನನಗೆ ಸಂಬಂಧಿಸಿದ್ದಲ್ಲ. ನಾನು ಯಾವುದೇ ಕಾನೂನುಬಾಹಿರ ಕ್ರಮಗಳಿಗೆ ಅನುಮತಿ ನೀಡಿಲ್ಲ ಮತ್ತು ಅಂತಹ ವಿಷಯಗಳಲ್ಲಿ ನಾನು ರಾಜಕೀಯದಲ್ಲಿ ತೊಡಗಿಲ್ಲ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದರು.

ಈ ವಿಚಾರದಲ್ಲಿ ಅನಗತ್ಯವಾಗಿ ನನ್ನನ್ನು ಎಳೆದುಕೊಂಡು ಬಂದರೆ ಅದನ್ನು ಎದುರಿಸಲು ನಾನು ಸಿದ್ಧ, ನಾನು ಪಲಾಯನವಾಗಲ್ಲ. ಮುಖ್ಯ ಮಂತ್ರಿ ಸುಳ್ಳು ಹೇಳಬಾರದು. ಸಿದ್ದ ರಾಮಯ್ಯ ಜವಾಬ್ದಾರಿಯಿಂದ ಹೇಳಿಕೆ ನೀಡಬೇಕು ಎಂದು ಟೀಕಿಸಿದ ಕುಮಾರಸ್ವಾಮಿ, ಕಾಂಗ್ರೆಸ್ ಧರ್ಮ ಮತ್ತು ಜಾತಿ ಆಧಾರದ ಮೇಲೆ ಜನರನ್ನು ವಿಭಜಿಸುತ್ತಿದೆ ಎಂದು ಕಿಡಿಕಾರಿದರು.

ಸಿಪಿ ಯೋಗೇಶ್ವರ್ ವಿರುದ್ಧ ಮಾತನಾಡದಂತೆ ಮಗಳು ನಿಶಾಗೆ ಕೋರ್ಟ್ ತಡೆ

ಬೆಂಗಳೂರು: ಚನ್ನಪಟ್ಟಣ ವಿಧಾನಸಭೆ ಉಪಚುನಾವಣೆ ಸಮರ ತಾರಕಕ್ಕೇರಿದೆ. ಕಾಂಗ್ರೆಸ್‌ನಿಂದ ಸಿಪಿ ಯೋಗೇಶ್ವರ್ ಹಾಗೂ ಎನ್‌ಡಿಎ ಅಭ್ಯರ್ಥಿ ಯಾಗಿ ನಿಖಿಲ್



ಕುಮಾರಸ್ವಾಮಿ ಮಧ್ಯೆ ನೇರ ಹಣಾಹಣಿ ನಡೆಯುತ್ತಿದೆ. ಈ ಮಧ್ಯೆ ಪುತ್ರಿ ನಿಶಾ, ತಂದೆ ಸಿಪಿ ಯೋಗೇಶ್ವರ್ ವಿರುದ್ಧ ಮಾನಹಾನಿಕರ ಹೇಳಿಕೆ ನೀಡದಂತೆ ಕೋರ್ಟ್ ನಿರ್ಬಂಧ ವಿಧಿಸಿದೆ.

ಸಿಪಿ ಯೋಗೇಶ್ವರ್ ಪತ್ನಿ ಪಿ.ವಿ ಶೀಲಾ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಹೇಮಂತ ಚಂದನ ಗೌಡರ್ ಅವರಿದ್ದ ಏಕಸದಸ್ಯ ಪೀಠ ಸಾಮಾಜಿಕ ಜಾಲತಾಣಗಳಲ್ಲಿ ಸಿಪಿ ಯೋಗೇಶ್ವರ್ ವಿರುದ್ಧ ಯಾವುದೇ ಮಾನಹಾನಿಕರ ಅಥವಾ ಅವಹೇಳನಕಾರಿ ಹೇಳಿಕೆಗಳನ್ನು ನೀಡದಂತೆ ಯೋಗೇಶ್ವರ್ ಅವರ ಮೊದಲ ಪತ್ನಿಯ ಪುತ್ರಿ ನಿಶಾಗೆ ನಿರ್ಬಂಧ ವಿಧಿಸಿ ಮಧ್ಯಂತರ ಆದೇಶ ನೀಡಿದೆ.

ಸಿಪಿ ಯೋಗೇಶ್ವರ್ ಚುನಾವಣೆಗೆ ಸ್ಪರ್ಧಿಸಿರುವ ಬೆನ್ನಲ್ಲೇ ನಿಶಾ, ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ಕುಟುಂಬದ ವಿರುದ್ಧ ಅವಹೇಳನಕಾರಿ, ಆಧಾರರಹಿತ ಮತ್ತು ಪ್ರಚೋದನಕಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಈ ಸಂಬಂಧ ಬೆಂಗಳೂರಿನ ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ವಿಚಾರಣೆ ವೇಳೆ ಪಿವಿ ಶೀಲಾ ಅವರು ಕೋರ್ಟ್ ಗಮನಕ್ಕೆ ತಂದರು. ಈ ಸಂಬಂಧ ಪ್ರತಿವಾದಿಗಳಾದ instagram, X Corp, Google ಮತ್ತು Youtubeಗೆ ನಿಶಾ ಯೋಗೇಶ್ವರ್ ಅವರ ನಿಂದನಾತ್ಮಕ ಹೇಳಿಕೆಗಳನ್ನು ಅಪ್‌ಲೋಡ್‌ಮಾಡದಂತೆ, ಈಗಾಗಲೇ ಪ್ರಸಾರ ಮಾಡಲಾಗಿರುವ ತುಣುಕುಗಳನ್ನು ತಡೆಹಿಡಿಯಬೇಕೆಂದು ಸೂಚಿಸಿದೆ.

3 ವರ್ಷದ ನಿರಾಣಿ ಮೊಮ್ಮಗನಿಂದ ಏಷ್ಯಾ ಬುಕ್ ಆಫ್ ರೆಕಾರ್ಡ್



ಬಾಗಲಕೋಟೆ: ಮಾಜಿ ಸಚಿವ ಮುರುಗೇಶ್ ನಿರಾಣಿ ಅವರ ಮೊಮ್ಮಗ ಸಮರ್ಥ ವಿಜಯ್ ನಿರಾಣಿ 3 ವರ್ಷ 1 ತಿಂಗಳಲ್ಲಿ ಗಾಲ್ಫ್ ಕಾರ್ಟ್ ಓಡಿಸಿ ಇಂಡಿಯಾ ಬುಕ್ ಆಫ್ ರೆಕಾರ್ಡ್, ಏಷ್ಯಾ ಬುಕ್ ಆಫ್ ರೆಕಾರ್ಡ್ ಬರೆದಿದ್ದಾನೆ.

ಸಮರ್ಥ ಚಿಕ್ಕಂದಿನಿಂದಲೂ ಎಲೆಕ್ಟ್ರಿಕ್ ಕಾರುಗಳನ್ನು ಓಡಿಸುತ್ತಿದ್ದ. ಒಂದು ದಿನ ಕಾರ್ಖಾನೆ ವೀಕ್ಷಣೆ ಮಾಡುವುದಕ್ಕೆ ಈಗ ಇರುವ ಗಾಲ್ಫ್ ಕಾರ್ಟ್ ಓಡಿಸುತ್ತೇನೆ ಎಂದು ಹಠ ಮಾಡಿದಾಗ ಈತನಿಗೆ ಒಮ್ಮೆ ಕಾರ್ಟ್ ಓಡಿಸುವ ಬಗ್ಗೆ ಮನೆಯವರು ಮಾಹಿತಿ ನೀಡಿದ್ದರು.

ಒಂದು ಸಾರಿ ನೋಡಿ ತಿಳಿದುಕೊಂಡ ಸಮರ್ಥ ಮೂರು ವರ್ಷ ಹತ್ತು ತಿಂಗಳಲ್ಲೇ ಗಾಲ್ಫ್ ಕಾರ್ಟ್ ವಾಹನ ಓಡಿಸಿ ಮನೆಯವರಿಗೆ ಅಚ್ಚರಿ ಮೂಡಿಸಿದ್ದ. ತಾನೊಬ್ಬನೇ ಅಲ್ಲದೇ ತಂದೆ ವಿಜಯ್, ತಾಯಿ ಸುಶ್ಮಿತಾ, ಅಜ್ಜಿ ಕಮಲಾ ನಿರಾಣಿ ಸೇರಿದಂತೆ ಎಲ್ಲಾ ಕುಟುಂಬಸ್ಥರನ್ನು ಕೂರಿಸಿಕೊಂಡು ಗಾಲ್ಫ್ ಕಾರ್ಟ್ ಓಡಿಸಿದ್ದ. ಸಮರ್ಥನ ಪ್ರತಿಭೆಯನ್ನು ನೋಡಿ ಮುರುಗೇಶ್ ನಿರಾಣಿ, ಅವರ ಮಗ ವಿಜಯ್ ಹಾಗೂ ಪತ್ನಿ ಸುಶ್ಮಿತಾ ಅವರು ಇಂಡಿಯಾ ಬುಕ್ ಆಫ್ ರೆಕಾರ್ಡ್ ಹಾಗೂ ಏಷ್ಯಾ ಬುಕ್ ಆಫ್ ರೆಕಾರ್ಡ್ ಸಂಸ್ಥೆಗೆ ವಿಡಿಯೋ ಮಾಡಿ ಕಳುಹಿಸಿದ್ದರು.

ವಿಡಿಯೋ ಗಮನಿಸಿ ಮುಧೋಳ ನಗರಕ್ಕೆ ಬಂದ ಇಂಡಿಯಾ, ಏಷಿಯಾ ಬುಕ್ ಆಫ್ ರೆಕಾರ್ಡ್ ಜಡ್ಜ್‌ಗಳು ಸ್ಥಳದಲ್ಲಿ ಪರೀಕ್ಷೆ ಮಾಡಿದ್ದಾರೆ. ಬಾಲಕ ಸಮರ್ಥನ ಚಾಲನೆ ಕಂಡು ಇಂಡಿಯಾ ಬುಕ್ ಆಫ್ ರೆಕಾರ್ಡ್, ಏಷ್ಯಾ ಬುಕ್ ಆಫ್ ರೆಕಾರ್ಡ್ ಪ್ರಶಸ್ತಿ ಪದಕ ನೀಡಿ ಗೌರವಿಸಿದ್ದಾರೆ. ಸಮರ್ಥ ಕೇವಲ ಎರಡು ವರ್ಷದವನಿದ್ದಾಗಲೂ 22 ಸಂಸ್ಕೃತ ಶ್ಲೋಕ ಹೇಳಿ ಸುದ್ದಿಯಾಗಿದ್ದ. ಲಿಮ್ಕಾ ಹಾಗೂ ಗಿನ್ನಿಸ್ ದಾಖಲೆಗೂ ಅರ್ಜಿ ಸಲ್ಲಿಸಿದ್ದು ಅಲ್ಲೂ ಕೂಡ ದಾಖಲೆ ಬರೆಯುತ್ತಾನೆ ಎಂಬ ವಿಶ್ವಾಸದಲ್ಲಿ ಸಮರ್ಥನ ಪೋಷಕರಿದ್ದಾರೆ.

ಭಾರತಕ್ಕೆ ಮತ್ತೆ ಒಲಿದ ಅಂತಾರಾಷ್ಟ್ರೀಯ ಸೌರ ಒಕ್ಕೂಟದ ಅಧ್ಯಕ್ಷ ಸ್ಥಾನ

ನವದೆಹಲಿ: ಅಂತಾರಾಷ್ಟ್ರೀಯ ಸೌರ ಒಕ್ಕೂಟವು 2024–26ನೇ ಸಾಲಿಗೆ ನೂತನ ಪದಾಧಿಕಾರಿಗಳನ್ನು ಪ್ರಕಟಿಸಿದ್ದು, ಭಾರತ ಮತ್ತು ಫ್ರಾನ್ಸ್ ಅಧ್ಯಕ್ಷ–ಸಹ ಅಧ್ಯಕ್ಷ ಸ್ಥಾನವನ್ನು ಉಳಿಸಿಕೊಂಡಿವೆ.

ದೆಹಲಿಯ ಭಾರತ್ ಮಂಟಪದಲ್ಲಿ ಇಂದು ಜರುಗಿದ ಐಎಸ್‌ಎ ಅಸೆಂಬ್ಲಿಯ 7ನೇ ಅಧಿವೇಶನದಲ್ಲಿ ಎರಡು ವರ್ಷ ಅವಧಿಗೆ ನೂತನ ಪದಾಧಿಕಾರಿಗಳನ್ನು ಘೋಷಿಸಲಾಯಿತು. ಐಎಸ್‌ಎ ಅಧ್ಯಕ್ಷ ಸ್ಥಾನಕ್ಕೆ ಭಾರತ ಒಂದೇ ಸ್ಪರ್ಧಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾಯಿತು. ಆದರೆ, ಸಹ ಅಧ್ಯಕ್ಷ ಸ್ಥಾನಕ್ಕೆ ಫ್ರಾನ್ಸ್ ಮತ್ತು ಗ್ರೆನಡಾ ರಾಷ್ಟ್ರಗಳ ಮಧ್ಯೆ ಸ್ಪರ್ಧೆ ಏರ್ಪಟ್ಟಿತ್ತು. ಅಂತಿಮವಾಗಿ ಫ್ರಾನ್ಸ್ ಗೆಲುವು ಸಾಧಿಸಿತು ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಸೌರ ಒಕ್ಕೂಟದ ಅಧಿವೇಶನದಲ್ಲಿ ಸಮಾನ ಭೌಗೋಳಿಕ ಪ್ರಾತಿನಿಧ್ಯ ನೀಡಿ ಅಧ್ಯಕ್ಷ ಮತ್ತು ಸಹ–ಅಧ್ಯಕ್ಷರನ್ನು ಆಯ್ಕೆ ಮಾಡುತ್ತದೆ. ಐಎಸ್‌ಎ ಸದಸ್ಯರ 4 ಪ್ರಾದೇಶಿಕ ಗುಂಪುಗಳು ಆಫ್ರಿಕಾವನ್ನು ಒಳಗೊಂಡಿವೆ.

ನೈಋತ್ಯ ರೈಲ್ವೆ

ಟೆಂಡರ್ ಪ್ರಕಟಣೆ ಸಂ. 04–ಎಕ್ಸ್‌ಇಎನ್–ಸಿಡಬ್ಲ್ಯುಎಸ್–ಎಂವೈಎಸ್‌ಎಸ್–ಎಸ್‌ಪಿಎಲ್2024–25 ದಿನಾಂಕ : 25–10–2024

ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಸಹಿದಾರರು ಕೆಳಕಂಡ ಕೆಲಸಕ್ಕಾಗಿ ಇ–ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

ಕಾಮಗಾರಿಯ ಹೆಸರು	ಅಂದಾಜು ಮೌಲ್ಯ
ಮೈಸೂರು ದಕ್ಷಿಣದ	ರೂ. 57,72,430.69
ಅಶೋಕಪುರಂ ಕಾರ್ಯಾಗಾರದಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್ ಆಗಿ ಡ್ರಾಫ್ಟ್ ಗೇರ್ ಸೆಕ್ಷನ್‌ನ ಫೇಸ್ ಲಿಫ್ಟಿಂಗ್.	

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 22–11–2024 ರಂದು 11:00 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ www.ireps.gov.in ಗೆ ಲಾಗ್ ಆನ್ ಆಗಿ

ಕಾರ್ಯಪಾಲಕ ಇಂಜಿನಿಯರ್, ಕೇಂದ್ರೀಯ ಕಾರ್ಯಾಗಾರ / ಪಿಯುಬಿ/539/ಎಎಎಸ್/ಪಿಆರ್‌ಬಿ/ಎಸ್‌ಡಬ್ಲ್ಯುಆರ್/2024–25 ಮೈಸೂರು ದಕ್ಷಿಣ

South Western Railway - SWR SWRRLY SWRRLY

5ನೇ ವರ್ಷದ ಸವಿನೆನಪು



ಶ್ರೀ ಸಿ.ಬಾಲಕೊಂಡಯ್ಯ

ಸಮಾಜ ಸೇವಕರು

ದುಃಖಿತರು : **ವೆಂಕಟಲಕ್ಷ್ಮಮ್ಮ**

ಮಾಜಿ ಉಪಮಹಾಪೌರರು ಮೈಸೂರು ಮಹಾನಗರ ಪಾಲಿಕೆ ಹಾಗೂ **ದೇವಿ** ಮತ್ತು ಮಕ್ಕಳು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು

ಪುರಸಭಾ ಕಾರ್ಯಾಲಯ, ತಿ.ನರಸೀಪುರ
ಮೈಸೂರು ಜಿಲ್ಲೆ 571124

Email: itstaff_ulb_tnarasipura@yahoo.com
Website: www.tnarasipuratown.mrc.gov.in
Ph: 08227-261232

ನಂ:ಪುಸ/ತಿನಪು/ಆಶಾ/ಮ್ಯಾ.ಸ್ಕ್ಯಾ/01/2024–25

ದಿನಾಂಕ: 30–10–2024

"ಸಾರ್ವಜನಿಕ ಪ್ರಕಟಣೆ"

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ತಿ.ನರಸೀಪುರ ಪುರಸಭಾ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ(ನಗರ)ಯನ್ನು ನಡೆಸುತ್ತಿದ್ದು, **The Prohibition of Employment as Manual Scavengers and their Rehabilitation Act, 2013 2(1)** (ಜಿ) ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುರಿತು ವ್ಯಾಖ್ಯಾನಿಸಿರುವಂತೆ. ಈ ಕೆಳಕಂಡ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕಾರ್ಯದಲ್ಲಿ ದೈಹಿಕ ತೊಡಗಿರುವವರು. ಅಂದರೆ (ಎ) ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು. (ಬಿ) ಅನೈರ್ಮಲ್ಯ ಶೌಚಾಲಯಗಳಿಂದ ಹೊರ ಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಸಂಪನ್ಮೂಲ ಸ್ವಚ್ಛಗೊಳಿಸುವುದು. (ಸಿ) ಶೌಚಾಲಯದ ಮಲ ಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವುದು. ಮೇಲಿನ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ. ದಿನಾಂಕ: 14/11/2024ರ ಒಳಗಾಗಿ ಪುರಸಭಾ ಕಾರ್ಯಾಲಯ, ತಿ.ನರಸೀಪುರದಲ್ಲಿ ಸೂಕ್ತ ದಾಖಲೆಗಳೊಂದಿಗೆ ಹೆಸರನ್ನು ನೊಂದಾಯಿಸಕೊಳ್ಳ ತಕ್ಕದ್ದು, ಅವಧಿ ಮುಗಿದ ನಂತರ ಬಂದ ಯಾವುದೇ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಸಹಿ/– ಅಧ್ಯಕ್ಷರು, ಪುರಸಭೆ, ಟಿ.ನರಸೀಪುರ
ಸಹಿ/– ಮುಖ್ಯಾಧಿಕಾರಿ, ಪುರಸಭೆ, ತಿ.ನರಸೀಪುರ

CHANGE OF NAME

I, Sudha Suresh, W/o Suresh Krishna Murthy, aged about 58 years, resident of No. K-901, Brigade Gateway Apartments, 26/1, Dr. Rajkumar Road, Malleshwaram West, Bangalore North-560 055 have changed my name from Sudha M.N. to Sudha Suresh on my own free will, sworn in before Notary K.S. Giridhar, Bangalore, vide affidavit dated 3-11-2024.

Sd/- Sudha Suresh

ಮೈಸೂರು ಮಿತ್ರ 45

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ರಂಗಸ್ವಾಮಿ ಆರ್. ಬಿನ್ ರಂಗಪ್ಪ ರವರು ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಶ್ರೀಮತಿ ಸೌಮ್ಯಶ್ರೀ ಸಿ.ಎಸ್. ಮತ್ತು ಮಣಿಕಂಠ ಸಿ.ಎಸ್. ರವರ ವಿರುದ್ಧ ಸಾಲ ವಸೂಲಾತಿಗಾಗಿ ಮೈಸೂರಿನ 3ನೇ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಅಸಲು ದಾವಾ ಸಂಖ್ಯೆ: 1468/2024 ದಾವೆಯನ್ನು ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ಘನ ನ್ಯಾಯಾಲಯವು ತೀರ್ಪಿಗೆ ಮೊದಲು ಷೆಡ್ಯೂಲ್ ಸ್ವತ್ತಿನ ಮೇಲೆ ಇರುವ ಋಣಭಾರ ಕುರಿತಂತೆ **(Attachment Before Judgement)** ಆದೇಶವಾಗಿರುತ್ತದೆ. ಆದುದರಿಂದ ಮೇಲ್ಕಂಡ ದಾವೆಯು ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೆ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಮಾಲೀಕರ ಜೊತೆ ಸಾರ್ವಜನಿಕರಾರೂ ಯಾವುದೇ ರೀತಿ ವ್ಯವಹರಿಸಬಾರದೆಂದು, ಹಾಗೊಂದು ವೇಳೆ ವ್ಯವಹರಿಸಿದಲ್ಲಿ ಅದಕ್ಕೆ ನಮ್ಮ ಕಕ್ಷಿದಾರರು ಜವಾಬ್ದಾರರಾಗುವುದಿಲ್ಲವೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತು

ಮೈಸೂರುಸಿಟಿ, ಕೆಸರೆ 3ನೇ ಹಂತ, ರಾಜೇಂದ್ರ ನಗರ, 5ನೇ ಕ್ರಾಸ್, ಕೆ.ಹೆಚ್.ಬಿ. ಎಸ್.ಐ.ಹೆಚ್.ಎಸ್. ಮಾಡಲ್ ಹೌಸ್ ನಂ. 83/1ಬಿ ರ ವಿಸ್ತೀರ್ಣ ಪೂರ್ವ ಪಶ್ಚಿಮ: 7.50 ಮೀಟರ್‌ಗಳು, ಉತ್ತರ ದಕ್ಷಿಣ: 15 ಮೀಟರ್‌ಗಳು, ಒಟ್ಟು 112.50 ಚದರ ಮೀಟರ್‌ಗಳುಳ್ಳ ಮನೆಗೆ ಚೆಕ್ಕುಬಂಧಿ:–

ಪೂರ್ವಕ್ಕೆ: ಮನೆ ನಂ. 83/1ಎ ; ಪಶ್ಚಿಮಕ್ಕೆ: ಮನೆ ನಂ. 83/2ಎ ; ಉತ್ತರಕ್ಕೆ: 30 ಅಡಿ ರಸ್ತೆ ; ದಕ್ಷಿಣಕ್ಕೆ: ಮನೆ ನಂ. 89/1ಎ.

ಈ ಮಧ್ಯೆ ಇರುವ ಆರ್.ಸಿ.ಸಿ. ವಾಸದ ಮನೆ.

ಸಹಿ/– ಎ.ಎಂ.ಭಾಸ್ಕರ್, ಬಿ.ಎಸ್ಸಿ., ಎಲ್‌ಎಲ್.ಬಿ., ವಕೀಲರು, ತನ್ಮಯಿ ಲಾ ಅಸೋಸಿಯೇಟ್ಸ್, ನಂ. 1411, ಸಿಹೆಚ್ 26, 6ನೇ ಕ್ರಾಸ್, ಕೃಷ್ಣಮೂರ್ತಿಪುರಂ, ಮೈಸೂರು.
Mob: 9448246647

ದಿನಾಂಕ: 4–11–2024

ಮೈಸೂರು ಮಹಾನಗರ ಪಾಲಿಕೆ
ನ್ಯೂ ಸಯ್ಯಾಜಿ ರಾವ್ ರಸ್ತೆ, 570024

MYSURU CITY CORPORATION
New Sayyaji Rao Road, Mysuru 570024

Website:www.mysurucity.mrc.gov.in.,
e-mail: comm.mysurucitycorporation@gmail.com | mcchealthofficer@gmail.com

ನಂ.ಹೆಚ್/ಪಆ/323/2019–20

ದಿನಾಂಕ: 04.11.2024

ಸಾರ್ವಜನಿಕ ಪ್ರಕಟಣೆ

ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ಸಮೀಕ್ಷೆ ಯನ್ನು ನಡೆಸುತ್ತಿದ್ದು, **Prohibition of Employment as Manual Scavengers and Their Rehabilitation Act, 2013 2(1)(G)** ರಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ಕುರಿತು ವ್ಯಾಖ್ಯಾನಿಸಿ ರುವಂತೆ, ಈ ಕೆಳಕಂಡ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ಕಾರ್ಯದಲ್ಲಿ ದೈಹಿಕವಾಗಿ ತೊಡಗಿರುವವರು ಅಂದರೆ

1. ಒಣ ಶೌಚಾಲಯ **(Dry Latrines)** ಗಳನ್ನು ಸ್ವಚ್ಛಗೊಳಸುವುದು.
2. ಅನೈರ್ಮಲ್ಯ ಶೌಚಾಲಯ **(In Sanitary / Dry Latrines)** ಗಳಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಸುವುದು.
3. ಶೌಚಾಲಯದ ಮಲ ಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಸುವುದು.

ಮೇಲಿನ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ, ಪತ್ರಿಕಾ ಪ್ರಕಟಣೆಯ ದಿನಾಂಕ: 05.11.2024 ರಿಂದ ದಿನಾಂಕ: 14.11.2024 ರವರೆಗೆ ಪಾಲಿಕೆಯ ತಮ್ಮ ತಮ್ಮ ವಲಯ ಕಛೇರಿಗಳಲ್ಲಿ **NAMASTE Portal** ನ **MS Survey App** ನಲ್ಲಿ ಕಾಲೋಚಿತಗೊಳಸಲಾಗುತ್ತಿದ್ದು, ಮ್ಯಾನುಯಲ್ ಸ್ಕ್ಯಾವೆಂಜರ್‌ಗಳು ಖುದ್ದಾಗಿ ತಮ್ಮ ವ್ಯಾಪ್ತಿಗೆ ಒಳಪಡುವ ವಲಯ ಕಛೇರಿಗೆ ಭೇಟಿ ನೀಡಿ ಸೂಕ್ತ ದಾಖಲೆಗಳೊಂದಿಗೆ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಅವಧಿ ಮುಗಿದ ನಂತರ ಬಂದ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಸಹಿ/– ಆಯುಕ್ತರು ಮೈಸೂರು ಮಹಾನಗರ ಪಾಲಿಕೆ, ಮೈಸೂರು

ಗೌರವಾನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಸಿ.ಜೆ.ಎಂ ಮೈಸೂರು

ಅಸಲು ದಾವಾ ನಂ. 1343/2023

ವಾದಿಗಳು: 1. ಶ್ರೀಮತಿ ನಾಗರತ್ನ ಕೋಂ ಲೇಟ್ ಸ್ವಾಮಿ, ಸುಮಾರು ವಯಸ್ಸು 45 ವರ್ಷ.
2. ಸುಹಾಸ್ ಬಿನ್ ಲೇಟ್ ಸ್ವಾಮಿ, ಸುಮಾರು 25 ವರ್ಷ ವಯಸ್ಸು.
ಇಬ್ಬರ ವಿಳಾಸ : ನಗುವನಹಳ್ಳಿ ಗ್ರಾಮ, ಕಸಬಾ ಹೋಬಳಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ.

ವಿರುದ್ಧ

ಪ್ರತಿವಾದಿಗಳು: 1. ಶ್ರೀ ನಾಗೇಶ್ ಮತ್ತು ಇತರರು. ; 19. ಕುಮಾರ್ ಬಿನ್ ಲೇಟ್ ಜಯರಾಮು ಸುಮಾರು 27 ವರ್ಷ ವಯಸ್ಸು. ; 20. ಚಂದ್ರಮ್ಮ ಕೋಂ ಲೇಟ್ ಜಯರಾಮು ಸುಮಾರು 45 ವರ್ಷ ವಯಸ್ಸು. ; 21. ಸರೋಜ ಬಿನ್ ಮರಿಯಮ್ಮ ಸುಮಾರು 52 ವರ್ಷ ವಯಸ್ಸು. ಎದುರುದಾರರಾದ 16 ರಿಂದ 19 ರವರುಗಳ ವಾಸ: ನಗುವಿನಹಳ್ಳಿ ಗ್ರಾಮ, ಕಸಬಾ ಹೋಬಳಿ, ಶ್ರೀರಂಗಪಟ್ಟಣ ತಾಲ್ಲೂಕು.

23. ಶಕುಂತಿ ಬಿನ್ ಮರಿಯಮ್ಮ, ಸುಮಾರು 42 ವರ್ಷ ವಯಸ್ಸು.

26. ಪ್ರೀತಿ ಬಿನ್ ಲೇಟ್ ರಾಜು ಸುಮಾರು 21 ವರ್ಷ ವಯಸ್ಸು.

ಎದುರುದಾರರಾದ ನಂ. 20–26 ರವರ ವಾಸ: ನಂ. 391, ಲಕ್ಷ್ಮೀನಾರಾಯಣ ಸ್ವಾಮಿ ದೇವಸ್ಥಾನದ ಬೀದಿ, 3ನೇ ಸ್ಟ್ರೀಟ್, ನಗುವಿನಹಳ್ಳಿ ಗ್ರಾಮ, ಕಸಬಾ ಹೋಬಳಿ, ಶ್ರೀರಂಗಪಟ್ಟಣ ತಾಲ್ಲೂಕು.

28. ಶಿವಲಿಂಗ ಬಿನ್ ಸುಮಾರು 56 ವರ್ಷ ವಯಸ್ಸು. ; 29. ಸುಶೀಲ ಬಿನ್ ಶಿವಲಿಂಗ, ಸುಮಾರು 24 ವರ್ಷ ವಯಸ್ಸು. ; 30. ಶಿಲ್ಪ ಬಿನ್ ಶಿವಲಿಂಗ, ಸುಮಾರು 22 ವರ್ಷ ವಯಸ್ಸು. ; 31. ಮಂಜುಳ ಕೋಂ ಚಲುವ ಸುಮಾರು 37 ವರ್ಷ ವಯಸ್ಸು. ; 32. ಅಭಿಷೇಕ್ ಬಿನ್ ಚಲುವ ಸುಮಾರು 22 ವರ್ಷ ವಯಸ್ಸು. : 33. ಪುಟ್ಟಮ್ಮ ಕೋಂ ಲೇಟ್ ತಿಮ್ಮ ಸುಮಾರು 62 ವರ್ಷ ವಯಸ್ಸು. ; 34. ಮಂಜು ಬಿನ್ ಲೇಟ್ ತಿಮ್ಮ ಸುಮಾರು 30 ವರ್ಷ ವಯಸ್ಸು. ; 35. ಕುಮಾರ್ ಕೋಂ ಲೇಟ್ ತಿಮ್ಮ ಸುಮಾರು 28 ವರ್ಷ ವಯಸ್ಸು. ; 36. ಗಾಯಿತ್ರಿ ಬಿನ್ ಪುಟ್ಟಮ್ಮ ಸುಮಾರು 47 ವರ್ಷ ವಯಸ್ಸು, ಎದುರುದಾರರಾದ 28 ರಿಂದ 36 ರವರ ವಾಸ : ಬೆಳವಾಡಿ ಗ್ರಾಮ, ಇಲವಾಲ ಹೋಬಳಿ, ಮೈಸೂರು ತಾಲ್ಲೂಕು.

ಸಾರ್ವಜನಿಕ ಪ್ರಕಟಣೆ: ವಾದಿಗಳು ಪ್ರತಿವಾದಿಗಳ ವಿರುದ್ಧ ವಿಭಾಗ ಮತ್ತು ಪ್ರತ್ಯೇಕ ಸ್ವಾಧೀನಕ್ಕಾಗಿ ಮತ್ತು ಘೋಷಣಾತ್ಮಕ ಆದೇಶಕ್ಕಾಗಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ದಾವೆಯನ್ನು ಸಲ್ಲಿಸಿರುತ್ತಾರೆ. ಮೇಲ್ಕಂಡವರಾದ ಪ್ರತಿವಾದಿಗಳಾದ 19 ರಿಂದ 21, 23, 26, 28 ರಿಂದ 36 ತಾವುಗಳು ದಿನಾಂಕ 5/12/24 ರಂದು ಪ್ರಕರಣವು ವಿಚಾರಣೆಗೆಂದು ನಿಗದಿಯಾಗಿದ್ದು, ಮೇಲ್ಕಂಡ ತಾವುಗಳಾಗಲೀ ಅಥವಾ ತಮ್ಮ ಪರ ವಕೀಲರನ್ನಾಗಲೀ ನೇಮಿಸಿಕೊಂಡು ಬರುವ ಮೂಲಕ ಅಗತ್ಯ ಮೂಲ ದಾಖಲಾತಿಯೊಡನೆ ಹಾಜರಾಗತಕ್ಕದ್ದು, ಇಲ್ಲದಿದ್ದಲ್ಲಿ ತಮ್ಮಗಳಿಂದ ಯಾವುದೇ ತಂಟೆ ತಕರಾರು ಆಕ್ಷೇಪಣೆ ಇರುವುದಿಲ್ಲವೆಂದು ಪರಿಗಣಿಸಿ ಪ್ರಕರಣವನ್ನು ಏಕಪಕ್ಷೀಯ ಆದೇಶ ಮಾಡಲಾಗುವುದು.

ಷೆಡ್ಯೂಲ್ ಸ್ವತ್ತಿನ ವಿವರ : ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಬೆಳವಾಡಿ ಗ್ರಾಮದ ಸರ್ವೆ ನಂ. 96/1, 96/2, 96/3 ಮತ್ತು 96/4 ರ ಒಟ್ಟು ವಿಸ್ತೀರ್ಣ 5 ಎಕರೆ 17 ಗುಂಟೆ ಜಮೀನಿಗೆ ಚೆಕ್ಕುಬಂಧಿ: ಪೂರ್ವಕ್ಕೆ : ಬಸವೇಗೌಡ ರವರ ಜಮೀನು ; ಪಶ್ಚಿಮಕ್ಕೆ: ಬೋರಪ್ಪನ ತಮ್ಮಯ್ಯ ರವರ ಜಮೀನು ; ದಕ್ಷಿಣಕ್ಕೆ : ಮಾಲೇಗೌಡ ಬಿನ್ ಮರೀಗೌಡ ರವರ ಜಮೀನು ; ಉತ್ತರಕ್ಕೆ : ಬೆಟ್ಟಮ್ಮನ ಕರೀಗೌಡ ರವರ ಜಮೀನು.

ಅರ್ಜಿದಾರರ ಪರ ವಕೀಲರು
ಸಹಿ/– ಬಿ.ಪಿ.ಸಿದ್ದರಾಜು, ವಕೀಲರು,
ನಂ. 48, 2ನೇ ಕ್ರಾಸ್, 2ನೇ ಮೇನ್,
ಜಯನಗರ, ಮೈಸೂರು.
Date: 30/10/24, Place: Mysuru

ನ್ಯಾಯಾಲಯದ ಆದೇಶದ ಮೇರೆಗೆ
By Order of the Court
Sd/- Chief Ministerial Officer,
Court of Sr. Civil Judge & CJM, Mysuru

ಪುರಸಭಾ ಕಾರ್ಯಾಲಯ, ಸಕಲೇಶಪುರ, ಹಾಸನ ಜಿಲ್ಲೆ

ದೂರವಾಣಿ ಸಂಖ್ಯೆ: 08173–244042 email: itstaff_ulb_sakleshpur@yahoo.com
Website: www.sakaleshpurtown.gov.in

ನಂ/ಮುನಿಸಿ/ಜೆ.ಇ/ಪಿಆರ್/ /2024–25

ದಿನಾಂಕ 28–10–2024

ಇ–ಪ್ರಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಸಕಲೇಶಪುರ ಪುರಸಭೆಯಿಂದ ಕೆ.ಟಿ.ಪಿ.ಪಿ ಕಾಯ್ದೆ 2000ರ ಪ್ರಕಾರ ಕೆ.ಡಬ್ಲ್ಯೂ–1/2 ನಿಯಮದಂತೆ ಇ–ಪೋರ್ಟಲ್ ಮೂಲಕ ಐಂಟವಾರು ಟೆಂಡರ್ ಕರೆಯಲಾಗಿದ್ದು ಆಸಕ್ತಿಯುಳ್ಳ ಗುತ್ತಿಗೆದಾರರು http://Kppp.karnataka.gov.in ನಿಂದ ಟೆಂಡರ್ ಷರತ್ತು ಇಎಂಡಿ ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಮಾತ್ರ ಸಲ್ಲಿಸತಕ್ಕದ್ದು. ಟೆಂಡರ್ ಅನ್ನು ಸಲ್ಲಿಸುವ ಮತ್ತು ತೆರೆಯುವ ದಿನಾಂಕವನ್ನು ಇ–ಪೋರ್ಟಲ್‌ನಲ್ಲಿ ತಿಳಿಸಲಾಗಿದೆ. ಟೆಂಡರ್ ನಿಯಮಾವಳಿಗಳ ಕುರಿತು ಹೆಚ್ಚಿನ ವಿವರಕ್ಕಾಗಿ ಸಕಲೇಶಪುರ ಪುರಸಭೆಯ ತಾಂತ್ರಿಕ ಶಾಖೆಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಕ್ರ. ಸಂ	ಇಂಡೆಂಟ್ ನಂ	ಅಂದಾಜು ಮೊತ್ತ (ಲಕ್ಷಗಳಲ್ಲಿ)	ಮೀಸಲಾತಿ
1	DMA/2024-25/OW/WORK_INDENT25676/CALL2	10.25	SC
2.	DMA/2024-25/OW/WORK_INDENT27669/CALL2	2.58	OTHERS
3.	DMA/2024-25/OW/WORK_INDENT21182/CALL2	2.41	OTHERS
4.	DMA/2024-25/OW/WORK_INDENT27753/CALL2	1.75	ST
5.	DMA/2024-25/OW/WORK_INDENT25673/CALL2	35.26	ST
6.	DMA/2024-25/OW/WORK_INDENT21187/CALL2	15.60	OTHERS
7.	DMA/2024-25/WS/WORK_INDENT27949/CALL2	5.50	SC
8.	DMA/2024-25/OW/WORK_INDENT27792/CALL2	2.85	OTHERS
9.	DMA/2024-25/OW/WORK_INDENT27950/CALL2	9.60	SC
10.	DMA/2024-25/OW/WORK_INDENT21330/CALL2	14.74	OTHERS
11.	DMA/2024-25/OW/WORK_INDENT26211/CALL2	5.00	OTHERS
12.	DMA/2024-25/OW/ WORK_INDENT21315/CALL2	2.00	OTHERS
13.	DMA/2024-25/IND1983/CALL2	-	-

ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 08.11.2024 ಸಂಜೆ 5.30 ಗಂಟೆಗೆ ಸೂಚನೆ:– ಕಾರಣಾಂತರಗಳಿಂದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಯಲ್ಲಿ ಪ್ರಕಟಿಸಲಾಗುವುದಿಲ್ಲ. ಇ–ಪ್ರಕ್ಯೂರ್‌ಮೆಂಟ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು http://Kppp.karnataka.gov.in ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/–ಅಧ್ಯಕ್ಷರು, ಪುರಸಭೆ ಸಕಲೇಶಪುರ
ಸಹಿ/–ಉಪಾಧ್ಯಕ್ಷರು, ಪುರಸಭೆ ಸಕಲೇಶಪುರ
ಸಹಿ/–ಮುಖ್ಯಾಧಿಕಾರಿ, ಪುರಸಭೆ, ಸಕಲೇಶಪುರ

ವಾಸಾಸಂಇ/ಹಿಸನಿ/ಹಾಸನ/615/ಕೆಎಸ್‌ಎಂಸಿಎ/2024–25